ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 10 ಬುಧವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 85 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಡೆಂಗ್ಯೂ ನಿಯಂತ್ರಣಕ್ಕೆ ಕಾರ್ಯಪಡೆ; ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ



ಬೆಂಗಳೂರು, ಜು.9– ರಾಜ್ಯದಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚುತ್ತಿದ್ದು, ನಿಯಂತ್ರಿಸಲು ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಒಳಗೊಂಡ ಕಾರ್ಯಪಡೆ ರಚಿಸಬೇಕು ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಪ್ರತಿ ಜಿಲ್ಲಾಸ್ಪತ್ರೆಯಲ್ಲಿ ಡೆಂಗ್ಯೂ ಜ್ವರ ಚಿಕಿತ್ಸೆಗೆ ವಿಶೇಷ ವಾರ್ಡ್ ಸಜ್ಜುಗೊಳಿಸಬೇಕು. ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ವೈದ್ಯಾಧಿಕಾರಿ ಪ್ರತಿ ದಿನ ಸಮನ್ವಯದಿಂದ ಸಭೆ ನಡೆಸಿ ಡೆಂಗ್ಯೂ ಹರಡದಂತೆ ಕ್ರಮ ತೆಗೆದುಕೊಳ್ಳಬೇಕು ಎಂದು ಅವರು ಸೂಚನೆ ನೀಡಿದ್ದಾರೆ. ವೈದ್ಯಕೀಯ ಕಾಲೇಜುಗಳಲ್ಲಿಯೂ ಡೆಂಗಿ ಚಿಕಿತ್ಸೆಗೆ ವ್ಯವಸ್ಥೆ ಕಲ್ಪಿಸಬೇಕು. ರೋಗ ಪತ್ತೆಗೆ ತಪಾಸಣೆ ಹೆಚ್ಚಿಸಬೇಕು. ಡೆಂಗ್ಯೂ ಪಾಸಿಟಿವ್ ಇರುವ ವ್ಯಕ್ತಿಗಳ ಆರೋಗ್ಯ ಸ್ಥಿತಿಯ ಮೇಲೆ ನಿಗಾ ಇರಿಸಬೇಕು. ಮಳೆಗಾಲ ಮುಗಿಯುವ ತನಕ ಅಧಿಕಾರಿಗಳು ಪ್ರತಿದಿನ ಪರಿಶೀಲನೆ ನಡೆಸಬೇಕು. ಒಂದೂ ಸಾವು ಆಗದಂತೆ ಕ್ರಮವಹಿಸಬೇಕು. ಯಾವುದೇ ರೀತಿಯ ಉದಾಸೀನ ಪ್ರವೃತ್ತಿಯನ್ನು ಸಹಿಸುವುದಿಲ್ಲ' ಎಂದು ಎಚ್ಚರಿಕೆ ನೀಡಿದರು.

185 ಪ್ರಕರಣ ದೃಢ: ಆರೋಗ್ಯ ಇಲಾಖೆಯ ಮಾಹಿತಿ ಪ್ರಕಾರ ರಾಜ್ಯದಲ್ಲಿ ಮಂಗಳವಾರ 185 ಡೆಂಗ್ಯೂ ಪ್ರಕರಣಗಳು ದೃಢಪಟ್ಟಿವೆ. ಡೆಂಗ್ಯೂ ಪತ್ತೆ ಸಂಬಂಧ 24 ಗಂಟೆಗಳ ಅವಧಿಯಲ್ಲಿ 948 ಪರೀಕ್ಷೆಗಳನ್ನು ನಡೆಸಲಾಗಿತ್ತು. ಹೊಸದಾಗಿ ಡೆಂಗ್ಯೂ ಪೀಡಿತರಾದವರಲ್ಲಿ ಒಬ್ಬರು ಒಂದು ವರ್ಷದೊಳಗಿನವರಾದರೆ 81 ಮಂದಿ ಒಂದರಿಂದ 18 ವರ್ಷದೊಳಗಿನವರಾಗಿದ್ದಾರೆ. 103 ಮಂದಿ 18 ವರ್ಷ ಮೇಲ್ಪಟ್ಟವರಾಗಿದ್ದಾರೆ. ಸದ್ಯ ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ 346 ಡೆಂಗ್ಯೂ ಪೀಡಿತರು ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ.

ಈ ವರ್ಷ ವರದಿ ಯಾದ ಒಟ್ಟು ಡೆಂಗ್ಯೂ ಪ್ರಕರಣಗಳ ಸಂಖ್ಯೆ 7547ಕ್ಕೆ ಏರಿಕೆಯಾಗಿದೆ. ಡೆಂಗ್ಯೂ ಪೀಡಿತರಲ್ಲಿ ಈವರೆಗೆ ಏಳು ಮಂದಿ ಮೃತಪಟ್ಟಿದ್ದಾರೆ. ಬಿಬಿಎಂಪಿ ವ್ಯಾಪ್ತಿ ಯಲ್ಲಿ ಹೊಸದಾಗಿ 95 ಪ್ರಕರಣಗಳು ದೃಢಪಟ್ಟಿವೆ. ಇದರಿಂದಾಗಿ ಒಟ್ಟು ಪ್ರಕ ರಣಗಳ ಸಂಖ್ಯೆ 2174ಕ್ಕೆ ಏರಿಕೆಯಾಗಿದೆ.

ರಾಮನಗರ ಜಿಲ್ಲೆಗೆ ಬೆಂಗಳೂರು ದಕ್ಷಿಣ ಜಿಲ್ಲೆಯಾಗಿ ಮರುನಾಮಕರಣಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ನಿರ್ಧಾರ

ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಈ ಸಂಬಂಧ ಮನವಿ

ಬೆಂಗಳೂರು, ಜು.9(ಕೆಎಂಶಿ)–ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ಸ್ಥಳೀಯರ ವಿರೋಧದ ನಡುವೆಯೂ ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆಯಾಗಿ ಮರುನಾಮಕರಣ ಮಾಡಲು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮುಂದಾಗಿದ್ದಾರೆ.

ಜಿಲ್ಲೆಯ ಪಕ್ಷದ ಜನಪ್ರತಿನಿಧಿಗಳ ಜೊತೆಗೂಡಿ ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿದ ಶಿವಕುಮಾರ್, ರಾಮನಗರ ಜಿಲ್ಲೆಗೆ ಮರು ನಾಮಕರಣ ಮಾಡುವಂತೆ ಮನವಿ ಮಾಡಿದ್ದಾರೆ. ಬೆಂಗಳೂರು ದಕ್ಷಿಣ ಜಿಲ್ಲೆ ಮಾಡುವುದರಿಂದ ಆಸ್ತಿ ಮೌಲ್ಯ ಹೆಚ್ಚುತ್ತದೆ, ಮೈಸೂರುವರೆಗೂ ಅಭಿವೃದ್ಧಿ ಸಾಧಿಸಲು, ಕೈಗಾರಿಕೆಗಳ ಸ್ಥಾಪನೆಗೆ ಸಹಕಾರಿ ಆಗುತ್ತದೆ ಎಂದು ನಿಯೋಗ ಮುಖ್ಯಮಂತ್ರಿ ಅವರಿಗೆ ಮನವರಿಕೆ ಮಾಡಿಕೊಟ್ಟಿದೆ.

ಬೆಂಗಳೂರಿನ ಒಂದು ದಿಕ್ಕಿನಲ್ಲಿ ಆಂಧ್ರ ಪ್ರದೇಶ, ಮತ್ತೊಂದು ದಿಕ್ಕಿನಲ್ಲಿ ತಮಿಳು ನಾಡು ರಾಜ್ಯಗಳ ಗಡಿ ಬರುತ್ತದೆ, ಹೀಗಾಗಿ ಬೆಂಗಳೂರಿನ ವಿಸ್ತರಣೆಗೆ ನಮಗೆ ಉಳಿದಿರುವುದು ತುಮಕೂರು ಮತ್ತು ರಾಮನಗರ ಭಾಗವಷ್ಟೆ, ರಾಮನಗರ, ಚನ್ನಪಟ್ಟಣ, ಮಾಗಡಿ, ಕನಕಪುರ, ಹಾರೋಹಳ್ಳಿ



ರಾಮನಗರ ಜಿಲ್ಲೆಯ ಜನಪ್ರತಿನಿಧಿಗಳ ಜೊತೆಗೂಡಿ ಮುಖ್ಯಮಂತ್ರಿ ಅವರನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಭೇಟಿ ಮಾಡಿದರು.

ತಾಲೂಕುಗಳ ಭವಿಷ್ಯ ಹಾಗೂ ಅಭಿವೃದ್ಧಿ ಗಮನದಲ್ಲಿಟ್ಟುಕೊಂಡು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರು ನಾಮಕರಣ ಮಾಡಬೇಕು. ಬೆಂಗಳೂರು ನಗರ ಸೇರಿದಂತೆ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ಕನಕಪುರ, ರಾಮನಗರ, ಚನ್ನಪಟ್ಟಣ, ಮಾಗಡಿ ಸೇರಿದಂತೆ ನಾವೆಲ್ಲರೂ ಮೂಲತಃ ಬೆಂಗಳೂರು ಜಿಲ್ಲೆಯವರು, ಆಡಳಿತಾತ್ಮಕ ದೃಷ್ಟಿಯಿಂದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆ ಎಂದು ಹಿಂದೆ ವಿಭಾಗ ಮಾಡಲಾಯಿತು.

ರಾಮನಗರವನ್ನು ಕೇಂದ್ರಾಡಳಿತವಾಗಿಟ್ಟುಕೊಂಡೇ ಜಿಲ್ಲೆಯ ಹೆಸರನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರು ನಾಮಕರಣ ಮಾಡುವುದು ಅಗತ್ಯ, ಬೆಂಗಳೂರು ಜಾಗತಿಕ ಮನ್ನಣೆ ಹೊಂದಿದ್ದು, ಈ ಜಿಲ್ಲೆಯ ಹೆಸರು ಉಳಿಸಿಕೊಳ್ಳಲು ನನ್ನ ಮುಖಂಡತ್ವದಲ್ಲಿ ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಿದ್ದೇವೆ.

ನಾವು ಯಾವುದೇ ಹೊಸ ಜಿಲ್ಲೆ ಮಾಡುತ್ತಿಲ್ಲ, ಇರುವ ಜಿಲ್ಲೆ ಹಾಗೇ ಇರಲಿದೆ, ರಾಮನಗರ, ಚನ್ನಪಟ್ಟಣ, ಮಾಗಡಿ, ಹಾರೋಹಳ್ಳಿ, ಕನಕಪುರ ತಾಲೂಕುಗಳನ್ನು ಒಳಗೊಂಡು ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣಕ್ಕೆ ಮುಂದಾಗಿದ್ದೇವೆ ಎಂದರು. ಬೆಂಗಳೂರು ನಗರದಲ್ಲಿ ಮನೆ ಬಳಿ ಬರುವ ಕಸ ಸಂಗ್ರಹ ವಾಹನಗಳಿಗೆ ಕಸ ಹಾಕದೆ ರಸ್ತೆ ಬದಿ ಎಸೆಯುತ್ತಿದ್ದಾರೆ, ಇಂತಹವರ ಪತ್ತೆಗೆ ಎಲ್ಇಡಿ ವಿದ್ಯುತ್ ಕಂಬಗಳಿಗೆ ಸಿಸಿಟಿವಿ ಕ್ಯಾಮರಾ ಅಳವಡಿಸಲು ಸೂಚಿಸಲಾಗಿದೆ. ಎಲ್ಲಿಬೇಕೆಂದರಲ್ಲಿ ಕಸ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯ ಸುರಿಯುವವರನ್ನು, ಗುರುತಿಸಿ ಪ್ರಕರಣ ದಾಖಲಿಸುವ ಬಗ್ಗೆಯೂ ಸೂಚನೆ ನೀಡಲಾಗಿದೆ. ಡೆಂಗ್ಯೂ ನಿಯಂತ್ರಣಕ್ಕೆ ಪಾಲಿಕೆ ಹಾಗೂ ಆರೋಗ್ಯ ಇಲಾಖೆ ಜಂಟಿಯಾಗಿ ಕೆಲಸ ಮಾಡುತ್ತಿವೆ, ಎಲ್ಲಾ ಇಲಾಖೆಗಳ ಮುಖ್ಯಸ್ಥರೊಂದಿಗೆ ಮುಖ್ಯಮಂತ್ರಿಗಳು ಪ್ರತ್ಯೇಕ ಸಭೆ ನಡೆಸುತ್ತಾರೆ.

ಮಹರ್ಷಿ ವಾಲ್ಮೀಕಿ ನಿಗಮ ಭ್ರಷ್ಟಾಚಾರದ ಆರೋಪಿಗಳ ಸಂಭಾಷಣೆ ಆಡಿಯೋ ತಾವು ಕೇಳಿಲ್ಲ, ಮುಕ್ತವಾಗಿ ತನಿಖೆ ನಡೆಯಬೇಕೆಂಬ ಕಾರಣಕ್ಕೆ ಸಚಿವರೇ ಸ್ವಯಂ ಪ್ರೇರಿತ ರಾಜೀನಾಮೆ ನೀಡಿದ್ದಾರೆ, ನಾನು ಇದರಲ್ಲಿ ಮೂಗು ತೂರಿಸಲು ಹೋಗುವುದಿಲ್ಲ, ಭ್ರಷ್ಟಾಚಾರದಲ್ಲಿ ನಮ್ಮ ಮಂತ್ರಿ, ಶಾಸಕರ ಪಾತ್ರವಿಲ್ಲ, ಬೇರೆಯವರು ಭಾಗಿಯಾಗಿದ್ದಾರೆ ಎಂದರು. ಸಿಬ್ಬಂದಿ ಕೊರತೆ ಕಾರಣಕ್ಕೆ ರಾಮನಗರ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ಅನುಮತಿ ನೀಡಿಲ್ಲ, ಈ ಬಗ್ಗೆ ಗಮನಹರಿಸುತ್ತೇವೆ ಎಂದರು.

ಕನ್ನಡ ಚಳವಳಿಗಾರ ತಾಯೂರು ವಿಠಲಮೂರ್ತಿ ನಿಧನ

ಮೈಸೂರು,ಜು.9–ಕನ್ನಡಪರ ಹೋರಾಟಗಾರರಾಗಿದ್ದ ತಾಯೂರು ವಿಠಲಮೂರ್ತಿ (81) ಹೃದಯಾಘಾತದಿಂದ ಮಂಗಳವಾರ ನಿಧನರಾದರು. ಮೈಸೂರಿನ ಅಗ್ರಹಾರದ ತ್ಯಾಗರಾಜ ರಸ್ತೆಯ ಐದನೇ ಅಡ್ಡ ರಸ್ತೆಯ ನಿವಾಸಿಯಾಗಿದ್ದ ಮೃತರು ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಮೈಸೂರು ಜಿಲ್ಲಾ ಕನ್ನಡ ಚಳವಳಿ ಕೇಂದ್ರ ಸಮಿತಿ ಅಧ್ಯಕ್ಷರಾಗಿದ್ದ ಅವರು, ಕೆ.ಆರ್.ಬ್ಯಾಂಕಿನ ಅಧ್ಯಕ್ಷರಾಗಿ, 'ಕನ್ನಡ ಹಿರಿಮೆ' ಪಾಕ್ಷಿಕ ಪತ್ರಿಕೆ ಸಂಪಾದಕರಾಗಿ, ಮೈಸೂರು ಜಿಲ್ಲಾ ಖಾಸಗಿ ಬಸ್ ಮಾಲೀಕರ ಸಂಘದ ಗೌರವ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದ ಅವರು, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾಗಿದ್ದರು. ಸ್ವಗ್ರಾಮವಾದ ನಂಜನಗೂಡು ತಾಲೂಕಿನ ತಾಯೂರಲ್ಲಿ ಮಂಗಳವಾರ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಂತಾಪ: ವಿಠಲಮೂರ್ತಿ ಅವರ ನಿಧನಕ್ಕೆ ಮಾಜಿ ಶಾಸಕ ಡಾ.ಎನ್.ಎಲ್. ಭಾರತಿಶಂಕರ್, ಕನ್ನಡ ಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ ಸಂತಾಪ ಸೂಚಿಸಿದ್ದಾರೆ.



ಮೈಸೂರಿನ ಹೋರಾಟಗಾರ ತಾಯೂರು ವಿಠಲಮೂರ್ತಿ

ಶ್ರದ್ಧಾಂಜಲಿ

ಕರೆ ಸ್ವೀಕರಿಸಿದ ಕೂಡಲೇ 'ಯಾರು... ನಾನು ಸಾರ್ ತಾಯೂರು ವಿಠಲಮೂರ್ತಿ... ಚೆನ್ನಾಗಿದ್ದೀರೋ.... ಆ ಹೋರಾಟದಲ್ಲಿ ನಾನಿದ್ದೆ ನಂದೊಂದು ಹೆಸರಾಕಿ...! ಅವರ ಅಂತಿಮ ದರ್ಶನಕ್ಕೆ ಹೋಗಿದ್ದೆ. ಅವರ ಸಂತಾಪಕ್ಕೆ ನನ್ನದೊಂದು ಹೆಸರಾಕಿ...' ಹೀಗೆ ಮಾಧ್ಯಮದವರೊಂದಿಗೆ ಆತ್ಮೀಯತೆ ಹೊಂದಿದ್ದ ತಾಯೂರು ವಿಠಲಮೂರ್ತಿ ಇನ್ನು ನೆನಪು ಮಾತ್ರ.

ಐದು ದಶಕಗಳಿಗೂ ಹೆಚ್ಚು ಕಾಲ ಸ್ಥಳೀಯವಾಗಿ ಕನ್ನಡ ಪರ ಚಳುವಳಿ, ಚಟುವಟಿಕೆ ಹಾಗೂ ಜನಪರ ಹೋರಾಟಗಳ ಮೂಲಕ ಮೈಸೂರಿನ ತಾಯೂರು ವಿಠಲಮೂರ್ತಿ ಜನಪರ ಧ್ವನಿಯಾಗಿದ್ದರು. ಜಿಲ್ಲಾಡಳಿ ತದಿಂದ ಹಮ್ಮಿಕೊಳ್ಳುವ ಎಲ್ಲಾ ರಾಷ್ಟ್ರೀಯ ಹಬ್ಬಗಳಲ್ಲಿ ಪಾಲ್ಗೊಳ್ಳುತ್ತಿದ್ದ ಇವರು, ಅವುಗಳ ಪೂರ್ವಭಾವಿ ಸಭೆಗಳಲ್ಲೂ ತಪ್ಪದೇ ಭಾಗವಹಿಸಿ ವ್ಯವಸ್ಥಿತವಾಗಿ ಕಾರ್ಯಕ್ರಮ ಆಯೋಜಿಸಲು ತಮ್ಮ ಸಲಹೆ ಹಾಗೂ ಅಭಿ ಪ್ರಾಯ ವ್ಯಕ್ತಪಡಿಸುವ ಬದ್ಧತೆ ರೂಢಿಸಿಕೊಂಡಿದ್ದರು.

ವಾಟಾಳ್ ನಾಗರಾಜ್ ಅವರು ಮೈಸೂರಿನಲ್ಲಿ ಹಮ್ಮಿಕೊಳ್ಳುತ್ತಿದ್ದ ಕನ್ನಡ ಹಾಗೂ ಜನಪರ ಹೋರಾಟ ಗಳಲ್ಲಿ ತಪ್ಪದೇ ಭಾಗವಹಿಸುತ್ತಿದ್ದರು ವಿಠಲಮೂರ್ತಿ. ಸದಾ ಕಪ್ಪು ಕನ್ನಡಕ, ಸಫಾರಿ ಡ್ರೆಸ್‌ನಲ್ಲಿ ಮಿಂಚುತ್ತಿದ್ದರು. ಕನ್ನಡದ ಕಾಯಕದಲ್ಲಿ ಬದ್ಧತೆ ಹೊಂದಿದ್ದ ಇವರು ಮೂಲತಃ ಜಿಲ್ಲೆಯ ನಂಜನಗೂಡು ತಾಲೂಕಿನ ತಾಯೂರು ಗ್ರಾಮದವರು. ಎನ್.ಚನ್ನಬಸವಪ್ಪ ಹಾಗೂ ಪಾರ್ವತಮ್ಮ ದಂಪತಿ ಪುತ್ರರಾದ ವಿಠಲ ಮೂರ್ತಿ, 1943ರ ನ.30ರಂದು ಜನಿಸಿದ್ದರು. ಮೈಸೂರಿನ ಬನುಮಯ್ಯ ಶಿಕ್ಷಣ ಸಂಸ್ಥೆಯಲ್ಲಿ ಕಾಲೇಜು ಶಿಕ್ಷಣ ಪಡೆದ ವಿಠಲಮೂರ್ತಿ ವಿದ್ಯಾರ್ಥಿ ದಿನಗಳಿಂದಲೇ ಕನ್ನಡ ಪರ ಹೋರಾಟಕ್ಕೆ ಧುಮುಕಿದ್ದರು.

ಕನ್ನಡಿಗರ ಶ್ರೇಯೋಭಿವೃದ್ಧಿಗಾಗಿ ಸರೋಜಿನಿ ಮಹಿಷಿ ವರದಿ ಜಾರಿಗೊಳಿಸಬೇಕೆಂದು ತಮ್ಮ ಜೀವನದ್ದಕ್ಕೂ ವಿಠಲಮೂರ್ತಿ ಹೋರಾಟ ಮಾಡಿದರು. 1980ರ ದಶಕದಲ್ಲಿ ಗೋಕಾಕ್ ಚಳವಳಿಯಲ್ಲಿ ಸ್ಥಳೀಯವಾಗಿ ಸಕ್ರೀಯವಾಗಿ ತೊಡಗಿಸಿಕೊಂಡಿದ್ದರು. ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ರಾಜ್ಯದ ಪರವಾಗಿ ನಡೆಯುತ್ತಿದ್ದ ಪ್ರತಿ ಹೋರಾಟದಲ್ಲೂ ಪ್ರಮುಖ ಪಾತ್ರ ವಹಿಸಿದ್ದರು. ಇಂಗ್ಲಿಷ್ ನಾಮಫಲಕಕ್ಕೆ ಮಸಿ ಬಳಿಯುವ ಚಳವಳಿಯಲ್ಲಿ ತಪ್ಪದೇ ಭಾಗವಹಿಸುತ್ತಿದ್ದರು. ಸ್ಥಳೀಯವಾಗಿ ಜನಸಾಮಾನ್ಯರ ಹಲವು ಸಮಸ್ಯೆಗಳ ನಿವಾರಣೆಗಾಗಿ ನಡೆದ ಅನೇಕ ಹೋರಾಟಗಳಲ್ಲೂ ವಿಠಲಮೂರ್ತಿ ಅವರ ಮುಖ್ಯ ಪಾತ್ರವಿತ್ತು. ಕನ್ನಡದ ಬಗ್ಗೆ ಅಭಿಮಾನ ಮೂಡಿಸಲು ತಮ್ಮ ಸಂಪಾದಕತ್ವದಲ್ಲಿ 'ಕನ್ನಡ ಹಿರಿಮೆ' ಪಾಕ್ಷಿಕ ಪತ್ರಿಕೆ ಆರಂಭಿಸಿದ್ದರು. ಮೈಸೂರಿನ ರಸ್ತೆಬದಿ ವ್ಯಾಪಾರಿಗಳ ಮೇಲೆ ಈ ಹಿಂದೆ ನಡೆದ ಅನೇಕ ದೌರ್ಜನ್ಯಗಳ ವಿರುದ್ಧ ಹೋರಾಟ ಮಾಡಿ, ಅವರ ಪರ ನಿಂತಿದ್ದರು ಮಾತ್ರವಲ್ಲ, ರಸ್ತಬದಿ ವ್ಯಾಪಾರಿಗಳ ಹಿತರಕ್ಷಣೆಗೆ ಸಂಘ ಕಟ್ಟಿ ಸಂಘಟಕರೂ ಆಗಿದ್ದರು. ಜೆಸಿ ಕಾಲೇಜಿನಲ್ಲಿ ಉದ್ಯೋಗಿಯಾಗಿ 30 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾದ ವಿಠಲ ಮೂರ್ತಿ ವೃತ್ತಿಯ ದಿನಗಳಲ್ಲೂ ಬಿಡುವು ಮಾಡಿಕೊಂಡು ಕನ್ನಡದ ಕೆಲಸಕ್ಕೆ ಕಂಕಣ ಕಟ್ಟಿದ್ದರು.

ಪ್ರಸ್ತುತ ಮೈಸೂರು ಜಿಲ್ಲಾ ಖಾಸಗಿ ಬಸ್ ಮಾಲೀಕರ ಗೌರವ ಪ್ರಧಾನ ಕಾರ್ಯದರ್ಶಿ ಆಗಿ ಸೇವೆ ಸಲ್ಲಿಸುತ್ತಿದ್ದರು. ಮೈಸೂರು ಜಿಲ್ಲಾ ಕನ್ನಡ ಚಳುವಳಿಗಾರರ ಕೇಂದ್ರ ಸಮಿತಿಯ ಸದಸ್ಯರಾಗಿದ್ದರು. ಕೆ.ಆರ್.ಬ್ಯಾಂಕಿನ ಅಧ್ಯಕ್ಷರಾಗಿದ್ದ ವಿಠಲಮೂರ್ತಿ, ಈ ಬ್ಯಾಂಕಿನ ಹಾಲಿ ನಿರ್ದೇಶಕರಾಗಿದ್ದರು. ಕನ್ನಡ ಕ್ರಾಂತಿ ವೀರ, ಕನ್ನಡ ಸಾರಥಿ ಎಂಬಿತ್ಯಾದಿ ಬಿರುದು ಗಳಿಂದ ಪ್ರೀತಿಪಾತ್ರರಿಂದ ಕರೆಯಲ್ಪಡುತ್ತಿದ್ದ ತಾಯೂರು ವಿಠಲಮೂರ್ತಿ, ಜಿಲ್ಲಾ ರಾಜ್ಯೋ ತ್ಸವ ಪುರಸ್ಕಾರಕ್ಕೂ ಭಾಜನರಾಗಿದ್ದರು.



ಚಳವಳಿಯೊಂದರಲ್ಲಿ ವಾಟಾಳ್ ನಾಗರಾಜ್‌ರೊಂದಿಗೆ ವಿಠಲಮೂರ್ತಿ.

ತಾಯೂರು ಗ್ರಾಮದಲ್ಲಿ ವಿಠಲಮೂರ್ತಿ ಅವರ ಜಮೀನಿನಲ್ಲಿ ವೀರಶೈವ ಲಿಂಗಾಯತ ಸಂಪ್ರದಾಯದಂತೆ ಕ್ರಿಯಾ ಸಮಾಧಿ ವಿಧಾನದಲ್ಲಿ ಅವರ ಅಂತ್ಯ ಸಂಸ್ಕಾರವನ್ನು ಮಂಗಳವಾರ ಸಂಜೆ ನೆರವೇರಿಸಲಾಯಿತು. ವಿಠಲಮೂರ್ತಿ ಅವರು ಪತ್ನಿ ಪರಶಿವಕುಮಾರಿ, ಪುತ್ರ ಗಣೇಶಮೂರ್ತಿ, ಪುತ್ರಿ ಮಧುಮೈತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೈಸೂರಿನ ಅಗ್ರಹಾರದ ತ್ಯಾಗರಾಜ ರಸ್ತೆಯಲ್ಲಿರುವ ವಿಠಲಮೂರ್ತಿ ಅವರ ನಿವಾಸದ ಆವರಣದಲ್ಲಿ ಮಂಗಳವಾರ ಬೆಳಗ್ಗೆ ವಾಟಾಳ್ ನಾಗರಾಜ್ ಸೇರಿದಂತೆ ಅನೇಕ ಗಣ್ಯರು, ಸ್ನೇಹಿತರು, ಬಂಧು ಬಳಗದವರು ವಿಠಲಮೂರ್ತಿ ಅವರ ಅಂತಿಮ ದರ್ಶನ ಪಡೆದರು. **–ಪಿಎಂ**

ಇದೇ ತಿಂಗಳಲ್ಲಿ ಅಕೌಂಟ್‌ಗೆ ಎರಡು ತಿಂಗಳ ಗೃಹಲಕ್ಷ್ಮಿ ಹಣ ಬರುತ್ತೆ



ಬೆಂಗಳೂರು, ಜು.9– ಪಾವತಿಯಾಗದೇ ಇರುವ ಜೂನ್ ತಿಂಗಳ ಗೃಹಲಕ್ಷ್ಮಿ ಯೋಜನೆಯ ಕಂತಿನ ಹಣ ಮತ್ತು ಜುಲೈ ತಿಂಗಳ ಕಂತಿನ ಎರಡೂ ಒಟ್ಟಿಗೆ ಖಾತೆಗೆ ಹಾಕಲಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಭರವಸೆ ನೀಡಿದ್ದಾರೆ. ಜೂನ್ ತಿಂಗಳ ಗೃಹಲಕ್ಷ್ಮಿ ಯೋಜನೆಯ ಕಂತಿನ ಹಣ ಇನ್ನೂ ಪಾವತಿಯಾಗದೇ ಇರುವುದು ಸಾಕಷ್ಟು ಟೀಕೆಗೆ ಗುರಿಯಾಗಿತ್ತು. ಈ ಬಗ್ಗೆ ಇದೀಗ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮಾಹಿತಿ ನೀಡಿದ್ದು, ಗೃಹಲಕ್ಷ್ಮಿ ಯೋಜನೆಯ ಜೂನ್ ಮತ್ತು ಜುಲೈ ತಿಂಗಳ ಕಂತಿನ ಹಣ ಶೀಘ್ರದಲ್ಲೇ ಬಿಡುಗಡೆಯಾಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಭರವಸೆ ನೀಡಿದ್ದಾರೆ. ಚುನಾವಣೆ ನೀತಿ ಸಂಹಿತೆಯಿಂದಾಗಿ ಜೂನ್ ತಿಂಗಳ ಗೃಹಲಕ್ಷ್ಮಿ ಹಣ ಸ್ವಲ್ಪ ತಡವಾಗಿದೆ. ಇನ್ನೆರಡು ದಿನಗಳಲ್ಲಿ ಬಿಡುಗಡೆಯಾಗ ಲಿದೆ. ಜುಲೈ ತಿಂಗಳದ್ದು ಇದೇ 15ರೊಳಗೆ ಪಾವತಿಯಾಗಲಿದೆ ಎಂದು ಇಲಾಖೆ ತಿಳಿಸಿದೆ.

ಸೂರಜ್ ರೇವಣ್ಣ ಜಾಮೀನು ಅರ್ಜಿ ವಜಾ




ಬೆಂಗಳೂರು: ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಿಷತ್ ಸದಸ್ಯ ಸೂರಜ್ ರೇವಣ್ಣ ಸಲ್ಲಿಸಿದ್ದ ಜಮೀನು ಅರ್ಜಿ ವಜಾಗೊಂಡಿದೆ. ಹೊಳೆನರಸೀಪುರದಲ್ಲಿ ದಾಖಲಾಗಿದ್ದ ಮೊದಲ ಪ್ರಕರಣಕ್ಕೆ ಸಂಬಂಧಿಸಿದಂತೆ ಸೂರಜ್ ರೇವಣ್ಣ ಜಾಮೀನು ಅರ್ಜಿ ಸಲ್ಲಿಸಿದ್ದರು.

ಈ ಅರ್ಜಿಯ ವಿಚಾರಣೆ ಇಂದು 42 ಎಸಿಎಂಎಂ ಕೋರ್ಟ್‌ನಲ್ಲಿ ನಡೆಯಿತು. 27 ವರ್ಷದ ಸಂತ್ರಸ್ತನ ಮೇಲೆ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಸೂರಜ್ ರೇವಣ್ಣ ಅವರನ್ನು ಹೊಳೆನರಸೀಪುರ ಪೊಲೀಸರು ಬಂಧಿಸಿದ್ದರು. ಕೋರ್ಟ್ ಸೂರಜ್ ರೇವಣ್ಣಗೆ ನ್ಯಾಯಾಂಗ ಬಂಧನ ವಿಧಿಸಿದ್ದು ಸದ್ಯ ಪರಪ್ಪನ ಅಗ್ರಹಾರದಲ್ಲಿದ್ದಾರೆ.

ಆರೋಪ ಸಾಬೀತಾದರೆ ಶಿಕ್ಷೆ: ಐಪಿಸಿ 377 (ಅಸ್ವಾಭಾವಿಕ ಲೈಂಗಿಕ ದೌರ್ಜನ್ಯ): ಜೀವಾವಧಿ ಅಥವಾ 10 ವರ್ಷಗಳ ಜೈಲು, ಐಪಿಸಿ 342 (ದುರುದ್ದೇಶದಿಂದ ಕೂಡಿ ಹಾಕುವುದು): 1 ವರ್ಷ ಜೈಲು ಅಥವಾ ದಂಡ, ಐಪಿಸಿ 506 (ಕ್ರಿಮಿನಲ್ ಪಿತೂರಿ, ಜೀವ ಬೆದರಿಕೆ): 2 ವರ್ಷ ಜೈಲು ಅಥವಾ ದಂಡ.

ನಿಧನ



ಸುಬ್ಬುಕೃಷ್ಣ


ಮೈಸೂರು,ಜು.9– ಮೈಸೂರಿನ ನಿವೇದಿತಾನಗರದ ನಿವಾಸಿ ಸುಬ್ಬುಕೃಷ್ಣ (60) ಅನಾರೋಗ್ಯದಿಂದ ಮಂಗಳವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ನಾಳೆ (ಬುಧವಾರ ಜು.10) ಮಧ್ಯಾಹ್ನ 12.30ಕ್ಕೆ ಮೈಸೂರಿನ ಜಯನಗರದ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಮೃತರ ಕುಟುಂಬದ ಮೂಲಗಳು ತಿಳಿಸಿವೆ.

ಬಸವೇಗೌಡ



ಮೈಸೂರು: ಶ್ರೀ ಬೀರೇಶ್ವರ ಸ್ವಾಮಿ ಮತ್ತು ಕಾಳಮ್ಮ ಟ್ರಸ್ಟ್ ಅಧ್ಯಕ್ಷರು ಹಾಗೂ ಬಿಕೆಟಿ ಪಬ್ಲಿಕ್ ಸ್ಕೂಲ್ ಸಂಸ್ಥಾಪಕರಾದ ನಾಗರಾಜ್ ಅವರ ತಂದೆ ಬಿ.ಬಸವೇಗೌಡ (88) ಮಂಗಳವಾರ ಕಡಕೊಳದ ಕೆಎಂಹುಂಡಿ ಗ್ರಾಮದ ನಿವಾಸದಲ್ಲಿ ನಿಧನರಾದರು. ಇವರು ಮೂವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಬುಧವಾರ) ಬೆಳಿಗ್ಗೆ 11 ಗಂಟೆಗೆ ಸ್ವಗ್ರಾಮ ಕಡಕೊಳ ಕೆಎಂಹುಂಡಿ ಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

10.07.2024 ಬುಧವಾರ, ಮಳೆ ನಕ್ಷತ್ರ : ಪುನರ್ವಸು 6.07.2024 ರಿಂದ 19.07.2024 ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಆಷಾಢ ಮಾಸ, ಶುಕ್ಲ ಪಕ್ಷ, ತಿಥಿ: ಚೌತಿ, ನಕ್ಷತ್ರ: ಮಖ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಸರ್ ಎಂ. ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘ:** ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಮತ್ತು ಆಷಾಢ ಮಾಸದ ಪ್ರಯುಕ್ತ ಚಾಮುಂಡಿಬೆಟ್ಟದ 1101 ಮೆಟ್ಟಿಲುಗಳ ಸ್ವಚ್ಛತಾ ಕಾರ್ಯಕ್ರಮ, ಉಪಸ್ಥಿತರು: ಶಾಸಕ ಟಿ.ಎಸ್.ಶ್ರೀವತ್ಸ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಮಿಲ್ಲೆಟ್ ಮ್ಯಾನ್ ಆಫ್ ಇಂಡಿಯಾ ಡಾ.ಖಾದರ್ ವಲ್ಲಿ ದುಡೇಕುಲ, ಅಂಕಣಕಾರ ಹಾಗೂ ಸಾಹಿತಿ ಬನ್ನೂರು ಕೆ.ರಾಜು, ಸ್ಥಳ: ಚಾಮುಂಡಿಬೆಟ್ಟದ ಪಾದ, ಬೆಳಗ್ಗೆ 6.30 ರಿಂದ.

■ **ಜೆಎಸ್ಎಸ್ ಆಯುರ್ವೇದ ಆಸ್ಪತ್ರೆ:** ಬೆನ್ನು ನೋವಿಗೆ ಕಾರಣಗಳು, ಲಕ್ಷಣಗಳು ಮತ್ತು ಚಿಕಿತ್ಸೆ ಬಗ್ಗೆ ತಜ್ಞ ವೈದ್ಯರಿಂದ ಸಲಹೆ, ಸ್ಥಳ: ಆಸ್ಪತ್ರೆ ಆವರಣ, ಆಲನಹಳ್ಳಿ, ಬೆಳಗ್ಗೆ 9ರಿಂದ ಸಂಜೆ 4.30ರವರೆಗೆ.

■ **ಜೆಎಸ್ಎಸ್ ಮಹಾ ವಿದ್ಯಾಪೀಠ, ಜೆಎಸ್ಎಸ್ ಮೈಸೂರು ಅರ್ಬನ್ ಹಾತ್:** ಗುಜರಾತ್ ಕರಕುಶಲ ಉತ್ಸವ–2024, ಸ್ಥಳ: ಜೆಎಸ್ಎಸ್ ಮೈಸೂರು ಅರ್ಬನ್ ಹಾತ್, ಹೆಬ್ಬಾಳು ಕೈಗಾರಿಕಾ ಪ್ರದೇಶ, ಬೆಳಗ್ಗೆ 10ರಿಂದ.

■ **ಸಹಾರ ಮಹಿಳಾ ಸ್ವ ಸಹಾಯ ಸಂಘ, ಸಹಾರ ಹ್ಯಾಂಡಿಕ್ರಾಫ್ಟ್, ಹ್ಯಾಂಡ್‌ಲೂಮ್ ಅಸೋಸಿಯೇಷನ್:** ಸಹಾರ ಆರ್ಟ್ ಅಂಡ್ ಕ್ರಾಫ್ಟ್ ಶಾಪಿಂಗ್ ಫೆಸ್ಟಿವೆಲ್–2024 ಪ್ರದರ್ಶನ ಮತ್ತು ಮಾರಾಟ, ಸ್ಥಳ: ಸ್ಕೌಟ್ಸ್ ಅಂಡ್ ಗೈಡ್ಸ್ ಮೈದಾನ, ಹಳೇ ಜಿಲ್ಲಾಧಿಕಾರಿ ಕಚೇರಿ ಹಿಂಭಾಗ, ಬೆಳಗ್ಗೆ 10 ಗಂಟೆಯಿಂದ.

■ **ಶ್ರೀ ಕಲಾನಿಕೇತನ ಸ್ಕೂಲ್ ಆಫ್ ಆರ್ಟ್ :** ಫೌಂಡೇಷನ್ ಮತ್ತು ಬಿವಿ.ಎ. ವಿದ್ಯಾರ್ಥಿಗಳಿಂದ ಮಂಡಲ ಚಿತ್ರಕಲಾ ಪ್ರದರ್ಶನ, ಸ್ಥಳ: ಶ್ರೀಕಲಾನಿಕೇತನ ಸ್ಕೂಲ್ ಆಫ್ ಆರ್ಟ್, ವಿಜಯನಗರ, ಬೆಳಗ್ಗೆ 10 ರಿಂದ.

■ **ಶ್ರೀ ನಟರಾಜ ಮಹಿಳಾ ಪದವಿಪೂರ್ವ ಕಾಲೇಜು:** ಪ್ರತಿಭಾ ಪುರಸ್ಕಾರ–ಸ್ನೇಹಸಿಂಚನ, ಸಾನ್ನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ: ಉಪಅರಣ್ಯ ಸಂರಕ್ಷಣಾಧಿಕಾರಿ ಪಿ.ಎ.ಸೀಮಾ, ಪ್ರತಿಭಾ ಪುರಸ್ಕಾರ: ಮೈಸೂರು ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್. ಸುಬ್ರಮಣ್ಯ, ಅಧ್ಯಕ್ಷತೆ: ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ, ಉಪಸ್ಥಿತರು: ಕಾಲೇಜು ಪ್ರಿನ್ಸಿಪಾಲ್ ವಿ.ಡಿ.ಸುನೀತಾ ರಾಣಿ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30ಕ್ಕೆ.

■ **ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್:** ಅಕ್ಯೂಪ್ರೆಶರ್, ಸುಜೋಕ್, ಅಕ್ಯು ಡಿಜಿಟಲ್ ಫಿಸಿಯೋಥೆರಪಿ ಚಿಕಿತ್ಸಾ ಶಿಬಿರ, ಸ್ಥಳ: ಶ್ರೀ ಸಂಕಷ್ಟಹರ ಗಣಪತಿ ಸೇವಾ ಸಮಿತಿ ಆವರಣ, ಶ್ರೀರಾಂಪುರ ಎರಡನೇ ಹಂತ, ಬೆಳಗ್ಗೆ 10.30ರಿಂದ.

■ **ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ:** ಶ್ರೀ ಗಿರಿಜಾ ಕಲ್ಯಾಣ ಮಹೋತ್ಸವ, ಬೆಳಗ್ಗೆ 9 ಗಂಟೆಗೆ ಹೊರೆಯಲ್ಲಿ ಅನುಜ್ಞಾಪೂರ್ವಕ ಕಳಶ ಕನ್ನಡ ತರುವುದು, ಸಂಜೆ 6ಕ್ಕೆ ಕಾಶಿಯಾತ್ರಾ ಮಹೋತ್ಸವ, ಸಂಜೆ 7.40 ರಿಂದ ಗಿರಿಜಾ ಕಲ್ಯಾಣ ಮಹೋತ್ಸವ, ರಾತ್ರಿ ದೇವಸ್ಥಾನದ ಉಪಾದಿವಂತರ ಸೇವೆ, ಸ್ಥಳ: ಕೋಟೆ ತ್ರಿನೇಶ್ವರ ದೇವಸ್ಥಾನ, ಅರಮನೆ ಆವರಣ, ಸಂಜೆ 7 ಗಂಟೆಗೆ.


■ **ಭಾವಸಾರ ಕ್ಷತ್ರಿಯ ಶ್ರೀ ಚಾಮುಂಡೇಶ್ವರಿ ಸೇವಾ ಸಮಿತಿ:** 10ನೇ ವರ್ಷದ ಶ್ರೀ ಚಾಮುಂಡೇಶ್ವರಿ ಅಮ್ಮನವರ ಪೂಜಾ ಮಹೋತ್ಸವ, ಮಧ್ಯಾಹ್ನ 12ಕ್ಕೆ ಅನ್ನಸಂತರ್ಪಣೆ, ಸಂಜೆ 6ಕ್ಕೆ ಪಿ.ಯಶೋಧ ಸತ್ಯನಾರಾಯಣ ಸುಲಾಖೆ ಹಾಗೂ ವೃಂದದವರಿಂದ ಸ್ವರಾಂಜಲಿ ಸಂಗೀತ ಶಾಲೆಯವರಿಂದ ದೇವರನಾಮ ಮತ್ತು ಭಕ್ತಿಗೀತೆಗಳು, ಸ್ಥಳ: ಸೇವಾ ಸಮಿತಿ ಆವರಣ, ಕುವೆಂಪುನಗರ.

■ **ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** ಮೈಸೂರು ನೃತ್ಯ ಗುರುಪರಂಪರಾ ಉತ್ಸವ, ಸಂಜೆ 6 ರಿಂದ ಆಸ್ಥಾನ ವಿದುಷಿ ಪದ್ಮಭೂಷಣ ಡಾ. ಕೆ. ವೆಂಕಟಲಕ್ಷ್ಮಮ್ಮ ಅವರ ಸ್ಮರಣಾರ್ಥ ಬೆಂಗಳೂರಿನ ವಿದುಷಿ ವಿದ್ಯಾರವಿಶಂಕರ್ ಅವರಿಂದ ಭರತನಾಟ್ಯ ಪ್ರದರ್ಶನ, ನಟುವಾಂಗ : ವಿದುಷಿ ಗುರು ವಿದ್ಯಾರವಿಶಂಕರ್ ಮತ್ತು ವಿದುಷಿ ಸಿಂಧು ಆಚಾರ್ಯ, ಗಾಯನ– ವಿದುಷಿ ಭಾರತೀ ವೇಣುಗೋಪಾಲ್, ಮೃದಂಗ–ವಿದ್ವಾನ್ ಆರ್. ದಾಸಪ್ಪ, ಪಿಟೀಲು–ವಿದ್ವಾನ್ ಎಂ.ಆರ್. ಶ್ರೀಕಾಂತ್; ಸಂಜೆ 7.15 ರಿಂದ ನಾಟ್ಯಾಚಾರ್ಯ ಕೆ. ಮುರಳೀಧರ ರಾವ್ ಸ್ಮರಣಾರ್ಥ ವಿದುಷಿ ಡಾ. ಕೃಪಾಫಡ್ಕೆ ಅವರಿಂದ ಪಂದನಲ್ಲೂರು ಶೈಲಿಯ ನೃತ್ಯ ಪ್ರದರ್ಶನ, ನಟುವಾಂಗ – ವಿದುಷಿ ಪೂಜಾಸುಗಮ, ಗಾಯನ–ವಿದುಷಿ ಸಮೀಕ್ಷಾ, ಮೃದಂಗ–ವಿದ್ವಾನ್ ವಿಕ್ರಂ ಭಾರದ್ವಾಜ್, ಕೊಳಲು–ವಿದ್ವಾನ್ ಪಿ. ಸಮೃದ್ಧ, ಸ್ಥಳ: ಸಂಗೀತ ಕಲಾನಿಧಿ ಮೈಸೂರು ವಾಸುದೇವಾಚಾರ್ಯ ಭವನ, ಚಾಮುಂಡಿಪುರಂ.

ನಂಜನಗೂಡಿನಲ್ಲಿಂದು

■ **ಶ್ರೀ ಶ್ರೀಕಂಠೇಶ್ವರಸ್ವಾಮಿ ದೇವಾಲಯ:** ಶ್ರೀ ಗಿರಿಜಾ ಕಲ್ಯಾಣ, ವರಪೂಜಾ ಮಹೋತ್ಸವ, ಸಂಜೆ 5 ರಿಂದ ಕಾಶಿಯಾತ್ರೆ, ರಾತ್ರಿ 6.30ರಿಂದ 7.30ರವರೆಗೆ ಧಾರಾ ಮಹೋತ್ಸವ, ಬೆಳಗ್ಗೆ 11ಕ್ಕೆ ಸ್ವಾಮಿ ಮತ್ತು ವೃಂದದವರಿಂದ ವೀರಗಾಸೆ, ಸಂಜೆ 4ಕ್ಕೆ ಶ್ರೀ ಆದಿ ವೀರಭದ್ರೇಶ್ವರ ನೃತ್ಯ ತಂಡದಿಂದ ವೀರಗಾಸೆ, ಸಂಜೆ 4ರಿಂದ ಡಿ.ಎನ್.ಪುನೀತ್‌ರಾಜ್ ಮತ್ತು ತಂಡದಿಂದ ಕರಡಿ ಮೇಳ, ನಾಗಣ್ಣ ಮತ್ತು ತಂಡದಿಂದ ನಾದಸ್ವರ ವಾದನ, ಶ್ರೀ ಬಸವೇಶ್ವರ ಪೂಜಾ ಕುಣಿತ ಕಲಾವಿದರ ಸಂಘದಿಂದ ಪೂಜಾ ಕುಣಿತ, ಶ್ರೀ ಮಾರಮ್ಮನ ಒನಕೆ ಕುಣಿತ ಕಲಾವಿದರಿಂದ ಒನಕೆ ಕುಣಿತ, ಶ್ರೀ ಗೌರಿಶಂಕರ ನಂದಿಧ್ವಜ ಸಂಘದಿಂದ ನಂದಿಧ್ವಜ, ಅಭಿನವಶ್ರೀ ವೀರಭದ್ರ ನೃತ್ಯ ತಂಡದಿಂದ ವೀರಭದ್ರ ಕುಣಿತ, ಕೆ.ಎನ್.ಭಾಸ್ಕರ್ ತಂಡದವರಿಂದ ಕರಡಿ ವಾದ್ಯ, ಶ್ರೀ ಬಸವೇಶ್ವರ ಯಕ್ಷಗಾನ ಮತ್ತು ಹಗಲುವೇಷ ಕಲಾ ತಂಡದವರಿಂದ ಹುಲಿವೇಷ, ಶ್ರೀ ಮಲೈ ಮಹದೇಶ್ವರ ಕಂಸಾಳೆ ಸಂಘದವಿಂದ ಬೀಸು ಕಂಸಾಳೆ, ಕೆ.ಎನ್.ಶಂಕರ ಮತ್ತು ವೃಂದದವರಿಂದ ಕಂಸಾಳೆ, ಮಹದೇವು ಮತ್ತು ಸಂಘದವರಿಂದ ಗಾಡಿಗೊಂಬೆ, ಜೆ.ಮಂಜುನಾಥ್ ಮತ್ತು ತಂಡದವರಿಂದ ಗಾಡಿಗೊಂಬೆ, ಶ್ರೀವೀರಭದ್ರೇಶ್ವರ ತಮಟೆ ಕಲಾವಿದರಿಂದ ತಮಟೆ, ಸ್ಥಳ: ಶ್ರೀಕಂಠೇಶ್ವರ ದೇವಾಲಯ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬದುಕು ಬದಲಿಸಿದ ಶೋಧ–ಬಾನುಲಿ ಸರಣಿ, ಪ್ರಸ್ತುತಿ– ಎನ್.ಎನ್.ಸುರೇಂದ್ರನಾಥ್ ಸಾತ್ವಿಕ್, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಡಾ.ಪಿ.ಎಸ್. ಮುರಳೀಧರ್, ವ್ಯಾಖ್ಯಾನ: ಮೈಸೂರು ಕೃಷ್ಣಮೂರ್ತಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 9.00 ವೃತ್ತಿ ಮಾರ್ಗದರ್ಶನ 'ಛಾರ್ಟರ್ಡ್ ಅಕೌಂಟೆನ್ಸಿ ಅಂದರೆ ಸಿ.ಎ. ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಮೈಸೂರಿನ ಛಾರ್ಟರ್ಡ್ ಅಕೌಂಟೆಂಟ್ ಮಹೇಶ್ ಬಿ.ವಿ. ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಪಂಡಿತ್ ಭಜನ್ ಸಪೂರಿ–ಸಂತೂರ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ **ಮಧ್ಯಾಹ್ನ:** 12.30 ದೇವರನಾಮ–ವೈ.ಎನ್.ಮಧ್ವೇಶ್, 12.45 ಜನಪದ ಸಂಗೀತ, 1.20 ಭಾವಗೀತೆಗಳು: ವಸುಧಾಶಾಸ್ತ್ರಿ, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಗಾಯತ್ರಿ ವೆಂಕಟರಾಘವನ್–ಹಾಡುಗಾರಿಕೆ, 4.00 ಮಹಿಳಾರಂಗ: "ಹೀಗಿದೆ ನೋಡಿ ನಮ್ ಜೋಡಿ", ಭಾಗವಹಿಸುವವರು: ಒಡನಾಡಿ ಸಂಸ್ಥೆಯ ಸ್ಟಾನ್ ಲೀ ಮತ್ತು ಸಮಾಜ ಕಾರ್ಯ ಪ್ರಾಧ್ಯಾಪಕರಾದ ಕುಮುದಿನಿ ಅಚ್ಚಿ ದಂಪತಿಯೊಂದಿಗೆ ಮಾತುಕತೆ. ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ– ಕಿಶೋರ್. ಎಂ.ಕಾಕಡೆ, 6.50 ಕೃಷಿರಂಗ: "ಕೃಷಿ ದೀವಿಗೆ" ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ ಕುರಿತ ಬಾನುಲಿ ಸರಣಿ. ಹತ್ತಿ ಬೆಳೆಯಲ್ಲಿ ಸಮಗ್ರ ಪೀಡೆ ನಿರ್ವಹಣೆ ಈ ಕುರಿತು ನೇರ ಫೋನ್ ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ: ಚಾಮರಾಜನಗರ ತಾಲೂಕು ಹರದನಹಳ್ಳಿಯ ಅಖಿಲ ಭಾರತ ಸುಸಂಘಟಿತ ಹತ್ತಿ ಬೆಳೆ ಸಂಶೋಧನಾ ಯೋಜನೆಯ ವಿಜ್ಞಾನಿ ಡಾ.ಶಿವರಾಯ್ ನಾವಿ. ಪ್ರಸ್ತುತಿ: ಎನ್.ಕೇಶವಮೂರ್ತಿ, 8.00 ಕ್ಷಿತಿಜ Literary ಗುರು–ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಜಿ.ಆರ್.ಭಟ್–ಗಾಯನ, 10.00 ಹಳ್ಳಿಹಾಡು, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 10 ಬುಧವಾರ 2024

ಸಂಪುಟ: 45 | ಸಂಚಿಕೆ: 85 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

ಕೆ–ಸೆಟ್ ನಾಳೆಯಿಂದ ದಾಖಲಾತಿ ಪರಿಶೀಲನೆ

ಬೆಂಗಳೂರು: ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ–ಸೆಟ್) ಫಲಿತಾಂಶದ ತಾತ್ಕಾಲಿಕ ಪಟ್ಟಿಯಲ್ಲಿರುವ ಅರ್ಹ ಅಭ್ಯರ್ಥಿಗಳ ದಾಖಲಾತಿ ಪರಿಶೀಲನಾ ಕಾರ್ಯ ಜುಲೈ 11ರಿಂದ 22ರ ವರೆಗೆ ನಡೆಯಲಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಕ್ರಮಸಂಖ್ಯೆ ಆಧಾರಿತ ವೇಳಾಪಟ್ಟಿಯಂತೆ ಮಲ್ಲೇಶ್ವರದಲ್ಲಿರುವ ಕೆಇಎ ಕಚೇರಿಗೆ ನಿಗದಿತ ದಿನ ಮತ್ತು ಸಮಯಕ್ಕೆ ಅನುಗುಣವಾಗಿ ಅಭ್ಯರ್ಥಿಗಳು ಹಾಜರಾಗಬೇಕು. ಮೂಲ ದಾಖಲೆ ತರಬೇಕು, ಸೂಚನೆಗಳನ್ನು ಪಾಲಿಸಬೇಕು ಎಂದು ಕೆಇಎ ಹೇಳಿದೆ. ಇದೇ ಜ. 13ರಂದು ಕೆ–ಸೆಟ್ ಪರೀಕ್ಷೆ ನಡೆದಿತ್ತು. ಕಲಾ, ವಿಜ್ಞಾನ ಮತ್ತು ವಾಣಿಜ್ಯ ವಿಭಾಗದ 41 ವಿಷಯಗಳಿಗೆ 95,201 ಅಭ್ಯರ್ಥಿಗಳು ಪರೀಕ್ಷೆಗಳು ಬರೆದಿದ್ದರು. 6,675 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದರು.

ಆಷಾಢ ಶುಕ್ರವಾರದ ಪೂಜೆಗೆ ಚಾಮುಂಡಿಬೆಟ್ಟದಲ್ಲಿ ಎಲ್ಲಾ ಸಿದ್ಧತೆ

ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅವರಿಂದ ಪರಿಶೀಲನೆ



ಮೈಸೂರು, ಜು.9(ಆರ್‌ಕೆ)– 2024ರ ಆಷಾಢ ಮಾಸದ ವಿಶೇಷ ಪೂಜೆಗೆ ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಸಕಲ ಸಿದ್ಧತೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ.

ಭಾನುವಾರ ಅಧೀನಾಧಿಕಾರಿಗಳೊಂದಿಗೆ ಚಾಮುಂಡಿಬೆಟ್ಟಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಭಕ್ತಾದಿಗಳು ನಿರಾಳವಾಗಿ ತಾಯಿ ಚಾಮುಂಡೇಶ್ವರಿ ದರ್ಶನ ಮಾಡಲು ಬ್ಯಾರಿಕೇಡ್, ಕುಡಿಯುವ ನೀರು, ಶೌಚಾಲಯ, ಸ್ವಚ್ಛತೆ, ಪ್ರಸಾದ ವ್ಯವಸ್ಥೆ, ಗಣ್ಯರು, ಅತೀ ಗಣ್ಯರ ವಾಹನ ನಿಲುಗಡೆ, ದಾಸೋಹ ಸೇರಿದಂತೆ ಅಗತ್ಯ ಮೂಲ ಸೌಲಭ್ಯ ಒದಗಿಸಲು ಕೈಗೊಂಡಿರುವ ಕ್ರಮದ ಬಗ್ಗೆ ಪರಿಶೀಲಿಸಿದರು. ಜುಲೈ 12, 19, 26ರಂದು ಆಷಾಢ ಶುಕ್ರವಾರ, ಜುಲೈ 27ರಂದು ಚಾಮುಂಡೇಶ್ವರಿ ವರ್ಧಂತಿ ಹಾಗೂ ಆಗಸ್ಟ್ 2ರಂದು ಕಡೇ ಆಷಾಢ ಶುಕ್ರವಾರವಿರುವುದರಿಂದ ಆ ದಿನಗಳಲ್ಲಿ ಕೆಎಸ್‌ಆರ್‌ಟಿಸಿ ಬಸ್ಸುಗಳಲ್ಲಿ ಉಚಿತವಾಗಿ ಲಲಿತಮಹಲ್ ಹೆಲಿಪ್ಯಾಡ್ ಮೈದಾನದಿಂದ ಚಾಮುಂಡಿಬೆಟ್ಟಕ್ಕೆ ಹೋಗಿಬರಲು ಭಕ್ತಾದಿಗಳಿಗೆ ಸೌಕರ್ಯ ಕಲ್ಪಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಸಾರ್ವಜನಿಕರು ಲಲಿತಮಹಲ್ ಹೆಲಿಪ್ಯಾಡ್ ಮೈದಾನದಲ್ಲಿ ತಮ್ಮ ವಾಹನಗಳನ್ನು ನಿಲ್ಲಿಸಿ ಅಲ್ಲಿಂದ ಕೆಎಸ್‌ಆರ್‌ಟಿಸಿ ಬಸ್ಸುಗಳಲ್ಲೇ ಪ್ರಯಾಣಿಸಬೇಕು. ಶನಿವಾರ ಮತ್ತು ಭಾನುವಾರಗಳಂದು ಚಾಮುಂಡಿಬೆಟ್ಟಕ್ಕೆ ಸಾರ್ವಜನಿಕರ ವಾಹನ ಪ್ರವೇಶ ನಿರ್ಬಂಧಿಸಲಾಗಿದ್ದು, ಲಲಿತಮಹಲ್ ಹೆಲಿಪ್ಯಾಡ್ ಮೈದಾನದಲ್ಲೇ ತಮ್ಮ ವಾಹನ ನಿಲ್ಲಿಸಿ, ಟಿಕೆಟ್ ಪಡೆದು ಸಾರಿಗೆ ಬಸ್ಸಿನಲ್ಲೇ ಪ್ರಯಾಣಿಸಬೇಕು. ಮಹಿಳೆಯರಿಗೆ ಇಲ್ಲಿಯೂ ಶಕ್ತಿ ಯೋಜನೆ ಅನ್ವಯವಾಗುತ್ತದೆ ಎಂದು ಅವರು ತಿಳಿಸಿದ್ದಾರೆ. ಚಾಮುಂಡಿಬೆಟ್ಟ ಗ್ರಾಮದ ನಿವಾಸಿಗಳು ತಮ್ಮ ಆಧಾರ್ ಕಾರ್ಡ್ ಹಾಜರುಪಡಿಸಿ ಪ್ರವೇಶಿಸಬಹುದು. ಪಾಸ್ ವ್ಯವಸ್ಥೆ ಇಲ್ಲದ ಕಾರಣ 300 ರೂ., 50 ರೂ., ಹಾಗೂ ಧರ್ಮದರ್ಶನ ಸಾಲುಗಳಲ್ಲಿ ದೇವಾಲಯಕ್ಕೆ ಪ್ರವೇಶ ಪಡೆಯಬಹುದಾಗಿದೆ. ಸ್ಥಳದಲ್ಲಿ ವೈದ್ಯಕೀಯ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

ಪ್ಲಾಸ್ಟಿಕ್ ಬಳಕೆ ನಿಷೇಧಿಸಿರುವುದರಿಂದ ಚಾಮುಂಡಿಬೆಟ್ಟದಲ್ಲಿ ಪ್ಲಾಸ್ಟಿಕ್ ಬಳಸಿದಲ್ಲಿ ಅಂತಹವರ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಿಧಿಸಲಾಗುವುದು. ಭಕ್ತಾದಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಸೂಕ್ತ ಪೊಲೀಸ್ ಭದ್ರತೆ ಒದಗಿಸಲಿದ್ದು, ಸಿಸಿ ಕ್ಯಾಮರಾ, ಧ್ವನಿವರ್ಧಕ ಸೌಲಭ್ಯ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.



ಚಾಮುಂಡಿಬೆಟ್ಟಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ

ಇಂದು SSLC ಪರೀಕ್ಷೆ–2ರ ಫಲಿತಾಂಶ ಪ್ರಕಟ



ಬೆಂಗಳೂರು: ರಾಜ್ಯದಲ್ಲಿ ಜೂನ್ 14 ರಿಂದ 22 ರವರೆಗೆ ನಡೆದಿದ್ದ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರ ಫಲಿತಾಂಶ ನಾಳೆ ಪ್ರಕಟಗೊಳ್ಳುತ್ತಿದ್ದು, ಅಧಿಕೃತ ವೆಬ್ ತಾಣದಲ್ಲಿ ಫಲಿತಾಂಶವನ್ನು ವೀಕ್ಷಿಸಬಹುದಾಗಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ತಿಳಿಸಿದೆ. 2024ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರ ಫಲಿತಾಂಶವನ್ನು ಜುಲೈ 10 (ನಾಳೆ) ಬೆಳಗ್ಗೆ 11:30ಕ್ಕೆ ಅಧಿಕೃತ ವೆಬ್‌ಸೈಟ್ https://karresults.nic.inನಲ್ಲಿ ಪ್ರಕಟಿಸುವುದಾಗಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ತಿಳಿಸಿದೆ.

ರಾಜ್ಯದ 724 ಪರೀಕ್ಷಾ ಕೇಂದ್ರಗಳಲ್ಲಿ ಜೂನ್ 14ರಿಂದ 22 ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ನಡೆದಿದ್ದು, ಏಳು ಮಾಧ್ಯಮಗಳಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡಲಾಗಿತ್ತು. 1.44 ಲಕ್ಷ ಬಾಲಕರು, 79,148 ಬಾಲಕಿಯರು ಸೇರಿದಂತೆ ಒಟ್ಟು 2.23 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ–2ಕ್ಕೆ ಹೆಸರು ನೋಂದಾಯಿಸಿಕೊಂಡಿದ್ದರು. ಅವರಲ್ಲಿ 13,085 ವಿದ್ಯಾರ್ಥಿಗಳು ಫಲಿತಾಂಶ ವೃದ್ಧಿಗಾಗಿ ಎರಡನೇ ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದರು.

ಶಾಲೆ ಬಿಟ್ಟ ಮಕ್ಕಳ ಮತ್ತೆ ಕರೆತನ್ನಿ

- ಡಿಸಿಗಳು, ಸಿಇಓಗಳ ಮುಂದುವರೆದ ಸಭೆಯಲ್ಲಿ ಸಿಎಂ ಸೂಚನೆ
- ರಾಜಪ್ಪ ಮೇಸ್ಟ್ರು ನನ್ನ ಪುನಃ ಶಾಲೆಗೆ ಕರೆತರದಿದ್ದರೆ ನಾನಿಂದು ಮುಖ್ಯಮಂತ್ರಿಯಾಗಿ ನಿಮ್ಮ ಉದ್ದೇಶಿಸಿ ಮಾತನಾಡುವ ಪರಿಸ್ಥಿತಿಯೇ ಬರುತ್ತಿರಲಿಲ್ಲ
- ಜೊತೆಗೆ ಬಾಲ್ಯವಿವಾಹಕ್ಕೆ ತಡೆ; ಅಪ್ರಾಪ್ತರು ಗರ್ಭವತಿ ಆಗುವುದ ತಡೆಯಿರಿ
- ಡಿಸೆಂಬರ್ ಒಳಗೆ ಅಂಗನವಾಡಿ ಕಾರ್ಯಕರ್ತರ ಖಾಲಿ ಹುದ್ದೆ ಭರ್ತಿ ಮಾಡಿ

ಬೆಂಗಳೂರು, ಜು.9(ಕೆಎಂಶಿ)– ಕಲಿಕೆಯಿಂದ ದೂರ ಉಳಿದ ಮಕ್ಕಳನ್ನು ಪತ್ತೆ ಹಚ್ಚಿ ಶಾಲೆಗೆ ಕರೆತನ್ನಿ, ಬಾಲ್ಯ ವಿವಾಹ ಮತ್ತು ಅಪ್ರಾಪ್ತರು ಗರ್ಭ ಧರಿಸುವುದನ್ನು ತಡೆಗಟ್ಟಿ, ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳನ್ನು ಡಿಸೆಂಬರ್ ಒಳಗೆ ಭರ್ತಿ ಮಾಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾಡಳಿತಕ್ಕೆ ಇಂದಿಲ್ಲಿ ಕಟ್ಟಾದೇಶ ನೀಡಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಎರಡನೇ ದಿನವಾದ ಇಂದೂ ಇಲಾಖಾ ಮುಖ್ಯಸ್ಥರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳಿಗೆ, ತಮ್ಮ ಅಧಿಕಾರ ಚಲಾಯಿಸಿ ● 9ನೇ ಪುಟಕ್ಕೆ



ಅಧಿಕಾರಿಗಳ ನಿರ್ಲಕ್ಷ್ಯದಿಂದ ರಸ್ತೆ ಅಪಘಾತದಲ್ಲಿ ಜನ ಸತ್ತರೆ ನಾ ಸಹಿಸಲ್ಲ

ಬೆಂಗಳೂರು, ಜು. 9(ಕೆಎಂಶಿ)–ಅಧಿಕಾರಿಗಳ ಉದಾಸೀನದಿಂದ ರಸ್ತೆ ಅಪಘಾತಗಳಲ್ಲಿ ಜನರ ಪ್ರಾಣ ಹೋದರೆ ಸಹಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಜಿಲ್ಲಾಧಿಕಾರಿಗಳು, ಮುಖ್ಯಕಾರ್ಯನಿರ್ವಹಣಾ ಅಧಿಕಾರಿಗಳು ಮತ್ತು ಉಸ್ತುವಾರಿ ಕಾರ್ಯದರ್ಶಿಗಳ ಎರಡನೇ ದಿನದ ಸಭೆಯಲ್ಲಿ ಮಾತನಾಡಿದ ಅವರು, ಅಪಘಾತ ವಲಯ ಮತ್ತು ಬ್ಲಾಕ್‌ಸ್ಪಾಟ್ ಗುರುತಿಸಿ ಸುಮ್ಮನಾದರೆ ನಿಮ್ಮ ಜವಾಬ್ದಾರಿ ಮುಗಿಯುವುದಿಲ್ಲ, ರಸ್ತೆಗಿಳಿದು ಸುರಕ್ಷತೆ ಪರೀಕ್ಷಿಸಬೇಕು ಎಂದರು. ಕಳೆದ ಒಂದು ವರ್ಷದಲ್ಲಿ 34,916 ಅಪಘಾತಗಳು ಸಂಭವಿಸಿದ್ದು, 9,943 ಜನರು ಸಾವನ್ನಪ್ಪಿದ್ದಾರೆ, ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಗಳು ಅಪಘಾತ ಪ್ರಮಾಣ ತಡೆಯಲು ● 9ನೇ ಪುಟಕ್ಕೆ

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ದೋಷ ನಿವಾರಣೆಗೆ ಗಡ್ಕರಿಗೆ ಕುಮಾರಸ್ವಾಮಿ ಮನವಿ



- ಸರ್ವೀಸ್ ರಸ್ತೆ, ಹಳೆ ರಸ್ತೆ ಅಭಿವೃದ್ಧಿಗೂ ಕೋರಿಕೆ
- ಮಂಡ್ಯ ಹೊರವರ್ತುಲ ರಸ್ತೆ; ಹಲಗೂರು–ಕೆ.ಎಂ.ದೊಡ್ಡಿ ರಸ್ತೆ ಮೇಲ್ದರ್ಜೆಗೂ ಮನವಿ

ಬೆಂಗಳೂರು: ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇಯಲ್ಲಿನ ಕೆಲವು ದೋಷಗಳನ್ನು ಸರಿಪಡಿಸುವಂತೆ ಕೇಂದ್ರ ಕೈಗಾರಿಕಾ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ, ಭೂಸಾರಿಗೆ ಸಚಿವ ನಿತಿನ್ ಗಡ್ಕರಿ ಅವರಿಗೆ ಮನವಿ ಮಾಡಿದ್ದಾರೆ.

ದೆಹಲಿಯಲ್ಲಿಂದು ಗಡ್ಕರಿ ಅವರನ್ನು ಭೇಟಿ ಮಾಡಿದ ಮಂಡ್ಯ ಸಂಸದರೂ ಆಗಿರುವ ಕುಮಾರಸ್ವಾಮಿ, ಹೆದ್ದಾರಿ ನಿರ್ಮಾಣದ ನಂತರ ಕೆಲವು ಭಾಗಗಳಲ್ಲಿ ಉಂಟಾಗಿರುವ ಸಮಸ್ಯೆಗಳಿಂದ ಮಳೆ ಬಂದಾಗ ನೀರು ಸರಾಗವಾಗಿ ಹರಿದು ಹೋಗದೆ ವಾಹನ ಸಂಚಾರಕ್ಕೆ ತೀವ್ರ ತೊಡಕಾಗಿದೆ.

ರಸ್ತೆಯ ಕೆಲವು ಭಾಗಗಳಲ್ಲಿನ ತಿರುವುಗಳಿಂದ ಸಮಸ್ಯೆ ಉಂಟಾಗಿದ್ದು, ಸರ್ವೀಸ್ ರಸ್ತೆಗಳನ್ನು ಮತ್ತಷ್ಟು ಅಭಿವೃದ್ಧಿಪಡಿಸುವಂತೆ ಮತ್ತು ಹಳೆ ರಸ್ತೆಗಳನ್ನೂ ಅಭಿವೃದ್ಧಿಪಡಿಸುವಂತೆ ಮನವಿ ಮಾಡಿಕೊಂಡಿ



ದ್ದಾರೆ. ಮಂಡ್ಯ ನಗರದ ಹೊರವರ್ತುಲ ರಸ್ತೆ ಹಾಗೂ ಹಲಗೂರು–ಕೆಎಂ ದೊಡ್ಡಿ ರಸ್ತೆಯನ್ನು ಮೇಲ್ದರ್ಜೆಗೇರಿಸಿ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವಂತೆ ಕೋರಿದ್ದಾರೆ. ಕರ್ನಾಟಕದಲ್ಲಿ ಬಾಕಿ ಇರುವ ಸಾರಿಗೆ ಹೆದ್ದಾರಿ ಯೋಜನೆಗಳನ್ನು ಶೀಘ್ರ ಕಾರ್ಯಗತಗೊಳಿಸುವುದು, ಹೊಸ ಯೋಜನೆಗಳನ್ನು ಕೈಗೆತ್ತಿಕೊಳ್ಳುವಂತೆ ಮಾಡಿದ ಮನವಿಗೆ ಸ್ಥಳದಲ್ಲೇ ಸ್ಪಂದಿಸಿದ ಗಡ್ಕರಿ ಅವರು, ರಸ್ತೆಯ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳುವುದಲ್ಲದೆ, ಬೆಂಗಳೂರು–ಚೆನ್ನೈ ನಡುವಿನ ಹೊಸ ರಾಷ್ಟ್ರೀಯ ಹೆದ್ದಾರಿಯನ್ನು ಡಿಸೆಂಬರ್‌ನಲ್ಲಿ ರಾಷ್ಟ್ರಕ್ಕೆ ಸಮರ್ಪಣೆ ಮಾಡುವುದಾಗಿ ತಿಳಿಸಿದ್ದಾರೆ.

ಗ್ಯಾರಂಟಿಗಳ ಭಾರದಿಂದ ತತ್ತರಿಸಿದ ಸರ್ಕಾರ

ಅನರ್ಹ ಬಿಪಿಎಲ್ ಕಾರ್ಡ್‌ದಾರರ ಪತ್ತೆಗೆ ಆಹಾರ ಇಲಾಖೆ 'ಆಪರೇಷನ್'

ಬೆಂಗಳೂರು: ಗ್ಯಾರಂಟಿಗಳ ಆರ್ಥಿಕ ಭಾರದಿಂದ ತತ್ತರಿಸಿದಂತಿರುವ ರಾಜ್ಯ ಸರ್ಕಾರ ಈಗ ಬಿಪಿಎಲ್ ಕಾರ್ಡ್ ಶೋಧನೆಗೆ ಇಳಿದಂತೆ ಕಾಣುತ್ತಿದೆ. ರಾಜ್ಯದ 80%ರಷ್ಟು ಜನರ ಬಳಿ ಬಿಪಿಎಲ್ ಕಾರ್ಡ್ ಇದ್ದು ಕೂಡಲೇ ಅನರ್ಹರನ್ನು ಪತ್ತೆ ಹಚ್ಚಿ ಎಂದು ರಾಜ್ಯ ಸರ್ಕಾರ ಆದೇಶ ಪ್ರಕಟಿಸಿದೆ.

ಈ ಬೆನ್ನಲ್ಲೇ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಅನರ್ಹ ಫಲಾಭವಿಗಳನ್ನು ಪತ್ತೆ ಹಚ್ಚಲು ತಯಾರಿ ನಡೆಸಿದೆ. ಅಂದಾಜು 20 ಲಕ್ಷ ಬಿಪಿಎಲ್ ಕಾರ್ಡ್ ರದ್ದಾಗಬಹುದು ಎಂದು ಹೇಳಲಾಗುತ್ತಿದೆ.



ರಾಜ್ಯದಲ್ಲಿ ಸದ್ಯ 1.27 ಕೋಟಿ ಬಿಪಿಎಲ್ ಕಾರ್ಡ್‌ಗಳಿದ್ದು 4.36 ಕೋಟಿ ಮಂದಿ ಬಿಪಿಎಲ್ ಕಾರ್ಡ್ ಮೂಲಕ ಸರ್ಕಾರದ ಸವಲತ್ತುಗಳನ್ನು ಪಡೆಯುತ್ತಿದ್ದಾರೆ. ಇದು ಸಾಲದೆಂಬಂತೆ ಹೊಸದಾಗಿ ಬಿಪಿಎಲ್ ಕಾರ್ಡ್‌ಗೆ 3 ಲಕ್ಷ ಮಂದಿ ಅರ್ಜಿ ಸಲ್ಲಿಸಿದ್ದಾರೆ. ಇದೀಗ ಅನರ್ಹ, ಅಕ್ರಮ ಫಲಾನುಭವಿಗಳನ್ನು ಪತ್ತೆ ಹಚ್ಚಲು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ನಾಲ್ಕು ಬೇರೆ ಇಲಾಖೆಗಳ ಸಹಕಾರ ಪಡೆಯಲು ಮುಂದಾಗಿದೆ. ಕಾರ್ಡ್‌ದಾರರ ಹೆಸರಲ್ಲಿ ವಾಹನ ಇವೆಯಾ ಎಂಬುದನ್ನು ಪತ್ತೆ ಹಚ್ಚಲು ಸಾರಿಗೆ ಇಲಾಖೆ, ● 9ನೇ ಪುಟಕ್ಕೆ

ವಾಲ್ಮೀಕಿ ನಿಗಮ ಹಗರಣ: ಐದು ಗಂಟೆಗಳ ಕಾಲ ಎಸ್‌ಐಟಿಯಿಂದ ಮಾಜಿ ಸಚಿವ ನಾಗೇಂದ್ರ ವಿಚಾರಣೆ

ಬೆಂಗಳೂರು: ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಅಕ್ರಮವಾಗಿ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ.ನಾಗೇಂದ್ರರನ್ನು ವಿಶೇಷ ತನಿಖಾ ತಂಡ ಮಂಗಳವಾರ ವಿಚಾರಣೆ ನಡೆಸಿತು.

ನಿಗಮದ ಅಧಿಕಾರಿ ಚಂದ್ರಶೇಖರನ್ ಅವರು ಮೇ 26ರಂದು ಆತ್ಮಹತ್ಯೆ ಮಾಡಿಕೊಂಡಿದ್ದು, ಈ ಪ್ರಕರಣದಲ್ಲಿ ನಾಗೇಂದ್ರ ಹೆಸರು ಕೇಳಿಬಂದಿದ್ದರಿಂದ ಜೂನ್ 6ರಂದು ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

ಚಂದ್ರಶೇಖರನ್ ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದರು. ಸರ್ಕಾರಿ ಸ್ವಾಮ್ಯದ ನಿಗಮಕ್ಕೆ ಸೇರಿದ 187 ಕೋಟಿ ರೂಪಾಯಿಯನ್ನು ಅದರ ಬ್ಯಾಂಕ್ ಖಾತೆಯಿಂದ ಅನಧಿಕೃತವಾಗಿ ವರ್ಗಾವಣೆ ಮಾಡಲಾಗಿದೆ ಎಂದು ಚಂದ್ರಶೇಖರನ್ ಆರೋಪಿಸಿದ್ದರು. ಇದಲ್ಲದೆ, ಕೆಲವು ಐಟಿ ಕಂಪನಿಗಳು ಮತ್ತು ಹೈದರಾಬಾದ್ ಮೂಲದ ಸಹಕಾರಿ ಬ್ಯಾಂಕ್‌ನ ವಿವಿಧ ಖಾತೆಗಳಿಗೆ 88.62 ಕೋಟಿ ರೂಪಾಯಿಗಳನ್ನು ಅಕ್ರಮವಾಗಿ ಜಮಾ ಮಾಡಲಾಗಿತ್ತು. ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ದೂರಿನ ಆಧಾರದ ಮೇಲೆ ರಾಜ್ಯ ಸರ್ಕಾರವು ಅದರ ತನಿಖೆಗಾಗಿ ಎಸ್‌ಐಟಿಯನ್ನು ರಚಿಸಿದ್ದರೆ, ಕೇಂದ್ರೀಯ ತನಿಖಾ ದಳವೂ ಏಕಕಾಲದಲ್ಲಿ ತನಿಖೆ ನಡೆಸುತ್ತಿದೆ.




ನಾಗೇಂದ್ರ

ಇಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಖಾತೆ ಹೊಂದಿದ್ದ ನಾಗೇಂದ್ರ ಅವರನ್ನು ಐದು ಗಂಟೆಗೂ ಹೆಚ್ಚು ಕಾಲ ಎಸ್‌ಐಟಿ ಅಧಿಕಾರಿಗಳು ವಿಚಾರಣೆ ನಡೆಸಿದರು. ಈ ವೇಳೆ ನಿಗಮದ ಅಧ್ಯಕ್ಷರೂ ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಶಾಸಕ ಬಸನಗೌಡ ದದ್ದಲ್ ಸಹ ವಿಚಾರಣೆಗೆ ಹಾಜರಾಗಿದ್ದಾರೆ.

ಸಿದ್ದರಾಮಯ್ಯರ ಪತ್ನಿ ಪಾರ್ವತಿಯವರ ಭೂಮಿ ಸ್ವಾಧೀನವಾದ ದೇವನೂರು ಬಡಾವಣೆಯಲ್ಲಿ ಈಗಲೂ 800 ನಿವೇಶನ ಖಾಲಿ ಇವೆ

ಆದರೂ, ವಿಜಯನಗರದಲ್ಲಿ ಬೆಲೆ ಬಾಳುವ ನಿವೇಶನಗಳ ಪಡೆದಿದ್ದೇಕೆ!

- ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಪ್ರಶ್ನೆ
- ನಿಯಮಬದ್ಧವಾಗಿ ನನ್ನ ಪತ್ನಿ ಬದಲಿ ನಿವೇಶನ ಪಡೆದಿದ್ದಾರೆ
- ನನ್ನ ಬಗ್ಗೆ ಪ್ರಶ್ನೆ ಮಾಡುವ ನೈತಿಕತೆ ಕಾಂಗ್ರೆಸ್‌ನವರಿಗಿಲ್ಲ
- ಮುಡಾ ಹಗರಣದಿಂದ ಮೈಸೂರು ಮಾನ–ಮರ್ಯಾದೆ ಹರಾಜಾಯ್ತು



ಮೈಸೂರಿನ ಪತ್ರಕರ್ತರ ಭವನದಲ್ಲಿ ಮಂಗಳವಾರ ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಕಾಂಗ್ರೆಸ್, ಬಿಜೆಪಿ, ಜೆಡಿಎಸ್‌ನವರು ಮುಡಾದಲ್ಲಿ ಲೂಟಿ ಮಾಡಿದ್ದಾರೆ...

ಕಾಂಗ್ರೆಸ್‌ನವರು ಮಾತ್ರವಲ್ಲದೆ ಬಿಜೆಪಿ ಹಾಗೂ ಜೆಡಿಎಸ್‌ನವರು ಕೂಡ ಒಟ್ಟಿಗೆ ಮುಡಾದಲ್ಲಿ ಲೂಟಿ ಮಾಡಿದ್ದಾರೆ. ಮಾಧ್ಯಮದವರು ಕೇಳುವ ಪ್ರಶ್ನೆಗೆ ಉತ್ತರ ಕೊಡಬೇಕಾಗುತ್ತದೆ ಎಂದು ಜೆಡಿಎಸ್‌ನ ದೊಡ್ಡ ನಾಯಕರು ಊರು ಬಿಟ್ಟಿದ್ದಾರೆ. ಒಟ್ಟಾರೆ ಎಲ್ಲಾ ಸೇರಿ ಮೈಸೂರು ಮಾನ ಮರ್ಯಾದೆಯನ್ನು ಹರಾಜು ಹಾಕಿದ್ದಾರೆ ಎಂದು ವಿಶ್ವನಾಥ್ ಆರೋಪಿಸಿದರು.

ಮೈಸೂರು, ಜು.9(ಬಿಎಲ್‌ಯು)–ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರ ಭೂಮಿ ಸ್ವಾಧೀನಪಡಿಸಿಕೊಂಡ ದೇವನೂರು ಬಡಾವಣೆಯಲ್ಲೇ 800ಕ್ಕೂ ಹೆಚ್ಚು ಖಾಲಿ ನಿವೇಶನಗಳಿದ್ದರೂ ವಿಜಯನಗರದಲ್ಲಿ ಬೆಲೆ ಬಾಳುವ ಬದಲಿ ನಿವೇಶನಗಳ ಪಡೆದಿದ್ದೇಕೆ ಎಂದು ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಪ್ರಶ್ನಿಸಿದ್ದಾರೆ.

ನಗರದ ಪತ್ರಕರ್ತರ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪಾರ್ವತಿ ಮಾಲೀಕತ್ವದ ಭೂಮಿ ಡಿ ನೋಟಿಫಿಕೇಷನ್ ಆಗಿರುವ ಕಾರಣ 1991ರ ಪ್ರೋತ್ಸಾಹಿಕ ನಿಯಮಾವಳಿ ಆಧಾರದ ಮೇಲೆ ಪಾರ್ವತಿ ಅವರಿಗೆ 2 ನಿವೇಶನ ಮಾತ್ರ ಸಿಗುತ್ತದೆ. ಆದರೆ ಪಾರ್ವತಿ ಅವರಿಗೆ ವಿಜಯನಗರದಲ್ಲಿ ಬೆಲೆ ಬಾಳುವ 13 ನಿವೇಶನ ನೀಡಲಾಗಿದೆ. ಇದು ಅಕ್ರಮವಲ್ಲದೆ ಮತ್ತೇನು? ಎಂದು ಮರು ಪ್ರಶ್ನಿಸಿದರು. ಮುಡಾ ಅಧ್ಯಕ್ಷ ಮರೀಗೌಡ ಹಾಗೂ ಕಾಂಗ್ರೆಸ್ ಶಾಸಕರು ಆರೋಪ ಮಾಡಿದ್ದಂತೆ ನನ್ನ ಹೆಂಡತಿ ಮುಡಾದಿಂದ ಅಕ್ರಮವಾಗಿ ನಿವೇಶನ ಪಡೆದಿಲ್ಲ. ಮುಡಾದ ದುಬಾರಿ ಫಲಾನುಭವಿಯೂ ಅಲ್ಲ. ಕಾನೂನು ಬದ್ಧವಾಗಿ ಬದಲಿ ನಿವೇಶನ ಪಡೆಯಲಾಗಿದೆ ಎಂದು ಸ್ಪಷ್ಟಪಡಿಸಿದರು.

ನನ್ನ ಪತ್ನಿ ಶಾಂತಮ್ಮ 2001ರಲ್ಲಿ ನಿವೇಶನಕ್ಕೆ ಮುಡಾದಲ್ಲಿ ಅರ್ಜಿ ಸಲ್ಲಿಸಿದ್ದರು. ತರುವಾಯ ದೇವನೂರು 3ನೇ ಹಂತದ ಬಡಾವಣೆಯಲ್ಲಿ ನಿವೇಶನ ದೊರೆಯಿತು. ಆದರೆ ಆ ನಿವೇಶನದ ಪಕ್ಕದಲ್ಲಿ ವರುಣ ನಾಲೆ ಹಾದು ಹೋಗಿತ್ತು. ಜೊತೆಗೆ ಆ ನಿವೇಶನ ಹಳ್ಳದಲ್ಲಿತ್ತು. ಅಲ್ಲಿ ಮನೆ ನಿರ್ಮಾಣ ಸಾಧ್ಯವಿಲ್ಲವೆಂದು ಖಾತ್ರಿಯಾದ ಕಾರಣ ಬದಲಿ ನಿವೇಶನಕ್ಕೆ ಅರ್ಜಿ ಸಲ್ಲಿಸಿದ್ದೆವು ಎಂದರು.

ನಮಗೆ ನಿವೇಶನ ನೀಡಿದ್ದ ಸ್ಥಳದಲ್ಲಿ ಮುಡಾ ಅಧಿಕಾರಿಗಳು ಖುದ್ದು ಪರಿಶೀಲನೆ ನಡೆಸಿದ್ದರು. ಅಧಿಕಾರಿಗಳ ವರದಿ ಆಧರಿಸಿ ಮುಡಾ ಸಭೆಯಲ್ಲಿ ಬದಲಿ ನಿವೇಶನ ನೀಡಲು ನಿರ್ಣಯ ಮಾಡಲಾಯಿತು. ನನಗೆ ಮಂಜೂರಾಗಿದ್ದ ದೇವನೂರು ಬಡಾವಣೆಯಲ್ಲೇ ● 9ನೇ ಪುಟಕ್ಕೆ

ಪ್ರಭಾವಿಗಳೇ ವರದಿ ತಯಾರಿಸಿ ತನಿಖಾಧಿಕಾರಿಗಳಿಂದ ಸಹಿ ಪಡೆಯುತ್ತಾರೆ!

ಮುಡಾದಲ್ಲಿ ಈಗ ನಡೆಯುತ್ತಿರುವ ತನಿಖೆಯಿಂದ ಸತ್ಯಾಂಶ ಹೊರಗೆ ಬರುವುದಿಲ್ಲ. ಅಂತಿಮವಾಗಿ ಪ್ರಭಾವಿಗಳು ತಾವೇ ವರದಿ ತಯಾರಿಸಿ ತನಿಖಾಧಿಕಾರಿಗಳಿಂದ ಸಹಿ ಪಡೆಯುತ್ತಾರೆ ಎಂದು ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಆರೋಪಿಸಿದರು.

ಮೈಸೂರಿಗೆ ಬಂದಿದ್ದ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಬಹಳಷ್ಟು ಕಡತಗಳನ್ನು ಸೀಲ್ ಮಾಡಿ ತೆಗೆದುಕೊಂಡು ಹೋಗಿದ್ದಾರೆ. ಮುಖ್ಯವಾದ ಕಡತಗಳೇ ಇಲ್ಲದೆ ಅಧಿಕಾರಿಗಳು ಏನು ತನಿಖೆ ಮಾಡುತ್ತಾರೆ ಎಂದು ಪ್ರಶ್ನಿಸಿದರು. ಮುಡಾ ಅವ್ಯವಹಾರ ಈಗ ತನಿಖಾ ಹಂತದಲ್ಲಿದೆ. ಹೀಗಿರುವಾಗ ಜವಾಬ್ದಾರಿಯುತ ಸ್ಥಾನದಲ್ಲಿರುವ ಮುಡಾ ಅಧ್ಯಕ್ಷ ಮರಿಗೌಡ ಹಾಗೂ ಶಾಸಕರು ಯಾವುದೇ ಅಕ್ರಮ ನಡೆದಿಲ್ಲ ಎಂದು ಹೇಳಿಕೆ ನೀಡುತ್ತಿದ್ದಾರೆ. ಇದರಿಂದ ನಿಷ್ಪಕ್ಷಪಾತ ತನಿಖೆ ನಿರೀಕ್ಷೆ ಸಾಧ್ಯವೆ? ಎಂದು ಮರು ಪ್ರಶ್ನಿಸಿದರು. 10 ಸಾವಿರ ಕೋಟಿಗೂ ಮೀರಿದ ಭಾರಿ ಅವ್ಯವಹಾರದ ಬಗ್ಗೆ ಒಬ್ಬ ಐಎಎಸ್ ನೇತೃತ್ವದ ಅಧಿಕಾರಿಯಿಂದ ತನಿಖೆ ಸಾಧ್ಯವಿಲ್ಲ. ಇದರಲ್ಲಿ ಭಾರಿ ಪ್ರಭಾವಿಗಳು ಭಾಗಿಯಾಗಿರುವ ಕಾರಣ ಹಗರಣವನ್ನು ಸಿಬಿಐಗೆ ವಹಿಸಬೇಕು ಎಂದು ವಿಶ್ವನಾಥ್ ಆಗ್ರಹಿಸಿದರು.

ನಾನು ಮುಡಾ ಅಧ್ಯಕ್ಷನಾಗಿದ್ದ ವೇಳೆ ಕಾನೂನುಬದ್ಧ ನಿರ್ಣಯವಾಗಿತ್ತು

ಅನುಷ್ಠಾನದಲ್ಲಿ ತಪ್ಪಾಗಿದ್ದರೆ ಅದಕ್ಕೆ ಅಧಿಕಾರಿಗಳೇ ಹೊಣೆ; ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಸ್ಪಷ್ಟನೆ

ಮೈಸೂರು, ಜು.9(ಬಿಎಲ್‌ಯು)–ನಾನು ಮುಡಾ ಅಧ್ಯಕ್ಷನಾಗಿದ್ದ ಅವಧಿಯಲ್ಲಿ ಶೇ.50:50 ಅನುಪಾತದ ನಿವೇಶನಗಳ ಹಂಚಿಕೆ ಸಂಬಂಧ ಸುಪ್ರೀಂಕೋರ್ಟ್ ಹಾಗೂ ಹೈಕೋರ್ಟ್ ತೀರ್ಪನ್ನು ಉಲ್ಲೇಖಿಸಿ ಕಾನೂನು ಬದ್ಧವಾದ ನಿರ್ಣಯಗಳನ್ನು ಕೈಗೊಳ್ಳಲಾಗಿತ್ತು ಎಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಸ್ಪಷ್ಟಪಡಿಸಿದ್ದಾರೆ.

ನಗರದ ಕಾಂಗ್ರೆಸ್ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ನಡೆದ ಪ್ರಾಧಿಕಾರದ ಸಭೆಯಲ್ಲಿ ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಜಿಲ್ಲಾಧಿಕಾರಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದು, ಪ್ರತಿಯೊಂದು ನಿರ್ಣಯಕ್ಕೂ ಎಲ್ಲರ ಸಹಮತವಿತ್ತು ಎಂದು ತಿಳಿಸಿದರು.

ಮುಡಾ ಸಭೆಯಲ್ಲಿ ನಾವು ನೀತಿ–ನಿಯಮಗಳನ್ನು ರೂಪಿಸುತ್ತೇವೆ. ತರುವಾಯ ಅದನ್ನು ಸರ್ಕಾರದ ಒಪ್ಪಿಗೆಗೂ ಕಳುಹಿಸುತ್ತೇವೆ. ನಂತರ ಅದನ್ನು ಅಧಿಕಾರಿಗಳು ಅನುಷ್ಠಾನ ಮಾಡುತ್ತಾರೆ. ಆದರೆ ಅನುಷ್ಠಾನದ ವೇಳೆ ತಪ್ಪೆಸಗಿದರೆ ಅದಕ್ಕೆ ಅಧಿಕಾರಿಗಳು ಕಾರಣರೇ ಹೊರತು ನಾವಲ್ಲ. ಈಗ ಮುಡಾದಲ್ಲಿ ನಡೆಯುತ್ತಿರುವ ತನಿಖೆ ವೇಳೆ ಯಾರು ತಪ್ಪು ಮಾಡಿರುತ್ತಾರೊ ಅವರಿಗೆ ಶಿಕ್ಷೆ ಆಗುತ್ತದೆ ಎಂದು



ಪತ್ರಿಕಾಗೋಷ್ಠಿಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್

ರಾಜೀವ್ ಹೇಳಿದರು. ಮೈಸೂರಿನ ಶ್ರೀರಾಂಪುರದಲ್ಲಿ ಸುಂದರಮ್ಮ ಎಂಬುವರ ಜಮೀನನ್ನು ಸ್ವಾಧೀನಪಡಿಸಿಕೊಂಡ ಸಂಬಂಧ ಹೈಕೋರ್ಟ್ ನೀಡಿದ ತೀರ್ಪು, ಬೆಂಗಳೂರಿನ ಬೆಳ್ಳಿಯಪ್ಪ ಪ್ರಕರಣ ಸೇರಿದಂತೆ ನಾನಾ ಪಕ್ರರಣಗಳಲ್ಲಿ ಸುಪ್ರೀಂಕೋರ್ಟ್ ನೀಡಿದ ತೀರ್ಪನ್ನು ಉಲ್ಲೇಖಿಸಿ ತೀರ್ಮಾನ ಕೈಗೊಳ್ಳಲಾಗಿದೆ. ಮುಡಾಗೆ ಯಾವುದೇ ರೀತಿ ನಷ್ಟವಾಗಬಾರದೆಂದು ● 9ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಆಟೋ ಡ್ರೈವರ್ : ಸಾರಿ ಸರ್... ಮೀಟರ್ ಹಾಕೋದು ಮರೆತುಬಿಟ್ಟೆ...

ಗುಂಡ : ಪರವಾಗಿಲ್ಲ ಬಿಡಿ, ನಾನೂ ಕೂಡ ಪರ್ಸ್ ತರೋದು ಮರೆತೇ ಬಿಟ್ಟೆ..!

ಮೈಸೂರು ಮಿತ್ರ

ಬುಧವಾರ, 10 ಜುಲೈ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಪ್ರತಿ ಸೋಲಿನ ನಂತರವೂ ಉತ್ಸಾಹ
ಕಳೆದುಕೊಳ್ಳದೆ ಎದ್ದು ನಿಲ್ಲುವುದೇ ಯಶಸ್ಸು!

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನೀನಾಗದೆ ರಣಹೇಡಿ
ಕೀರ್ತಿ ಪಡೆ ಪ್ರಾಣ ನೀಡಿ.

ನಿಮ್ಮ ಪತ್ರಗಳು

ಮುಡಾ ಹಗರಣ ಸಮಗ್ರ ತನಿಖೆಯಾಗಲಿ

ಮಾನ್ಯರೆ,

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಎಂಬುದು ಹುಲುಸಾದ ಹುಲ್ಲುಗಾವಲು ಆಗಿದ್ದು ಮೇಯುವವರಿಗೆ ಇದೊಂದು ಆಯಕಟ್ಟಿನ ಕೇಂದ್ರವಾಗಿದೆ. ಲಕ್ಷಾಂತರ ಜನರು ನಿವೇಶನ ಕೋರಿ ಅರ್ಜಿ ಸಲ್ಲಿಸಿ ದಶಕಗಳೇ ಸಂದರೂ ಒಂದೇ ಒಂದು ನಿವೇಶನ ನೀಡಿದ ಉದಾಹರಣೆ ಇಲ್ಲ. ಕೇವಲ ರಾಜಕೀಯ ನಾಯಕರು, ಶಾಸಕರು, ಮತ್ತಿತರ ರಿಯಲ್ ಎಸ್ಟೇಟ್ ಕುಳಗಳ ಕಪಿಮುಷ್ಠಿಗೆ ಸಿಲುಕಿ ಇದೊಂದು ಉಳ್ಳವರ ಪ್ರಾಧಿಕಾರ ಎಂಬುದನ್ನು ರುಜುವಾತು ಪಡಿಸಿದೆ.

ಸದಾ ರಾಜಕಾರಣಿಗಳು, ರಿಯಲ್ ಎಸ್ಟೇಟ್ ದಲ್ಲಾಳಿಗಳಿಂದಲೇ ತುಂಬಿರುವ ಪ್ರಾಧಿಕಾರದಲ್ಲಿ ಶ್ರೀಸಾಮಾನ್ಯನ ಕೆಲಸ ಕಾರ್ಯಗಳು ನಡೆಯದೆ ಸಣ್ಣಪುಟ್ಟ ಕೆಲಸಗಳಿಗೂ ಅನಗತ್ಯ ವಿಳಂಬ ಧೋರಣೆ ಅನುಸರಿಸುತ್ತಿರುವುದು ಗುಟ್ಟಾದ ವಿಚಾರವೇನಲ್ಲ. ಕಳೆದ 15 ವರ್ಷಗಳಿಂದ ಯಾವುದೇ ಹೊಸ ಬಡಾವಣೆ ಅಭಿವೃದ್ಧಿ ಆದ ನಿದರ್ಶನಗಳಿಲ್ಲ. ಸ್ವಂತ ಸೂರು ಹೊಂದಬೇಕೆಂಬ ಶ್ರೀಸಾಮಾನ್ಯರ ಕನಸು ಗಗನಕುಸುಮವಾಗೆ ಉಳಿದಿದೆ. ಕೇವಲ ಮಂತ್ರಿ ಮಹೋದಯರು, ಶಾಸಕರು, ಬಾಲಂಗೋಚಿ ರಾಜಕಾರಣಿ ಸೇರಿದಂತೆ ರಿಯಲ್‌ಎಸ್ಟೇಟ್ ವ್ಯಕ್ತಿಗಳಿಗಷ್ಟೇ ತನ್ನ ಕಾರ್ಯವನ್ನು ಮುಡಾ ಯಶಸ್ವಿಯಾಗಿ ಮಾಡುತ್ತಿದೆ.

ಪ್ರಾಧಿಕಾರಕ್ಕೆ ಓರ್ವ ಅಧ್ಯಕ್ಷ, ನಾಮ ನಿರ್ದೇಶಿತ ಸದಸ್ಯರು ಹಾಗೂ ಪ್ರಭಾವಿ ವ್ಯಕ್ತಿಗಳೇ ಪ್ರಾಧಿಕಾರದ ಪಾತ್ರಧಾರಿಗಳಾಗಿ ನಿಯಂತ್ರಿಸುವ ಮೂಲಕ ನಿವೇಶನ ರಹಿತರಿಗೆ ಕಿಲುಬು ಕಾಸಿನ ಪ್ರಯೋಜನವು ಇಲ್ಲದಂತಾಗಿದೆ.

ಇತ್ತೀಚೆಗೆ ನಡೆದಿದೆ ಎನ್ನಲಾದ ಸಾವಿರಾರು ಕೋಟಿ ನಿವೇಶನ ಹಗರಣಗಳು ಮುಡಾ ಕಾರ್ಯವೈಖರಿಯನ್ನು ಪ್ರಶ್ನಿಸುವಂತಾಗಿದೆ. 50:50 ಅನುಪಾತದಲ್ಲಿ ಮುಖ್ಯಮಂತ್ರಿಗಳ ಕುಟುಂಬಕ್ಕೆ 14 ನಿವೇಶನ ನೀಡಿರುವುದು ದುರದೃಷ್ಟಕರ ಸಂಗತಿ. ಕಳೆದ ಹತ್ತು ವರ್ಷಗಳಿಂದ ನಡೆದಿರುವ ಇಂತಹ ಪ್ರಕರಣಗಳ ಬಗ್ಗೆ ಸಮಗ್ರ ತನಿಖೆ ನಡೆಸಬೇಕು.

– ಹೆಚ್.ಆರ್. ಪ್ರಸಾದ್, ವಿವೇಕಾನಂದ ನಗರ, ಮೈಸೂರು,

ಸರ್ಕಾರ ಉತ್ತಮ ರಸ್ತೆಗಳನ್ನು ನಿರ್ಮಿಸಲಿ



ಮಾನ್ಯರೆ,

ಸರ್ಕಾರವು ವಾಹನ ಸವಾರರ ಜೀವ ಉಳಿಸುವುದರ ಬಗ್ಗೆ ಅನೇಕ ಕಾನೂನುಗಳನ್ನು ಜಾರಿಗೆ ತರುವುದರಲ್ಲಿ ತುಂಬಾ ಕಾಳಜಿಯನ್ನು ವಹಿಸುತ್ತದೆ. ಅದೇ ರೀತಿ ಉತ್ತಮ ರಸ್ತೆಗಳನ್ನು ಕೂಡ ಮಾಡಬೇಕು. ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಕಡ್ಡಾಯವಾಗಿ ಹಾಕಬೇಕು. ಸಂಚಾರ ನಿಯಮಗಳನ್ನು ಪಾಲಿಸಲು ಅನೇಕ ವೃತ್ತಗಳಲ್ಲಿ ಸಿಗ್ನಲ್ ಲೈಟ್‌ಗಳನ್ನು ಅಳವಡಿಸಿ ನಿಯಮಗಳನ್ನು ಪಾಲಿಸದಿದ್ದರೆ ದಂಡ ಕಟ್ಟಬೇಕಾಗುತ್ತದೆ. ರಸ್ತೆಗಳಲ್ಲಿ ಅನೇಕ ಕಡೆ ಹಂಪ್ಸ್‌ಗಳನ್ನು ಹಾಕಲಾಗಿರುತ್ತದೆ. ವಾಹನ ಚಲಾಯಿಸುವವರು ಕಡ್ಡಾಯವಾಗಿ ಸೀಟ್ ಬೆಲ್ಟ್ ಅನ್ನು ಹಾಕಬೇಕು. ಹೈವೇ ರಸ್ತೆಗಳಲ್ಲಿ ಅತಿ ವೇಗದಿಂದ ಉಂಟಾಗುವ ಅಪಘಾತವನ್ನು ತಡೆಗಟ್ಟಲು ಮಾರ್ಗದುದ್ದಕ್ಕೂ ಎಐ ಅತ್ಯಾಧುನಿಕ ಕ್ಯಾಮರಾಗಳನ್ನು ಅಳವಡಿಸಿ ಅತಿ ವೇಗದಲ್ಲಿ ಸಂಚರಿಸುವವರಿಗೆ ದಂಡವನ್ನು ಕಟ್ಟಿಸುತ್ತಾರೆ. ಇಷ್ಟೆಲ್ಲಾ ಕಾಳಜಿ ವಹಿಸುವ ಸರ್ಕಾರ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಅನೇಕ ರಸ್ತೆಗಳು ಗುಂಡಿಮಯವಾಗಿದ್ದು, ಮಳೆಗಾಲದಲ್ಲಿ ಕೆಸರು ಗದ್ದೆಯಂತೆ ಹಲವು ವರ್ಷಗಳಿಂದ ಡಾಂಬರು ಕಾಣದ ರಸ್ತೆಗಳಿವೆ. ಈ ರಸ್ತೆಗಳಲ್ಲಿ ಸಂಚರಿಸುವುದೇ ದುಸ್ತರವಾಗಿದ್ದು, ಕೆಲವರು ಆಯಾತಪ್ಪಿ ಬಿದ್ದು ಪ್ರಾಣವನ್ನು ಕಳೆದುಕೊಳ್ಳುತ್ತಿರುವ ಘಟನೆಗಳು ವರದಿಯಾಗುತ್ತಿದ್ದರೂ ಇತ್ತ ಗಮನ ಹರಿಸುತ್ತಿಲ್ಲ. ಅದೆಷ್ಟೋ ರಸ್ತೆಗಳು ಹಲವು ವರ್ಷಗಳಿಂದ ಡಾಂಬರನ್ನೇ ಕಂಡಿಲ್ಲ. ಸರ್ಕಾರವು ಸುಗಮ ಸಂಚಾರಕ್ಕೆ ಉತ್ತಮ ರಸ್ತೆಗಳನ್ನು ನಿರ್ಮಿಸುವುದರಲ್ಲಿ ಕಾಳಜಿ ವಹಿಸಬೇಕು.

–ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಈ ಸಮಸ್ಯೆಗೆ ಪರಿಹಾರವಿಲ್ಲವೇ?

ಮಾನ್ಯರೆ,

ದಿನನಿತ್ಯದ ವಹಿವಾಟಿನಲ್ಲಿ ದಿನಸಿ ಅಂಗಡಿ, ಹಾಲಿನ ಬೂತ್, ಬಸ್ ಪ್ರಯಾಣ, ಶುದ್ಧ ನೀರಿನ ಘಟಕಗಳಲ್ಲಿ ನಾಣ್ಯಗಳ ಅವಶ್ಯಕತೆ ಹೆಚ್ಚಾಗಿದೆ. ಆದರೆ ನಾಣ್ಯಗಳು ಬ್ಯಾಂಕಿನಲ್ಲಿಯೂ ದೊರೆಯುತ್ತಿಲ್ಲ. ಇದರಿಂದ ವಾಗ್ವಾದ, ಮಾತಿನ ಚಕಮಕಿಗಳಾಗುತ್ತಿವೆ. ಬ್ಯಾಂಕುಗಳಲ್ಲಿ ಈ ಮೊದಲು ನಾಣ್ಯಗಳ ಮೇಳದಲ್ಲಿ ನಾಣ್ಯಗಳನ್ನು ವಿತರಿಸಲಾಗುತ್ತಿತ್ತು ಆದಷ್ಟು ಬೇಗ ಈ ಸಮಸ್ಯೆ ಬಗೆಹರಿಸಲು ಸಂಬಂಧಪಟ್ಟವರಲ್ಲಿ ಮನವಿ.


–ನೊಂದ ನಾಗರಿಕರು, ಮೈಸೂರು.

ಡೆಂಗ್ಯೂ : ಆರೋಗ್ಯ ಇಲಾಖೆಯ ನಿರ್ಲಕ್ಷ್ಯ ಸಲ್ಲ

ಮಾನ್ಯರೆ,

ರಾಜ್ಯದಲ್ಲಿ ಡೆಂಗ್ಯೂ ಜ್ವರ ಸೋಂಕು ತೀವ್ರಗತಿಯಲ್ಲಿ ಹರಡುತ್ತಿದೆ. ರಾಜ್ಯದ ಬಹುತೇಕ ಎಲ್ಲಾ ತಾಲೂಕುಗಳಲ್ಲಿ ಖಾಸಗಿ ಆಸ್ಪತ್ರೆಗಳಲ್ಲೂ ಡೆಂಗ್ಯೂ ಸೋಂಕಿತರಿಗೆ ಬೆಡ್ ಸಿಗುತ್ತಿಲ್ಲ ಎಂದು ವರದಿಗಳು ತಿಳಿಸುತ್ತಿವೆ. ಆರೋಗ್ಯ ಇಲಾಖೆ ಇದರ ಬಗ್ಗೆ ಗಮನಹರಿಸಿ ಅತೀ ಶೀಘ್ರವಾಗಿ ಸೂಕ್ತ ಕ್ರಮ ಕೈಗೊಳ್ಳಬೇಕು. ಈ ವರ್ಷ ಡೆಂಗ್ಯೂ ಸೋಂಕು ಹರಡುವಿಕೆ ತೀವ್ರವಾಗಿದೆ ಮತ್ತು ಅದಕ್ಕೆ ತಕ್ಕಂತೆ ಆಡಳಿತ ವ್ಯವಸ್ಥೆಯಿಂದ ಸ್ಪಂದನೆ ಕಾಣಿಸುತ್ತಿಲ್ಲ ಎಂಬುದು ಆತಂಕಕಾರಿ. ಇನ್ನೂ ಡೆಂಗ್ಯೂ ಸೋಂಕಿನ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು, ಡೆಂಗ್ಯೂ ಸೋಂಕಿತರಿಗೆ ಸೂಕ್ತ ಚಿಕಿತ್ಸೆ ಹಾಗೂ ಔಷಧಗಳು ಸಿಗುವಂತೆ ನೋಡಿಕೊಳ್ಳುವುದು, ಪ್ಲೇಟ್‌ಲೆಟ್ಸ್ ಸರಬರಾಜು, ಸೊಳ್ಳೆಗಳ ನಾಶಕ್ಕೆ ಔಷಧಿ ಮುಂತಾದ ಕ್ರಮಗಳ ಬಗ್ಗೆ ಆರೋಗ್ಯ ಇಲಾಖೆ ಆದೇಶ ಹೊರಡಿಸಿ ಸ್ಥಳೀಯ ಆಡಳಿತಗಳ ಮುಖೇನ ಮಾಡಿಸಬೇಕಿದೆ. ಡೆಂಗ್ಯೂ ಬೆನ್ನಲ್ಲೇ ಇನ್ನು ಚಿಕನ್‌ಗುನ್ಯಾ ಕೂಡ ಕಾಣಿಸಿಕೊಳ್ಳಬಹುದು ಎಂದು ಅಂದಾಜಿಸಲಾಗಿದೆ. ಅದಕ್ಕೂ ಔಷಧ ಮತ್ತು ಚಿಕಿತ್ಸೆಗೆ ಸರ್ಕಾರ ಸಿದ್ಧತೆ ಮಾಡಿಕೊಂಡಿಲ್ಲ. ಬಡವರು, ಅನಕ್ಷರಸ್ಥರು ಹಾಗೂ ಆರೋಗ್ಯದ ವಿಷಯದಲ್ಲಿ ಸಾಕಷ್ಟು ಮಾಹಿತಿ ಇಲ್ಲದವರು ಇರುವ ಕಡೆ ಸ್ಥಳೀಯ ಆಡಳಿತಗಳು ಹೆಚ್ಚಿನ ಮುತುವರ್ಜಿ ವಹಿಸಿ ಈ ಡೆಂಗ್ಯೂ ಸೋಂಕನ್ನು ಎದುರಿಸಲು ಜನರನ್ನು ಸಜ್ಜುಗೊಳಿಸುವ ಅಗತ್ಯವಿದೆ. ಪ್ರತಿ ಜಿಲ್ಲೆಗಳಿಂದ ಡೆಂಗ್ಯೂ ಕುರಿತ ಅಂಕಿ ಅಂಶಗಳನ್ನು ತರಿಸಿಕೊಂಡು ಆರೋಗ್ಯ ಇಲಾಖೆ ತಕ್ಷಣವೇ ಮುಂದಿನ ಕ್ರಮ ಕೈಗೊಳ್ಳಬೇಕಿದೆ.

–ಡಾ.ವಿಜಯಕುಮಾರ್ ಎಚ್.ಕೆ., ರಾಯಚೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಅರಿವಿನ ಕಡಲು ಸರ್ವಜ್ಞ

ತ್ರಿಪದಿ ಎಂಬ ಶಬ್ದವನ್ನು ಕೇಳಿದ ಕೂಡಲೇ ಕನ್ನಡಿಗರಿಗೆ ನೆನಪಿಗೆ ಬರುವವನು ಸರ್ವಜ್ಞ. ಷಟ್ಪದಿಯನ್ನು ಕುಮಾರ ವ್ಯಾಸನೂ, ಸಾಂಗತ್ಯವನ್ನು ರತ್ನಾಕರವರ್ಣಿಯೂ ಜನಪ್ರಿಯಗೊಳಿಸಿದಂತೆ ತ್ರಿಪದಿಯನ್ನು ಕನ್ನಡಿಗರ ಮನೆ ಮಾತಾಗಿಸಿದವನು ಸರ್ವಜ್ಞ. ತಮಿಳಿನ ತಿರುಕ್ಕುರುಳ್, ತೆಲುಗಿನ ವೇಮನ ಪದ್ಯಗಳು, ಹಿಂದಿಯ ಕಬೀರನ ದೋಹೆ ಇತ್ಯಾದಿಗಳೆಲ್ಲ ಜನಮಾನಸವನ್ನು ಬೆಳಗಿಸಿದ ಸಾಹಿತ್ಯ. ಜನರು ಬಳಸುವ ಸಾಮಾನ್ಯ ಭಾಷೆಯಲ್ಲಿ ಅಸಾಮಾನ್ಯವೂ ಮಾನ್ಯವೂ ಆದ ತತ್ತ್ವಗಳನ್ನು ತಿಳಿಸಿದ ಧನ್ಯ ಸರ್ವಜ್ಞ.

ಮೈಸೂರು ಆಕಾಶವಾಣಿ ಕೇಂದ್ರ **ಅರಿವಿನ ಶಿಖರ** ಎಂಬ ಕಾರ್ಯಕ್ರಮವನ್ನು ಆಯೋಜಿಸಿ ಬಿತ್ತರಿಸುತ್ತಿತ್ತು. (ಅದರ ಮರು ಪ್ರಸಾರ ಈಗ ಆಗುತ್ತಿದೆ) ಅದರಲ್ಲಿ ಭಾಗ ವಹಿಸಿದ್ದವರು ಪ್ರೊ. ಪದ್ಮಿನಿ ಹೆಗಡೆ ಅವರು. ಅವರು ತತ್ತ್ವ ಶಾಸ್ತ್ರದ ಪ್ರಾಧ್ಯಾಪಕರಾಗಿ ಗಂಭೀರ ದಾರ್ಶನಿಕ ಚಿಂತನೆಯ ಗ್ರಂಥಗಳನ್ನೂ ಬರೆದಿದ್ದಾರೆ. ಅವರ ಸಾಹಿತ್ಯಾಭಿರುಚಿಯೂ ದೊಡ್ಡದು. 'ಅರಿವಿನ ಶಿಖರ'ದಲ್ಲಿ ಅವರು ನೂರೆಂಟು ಸರ್ವಜ್ಞ ತ್ರಿಪದಿಗಳನ್ನು ಜನರಿಗೆ ಪರಿಚಯಿಸಿ, ವಿಶ್ಲೇಷಿಸಿ, ವಿಮರ್ಶಿಸಿದ್ದರು. ಅವುಗಳನ್ನು ಕನ್ನಡಿಗರಿಗಾಗಿ ಅರಿವಿನ ಕಡಲು ಸರ್ವಜ್ಞ ಎಂಬ ಪುಸ್ತಕದ ರೂಪದಲ್ಲಿ ಅರ್ಪಿಸಿದ್ದಾರೆ. ಮೈಸೂರಿನ ಜಿ.ಎಸ್.ಎಲ್. ಪ್ರಕಾಶನವು ಅದನ್ನು ಬೆಳಕಿಗೆ ತಂದಿದೆ.

ಸರ್ವಜ್ಞನ ಪೂರ್ವಾಪರಗಳ ಬಗೆಗೆ, ಅವನ ಜೀವಿತ ಕಾಲದ ಬಗೆಗೆ ಖಚಿತವಾಗಿ ನಮಗೆ ತಿಳಿದಿಲ್ಲ. ಸರ್ವಜ್ಞನ ತಂದೆಯ ಹೆಸರು ಬಸವರಸ. ಆತನು ಕಾಶಿಗೆ ಹೋಗಿ ಹಿಂದಿರುಗುವಾಗ ಒಬ್ಬ ಕುಂಬಾರನ ಮನೆಯಲ್ಲಿ ತಂಗಿದ್ದನಂತೆ. ಅಲ್ಲಿದ್ದ ಒಬ್ಬ ಹೆಂಗಸು ಮಾಳಿ. ಬಸವರಸ–ಮಾಳಿಯರ ಪ್ರಣಯದ ಫಲ ಸರ್ವಜ್ಞ– ಎಂದು ಕೆಲವು ವಚನಗಳಲ್ಲಿ ಸೂಚಿತವಾಗಿದೆ. ಪರಿಣಯದ, ಎಂದರೆ ಮದುವೆಯ ನಿರ್ಬಂಧವಿಲ್ಲದ ಪ್ರಣಯ –ಅವರದ್ದಾಗಿರಬಹುದು. ಮನುಷ್ಯನ ಪ್ರತಿಭೆಗೆ, ಯೋಗ್ಯತೆಗೆ ತಂದೆ ತಾಯಿಯರ ವೈವಾಹಿಕ ಸ್ಥಿತಿ ಸರ್ವಥಾ ಕಾರಣವಲ್ಲ. ವಿಶ್ವ ಪ್ರಸಿದ್ಧ ಚಿತ್ರಕಾರ ಲಿಯನಾರ್ಡೋ ಡ ವಿನ್ಸಿಯೂ ವಿವಾಹೇತರ ಸಂಬಂಧದಿಂದ ಹುಟ್ಟಿದ್ದನಂತೆ. ವ್ಯಕ್ತಿಯನ್ನು ಅವನ ಜ್ಞಾನ–ಪ್ರತಿಭೆ–ಕಾರ್ಯಗಳಿಂದ ಅಳೆಯಬೇಕು, ಹುಟ್ಟಿನಿಂದಲ್ಲ ಎಂಬುದಕ್ಕೆ ಸರ್ವಜ್ಞನೂ ಒಂದು ಉದಾಹರಣೆ.

ಸರ್ವಜ್ಞ ಎಂಬುದು ಈ ಕವಿಯ ಮೂಲನಾಮವೋ ಅಥವಾ ಕಾವ್ಯನಾಮ ಮಾತ್ರವೋ ತಿಳಿಯದು. ಪ್ರಪಂಚವೆಂಬ ವಿಶ್ವವಿದ್ಯಾನಿಲಯದಲ್ಲಿ ಕಲಿತು ಅವನು ಸರ್ವಜ್ಞನಾದ.

ಸರ್ವಜ್ಞನೆಂಬುವನು ಗರ್ವದಿಂದಾದವನೆ
ಸರ್ವರೊಳಗೊಂದೊಂದು ನುಡಿಗಲಿತು ವಿದ್ಯೆಯ
ಪರ್ವತವೆ ಆದ ಸರ್ವಜ್ಞ||


ಎಂಬ ವಚನವು ಇದನ್ನೇ ಸ್ಪಷ್ಟಪಡಿಸುತ್ತದೆ.

ಸರ್ವಜ್ಞನು ವೀರಶೈವ ಮತಾನುಯಾಯಿಯೆಂಬುದೂ ಶಿವಭಕ್ತನೆಂಬುದೂ ಅನೇಕ ವಚನಗಳಿಂದ ತಿಳಿದು ಬರುತ್ತದೆ.

ಲಿಂಗದ ಮೈ ಬೆಳಗು ಮಂಗಳದ ಚಿದ್ಭಸ್ಮ
ಹಿಂಗದೆ ಅದನು ಧರಿಸಿದವ ಶಿವನ ಚಿ–
ದಂಗವಾಗಿರ್ಕು ಸರ್ವಜ್ಞ||
ಮಾಯಮೋಹವ ನೆಚ್ಚಿ ಕಾಯವನು ಕರಗಿಸುತೆ
ಆಯಾಸಗೊಳುತ ಇರಬೇಡ ಓಂ ನಮಃ ಶಿ–
ವಾಯವೆಂದೆನ್ನಿ ಸರ್ವಜ್ಞ||

ಎಂಬ ವಚನಗಳನ್ನು ಗಮನಿಸಬಹುದು. ಪ್ರೊ. ಪದ್ಮಿನಿ ಅವರು ಈ ಪುಸ್ತಕದಲ್ಲಿ ಕವಿ ಸರ್ವಜ್ಞ, ಘನವ್ಯಕ್ತಿತ್ವ ವೀರಶೈವ ಪರಂಪರೆ, ಸಾಂಖ್ಯಯೋಗ, ಉತ್ತಮ ಬದುಕು, ಮೌಲ್ಯಗಳು, ಹದ್ದು ಮೀರಿದ ನಡವಳಿಕೆ, ಸಚ್ಚಾರಿತ್ರ್ಯ, ನುಡಿ ನಮನ ಎಂಬ ಒಂಬತ್ತು ಭಾಗಗಳಲ್ಲಿ ವಚನಗಳನ್ನು ವಿಂಗಡಿಸಿದ್ದಾರೆ. ಇವುಗಳನ್ನು ವಿವರಿಸುವಾಗ ಅವರ ತತ್ತ್ವಶಾಸ್ತ್ರ – ಪ್ರಾವೀಣ್ಯದ ಅರಿವು ಬೆಳಗುತ್ತದೆ. ಒಂದು ಉದಾಹರಣೆ–

ಆರರೊಳಗೆಲ್ಲ ನಿಲೆ ಆರು ಸ್ಥಳವೂ ಬೇಕು
ಆರು ಮೊಗವಾರು ಕರವರಿದು ಉತ್ತಮನು
ತೋರುವನು ನಿಜವ ಸರ್ವಜ್ಞ||



ಎಂಬ ವಚನವನ್ನು ವ್ಯಾಖ್ಯಾನಿಸುವಾಗ ಅವರು ಬರೆಯುತ್ತಾರೆ–

"ಸಾಧಕನಾದವನು ಭಕ್ತ ಸ್ಥಲದಲ್ಲಿ ಇಷ್ಟಲಿಂಗ, ಮಹೇಶ್ವರ ಸ್ಥಲದಲ್ಲಿ ಗುರುಲಿಂಗ, ಪ್ರಸಾದಿ ಸ್ಥಲದಲ್ಲಿ ಶಿವಲಿಂಗ, ಪ್ರಾಣಲಿಂಗಿ ಸ್ಥಲದಲ್ಲಿ ಜಂಗಮ ಲಿಂಗ, ಶರಣಸ್ಥಳದಲ್ಲಿ ಭಾವ ಲಿಂಗ, ಐಕ್ಯ ಸ್ಥಲದಲ್ಲಿ ಮಹಾಲಿಂಗವಾಗುತ್ತಾನೆ. ಎಂದರೆ ಯಾವ ಸ್ಥಲದಲ್ಲಿ ನಿಂತರೂ ದೈವದಲ್ಲಿ ಸಂಪೂರ್ಣವಾಗಿ ಬೆರೆತು ಹೋಗುವ ಔನ್ನತ್ಯವನ್ನು ತಲುಪಿ ನಿಜವನ್ನು ಕಾಣುವವನು ಮತ್ತು ತೋರುವವನು ಆಗಿರುತ್ತಾನೆ. ಇದು ಸಾಧನೆಯ ತುತ್ತತುದಿ; ಇದೇ "ಆರರೊಳಗೆಲ್ಲಿ ನಿಲ್ಲೆ ಆರು ಸ್ಥಲವು ಬೇಕು" ಎಂಬುದರ ಅರ್ಥ. (ಪುಟ 42)

ಸರ್ವಜ್ಞನು ಯಾವ ಗುರುಗಳ ಬಳಿ ಯಾವ ಶಾಸ್ತ್ರಾಧ್ಯಯನವನ್ನು ಮಾಡಿದ್ದನೋ ನಮಗೆ ತಿಳಿಯದು. ಆದರೂ ಸಾಂಖ್ಯಯೋಗದ ಬಗೆಗೆ ಅವನು ಸಾಕಷ್ಟು ತಿಳಿದುಕೊಂಡಿದ್ದನೆಂದು ಹಲವು ಸರ್ವಜ್ಞ ವಚನಗಳು ಸೂಚಿಸುತ್ತವೆ. ಪ್ರೊ. ಪದ್ಮಿನಿ ಹೆಗಡೆಯವರು ಇದನ್ನು ಸಾಂಖ್ಯಯೋಗ ವಿಭಾಗದಲ್ಲಿ ಸ್ಪಷ್ಟಪಡಿಸಿದ್ದಾರೆ.

ಇಪ್ಪತ್ತು ಐದುವನು ತಪ್ಪದೇ ತಿಳಿದಡೆ
ಬರ್ಪ ಕರ್ಮಗಳ ಕೆಲಕೊತ್ತಿ ಸ್ವರ್ಗದೊಳ್
ಇಪ್ಪನಾ ಯೋಗಿ ಸರ್ವಜ್ಞ||

ಇದನ್ನು ಸಾಂಖ್ಯಶಾಸ್ತ್ರವು ಪಂಚವಿಂಶತಿ ತತ್ತ್ವ ಎಂದು ಕರೆದಿದೆ. ಪ್ರಕೃತಿ, ಮಹತ್, ಅಹಂಕಾರ, ಪಂಚತನ್ಮಾತ್ರ, ಪಂಚಭೂತಗಳು, ಪಂಚಜ್ಞಾನೇಂದ್ರಿಯಗಳು, ಪಂಚ ಕರ್ಮೇಂದ್ರಿಯಗಳು, ಮನಸ್ಸು – ಇವೆಲ್ಲಾ ಸೇರಿದರೆ ಪ್ರಕೃತಿಯ ಗುಂಪಿನಲ್ಲಿರುವ ಇಪ್ಪತ್ತನಾಲ್ಕು ತತ್ತ್ವಗಳು. ಪುರುಷತತ್ತ್ವ ಇಪ್ಪತ್ತೈದನೆಯದು. ಇವುಗಳನ್ನು ತಪ್ಪಿಲ್ಲದೆ ತಿಳಿದ ಜ್ಞಾನಿಯ ಕರ್ಮಗಳೆಲ್ಲ ಇಲ್ಲವಾಗುತ್ತವೆ. ಅವನು ಸ್ವರ್ಗದಲ್ಲಿ ಇರಬಲ್ಲ ಎಂಬುದು ವಚನದ ಅಭಿಪ್ರಾಯ. ಇದನ್ನೆಲ್ಲ ವಿವರಣೆಯ ಜೊತೆಗೆ ಲೇಖಕರು ಸಾಮಾನ್ಯರಿಗೂ ತಿಳಿಯುವಂತೆ ಬರೆದಿದ್ದಾರೆ.

ಈ ಲೋಕದಲ್ಲಿ ತೋರಿಕೆಯ ಯೋಗಿಗಳು ಅನೇಕರು. ನಿಜಯೋಗಿಗಳಿಗಿಂತ, ತಾವೇ ಯೋಗದ ಪರಮಸಿದ್ಧಿಯನ್ನು ಪಡೆದು ಸಮಾಧಿಯನ್ನೂ ಕೈವಲ್ಯವನ್ನೂ ಕಂಡವರು ಎಂದು ಬಿಂಬಿಸಿಕೊಳ್ಳುವ ನಟನಚತುರರೇ ಅಧಿಕ. ಅವರನ್ನು ಮರುಳರೆಂದು ಸರ್ವಜ್ಞನು ಕರೆದಿದ್ದಾನೆ.

ಹಂಸನು ನಾಳದ ವಂಶವನರಿಯದೆ
ಹಂಸ ತಾನೆಂದು ತಿರುಗುವ ಯೋಗಿಯ
ವಂಶವೇ ಮರುಳು ಸರ್ವಜ್ಞ||

ಇಂದೂ ನಾವು ಈ ಅಭಿನಯ ಚತುರರನ್ನು ಕಾಣುತ್ತೇವೆ. ಯಾವ ಸಾಧನೆಯನ್ನೂ ಮಾಡದೆ, ಯಾವ ಸಿದ್ಧಿಯನ್ನೂ ಪಡೆಯದೆ ಕೆಲವರು 'ನನಗೆ ಕುಂಡಲಿನೀ ಜಾಗೃತವಾಗಿದೆ. ಮೂಲಾಧಾರಚಕ್ರದಿಂದ ಅದು ಸುಷುಮ್ನಾನಾಡಿಯ ಮೂಲಕ ಮೇಲೇರಿ ಸಹಸ್ರಾರವನ್ನು ತಲುಪಿದೆ. ಮುಂದಿನ ಮೆಟ್ಟಿಲೇ ಕೈವಲ್ಯ. ಪತಂಜಲಿಯು ಹೇಳಿರುವ ಋತಂಭ ರಾಪ್ರಜ್ಞೆಯು ನನ್ನಲ್ಲಿ ಹುಟ್ಟಿದೆ' ಎಂದೆಲ್ಲ ಬಡಾಯಿ ಕೊಚ್ಚುತ್ತಾರೆ. ಇಂತಹವರನ್ನು ಸರ್ವಜ್ಞ ಇಲ್ಲಿ ವಿಡಂಬಿಸಿದ್ದಾನೆ. ಜನರನ್ನು ಆಕರ್ಷಿಸಲು, ವಂಚಿಸಲು ಹೀಗೆ ಅಭಿನಯವನ್ನು ಮಾಡುವ ಸಂಚುಕೋರರನ್ನು ಇಲ್ಲಿ ಸರ್ವಜ್ಞನ ವಚನವೂ, ಪದ್ಮಿನಿ ಅವರ ವಿವರಣೆಯೂ ಬಯಲಿಗೆ ಎಳೆಯುತ್ತವೆ. 'ಯೋಗಾಭ್ಯಾಸ ಜನರನ್ನು ತನ್ನ ಕಡೆಗೆ ಸೆಳೆಯುವ ಸಾಧನ ಅಲ್ಲ. ಹಾಗೆ ಅದನ್ನು ದುರುಪಯೋಗ ಮಾಡಿಕೊಳ್ಳಬಾರದು' (ಪು. 63) ಎಂದು ಅವರು ಹೇಳಿರುವ ಮಾತು ಸಾಮಯಿಕವಾಗಿದೆ.

ಲೋಕಾನುಭವದ ಮಾತುಗಳು ಸರ್ವಜ್ಞನ ಬಾಯಲ್ಲಿ ಬರುತ್ತವೆ–

ವಿದ್ಯೆ ಕಲಿಸದ ತಂದೆ ಬುದ್ಧಿ ಹೇಳದ ಗುರುವು
ಬಿದ್ದಿರಲು ಬಂದು ನೋಡದ ತಾಯಿ
ಶುದ್ಧ ವೈರಿಗಳು ಸರ್ವಜ್ಞ||

ತಂದೆ, ತಾಯಿ, ಗುರು ಇವರು ಮಾಡಬೇಕಾದ ಕರ್ತವ್ಯಗಳಿವೆ. ತಂದೆ ತನ್ನ ಮಕ್ಕಳಿಗೆ ವಿದ್ಯೆಯನ್ನು ಕಲಿಸಬೇಕು. ಅದು ಸ್ವಾವಲಂಬನೆಯ ಮಾರ್ಗ. ಹಾಗೆ ಮಾಡದಿದ್ದರೆ ತಂದೆಯೇ ಶತ್ರುವಾಗುತ್ತಾನೆ. ಈ ವಿಚಾರ ಚೂಡಾರತ್ನ ಪದ್ಯದಲ್ಲೂ ಬಂದಿದೆ.

ಮಕ್ಕಳಿಗೆ ತಂದೆ ಬಾಲ್ಯದೊ
ಳಕ್ಕರದ ವಿದ್ಯೆಗಳ ಕಲಿಸದಿದ್ದರೆ ಕೊಂದಂ।
ಲಕ್ಕ ಧನಮಿರಲು ಕೆಡುಗುಂ
ಚಿಕ್ಕಂದಿನ ವಿದ್ಯೆ ಪೊರಗು ಚೂಡಾರತ್ನಾ||

ಹಾಗೆಯೇ ಶಿಷ್ಯ ದಾರಿ ತಪ್ಪಿದಾಗ ಗುರು ಬುದ್ಧಿ ಹೇಳಬೇಕು. ಹಾಗೆ ಮಾಡದ ಗುರು ವೈರಿ. ಜಾರಿಬಿದ್ದು ಪೆಟ್ಟು ಮಾಡಿಕೊಂಡಾಗ ತಾಯಿ ಬಂದು ನೋಡಿ ನೋವನ್ನು ಪರಿಹರಿಸಬೇಕು. ಮಗುವಿಗೆ ತಾಯಿಯೇ ರಕ್ಷಕಳು. ಹಾಗೆ ಮಾಡದಿದ್ದರೆ ಅವಳೂ ವೈರಿ. ಇದನ್ನು ವಿವರಿಸುತ್ತಾ ಪ್ರೊ. ಪದ್ಮಿನಿ ಹೆಗಡೆಯವರು ಬರೆದಿದ್ದಾರೆ–

"ಸಾಧಾರಣವಾದ ವೈರಿಗಳಾದರೆ ಸೋಲುವವರೆಗೂ, ಹಿಂದೆ ಸರಿಯುವವರೆಗೆ ಅಥವಾ ರಾಜಿ ಮಾಡಿಕೊಳ್ಳುವವರೆಗೆ ಹಗೆ ಸಾಧಿಸುತ್ತಾರೆ. ಆನಂತರ ಮೊದಲಿಗೆ ವೈರಿಗಳಾಗಿದ್ದರೂ ಅವರವರ ಪಾಡಿಗೆ ಬದುಕನ್ನು ಕಟ್ಟಿಕೊಳ್ಳುವ ಅವಕಾಶ ಪಡೆದವರಾಗುತ್ತಾರೆ. ಶುದ್ಧ ವೈರಿಗಳಾದರೋ ಯೋಗ್ಯ ವ್ಯಕ್ತಿತ್ವವೇ ಇಲ್ಲದಂತೆ ಮಾಡಿ ಯೋಗ್ಯವಾಗಿ ಬದುಕುವ ಮತ್ತು ಮೇಲೇಳಲು ಇರುವ ಅವಕಾಶಗಳು ಒಂದೂ ದೊರೆಯದಂತೆ ನೋಡಿಕೊಳ್ಳುತ್ತಾರೆ." (ಪು. 109).

ಸರಳ ಭಾಷೆಯಲ್ಲೇ ಪದ್ಯಗಳನ್ನು ರಚಿಸಿದ್ದರೂ ಸರ್ವಜ್ಞನು ದ್ವಿತೀಯಾಕ್ಷರ ಪ್ರಾಸವನ್ನು ಉಳಿಸಿದ್ದಾನೆ. ಇದು ಅವನ ವೈಶಿಷ್ಟ್ಯ. ಅವನವೆಂದು ಹೇಳಲಾದ ಎಲ್ಲ ತ್ರಿಪದಿಗಳು ಅವನದಲ್ಲವೇನೋ! 140ನೆಯ ಪುಟದಲ್ಲೊಂದು ವಚನವಿದೆ.

ಕೋಟಿ ಕವನಕೆ ಲೇಸು ಬೇಟಿ ಅರಸಿಗೆ ಲೇಸು
ನೀಟಾದ ಸತಿಯ ತರಲೇಸು ಸಜ್ಜನರ
ಕೂಟವೇ ಲೇಸು ಸರ್ವಜ್ಞ||

ಇದರ ವಿವರಣೆಯಲ್ಲಿ ನೀಟಾದ = ಸರಳವಾದ, ಚೊಕ್ಕವಾದ ಎಂಬ ಅರ್ಥವನ್ನು ಲೇಖಕರು ಕೊಟ್ಟಿದ್ದಾರೆ. (ಪು. 140). ಇದು ಇಂಗ್ಲೀಷಿನ Neat ಎಂಬ ಪದವೆಂದಾಯಿತು. ಸರ್ವಜ್ಞನು ಇಂತಹ ಪದವನ್ನು ಬಳಸಿರುವುದು ಸಂಭವವೆ? ಈಚೆಗೆ ಯಾರೋ ಬರೆದು ಸೇರಿಸಿರುವ ವಚನ ಇದಾಗಿರಬಹುದೆ?

ಒಂದು ಒಳ್ಳೆಯ ಪುಸ್ತಕವನ್ನು ಕನ್ನಡಿಗರಿಗೆ ಕೊಟ್ಟಿರುವ ಪ್ರೊ.ಪದ್ಮಿನಿ ಹೆಗಡೆಯವರಿಗೆ ವಂದನೆಗಳು ಸಲ್ಲುತ್ತವೆ.

ಸಿರಿಗನ್ನಡಂ ಗೆಲ್ಗೆ

ಜಿಲ್ಲಾವಾರು ಪ್ರವಾಸೋದ್ಯಮ ತಾಣಗಳ ಸಮೀಕ್ಷೆ, ಸಂರಕ್ಷಣೆಗೆ ಡಿಸಿಗಳಿಗೆ ಸಿಎಂ ಸಲಹೆ

ಬೆಂಗಳೂರು, ಜು.9(ಕೆಎಂಶಿ)–ಪ್ರವಾಸೋದ್ಯಮ ಅಭಿವೃದ್ಧಿಗೆ ಜಿಲ್ಲಾಧಿಕಾರಿಗಳು ಮಾಸ್ಟರ್‌ಪ್ಲಾನ್ ಸಿದ್ಧಪಡಿಸಿದ ನಂತರ ಪ್ರತ್ಯೇಕ ನಿಯಮ ರೂಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳು, ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳು ಮತ್ತು ಉಸ್ತುವಾರಿ ಕಾರ್ಯದರ್ಶಿಗಳ ಎರಡನೇ ದಿನದ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರವಾಸೋದ್ಯಮ ಅತ್ಯಂತ ನಿರ್ಲಕ್ಷ್ಯಕ್ಕೆ ಗುರಿಯಾಗಿದೆ, ಪ್ರವಾಸಿತಾಣಗಳಲ್ಲಿ ಉತ್ತಮ ಪಂಚತಾರಾ ಹೋಟೆಲ್‌ಗಳು ಇಲ್ಲ, ವಿದೇಶಿ ಪ್ರವಾಸಿಗರು ಉಳಿದುಕೊಳ್ಳಲು ಗುಣಮಟ್ಟದ ಹೋಟೆಲ್‌ಗಳ ಅಗತ್ಯವಿದೆ ಎಂದು ಹೇಳಿದರು.



ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಜಿಲ್ಲಾಧಿಕಾರಿಗಳು, ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳು ಮತ್ತು ಉಸ್ತುವಾರಿ ಕಾರ್ಯದರ್ಶಿಗಳ ಸಭೆ ನಡೆಸಿದರು. ಡಿಸಿಎಂ ಡಿ.ಕೆ.ಶಿವಕುಮಾರ್ ಇತರರಿದ್ದಾರೆ.

ಪ್ರವಾಸೋದ್ಯಮ ಅಭಿವೃದ್ಧಿಯಿಂದ ಉದ್ಯೋಗ ಸೃಷ್ಟಿ ಹಾಗೂ ಆರ್ಥಿಕ ಚಟುವಟಿಕೆಗೆ ವೇಗ ದೊರೆಯುತ್ತದೆ, ಪ್ರವಾಸೋದ್ಯಮಕ್ಕೆ ಹೆಚ್ಚು ಅವಕಾಶ ಇರುವ ಕರ್ನಾಟಕದಲ್ಲಿ 320 ಕಿ.ಮೀ. ಕರಾವಳಿ ಇದೆ, ಇದರ ಸಮರ್ಪಕ ಬಳಕೆಯಾಗಿಲ್ಲ, ಸಿಆರ್‌ಝೆಡ್ ಕಾಯ್ದೆಯಿಂದ ಅಭಿವೃದ್ಧಿಗೆ ಕೆಲವು ತೊಡಕುಗಳು ಎದುರಾಗಿದ್ದು, ಇದರ ಪರಿಹಾರಕ್ಕೆ ಪ್ರಯತ್ನಿಸಬೇಕು.

ಜಿಲ್ಲಾಧಿಕಾರಿಗಳು ಪ್ರವಾಸಿತಾಣಗಳ ಅಭಿವೃದ್ಧಿ ಸಾಧ್ಯತೆಗಳನ್ನು ಗುರುತಿಸಿ, ಖಾಸಗಿ ಸಹಭಾಗಿತ್ವದಲ್ಲಿ ಮಾತ್ರವಲ್ಲದೆ ಸರ್ಕಾರದಿಂದಲೂ ಮುಂದುವರೆಯಬೇಕು, ಹೊಸ ಪ್ರವಾಸೋದ್ಯಮ ನೀತಿಯಲ್ಲಿ ಎಲ್ಲಾ ಅಂಶಗಳನ್ನು ಸೇರಿಸಲಾಗುವುದು ಹಾಗೂ ಪೂರಕ ಅನುದಾನ ಒದಗಿಸಲಾಗುವುದು ಎಂದರು.

ಪ್ರವಾಸೋದ್ಯಮದ ಸಮಗ್ರ ಅಭಿವೃದ್ಧಿಗೆ ನೀಲ ನಕಾಶೆ ಸಿದ್ಧಪಡಿಸಬೇಕು, ಪ್ರವಾಸೋದ್ಯಮಕ್ಕೆ ಪೂರಕ ವಾತಾವರಣ ಸೃಷ್ಟಿಸಿದರೆ ಮಾತ್ರ ಬಂಡವಾಳ ಹೂಡಿಕೆದಾರರು ಮುಂದೆ ಬರುತ್ತಾರೆ.

ಕೆಲವೇ ಪ್ರವಾಸೋದ್ಯಮ ತಾಣಗಳಿಗೆ ಪ್ರಾಮುಖ್ಯತೆ ದೊರೆಯುತ್ತಿದೆ. ರಾಜ್ಯದಲ್ಲಿ 25 ಸಾವಿರ ಸ್ಮಾರಕಗಳಿವೆ, ಇವುಗಳಲ್ಲಿ ಸುಮಾರು 23 ಸಾವಿರ ಸ್ಮಾರಕಗಳು ನಿರ್ಲಕ್ಷ್ಯಕ್ಕೆ ಒಳಗಾಗಿವೆ, ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ ಸೌಲಭ್ಯ ಕಾಯ್ದೆ 2015 ಅನ್ನು ಸಮರ್ಪಕ ಅನುಷ್ಠಾನಕ್ಕೆ ತಂದರೆ ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿ ಸಾಧ್ಯವಿದೆ ಎಂದರು.

ಜಿಲ್ಲಾವಾರು ಪ್ರವಾಸೋದ್ಯಮ ತಾಣಗಳ ಸಮೀಕ್ಷೆ, ಸಂರಕ್ಷಣೆಗೆ ಮಾಸ್ಟರ್ ಪ್ಲಾನ್ ಸಿದ್ಧಪಡಿಸಬೇಕು, ಮೂರು ತಿಂಗಳಲ್ಲಿ ಕಾರ್ಯ ಪೂರ್ಣಗೊಳಿಸಬೇಕು, ಪ್ರವಾಸಿ ತಾಣಗಳನ್ನು ಹಂತಹಂತವಾಗಿ ಪುನರುಜ್ಜೀವನಗೊಳಿಸಲು ಕ್ರಮ ಕೈಗೊಳ್ಳಬೇಕು. ಜಿಲ್ಲಾ ಪ್ರವಾಸೋದ್ಯಮ ಕುರಿತ ಪುಸ್ತಕಗಳ ಬಿಡುಗಡೆ, ಸ್ಮಾರಕ ದತ್ತಿ ಕಾರ್ಯಕ್ರಮಗಳ ಜಾರಿ, ಸ್ಮಾರಕಗಳ ದತ್ತು ಹಾಗೂ ಸಂರಕ್ಷಣೆ ಕಾರ್ಯ ಆಗಬೇಕು.

ಕರಾವಳಿ ಹಾಗೂ ಮಲೆನಾಡು ಪ್ರದೇಶಕ್ಕೆ ಪ್ರತ್ಯೇಕ ಯೋಜನೆ ರೂಪಿಸಬೇಕಿದೆ, ಇದರಿಂದ ತೆರಿಗೆ ಸಂಗ್ರಹ ಹಾಗೂ ಸ್ಥಳೀಯರಿಗೆ ಉದ್ಯೋಗಾವಕಾಶ ಸೃಷ್ಟಿ ಸಾಧ್ಯ, ಕರಾವಳಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಮುಂಬೈ ಹಾಗೂ ಕೊಲ್ಲಿ ರಾಷ್ಟ್ರಗಳಿಗೆ ಉದ್ಯೋಗ ಅರಸಿ ಹೋಗುವ ಪರಿಸ್ಥಿತಿ ಬದಲಾಗಬೇಕಿದೆ ಎಂದರು.

ಸಚಿವ ಹೆಚ್.ಕೆ.ಪಾಟೀಲ್ ಮಾತನಾಡಿ, ರಾಜ್ಯದಲ್ಲಿನ 25 ಸಾವಿರ ಸ್ಮಾರಕಗಳ ಸಮೀಕ್ಷೆ, ಸಂರಕ್ಷಣೆ ಹಾಗೂ ಮಹತ್ವ ಅರಿತ ಗೈಡ್‌ಗಳ ನೇಮಕ, ಜಿಲ್ಲೆಗಳ ಉತ್ತಮ ಸಾಹಿತಿ, ಬರಹಗಾರರು, ಕಲಾವಿದರ ನೆರವು ಪಡೆದು 3 ತಿಂಗಳಲ್ಲಿ ಮಾಸ್ಟರ್ ಪ್ಲಾನ್ ಸಿದ್ಧಪಡಿಸಿ ಪ್ರವಾಸೋದ್ಯಮ ಸಮಿತಿ ಮುಂದೆ ಸಲ್ಲಿಸಿ, ಮಾಸ್ಟರ್‌ಪ್ಲಾನ್‌ಗೆ ಹಣಕಾಸು ಒದಗಿಸಲಾಗುವುದು ಎಂದರು.

ಮಧುಗಿರಿಯ ಏಕಶಿಲಾ ಬೆಟ್ಟ, ಕಪ್ಪತ್ತಗುಡ್ಡ ನಿಸರ್ಗ ಪ್ರದೇಶವನ್ನು ಪ್ರವಾಸೋದ್ಯಮ ಕ್ಷೇತ್ರವಾಗಿ ಇನ್ನಷ್ಟು ಅಭಿವೃದ್ಧಿಪಡಿಸಲು ಸಾಧ್ಯವಿದೆ, ಜಿಲ್ಲಾಧಿಕಾರಿಗಳು ಈ ಬಗ್ಗೆ ಗಮನ ಹರಿಸಿದರೆ ರಾಜ್ಯದ ಪ್ರತೀ ಜಿಲ್ಲೆಗಳನ್ನೂ ಪ್ರವಾಸೋದ್ಯಮ ಜಿಲ್ಲೆಗಳನ್ನಾಗಿ ಮಾಡಬಹುದಾಗಿದೆ ಎಂಬ ಪ್ರಸ್ತಾವನೆ ಮುಂದಿಟ್ಟರು. ಇದಕ್ಕೆ ಧ್ವನಿಗೂಡಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರಾಜ್ಯದಲ್ಲಿ ವಿಸ್ತಾರವಾದ ಕರಾವಳಿ ಪ್ರದೇಶವಿದ್ದು ಪ್ರವಾಸೋದ್ಯಮ ಅಭಿವೃದ್ಧಿಗೆ ಹೇರಳ ಅವಕಾಶಗಳಿವೆ ಎಂದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ
ಬುಧವಾರ 10 ಜುಲೈ 2024

ಡಾ.ಫ.ಗು.ಹಳಕಟ್ಟಿ ಜಯಂತ್ಯುತ್ಸವ



ಶರಣು ವಿಶ್ವವಚನ ಫೌಂಡೇಷನ್ ವತಿಯಿಂದ ಯಡಿಯೂರು ಗ್ರಾಮದಲ್ಲಿ ಡಾ.ಫ.ಗು.ಹಳಕಟ್ಟಿ ಅವರ ಜಯಂತ್ಯುತ್ಸವ ಆಚರಿಸಲಾಯಿತು.


ಮೈಸೂರು, ಜು. 9–ವಚನ ಸಾಹಿತ್ಯವನ್ನು ಸಂರಕ್ಷಿಸಿ ವಿಶ್ವಕ್ಕೆ ಕೊಡುಗೆಯಾಗಿ ಕೊಟ್ಟ ಕೀರ್ತಿ ಡಾ.ಫ.ಗು.ಹಳಕಟ್ಟಿ ಅವರಿಗೆ ಸಲ್ಲುತ್ತದೆ ಎಂದು ಚಾಮರಾಜನಗರ ಜಾಗತಿಕ ಲಿಂಗಾಯಿತ ಮಹಾಸಭಾದ ಕೋಶಾಧ್ಯಕ್ಷ ಎನ್.ಶಿವಪ್ರಸಾದ್ ಹೇಳಿದರು.

ಶರಣು ವಿಶ್ವವಚನ ಫೌಂಡೇಷನ್ ವತಿಯಿಂದ ಡಾ. ಫ.ಗು ಹಳಕಟ್ಟಿ ಅವರ ಜಯಂತ್ಯುತ್ಸವದ ಅಂಗವಾಗಿ ಚಾಮರಾಜನಗರ ಜಿಲ್ಲೆ ಸಂತೇಮರಹಳ್ಳಿ ಪಕ್ಕದ ಯಡಿಯೂರು ಗ್ರಾಮದಲ್ಲಿ ನಡೆದ ವಚನ ಗ್ರಾಮ ಕಾರ್ಯಕ್ರಮದಲ್ಲಿ ಮಾತನಾಡಿ, ವಚನ ಸಾಹಿತ್ಯದ ತಾಳೆಗರಿಗಳನ್ನು ಅವರು ಕೇರಿಗಳಲ್ಲಿ ತಡಕಾಡಿ, ಊರುಗಳಲ್ಲಿ ಹುಡುಕಾಡಿ, ವಿವಿಧ ಸ್ಥಳಗಳಲ್ಲಿ ಸಂಶೋಧನೆ ಮಾಡಿ, ಅನೇಕ ಆಲಯಗಳಲ್ಲಿ ಅನ್ವೇಷಣೆಗೈದು ಸಂಗ್ರಹಿಸಿ ತಮ್ಮ ಸ್ವಂತ ಮನೆ ಮಾರಿ ಹಿತಚಿಂತಕ ಎಂಬ ಮುದ್ರಣಾಲಯ ಸ್ಥಾಪಿಸಿ 250ಕ್ಕೂ ಹೆಚ್ಚು ವಚನಕಾರರ ವಚನ ಸಾಹಿತ್ಯವನ್ನು ಬೆಳಕಿಗೆ ತಂದು ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದರು ಎಂದರು.

ನಂತರ ಮಾತನಾಡಿದ ಜಾಗತಿಕ ಲಿಂಗಾಯಿತ ಮಹಾಸಭಾದ ಅಧ್ಯಕ್ಷ ಜಿ. ಗುರುಸ್ವಾಮಿ ಕಾಳನಹುಂಡಿ , ಡಾ.ಫ.ಗು. ಹಳಕಟ್ಟಿ ಅವರು 19ನೆಯ ಶತಮಾನದಲ್ಲಿ ವಚನ ಸಾಹಿತ್ಯದ ತಾಳೆಗರಿ ಸಂಗ್ರಹಿಸಲು ಊರು, ಊರು ಮತ್ತು ಕೇರಿ ಕೇರಿ ಅಲೆದರು. ಆದರೆ 21ನೆಯ ಶತಮಾನದಲ್ಲಿ ವಚನ ಕುಮಾರಸ್ವಾಮಿ ಮತ್ತು ರೂಪ ಕುಮಾರಸ್ವಾಮಿ ಅವರು ಊರು, ಊರು ಮತ್ತು ಕೇರಿ ಕೇರಿ ಅಲೆದು ವಚನ ಸಾಹಿತ್ಯವನ್ನು ಸಂರಕ್ಷಣೆ ಮಾಡುತ್ತಿರುವುದು ಶ್ಲಾಘನೀಯ ಎಂದರು.

ನಂತರ ಯಡಿಯೂರು ಗ್ರಾಮದ 200ಕ್ಕೂ ಹೆಚ್ಚು ಮನೆಗಳಿಗೆ ವಚನ ಪುಸ್ತಕವನ್ನು ಉಚಿತವಾಗಿ ಹಂಚಿ ವಚನ ಗ್ರಾಮವನ್ನಾಗಿ ಘೋಷಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಶರಣು ವಿಶ್ವ ವಚನ ಫೌಂಡೇಷನ್ ಸಂಸ್ಥಾಪಕರಾದ ವಚನ ಕುಮಾರಸ್ವಾಮಿ ಮತ್ತು ರೂಪ ಕುಮಾರಸ್ವಾಮಿ, ಮೈಸೂರು ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ವಾಜಂತ್ರಿ, ಕೇಂದ್ರೀಯ ಸಂಚಾಲಕ ವಿ.ಲಿಂಗಣ್ಣ, ಉಪಾಧ್ಯಕ್ಷ ಶಿವಪುರ ಉಮಾಪತಿ, ಗೌಡಿಕೆ ಎನ್. ಮಹದೇವ ಸ್ವಾಮಿ, ಚಾಮರಾಜನಗರದ ಬಸವೇಶ್ವರ ಪತ್ತಿನ ಸಹಕಾರ ಸಂಘದ ಕಾರ್ಯನಿರ್ವಾಹಕ ಅಧಿಕಾರಿ ವೈ.ಎಸ್.ನಂಜುಂಡ ಸ್ವಾಮಿ, ಸಂಚಾಲಕ ರುದ್ರಪ್ಪ ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಜೆಡಿಎಸ್ ಮುಖಂಡ ಎಂ.ಬಾಲಕೃಷ್ಣ ಅವರಿಗೆ ಹುಟ್ಟುಹಬ್ಬದ ಸಂಭ್ರಮ



ವರುಣ ಕ್ಷೇತ್ರದ ಜೆಡಿಎಸ್ ಅಧ್ಯಕ್ಷ ಎಂ.ಬಾಲಕೃಷ್ಣ ಅವರು ತಮ್ಮ ಹುಟ್ಟುಹಬ್ಬವನ್ನು ಶ್ರೀ ಬಸವೇಶ್ವರ ನವಚೇತನ ವಿಶೇಷ ಮಕ್ಕಳ ಶಾಲೆಯ ಮಕ್ಕಳಿಗೆ ಉಪಾಹಾರ, ಹಣ್ಣು ಹಾಗೂ ನೋಟ್‌ಬುಕ್ ವಿತರಣೆ ಮಾಡುವ ಮೂಲಕ ಆಚರಿಸಿಕೊಂಡರು. ನಿಖಿಲ್ ಕುಮಾರಸ್ವಾಮಿ ಅಭಿಮಾನಿ ಬಳಗದ ಅಧ್ಯಕ್ಷ ಪ್ರದೀಪ್ ಕೃಷ್ಣೇಗೌಡ, ಶಾಲೆಯ ಮುಖ್ಯಸ್ಥ ಮರೀಗೌಡ, ಮಹೇಶ್, ಸಿದ್ದರಾಮನಹುಂಡಿ ಮಂಜು, ನವೀನ್, ಮಹೇಶ್, ಮೂರ್ತಿ, ಶ್ರೀನಿವಾಸ್ ರಾಜು ಮತ್ತಿತರರು ಈ ವೇಳೆ ಉಪಸ್ಥಿತರಿದ್ದರು.

ನೂತನ ಡಿಸಿ ಲಕ್ಷ್ಮಿಕಾಂತ್ ರೆಡ್ಡಿಯವರಿಗೆ ಅಭಿನಂದನೆ



ಮೈಸೂರು ನೂತನ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ್ ರೆಡ್ಡಿ ಅವರನ್ನು ಶ್ರೀ ದುರ್ಗಾ ಫೌಂಡೇಶನ್, ಚಾಮುಂಡೇಶ್ವರಿ ಬಳಗದ ವತಿಯಿಂದ ಸನ್ಮಾನಿಸಲಾಯಿತು. ಕಾಂಗ್ರೆಸ್ ಮುಖಂಡ ಜೆ.ಜೆ.ಆನಂದ್, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷರಾದ ರೇಖಾ ಶ್ರೀನಿವಾಸ್, ಲೋಕೇಶ್, ರವಿಚಂದ್ರ, ಸಂತೋಷ್ ಕಿರಾಲು, ಸಫಿ ಇನ್ನಿತರರು ಉಪಸ್ಥಿತರಿದ್ದರು.

ಅವಧಿ ಮೀರಿ ಕಾರ್ಯ ನಿರ್ವಹಣೆ: ವಿರಾಟ್ ಕೊಹ್ಲಿ ಮಾಲೀಕತ್ವದ ಬೆಂಗಳೂರು ಪಬ್ ವಿರುದ್ಧ ಎಫ್‌ಐಆರ್

ಬೆಂಗಳೂರು, ಜು.9– ಟೀಂ ಇಂಡಿಯಾ ಕ್ರಿಕೆಟಿಗ ವಿರಾಟ್ ಕೊಹ್ಲಿ ಮಾಲೀಕತ್ವದ ಪಬ್ ಮೇಲೆ ಎಫ್‌ಐಆರ್ ದಾಖಲಾಗಿದೆ. ನಿಗದಿತ ಸಮಯ ಮೀರಿ ಕಾರ್ಯನಿರ್ವಹಿಸಿದ್ದಕ್ಕಾಗಿ ವಿರಾಟ್ ಕೊಹ್ಲಿ ಒಡೆತನದ ಒನ್8 ಕಮ್ಯೂನ್ ಪಬ್(One8 Commune Pub) ಮತ್ತು ಎಂಜಿ ರಸ್ತೆಯಲ್ಲಿರುವ ಹಲವಾರು ಸಂಸ್ಥೆಗಳ ವಿರುದ್ಧ ಬೆಂಗಳೂರು ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಡಿಸಿಪಿ ಸೆಂಟ್ರಲ್ ಪ್ರಕಾರ, ಪಬ್‌ಗಳು ಮಧ್ಯರಾತ್ರಿ 1.30ರವರೆಗೆ ತೆರೆದಿರುವುದು ಕಂಡುಬಂದಿದೆ. ಪಬ್‌ಗಳಿಗೆ ರಾತ್ರಿ 1 ರವರೆಗೆ ಮಾತ್ರ ತೆರೆದಿರಲು ಅವಕಾಶ ಇದೆ. ತಡರಾತ್ರಿ ಈ ಪ್ರದೇಶದಲ್ಲಿ ಜೋರಾಗಿ ಸಂಗೀತ ನುಡಿಸುತ್ತಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಪೊಲೀಸರು ಈ ಕ್ರಮ ಕೈಗೊಂಡಿದ್ದಾರೆ. ಚಿನ್ನಸ್ವಾಮಿ ಕ್ರಿಕೆಟ್ ಸ್ಟೇಡಿಯಂ ಬಳಿ ಇರುವ ಒನ್8 ಕಮ್ಯೂನ್ ಪಬ್, ನಿಯಮಗಳನ್ನು ಉಲ್ಲಂಘಿಸಿದ ಪಬ್‌ಗಳಲ್ಲಿ ಒಂದಾಗಿದೆ. ರಾತ್ರಿ ಅವಧಿಗೂ ಮೀರಿ ಪಬ್ ತೆರೆದಿದ್ದ ಹಿನ್ನೆಲೆ ಬೆಂಗಳೂರಿನ ಕಸ್ತೂರಬಾ ರಸ್ತೆಯಲ್ಲಿರುವ ಕೊಹ್ಲಿ ಮಾಲೀಕತ್ವದ ಪಬ್ ಮೇಲೆ ಕಬ್ಬನ್‌ಪಾರ್ಕ್ ಠಾಣೆಯಲ್ಲಿ FIR ದಾಖಲಾಗಿದೆ.

ಮೈಸೂರು ನಗರ, ಜಿಲ್ಲೆಯಲ್ಲಿ ಹೆಚ್ಚಾಗುತ್ತಿರುವ ಡೆಂಗ್ಯೂ ಪ್ರಕರಣ

ಜಿಲ್ಲಾಸ್ಪತ್ರೆಗೆ ಸಂಸದ ಯದುವೀರ್ ಭೇಟಿ, ಪರಿಶೀಲನೆ

ವೈದ್ಯಾಧಿಕಾರಿಗಳಿಂದ ಮಾಹಿತಿ, ಕಾರ್ಯವೈಖರಿಗೆ ಮೆಚ್ಚುಗೆ



ಮೈಸೂರು ಕೆಆರ್‌ಎಸ್ ರಸ್ತೆಯಲ್ಲಿರುವ ಜಿಲ್ಲಾಸ್ಪತ್ರೆಗೆ ಸಂಸದ ಯದುವೀರ್ ಒಡೆಯರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಮೈಸೂರು, ಜು.9(ಜಿಎ)–ಮೈಸೂರು ನಗರ ಮತ್ತು ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣಗಳು ಗಣನೀಯವಾಗಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮೈಸೂರು ಕೆಆರ್‌ಎಸ್ ರಸ್ತೆಯಲ್ಲಿರುವ ಜಿಲ್ಲಾಸ್ಪತ್ರೆಗೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಂಗಳವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ನಗರದ ಮೇಟಗಳ್ಳಿಯಲ್ಲಿರುವ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ ಸಂಸದರು, ಜಿಲ್ಲಾಸ್ಪತ್ರೆಯ ವೈದ್ಯಾಧಿಕಾರಿಗಳು ಹಾಗೂ ಜಿಲ್ಲಾ ಆರೋಗ್ಯಾಧಿಕಾರಿಯಿಂದ ಮಾಹಿತಿ ಪಡೆದುಕೊಂಡರಲ್ಲದೆ, ಆಸ್ಪತ್ರೆಯ ವಾರ್ಡ್‌ಗಳಿಗೆ ತೆರಳಿ ಪರಿಶೀಲಿಸಿ, ರೋಗಿಗಳ ಯೋಗಕ್ಷೇಮ ವಿಚಾರಿಸಿದರು.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮೈಸೂರಿನಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ್ದೇನೆ. ವೈದ್ಯರು ಉತ್ತಮ ರೀತಿಯಲ್ಲಿ ಚಿಕಿತ್ಸೆ ನೀಡುತ್ತಿದ್ದಾರೆ. ಡೆಂಗ್ಯೂ ನಿಯಂತ್ರಣಕ್ಕೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದು, ಡೆಂಗ್ಯೂ ನಿಯಂತ್ರಣ ಕುರಿತು ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಡೆಂಗ್ಯೂ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸದ್ಯದಲ್ಲೇ ಅಧಿಕಾರಿಗಳ ಸಭೆ ಮಾಡಲಿದ್ದೇವೆ. ಜಿಲ್ಲಾಸ್ಪತ್ರೆಗೆ ಅಗತ್ಯ ಸಲಕರಣೆಗಳ ಕೊರತೆ ಇದೆ. ಇದರ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಈ ವೇಳೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ಮಾತನಾಡಿ, ಮೈಸೂರಿನಲ್ಲಿ ಡೆಂಗ್ಯೂ ಪ್ರಕರಣಗಳು ನಿಯಂತ್ರಣಕ್ಕೆ ಬರುತ್ತಿವೆ. ಮುಖ್ಯಮಂತ್ರಿ, ಸಚಿವರ ಸೂಚನೆ ಮೇರೆಗೆ ಕ್ರಮ ಕೈಗೊಂಡಿದ್ದೇವೆ. ಇಡೀ ರಾಜ್ಯಕ್ಕೆ ಹೋಲಿಕೆ ಮಾಡಿದರೆ ಮೈಸೂರಿನಲ್ಲಿ ಡೆಂಗ್ಯೂ ರೋಗಿಗಳು ಬೇಗ ಗುಣಮುಖರಾಗುತ್ತಿದ್ದಾರೆ. ಡೆಂಗ್ಯೂ ನಿಯಂತ್ರಣಕ್ಕೆ ಬೇಕಾದ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದೇವೆ ಎಂದು ತಿಳಿಸಿದರು.

ಮೈಸೂರು ಜಿಲ್ಲೆಯಲ್ಲಿ ಔಷಧಿಗಳ ಕೊರತೆ ಇಲ್ಲ. ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಎಲ್ಲಾ ಕಡೆಯೂ ಸೂಕ್ತ ಕ್ರಮ ವಹಿಸಿದ್ದೇವೆ. ಈ ವಾರದಿಂದ ಮೈಸೂರಿನಲ್ಲಿ ಆಷಾಢ ಶುಕ್ರವಾರಕ್ಕೆ ಲಕ್ಷಾಂತರ ಭಕ್ತಾದಿಗಳು ಚಾಮುಂಡಿಬೆಟ್ಟಕ್ಕೆ ಆಗಮಿಸುತ್ತಾರೆ. ಹಲವು ಕಡೆ ಪ್ರಸಾದ ವಿತರಣೆ ಕೂಡ ಇರುತ್ತದೆ. ಹೀಗಾಗಿ, ಎಲ್ಲಾ ಕಡೆಯೂ ಆರೋಗ್ಯ ಇಲಾಖೆಯ ಸಿಬ್ಬಂದಿ ನೇಮಕ ಮಾಡಿದ್ದೇವೆ. ಜಿಲ್ಲೆಯಲ್ಲಿ ಡೆಂಗ್ಯೂ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಸರ್ವ ಸನ್ನದ್ಧವಾಗಿದೆ ಎಂದರು.

> “ಸಂಸತ್ ಅಧಿವೇಶನದಲ್ಲಿ ಭಾಗಿಯಾಗಿದ್ದು ನಮ್ಮ ಕರ್ತವ್ಯ. ಜನಸಾಮಾನ್ಯರ ಸಮಸ್ಯೆಗಳ ಬಗ್ಗೆ ಅಧಿವೇಶನದಲ್ಲಿ ಮಾತನಾಡಬಹುದು. ಮೈಸೂರು–ಕೊಡಗು ಕ್ಷೇತ್ರದ ಅಭಿವೃದ್ಧಿ ಬಗ್ಗೆ ಕೇಂದ್ರ ಸಚಿವರನ್ನು ಭೇಟಿ ಮಾಡಿದ್ದೇನೆ. ಸಚಿವರು ಕೂಡ ಸಕಾರಾತ್ಮಕವಾಗಿ ಸ್ಪಂದನೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿಯೂ ಮೈಸೂರು–ಕೊಡಗು ಕ್ಷೇತ್ರದ ಅಭಿವೃದ್ಧಿಯೇ ನನ್ನ ಮೊದಲ ಆದ್ಯತೆ.
> –ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸದರು

ಮುಡಾ ಹಗರಣ: ಸಿಬಿಐಗೆ ವಹಿಸಿ

ಮುಡಾ ಹಗರಣ ಕುರಿತು ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರತಿಕ್ರಿಯಿಸಿ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ನಡೆದಿರುವ ಹಗರಣದ ತನಿಖೆಯನ್ನು ರಾಜ್ಯ ಸರ್ಕಾರವು ಸಿಬಿಐಗೆ ವಹಿಸಲಿ. ಈ ಪ್ರಕರಣ ತುಂಬಾ ಗಂಭೀರವಾಗಿದೆ. ಇದರ ಜೊತೆಗೆ ಅನೇಕ ಪ್ರಭಾವಿಗಳ ಹೆಸರು ಕೂಡ ಕೇಳಿ ಬಂದಿದೆ. ಹೀಗಾಗಿ, ಈ ಪ್ರಕರಣವನ್ನು ನಿಷ್ಪಕ್ಷಪಾತವಾಗಿ ತನಿಖೆ ಮಾಡಬೇಕು ಎಂದರು. ನಾನು ಕೂಡ ಇದರ ಬಗ್ಗೆ ಧ್ವನಿ ಎತ್ತುತ್ತೇನೆ. ಮುಡಾ ಇರೋದು ಸಾರ್ವಜನಿಕರ ಒಳಿತಿಗಾಗಿ. ನಿವೇಶನ ವಂಚಿತ ಜನರಿಗೆ ನಿವೇಶನ ಕೊಡುವುದಕ್ಕೆ. ಮುಡಾ ಸಭೆಯಲ್ಲಿ ಭಾಗಿಯಾದಾಗ ಇದರ ಬಗ್ಗೆ ಮಾತನಾಡುತ್ತೇನೆ ಎಂದು ತಿಳಿಸಿದರು.

ಸಿಎ ನಿವೇಶನ ಹಗರಣ: ಕ್ರಮಕ್ಕೆ ಆಗ್ರಹ



ಮೈಸೂರು, ಜು.9(ಜಿಎ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ದಿಂದ ಸೇವೆ ಹೆಸರಿನಲ್ಲಿ ಸಿಎ ನಿವೇಶನ ಪಡೆದು ವಾಣಿಜ್ಯೀಕರಣಗೊಳಿಸುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಪರಿಸರ ಉಳಿಸಿ ಸಮಿತಿ ಆಗ್ರಹಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮಿತಿಯ ಸಂಚಾಲಕ ಕಿರಣ್ ಮಾತನಾಡಿ, ಸಿಎ ನಿವೇಶನ ದೊಡ್ಡ ಹಗರಣವಾಗಿದ್ದು, ಸಿಎ ನಿವೇಶನಗಳ ಮೂಲ ಉದ್ದೇಶ ನಿಯಮಾವಳಿಗಳನ್ನು ಗಾಳಿಗೆ ತೂರಿ ಕಮರ್ಷಿಯಲ್ ಆಗಿ ಶಾಲಾ, ಕಾಲೇಜುಗಳಿಗೆ, ಕೆಲವರು ಬಾಡಿಗೆಗೆ ನೀಡಿದ್ದಾರೆ. ಅಂಗಡಿ ಮಳಿಗೆಗಳು, ಕ್ಯಾಂಟಿನ್‌ಗಳಿಗೆ ಬಾಡಿಗೆಗೆ ಕೊಟ್ಟಿದ್ದಾರೆ ಎಂದು ಆರೋಪಿಸಿದರು. ಸಿಎ ನಿವೇಶನಗಳನ್ನು 30 ವರ್ಷದ ಅವಧಿಗೆ ಮಂಜೂರು ಮಾಡಿದ್ದಾರೆ. 30 ವರ್ಷ ಅವಧಿ ಮುಗಿದ ನಂತರ ವಾಪಸ್ ತೆಗೆದುಕೊಂಡು ಬೇರೆಯವರಿಗೆ ನೀಡಿ, ರಿನೀವಲ್ ಮಾಡುವ ಪದ್ಧತಿಯನ್ನು ರದ್ದು ಮಾಡಬೇಕು. ಇದರಿಂದ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬಹುದು. ಬೇರೆಯವರಿಗೆ ಅವಕಾಶ ಸಿಗಲಿದೆ ಎಂದರು.

ಮೈಸೂರಿನಾದ್ಯಂತ ಕೆರೆ ಸ್ಥಳಗಳನ್ನು ಬಿಡದೆ ಒತ್ತುವರಿ ಮಾಡಿಕೊಂಡು ಬಿಲ್ಡಿಂಗ್ ಕಟ್ಟಿಕೊಂಡು ಬಾಡಿಗೆಗೆ ನೀಡಿದ್ದಾರೆ. ಕೆರೆ, ರಾಜಕಾಲುವೆ ಅಕ್ಕ–ಪಕ್ಕ ಖಾಸಗಿ ಸಂಸ್ಥೆಗಳಿಗೆ ನಿವೇಶನ ನೀಡಬಾರದು, ಒತ್ತುವರಿ ಮಾಡಿಕೊಳ್ಳುತ್ತಾರೆ. ಹಾಗಾಗಿ ಸರ್ಕಾರಿ ಸಂಸ್ಥೆಗಳಿಗೆ ಎಲ್ಲೋ ನಿವೇಶನ ಮಂಜೂರು ಮಾಡುವ ಬದಲು ಕೆರೆ, ರಾಜಕಾಲುವೆ ಅಕ್ಕ–ಪಕ್ಕದಲ್ಲಿ ನಿವೇಶನ ಮಂಜೂರು ಮಾಡಬೇಕು. ಇದರಿಂದ ಒತ್ತುವರಿ ತಪ್ಪಿಸಬಹುದು ಎಂದರು. ಸುದ್ದಿಗೋಷ್ಠಿಯಲ್ಲಿ ಸತೀಶ್, ಮಂಜುನಾಥ್, ಮಹದೇವ ಉಪಸ್ಥಿತರಿದ್ದರು.

ಎನ್.ಆರ್.ನಾಗೇಶ್‌ಗೆ ನಿಗಮ ಮಂಡಳಿಯಲ್ಲಿ ಅಧ್ಯಕ್ಷ ಸ್ಥಾನ ನೀಡುವಂತೆ ಸಿಎಂಗೆ ಮನವಿ



ಮೈಸೂರು ನಗರ ಸವಿತಾ ಸಮಾಜದ ನಗರಾಧ್ಯಕ್ಷ ಹರೀಶ್‌ರೆಡ್ಡಿ ಮಾತನಾಡಿದರು.

ಮೈಸೂರು, ಜು.9(ಜಿಎ)–ಕಾಂಗ್ರೆಸ್‌ನ ಮೈಸೂರು ನಗರ ಹಿಂದುಳಿದ ವರ್ಗಗಳ ಘಟಕದ ಅಧ್ಯಕ್ಷ ಎನ್.ಆರ್. ನಾಗೇಶ್‌ಗೆ ನಿಗಮ ಮಂಡಳಿ ಅಧ್ಯಕ್ಷರಾಗಿ ನೇಮಕ ಮಾಡುವಂತೆ ಮೈಸೂರು ನಗರ ಜಿಲ್ಲಾ ಸವಿತಾ ಸಮಾಜ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದೆ.



ಎನ್.ಆರ್.ನಾಗೇಶ್

ಮೈಸೂರು ಜಿಲ್ಲಾ ಪತ್ರಕರ್ತರ ಭವನ ದಲ್ಲಿ ಸುದ್ದಿಗೋಷ್ಠಿಯಲ್ಲಿ ಮೈಸೂರು ನಗರ ಜಿಲ್ಲಾ ಸವಿತಾ ಸಮಾಜದ ನಗರಾಧ್ಯಕ್ಷ ಹರೀಶ್ ರೆಡ್ಡಿ ಮಾತನಾಡಿ, ಎನ್.ಆರ್. ನಾಗೇಶ್ ಕಳೆದ 30 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಸಕ್ರಿಯ ಕಾರ್ಯಕರ್ತರಾಗಿ, ಪಕ್ಷದ ವಿವಿಧ ಸಮಿತಿ ಅಧ್ಯಕ್ಷರಾಗಿ, ನಗರ ಸಂಚಾಲಕರಾಗಿ, ಉಪಾಧ್ಯಕ್ಷರಾಗಿ ಹಾಗೂ ಹಾಲಿ ಮೈಸೂರು ನಗರ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ಘಟಕದ ಅಧ್ಯಕ್ಷರಾಗಿ ಸಕ್ರಿಯವಾಗಿ ಸೇವೆ ಸಲ್ಲಿಸುತ್ತಿದ್ದು, ಮತ್ತೊಂದೆಡೆ ಸವಿತಾ ಸಮಾಜ ತಾಲೂಕು, ಜಿಲ್ಲಾ, ಗೌರವಾಧ್ಯಕ್ಷ ಮತ್ತು ರಾಜ್ಯ ಉಪಾಧ್ಯಕ್ಷರಾಗಿ ಶೋಷಿತ ಸಮುದಾಯಗಳ ಸಾಮಾಜಿಕ ಪಿಡುಗುಗಳ ವಿರುದ್ಧ ಹೋರಾಟ ಮಾಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷ ಆಯ್ಕೆ ಮಾಡಿದ ಅಭ್ಯರ್ಥಿಗಳ ಪರವಾಗಿ ಗೆಲುವಿಗಾಗಿ ಸತತ ಸಕ್ರಿಯವಾಗಿ ಶ್ರಮಿಸಿದ್ದಾರೆ ಎಂದರು. ಕರ್ನಾಟಕ ಶೋಷಿತ ಸಮುದಾಯಗಳ ನಾಯಕರಾದ ಮುಖ್ಯಮಂತ್ರಿ ಸಿದ್ದರಾಮಯ್ಯ ನಮ್ಮ ಕೋರಿಕೆಯನ್ನು ಪರಿಗಣಿಸಿ ರಾಜ್ಯ ನಿಗಮ ಮಂಡಳಿಗಳ ಯಾವುದಾದರೂ ಒಂದು ನಿಗಮಕ್ಕೆ ನಾಗೇಶ್ ಅವರನ್ನು ಅಧ್ಯಕ್ಷರಾಗಿ ನೇಮಕ ಮಾಡುವ ಮೂಲಕ ಸವಿತಾ ಸಮಾಜದ ಸಂಘಟನೆ ಮಾಡಲು ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಿದರು.

ತಿ.ನರಸೀಪುರದ ಅಧ್ಯಕ್ಷ ನಾಗೇಂದ್ರ ಮಾತನಾಡಿ, ಇದುವರೆಗೂ ಹಳೇ ಮೈಸೂರು ಭಾಗದ ಸವಿತಾ ಸಮುದಾಯಕ್ಕೆ ಯಾವುದೇ ರಾಜಕೀಯ ಸ್ಥಾನಮಾನ ಸಿಕ್ಕಿಲ್ಲ. ನಾಗೇಶ್ ಅವರಿಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿದರೆ ಸಮಾಜದ ಸಂಘಟನೆ ಮೂಲಕ ಪಕ್ಷ ಸಂಘಟನೆಗೂ ಅನುಕೂಲವಾಗುತ್ತದೆ. ಅಲ್ಲದೆ ನೊಂದ ಸವಿತಾ ಸಮಾಜಕ್ಕೆ ನ್ಯಾಯ ಕೊಟ್ಟಂತಾಗುತ್ತದೆ ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಪುಟ್ಟರಾಜು, ನರಸಿಂಹ, ಗೌರೀಶ್, ಮಹದೇವ ಶೆಟ್ಟಿ, ನಟರಾಜ್, ಶ್ರೀನಿವಾಸ್, ಮುರಳೀಧರ್, ರಾಜೇಶ್, ಎಂ.ಎನ್.ಕೃಷ್ಣಪ್ಪ, ಭಾಸ್ಕರ್, ಎಸ್.ಕುಮಾರ್, ಮಹೇಶ್ ಇತರರಿದ್ದರು.

ವಿದ್ಯಾರ್ಥಿಗಳಿಗೆ ಪುಸ್ತಕ, ಲೇಖನಿ ಸಾಮಗ್ರಿ ವಿತರಣೆ



ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಎಸ್.ಪ್ರಕಾಶ್ ಪ್ರಿಯದರ್ಶನ್ ಸ್ನೇಹ ಬಳಗದ ವತಿಯಿಂದ ವಿದ್ಯಾರಣ್ಯಪುರಂನಲ್ಲಿರುವ ಸಾರ್ವಜನಿಕ ಸುಬ್ಬಣ್ಣ ಹಾಸ್ಟೆಲ್‌ನ ವಿದ್ಯಾರ್ಥಿಗಳಿಗೆ ಪುಸ್ತಕ, ಲೇಖನಿ ಸಾಮಗ್ರಿ, ಹಣ್ಣುಗಳನ್ನು ವಿತರಿಸಲಾಯಿತು. ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ರೋಟರಿ ಸೆಂಟ್ರಲ್ ನೂತನ ಅಧ್ಯಕ್ಷರಾಗಿ ಸುಬ್ರಹ್ಮಣ್ಯ ತಂತ್ರಿ ಆಯ್ಕೆ



ರೋಟರಿ ಸೆಂಟ್ರಲ್ ಮೈಸೂರಿನ 2024–25ನೇ ಸಾಲಿನ ಪದಗ್ರಹಣ ಸಮಾರಂಭ ನಡೆಯಿತು.

ಮೈಸೂರು,ಜು.9–ಮೈಸೂರು–ಬೆಂಗಳೂರು ರಸ್ತೆಯಲ್ಲಿರುವ ಖಾಸಗಿ ಹೋಟೆಲ್‌ನಲ್ಲಿ ರೋಟರಿ ಸೆಂಟ್ರಲ್ ಮೈಸೂರಿನ 2024–25ನೇ ಸಾಲಿನ ಪದಗ್ರಹಣ ಸಮಾರಂಭದಲ್ಲಿ ನೂತನ ಅಧ್ಯಕ್ಷರಾಗಿ ಸುಬ್ರಹ್ಮಣ್ಯ ಆರ್.ತಂತ್ರಿ, ಗೌರವಾಧ್ಯಕ್ಷರಾಗಿ ಸಮರ್ಥ್ ವೈದ್ಯ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ರಾಮಕೃಷ್ಣ ಆಶ್ರಮದ ಸ್ವಾಮಿ ಯುಕ್ತೇಶಾನಂದಜೀ ಮಹಾರಾಜ, ದುಡಿಮೆಯ ಅಲ್ಪ ಭಾಗವನ್ನು ಸಮಾಜ ಸೇವೆಗೆ ಮೀಸಲಿರಿಸುವ ಸಂಕಲ್ಪ ತೊಡಬೇಕು. ವಿಶ್ವದಲ್ಲೇ ಪೋಲಿಯೋ ನಿರ್ಮೂಲನೆಯಲ್ಲಿ ಪ್ರಮುಖ ಪಾತ್ರ ವಹಿಸಿರುವ ರೋಟರಿ ಕ್ಲಬ್, ಸಾಮಾಜಿಕ ಸೇವಾ ಕಾರ್ಯಗಳು ಶ್ಲಾಘನೀಯ ಎಂದು ಹೇಳಿದರು.

ನೂತನ ಅಧ್ಯಕ್ಷರಾಗಿ ಪದಗ್ರಹಣ ಮಾಡಿದ ನಂತರ ಮಾತನಾಡಿದ ಸುಬ್ರಹ್ಮಣ್ಯ ಆರ್ ತಂತ್ರಿ, ವಿಶ್ವದ ಲಕ್ಷಾಂತರ ರೋಟರಿ ಸದಸ್ಯರು ರೋಟರಿಗೆ ನೀಡುವ ಪ್ರತಿ ಪೈಸೆಯೂ ಸದ್ಬಳಕೆಯಾಗುತ್ತಿದ್ದು, ಸಮಾಜದ ವಿವಿಧ ಕಾರ್ಯಕ್ಕೆ ಉಪಯೋಗವಾಗುತ್ತಿದೆ. ರೋಟರಿ ಕ್ಲಬ್ ಮೂಲಕ ಸ್ನೇಹಿತರನ್ನು ಹೊಂದಬಹುದಾಗಿದ್ದು, ಅಂತರರಾಷ್ಟ್ರೀಯ ಸಂಸ್ಥೆ ಮೂಲಕ ಸೇವಾ ಕಾರ್ಯ ಕೈಗೊಳ್ಳಬಹುದಾಗಿದೆ. ಕಷ್ಟದಲ್ಲಿ ಇರುವವರಿಗೆ ಸಹಾಯ ಮಾಡಿದಾಗ ನಮಗೆ ಆತ್ಮತೃಪ್ತಿ ದೊರಕುತ್ತದೆ ಎಂದು ಹೇಳಿದರು.

ರೋಟರಿ ಪ್ರಧಾನ ಅಧಿಕಾರಿ ಸತೀಶ್ ಬೋಲಾರ್, ನಿಕಟ ಪೂರ್ವಾಧ್ಯಕ್ಷ ಎನ್ ಉಮೇಶ್, ರೋ ಸಹಾಯಕ ಗವರ್ನರ್ ಚೇತನ್ ವಿಶ್ವನಾಥ್, ನಿಕಟಪೂರ್ವ ಕಾರ್ಯದರ್ಶಿ ಪ್ರೇಮ್ ಸಾಗರ್, ಉಪಾಧ್ಯಕ್ಷ ವಿಜಯೇಂದ್ರ, ವಿವಿಧ ಹುದ್ದೆಯಲ್ಲಿ ಜವಾಬ್ದಾರಿಯಲ್ಲಿರುವ ಎ.ಆರ್.ರವೀಂದ್ರ ಭಟ್, ಆಂಟೋನಿ ಮೋಸೆಸ್, ಅನಿಲ್ ಪದಕಿ, ಗುರುಪ್ರಸಾದ್, ಸಚ್ಚಿದಾನಂದ ಮೂರ್ತಿ, ಜಯಪ್ರಕಾಶ್ ಎಂ.ಎಸ್., ಎಸ್.ಆರ್.ಸ್ವಾಮಿ, ದಿನೇಶ್, ಅರುಣ್, ಜ್ಯೋತಿ ಅಶೋಕ್, ರಜನಿ, ವಿವೇಕ್ ಹಾಗೂ ಇನ್ನಿತರರು ಹಾಜರಿದ್ದರು.

ಸಮಾಜ ಸೇವಕ ಪ್ರದೀಪ್ ಕೃಷ್ಣೇಗೌಡಗೆ ಯುವ ವಿಕಾಸಶ್ರೀ ಪ್ರಶಸ್ತಿ ಘೋಷಣೆ

ಮೈಸೂರು,ಜು.8–ಹೆಚ್.ಡಿ.ಕೋಟೆ ತಾಲೂಕು, ಹಂಪಾಪುರ ಹೋಬಳಿ, ಹೊಮ್ಮರಗಳ್ಳಿಯ ಪ್ರದೀಪ್ ಕೃಷ್ಣೇಗೌಡ ಅವರಿಗೆ ಸಮಾಜ ಸೇವಾ ಕಾರ್ಯಗಳನ್ನು ಪರಿಗಣಿಸಿ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ 'ಯುವ ವಿಕಾಸಶ್ರೀ' ಪ್ರಶಸ್ತಿ ಘೋಷಿಸಿದ್ದು, ಜು.12ರಂದು ದಿ. ಕೆ.ಹೆಚ್.ರಾಮಯ್ಯ ಅವರ ಜಯಂತ್ಯುತ್ಸವದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ವೇದಿಕೆ ಸಂಸ್ಥಾಪಕ ಅಧ್ಯಕ್ಷೆ ಯಮುನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಪ್ರದೀಪ್ ಕೃಷ್ಣೇಗೌಡ

ಕನ್ನಡಕ್ಕೆ ವಿಶ್ವ ಮಾನ್ಯತೆ ಸಿಗಬೇಕೆಂದು ಹಂಬಲಿಸಿದವರು ದೇಜಗೌ

ಸಾಹಿತಿ ಡಾ.ದೇ.ಜವರೇಗೌಡರ 110ನೇ ಜನ್ಮದಿನಾಚರಣೆಯಲ್ಲಿ ಡಾ.ವೈ.ಡಿ.ರಾಜಣ್ಣ



ಭೂಮಿಗಿರಿ ಪ್ರಕಾಶನದ ವತಿಯಿಂದ ಸಾಹಿತಿ ನಾಡೋಜ ದಿವಂಗತ ದೇಜಗೌ ಅವರ ಜನ್ಮದಿನ ಆಚರಿಸಲಾಯಿತು. ಮೈಸೂರು ಕೈಗಾರಿಕಾ–ವಾಣಿಜ್ಯ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ಡಾ.ರವೀಶ್, ಮೈಸೂರು ಕಸಾಪ ಮಾಜಿ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ, ಎನ್.ಬೆಟ್ಟೇಗೌಡ, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ರಘುರಾಮ್ ವಾಜಪೇಯಿ ಇನ್ನಿತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಜು. 9–ಕನ್ನಡ ಸಂಸ್ಕೃತಿ, ಇತಿಹಾಸ, ಭವ್ಯ ಪರಂಪರೆಯಿಂದ ಕೂಡಿದೆ. ಆ ಅಭಿಮಾನವೇ ಕನ್ನಡಿಗರು ವಿಶ್ವದಲ್ಲಿ ಘನತೆಯಿಂದ ಬದುಕು ಸಾಗಿಸುವಂತಾಗಬೇಕು ಎಂದು ಹಂಬಲಿಸಿದವರು ಡಾ.ದೇ.ಜವರೇಗೌಡರು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮಾಜಿ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ ಅಭಿಪ್ರಾಯಪಟ್ಟರು.

ಅಖಿಲ ಕರ್ನಾಟಕ ಒಕ್ಕಲಿಗರ ಮಹಾಸಭಾ ವತಿಯಿಂದ ಕನ್ನಡದ ಖ್ಯಾತ ಸಾಹಿತಿ ಡಾ.ದೇ.ಜವರೇಗೌಡರ 110ನೇ ಜನ್ಮ ದಿನಾಚರಣೆ ಪ್ರಯುಕ್ತ, ದೇಜಗೌ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಂತರ ಮಾತನಾಡಿದ ಅವರು, ದೇಜಗೌ ವಿದ್ವತ್ತು, ವಿಚಾರ, ಆಡಳಿತಗಾರನ ಸಂಕಲ್ಪ ಶಕ್ತಿ ಆಗಿದ್ದರು. ಶ್ರೇಷ್ಠ ಗದ್ಯ ಸಾಹಿತಿಯಾಗಿ ಮಹತ್ವದ ಸಾಹಿತ್ಯ ಕೃತಿಗಳನ್ನು ಕೊಟ್ಟವರು. ಟಾಲ್‌ಸ್ಟಾಯ್ ಅವರ ವಾರ್ ಅಂಡ್ ಪೀಸ್ ಕೃತಿಯನ್ನು 'ಯುದ್ಧ ಮತ್ತು ಶಾಂತಿ' ಮೂಲಕ ಶ್ರೇಷ್ಠ ಅನುವಾದಕರಾಗಿ ತಮ್ಮ ಸಾಮರ್ಥ್ಯ ತೋರಿಸಿದವರು. ಕುವೆಂಪು ಕನವರಿಸಿದ ಕನ್ನಡವನ್ನು ಮೈಸೂರು ವಿವಿ ಕುಲಪತಿಗಳಾಗಿ ಅನುಷ್ಠಾನ ಮಾಡಿದರು.

ಕುಲಪತಿಗಳಾಗಿ ಪ್ರಸಾರಂಗ ವಿಶ್ವಕೋಶ ಹಾಗೂ ಜನಪದ ಕ್ಷೇತ್ರದಲ್ಲಿ ಈ ನೆಲದ ಮೌಖಿಕ ಸಾಹಿತ್ಯಕ್ಕೆ ದೊಡ್ಡ ಶಕ್ತಿಯಾಗಿ ನಿಂತರು. ಪಥ್ಯವಾಗಿ ಜನಪದವನ್ನು ಸೇರ್ಪಡೆ ಮಾಡಿ ಕನ್ನಡ ಪರಂಪರೆ ಭವ್ಯವನ್ನು ಸಾರಿದರು. ಶಾಸ್ತ್ರೀಯ ಸ್ಥಾನಮಾನ ದೊರೆಯಲಿಕ್ಕೆ ಕಾರಣಕರ್ತರು. ಈ ನೆಲೆ ಹಿನ್ನೆಲೆಯಲ್ಲಿ ಕನ್ನಡ ವಿಶ್ವ ಭಾಷೆಯ ಮುಂಚೂಣಿಯಲ್ಲಿ ನಿಲ್ಲಬೇಕು ಎಂದು ಆಸೆ ಪಟ್ಟವರು ದೇ.ಜ.ಗೌ ಎಂದು ಸ್ಮರಿಸಿದರು.

ಸಮಾಜ ಸೇವಕ ರಘುರಾಮ್ ವಾಜಪೇಯಿ ಮಾತನಾಡಿ, ದೇ.ಜ.ಗೌ. ಸಾವಿರಾರು ವಿದ್ಯಾರ್ಥಿಗಳಿಗೆ ಕನ್ನಡ ದೀಕ್ಷೆ ನೀಡಿದವರು. ಅವರ ಉಸಿರಿನಲ್ಲೂ ಕನ್ನಡವೇ ಇದೆಯೇನೋ ಎಂಬಂತೆ ಬದುಕಿನ ಕೊನೆಯವರೆಗೂ ಕನ್ನಡವನ್ನೇ ಉಸಿರಾಡುತ್ತ ಎಲ್ಲರಲ್ಲೂ ಅದನ್ನೇ ನಿರೀಕ್ಷಿಸುತ್ತಿದ್ದರು. ಕನ್ನಡಕ್ಕೆ ಎಲ್ಲೇ ಅಡೆ–ತಡೆ, ಸಮಸ್ಯೆ ಬಂದರೆ ಅಲ್ಲಿ ಪ್ರತಿಭಟನೆಗೂ ಮುಂದಾಗುತ್ತಿದ್ದರು ಎಂದು ಹೇಳಿದರು.

ಖ್ಯಾತ ಮನೋವೈದ್ಯ ಡಾ. ಬಿ.ಎನ್. ರವೀಶ್ ಮಾತನಾಡಿ, ದೇಜಗೌರವರು ಕುವೆಂಪುರವರ ಮಾನಸ ಪುತ್ರರಾಗಿದ್ದರು. ಅವರ ಸಾಹಿತ್ಯ ಕ್ಷೇತ್ರ ಕರ್ನಾಟಕದಗಲಕ್ಕೂ ಪಸರಿಸಿದೆ ಎಂದರು. ಮಹಾಸಭಾ ಸಂಸ್ಥಾಪಕ ಅಧ್ಯಕ್ಷ ಎನ್.ಬೆಟ್ಟೇಗೌಡ, ಗೌರವ ಸಲಹೆಗಾರರಾದ ಬಿ.ಸಿ.ಲಿಂಗರಾಜು, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್‌ನ ನಿರ್ದೇಶಕ ಪಡುವಾರಳ್ಳಿ ಎಂ.ರಾಮಕೃಷ್ಣ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಬುಧವಾರ 10 ಜುಲೈ 2024

ರೌಡಿಶೀಟರ್‌ಗಳ ಬಗ್ಗೆ ಹೆಚ್ಚಿನ ಗಮನ ಹರಿಸಿ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೂಚನೆ



ಶ್ರೀರಂಗಪಟ್ಟಣ ಪೊಲೀಸ್ ಠಾಣೆಗೆ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಭೇಟಿ ನೀಡಿ, ಪರಿಶೀಲಿಸಿದರು.

ಶ್ರೀರಂಗಪಟ್ಟಣ, ಜು.9– ಶ್ರೀರಂಗಪಟ್ಟಣ ಟೌನ್ ಹಾಗೂ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ರೌಡಿಶೀಟರ್‌ಗಳ ಚಲನವಲನಗಳ ಬಗ್ಗೆ ಹೆಚ್ಚು ಗಮನಹರಿಸುವಂತೆ ಮಂಡ್ಯ ಜಿಲ್ಲಾ ನೂತನ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಂಗಳವಾರ ಟೌನ್ ಹಾಗೂ ಗ್ರಾಮಾಂತರ ಪೊಲೀಸ್ ಠಾಣೆಗೆ ಭೇಟಿ ನೀಡಿ, ಠಾಣಾ ಸ್ವಚ್ಛತೆ, ವಾಹನಗಳ ವಿಲೇವಾರಿ, ರಿಜಿಸ್ಟರ್ ಪರಿಶೀಲಿಸಿ, ಕಾನೂನು ಸುವ್ಯವಸ್ಥೆ ಬಗ್ಗೆ ಚರ್ಚೆ ನಡೆಸಿದರು.

ಶ್ರೀರಂಗಪಟ್ಟಣ ಪ್ರವಾಸಿತಾಣವಾಗಿದ್ದು, ಅತೀ ಹೆಚ್ಚು ಪ್ರವಾಸಿಗರು ಆಗಮಿಸಲಿದ್ದಾರೆ. ಪ್ರವಾಸಿ ತಾಣಗಳಲ್ಲಿ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಎಚ್ಚರ ವಹಿಸಬೇಕು. ಜೊತೆಗೆ ಹೆದ್ದಾರಿಯಲ್ಲಿ ನಡೆಯುವ ಅಪಘಾತಗಳ ಬಗ್ಗೆ ಮಾಹಿತಿ, ಪ್ರಮುಖವಾಗಿ ಹನುಮ ಸಂಕೀರ್ತನಾ ಯಾತ್ರೆ ವೇಳೆ ಹಿಂದೂ ಮುಸ್ಲೀಂ ವಿಚಾರವಾಗಿ ಸಣ್ಣ ಪುಟ್ಟ ಘರ್ಷಣೆಗಳಿಂದ ಹೆಸರಾಗಿದೆ, ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರದಿಂದ ಕೆಲಸ ನಿರ್ವಹಿಸುವಂತೆ ಸೂಚನೆ ನೀಡಿದರು. ಈ ವೇಳೆ ಅಡಿಷನಲ್ ಎಸ್ಪಿ ತಿಮ್ಮಯ್ಯ, ಇನ್ಸ್‌ಪೆಕ್ಟರ್‌ಗಳಾದ ಪ್ರಕಾಶ್, ಬಿ.ಜಿ ಕುಮಾರ್, ಸಿಬ್ಬಂದಿಗಳು ಇದ್ದರು.

ವಾಲ್ಮೀಕಿ, ಮೈಸೂರು ಮುಡಾ ಹಗರಣ: ಸಿಎಂ ರಾಜೀನಾಮೆಗೆ ಆಗ್ರಹಿಸಿ

ಜು.12, ಮೈಸೂರು ಮುಡಾ ಮುಂದೆ ಬಿಜೆಪಿ ಪ್ರತಿಭಟನೆ



ಸುದ್ದಿಗೋಷ್ಠಿಯಲ್ಲಿ ವಿಧಾನಪರಿಷತ್ ಮಾಜಿ ಸದಸ್ಯ ಅಶ್ವತ್ಥ ನಾರಾಯಣ ಮಾತನಾಡಿದರು.

ಮಂಡ್ಯ, ಜು.9– ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದಲ್ಲಿ ನಡೆದಿರುವ ವಾಲ್ಮೀಕಿ ಅಭಿವೃದ್ಧಿ ನಿಗಮ, ಮೈಸೂರಿನ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ವತಿಯಿಂದ ಜು.12ರಂದು ಮೈಸೂರಿನ ಮುಡಾ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಅಶ್ವತ್ಥ ನಾರಾಯಣ ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ಬಂದ 100 ದಿನಗಳಲ್ಲೇ ವ್ಯಾಪಕ ಭ್ರಷ್ಟಾಚಾರದಲ್ಲಿ ಮುಳುಗಿ ಹೋಯಿತು. ಇದಕ್ಕೆ ಸಾಕ್ಷಿ ಎಂಬಂತೆ ಶಾಸಕ ಬಸವರಾಜ ರಾಯರೆಡ್ಡಿ ಅವರು ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸ ಮಾಡಲಾಗುತ್ತಿಲ್ಲ. ನಾವು ಜನರಿಗೆ ಮುಖ ತೋರಿಸಲು ಆಗುತ್ತಿಲ್ಲ. ಶಾಸಕರ ಮಾತಿಗೆ ಕಿಮ್ಮತ್ತಿಲ್ಲ. ಸಚಿವರು ತಮ್ಮ ಖಾತೆಯಲ್ಲಿ ಮುಳುಗಿದ್ದಾರೆ. ರಾಜ್ಯ ಪ್ರವಾಸ ಮಾಡುತ್ತಿಲ್ಲ ಎಂದು ಆರೋಪಿಸಿ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದರು. ಅವರನ್ನು ಸುಮ್ಮನಿರಿಸಲು ಆರ್ಥಿಕ ಸಲಹೆಗಾರರನ್ನಾಗಿ ನೇಮಕ ಮಾಡಿಕೊಳ್ಳಲಾಯಿತು ಎಂದು ಹೇಳಿದರು.

ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಕುರ್ಚಿ ಉಳಿಸಿಕೊಳ್ಳಲು ಬೆಂಬಲಿಗರನ್ನು ಎತ್ತಿಕಟ್ಟಿ ಇಲ್ಲದ ಗೊಂದಲ ಸೃಷ್ಟಿಸಿ ಸರ್ಕಾರದ ವೈಫಲ್ಯಕ್ಕೆ ಕಾರಣರಾದರು. ಮಾ. 31ರಂದು ಲೋಕಸಭಾ ಚುನಾವಣೆ ಸಂದರ್ಭದಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಪದ್ಮನಾಭ ಅವರನ್ನು ಶಾಂಗ್ರಿಲಾ ಹೋಟೇಲ್‌ಗೆ ಕರೆಸಿಕೊಂಡು ಅಭಿವೃದ್ಧಿ ನಿಗಮದ ಬ್ಯಾಂಕ್ ಖಾತೆಯನ್ನು ಬೆಂಗಳೂರಿನ ಎಂ.ಜಿ. ರಸ್ತೆಯಲ್ಲಿರುವ ಬ್ಯಾಂಕ್‌ಗೆ ವರ್ಗಾಯಿಸುವಂತೆ ಒತ್ತಡ ಹೇರಿದ್ದರು. ನಂತರ ಅಲ್ಲಿಂದ ಹೈದರಾಬಾದ್‌ಗೆ ಹಣ ವರ್ಗಾವಣೆಯಾಗಿರುವುದು ಬೆಳಕಿಗೆ ಬಂದಿದೆ ಎಂದರು.

ರಾಜ್ಯದಲ್ಲಿ ಮೂರು ಎಸ್‌ಐಟಿಗಳನ್ನು ರಚಿಸಿದ್ದು, ಅದರಲ್ಲಿ ಪ್ರಜ್ವಲ್ ರೇವಣ್ಣ, ದರ್ಶನ್ ಪ್ರಕರಣ ಸರಿಯಾದ ರೀತಿಯಲ್ಲಿ ನಡೆಯುತ್ತಿದೆ. ಆದರೆ, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ತನಿಖೆ ಮಾತ್ರ ಸರಿಯಾಗಿ ನಡೆಯುತ್ತಿಲ್ಲ. ಇದಕ್ಕೆ ಕಾರಣರಾದ ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಅವರನ್ನು ಮತ್ತು ಶಾಸಕ ಬಸವರಾಜ ದದ್ದಲ್ ಅವರ ವಿರುದ್ಧ ಎಫ್‌ಐಆರ್ ಹಾಕಿಲ್ಲ ಎಂದು ಆರೋಪಿಸಿದರು.

ಬೆಂಗಳೂರಿನ ಅರ್ಕಾವತಿ ಬಡಾವಣೆಯಲ್ಲೂ ವ್ಯಾಪಕ ಭ್ರಷ್ಟಾಚಾರ ನಡೆಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅದನ್ನು ಮುಚ್ಚಿ ಹಾಕುವಲ್ಲಿ ಯಶಸ್ವಿಯಾಗಿದ್ದರು. ಮೈಸೂರು ಮುಡಾ ನಿವೇಶನ ಹಗರಣದಲ್ಲಿ ಸಿದ್ದರಾಮಯ್ಯ ಅವರು ಉಪ ಮುಖ್ಯಮಂತ್ರಿ, ವಿರೋಧ ಪಕ್ಷದ ನಾಯಕ, ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲೇ ಮಾಡಿದ್ದಾರೆ ಎಂದು ಆರೋಪಿಸಿದರು. ಇತ್ತೀಚೆಗೆ ಪೌರಾಡಳಿತ ಸಚಿವ ಭೈರತಿ ಸುರೇಶ್ ಮುಡಾಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಕಡತಗಳು ನಾಪತ್ತೆಯಾಗಿವೆ. ಅವುಗಳನ್ನು ಅವರೇ ವಿಶೇಷ ಹೆಲಿಕ್ಯಾಪ್ಟರ್‌ನಲ್ಲಿ ಬೆಂಗಳೂರಿಗೆ ಕೊಂಡೊಯ್ದಿದ್ದಾರೆ. ಈ ಎಲ್ಲ ಭ್ರಷ್ಟಾಚಾರವನ್ನು ಖಂಡಿಸಿ ಜು. 12ರಂದು ಬೃಹತ್ ಪ್ರತಿಭಟನೆ ಮಾಡಲಾಗುವುದು ಎಂದು ಹೇಳಿದರು. ಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಎನ್.ಎಸ್. ಇಂದ್ರೇಶ್, ಮಾಜಿ ಅಧ್ಯಕ್ಷ ಸಿ.ಪಿ. ಉಮೇಶ್, ರಾಜ್ಯ ಕಾರ್ಯದರ್ಶಿ ಶರಣು ತಳೀಕೆರೆ, ಮುಖಂಡರಾದ ಡಾ.ಸಿದ್ದರಾಮಯ್ಯ, ಎಸ್.ಪಿ.ಸ್ವಾಮಿ, ವಸಂತ ಕುಮಾರ್, ಯುವ ಘಟಕದ ಅಧ್ಯಕ್ಷ ರಘು ಇತರರಿದ್ದರು.

ಗ್ರಾಮ ಒನ್ ಕೇಂದ್ರ ತೆರೆಯಲು ಅರ್ಜಿ ಆಹ್ವಾನ

ಮಂಡ್ಯ, ಜು.9– ಗ್ರಾಮ ಒನ್ ಕೇಂದ್ರಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಲುವಾಗಿ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಒನ್ ಕೇಂದ್ರಗಳನ್ನು ತೆರೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜುಲೈ 15 ಕೊನೆ ದಿನವಾಗಿದೆ. ಈ ಯೋಜನೆಯನ್ನು ಈಗಾಗಲೇ ಜಾರಿಗೊಳಿಸಿ ಯಶಸ್ವಿಯಾಗಿದ್ದು, ಸರ್ಕಾರವು ಈಗ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ "ಗ್ರಾಮ ಒನ್" ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಯೋಜನೆಯನ್ನು ವಿಸ್ತರಿಸಿದೆ. ಅರ್ಜಿಯನ್ನು https://kal-mys.gramaone.karnataka.gov.in/index.php/applicant-registration-initial-step ವೆಬ್‌ಸೈಟ್ ಮೂಲಕ ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ದ್ಯಾಪೇಗೌಡ ನಿಧನ



ಭಾರತೀನಗರ, ಜು.9– ಇಲ್ಲಿಗೆ ಸಮೀಪದ ಅಣ್ಣೂರು ಗ್ರಾಮದ ಜೆಡಿಎಸ್ ಹಿರಿಯ ಮುಖಂಡ ದ್ಯಾಪೇಗೌಡ (68) ಅನಾರೋಗ್ಯದಿಂದ ಮಂಗಳವಾರ ನಿಧನಗೊಂಡಿದ್ದಾರೆ.

ಮೃತರು ಪತ್ನಿ ರತ್ನಮ್ಮ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಅಂತ್ಯಸಂಸ್ಕಾರ ಸ್ವಗ್ರಾಮ ಅಣ್ಣೂರು ಗ್ರಾಮದ ತಮ್ಮ ಜಮೀನಿನಲ್ಲಿ ಜರುಗಿತು.

ಪಾಪಶೆಟ್ಟಿ



ಕೆಆರ್.ಪೇಟೆ: ತಾಲೂಕಿನ ಬೂಕನಕೆರೆ ಗ್ರಾಮದ ಶಿವಜ್ಯೋತಿ ಗಾಣಿಗ ಸಮಾಜದ ಹಿರಿಯ ಮುಖಂಡ ತಿಮ್ಮಶೆಟ್ಟಿ ಉರುಫ್ ಪಾಪಶೆಟ್ಟಿ (90) ಮಂಗಳವಾರ ಮುಂಜಾನೆ ನಿಧನರಾದರು. ಮೃತರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಸ್ವಾಮಿ ಸೇರಿದಂತೆ ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಧ್ಯಾಹ್ನ ಸ್ವಗ್ರಾಮದಲ್ಲಿ ನಡೆಯಿತು.

ಕ್ರೀಡೆ, ಚಿತ್ರಕಲೆ ಹೇಳಿಕೊಡುವ ನೆಪದಲ್ಲಿ ಲೈಂಗಿಕ ಕಿರುಕುಳ

ಪೋಕ್ಸೋ ಕಾಯ್ದೆಯಡಿ ಶಾಲೆಯ ಹಳೆಯ ವಿದ್ಯಾರ್ಥಿ ಬಂಧನ

ಹೆಣ್ಣುಮಕ್ಕಳ ಅರೆನಗ್ನ ಫೋಟೋ ತೆಗೆದು ಬ್ಲಾಕ್‌ಮೇಲ್ ಮಾಡಿ ಲೈಂಗಿಕ ದೌರ್ಜನ್ಯ

ಪಾಂಡವಪುರ/ಮೇಲುಕೋಟೆ, ಜು.9– ಕ್ರೀಡೆ, ಚಿತ್ರಕಲೆ ತರಬೇತಿ ನೀಡುವ ನೆಪದಲ್ಲಿ ಪ್ರೌಢಶಾಲೆಯ ಅಪ್ರಾಪ್ತ ಬಾಲಕಿಯರಿಗೆ ಲೈಂಗಿಕ ಕಿರುಕುಳ ನೀಡುತ್ತಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಪಾಂಡವಪುರ ತಾಲೂಕಿನ ಅಮೃತಿ ಗ್ರಾಮದ ಯೋಗೇಶ್ ಆಲಿಯಾಸ್ ಯೋಗಿ ಎಂಬಾತನೆ ಬಂಧಿತ ಆರೋಪಿ.

ತಾಲೂಕಿನ ಜಕ್ಕನಹಳ್ಳಿ ಸರಕಾರಿ ಪ್ರೌಢಶಾಲೆ ಹಳೆಯ ವಿದ್ಯಾರ್ಥಿಯಾದ ಆರೋಪಿ ಯೋಗಿ ಸ್ವಯಂಸೇವಕನಾಗಿ ಅದೇ ಶಾಲೆಯ ವಿದ್ಯಾರ್ಥಿಗಳಿಗೆ ಕ್ರೀಡೆ ಮತ್ತು ಚಿತ್ರಕಲೆಗಳನ್ನು ಹೇಳಿಕೊಡುತ್ತಿದ್ದ ಎನ್ನಲಾಗಿದ್ದು, ತನ್ನ ಹುದ್ದೆಯನ್ನೇ ಬಳಸಿಕೊಂಡು ಅಪ್ರಾಪ್ತ ವಿದ್ಯಾರ್ಥಿನಿಯರಿಗೆ ಅರೆನಗ್ನ ಫೋಟೋಗಳನ್ನು ತೆಗೆದು ಬ್ಲಾಕ್‌ಮೇಲ್ ಮಾಡಿ ಲೈಂಗಿಕ ಕಿರುಕುಳ ನೀಡುತ್ತಿದ್ದ. ಆರೋಪಿಯ ಮೃಗೀಯ ವರ್ತನೆಯಿಂದ ಬೇಸತ್ತ ಶಾಲಾ ವಿದ್ಯಾರ್ಥಿಗಳು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳಿಗೆ ಆರೋಪಿ ನೀಡುತ್ತಿದ್ದ ಕಿರುಕುಳದ ಬಗ್ಗೆ ಎಳೆ ಎಳೆಯಾಗಿ ವಿವರಿಸಿ ಪತ್ರಬರೆದಿದ್ದಾರೆ.



ಯೋಗೇಶ್

ಈ ಬಗ್ಗೆ ಪರಿಶೀಲನೆ ನಡೆಸಿದ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಎಸ್.ಎಂ.ಶೈಲಜಾ ಅವರು ಪ್ರಕರಣ ಸಂಬಂಧ ಪೊಲೀಸರಿಗೆ ದೂರು ನೀಡಿದ ಹಿನ್ನೆಲೆಯಲ್ಲಿ ಮೇಲುಕೋಟೆ ಪೊಲೀಸರು ಆರೋಪಿ ಯೋಗೇಶ್‌ನನ್ನು ಜು.1ರಂದು ಬಂಧಿಸಿ ಪೋಕ್ಸೋ ಕಾಯ್ದೆಯಡಿ ದೂರು ದಾಖಲಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ದೂರಿನಲ್ಲಿ ಏನಿದೆ: ನಮಗೆ ಕ್ರೀಡೆ ಮತ್ತು ಚಿತ್ರಕಲೆಯಲ್ಲಿ ಆಸಕ್ತಿ ಇರುವ ಕಾರಣ ಆರೋಪಿ ಯೋಗಿಯನ್ನು ಅಣ್ಣನೆಂದು ಭಾವಿಸಿ ಕಲಿಯುತ್ತಿದ್ದೆವು. ಆದರೆ ಆತ ನಮಗೆ ಮೋಸ ಮಾಡಿದ. ಕ್ರೀಡಾ ಕೊಠಡಿಯಲ್ಲಿ ರಾತ್ರಿವರೆಗೂ ಇರುತ್ತಿದ್ದ. ನಾವು ಬಟ್ಟೆ ಬದಲಾಯಿಸುವಾಗ ಮತ್ತಿತರ ಸಂದರ್ಭಗಳಲ್ಲಿ ನಮ್ಮ ಅರೆನಗ್ನತೆಯ ಫೋಟೋಗಳನ್ನು ಕ್ಲಿಕ್ಕಿಸಿ ಅದನ್ನೇ ಮುಂದಿಟ್ಟುಕೊಂಡು ಬೆದರಿಸಿ ಲೈಂಗಿಕ ಕಿರುಕುಳ ನೀಡುತ್ತಿದ್ದ.

ಇದಕ್ಕೆ ಒಪ್ಪದಿದ್ದರೆ ನಮ್ಮ ಪಾಲಕರ ವ್ಯಾಟ್ಸಪ್ ಗ್ರೂಪ್‌ಗಳಿಗೆ ಫೋಟೋಗಳನ್ನು ಕಳುಹಿಸುವುದಾಗಿ ಬೆದರಿಕೆ ಒಡ್ಡುತ್ತಿದ್ದ. ಇದರಿಂದ ನಾವು ಮಾನಸಿಕವಾಗಿ ಅನುಭವಿಸಿದ ನೋವು ಹೇಳತೀರದು. ಕೆಲವೊಮ್ಮೆ ಆತ್ಮಹತ್ಯೆ ಮಾಡಿಕೊಳ್ಳಬೇಕು ಎಂಬ ನಿರ್ಧಾರಕ್ಕೂ ಬಂದಿದ್ದೇವು. ಅವನ ವರ್ತನೆಯಿಂದ ಕೆಲವೊಮ್ಮೆ ಮೂತ್ರ ವಿಸರ್ಜನೆ ಮಾಡಲು ಅಸಾಧ್ಯವಾದಂತಹ ನೋವು ಸಹಿಸಿಕೊಂಡಿದ್ದೇವೆ ಎಂದು ಪೊಲೀಸರಿಗೆ ನೀಡಿರುವ ದೂರಿನಲ್ಲಿ ನೊಂದ ನಾಲ್ವರು ವಿದ್ಯಾರ್ಥಿಗಳು ತಮ್ಮ ಹೇಳಿಕೆ ದಾಖಲಿಸಿದ್ದಾರೆ. ಸಮಾಜ ಸೇವಕನಂತೆ ಮುಖವಾಡ ಹಾಕಿಕೊಂಡು ಜೇನುಗೂಡು ಫೌಂಡೇಷನ್ ಹೆಸರಿನಲ್ಲಿ ಚಿತ್ರಕಲೆ ಕಲಿಸುತ್ತಿದ್ದು, ರಾತ್ರಿ ಸಮಯದಲ್ಲಿ ಚಿತ್ರಕಲೆ ಕಲಿಯಲು ಹೋದಾಗ ನಮ್ಮೆಲ್ಲರ ಜತೆ ಕೆಟ್ಟದಾಗಿ ವರ್ತಿಸುತ್ತಾನೆ ಎಂದು ದೂರಲಾಗಿದೆ. ಅಮೃತಿ ಗ್ರಾಮದ ವಿದ್ಯಾರ್ಥಿನಿ ನೀಡಿರುವ ಹೇಳಿಕೆಯಲ್ಲಿ ನನಗೆ ಕಣ್ಣಿನ ಸಮಸ್ಯೆ ಇದ್ದುದರಿಂದ ರಸ್ತೆ ದಾಟಲು ಕಷ್ಟವಾಗುತ್ತಿತ್ತು. ಆರೋಪಿ ಯೋಗಿ ನಮ್ಮ ಗ್ರಾಮದವರೇ ಆಗಿದ್ದರಿಂದ ಪರಿಚಯವಾಗಿ ಗ್ರಾಮಕ್ಕೆ ಹಾಗಾಗ್ಗೆ ಡ್ರಾಪ್ ಕೊಡುತ್ತಿದ್ದರು. ಒಂದು ದಿನ ಡ್ರಾಪ್ ಕೊಡುವಾಗ ತಿನ್ನಲು ಐಸ್‌ಕ್ರೀಂ ಕೊಟ್ಟರು. ತಿಂದ ಕೆಲವೇ ನಿಮಿಷಗಳಲ್ಲಿ ನಿದ್ದೆ ಆವರಿಸಿತ್ತು. ಎದ್ದು ನೋಡಿದರೆ ಕ್ರೀಡಾ ಕೊಠಡಿಯಲ್ಲಿ ಮಲಗಿದ್ದೆ. ಬಟ್ಟೆಗಳು ಅಸ್ತವ್ಯಸ್ತವಾಗಿ ಲೈಂಗಿಕ ದೌರ್ಜನ್ಯವಾಗಿರುವ ಅನುಭವವಾಗಿತ್ತು ಎಂದು ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಮೇಲುಕೋಟೆ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.

ಮಂಡ್ಯದಲ್ಲಿ ಪೊಲೀಸ್ ವ್ಯವಸ್ಥೆಗೆ ಬಲ

ಮಂಡ್ಯ, ಜು.9– ನಾಗರಿಕರಿಗೆ ಸೂಕ್ತ ಸ್ಪಂದನೆ ಸಿಗುವಂತೆ ಜಿಲ್ಲೆಯ ಪೊಲೀಸ್ ವ್ಯವಸ್ಥೆ ಬಲಪಡಿಸಲಾಗುವುದು ಎಂದು ನೂತನ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಭರವಸೆ ನೀಡಿದರು.



ಪೊಲೀಸ್ ವ್ಯವಸ್ಥೆಯನ್ನು ಹೇಗೆ ಬಲಪಡಿಸಬೇಕು ಎಂಬುದಕ್ಕೆ ಯೋಜನೆ ರೂಪಿಸಲಾಗುತ್ತಿದೆ. ಪೊಲೀಸ್ ಠಾಣೆಗೆ ಬಂದ ನಾಗರಿಕರಿಗೆ ಸೂಕ್ತ ಸ್ಪಂದನೆ ಸಿಗಬೇಕು. ಪೊಲೀಸ್ ಠಾಣೆಗೆ ಬಂದವರಿಗೆ ಸರಿಯಾದ ಗೌರವ, ಮಾಹಿತಿ ಸಿಗುತ್ತಿಲ್ಲ. ದೂರು ನೀಡಲು ಬಂದರೆ ದೂರು ದಾಖಲಿಸುವುದಿಲ್ಲ, ಎಫ್‌ಐಆರ್ ಮಾಡುವುದಿಲ್ಲ ಎಂಬ ಬಗ್ಗೆ ದೂರುಗಳಿವೆ. ಇದನ್ನು ಹೋಗಲಾಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ನಗರದ ತಮ್ಮ ಕಚೇರಿಯಲ್ಲಿ ಮಾಧ್ಯಮ ಸಂವಾದದಲ್ಲಿ ಮಾತನಾಡಿದ ಅವರು, ಈ ಹಿಂದೆ ಜಿಲ್ಲೆಯಲ್ಲಿ ಹಲವು ಅಧಿಕಾರಿಗಳು ಉತ್ತಮವಾಗಿ ಕೆಲಸ ಮಾಡಿದ್ದಾರೆ. ಅದರಂತೆ ತಾವು ಮುಂದುವರಿಸಿಕೊಂಡು ಹೋಗುತ್ತೇನೆ. ಇತ್ತೀಚೆಗೆ ಜುಲೈ 1ರಿಂದ ಹೊಸದಾಗಿ ಜಾರಿಗೆ ಬಂದಿರುವ ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಹಾಗೂ ಭಾರತೀಯ ಸಾಕ್ಷ್ಯ ಅಧಿನಿಯಮ ಪ್ರಕಾರ ಕೇಸುಗಳನ್ನು ದಾಖಲಿಸಬೇಕಾದ ಅಗತ್ಯವಿದ್ದು, ಪೊಲೀಸ್ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸುವಂತೆ ಸೂಚಿಸಿದ್ದೇನೆ. ಪ್ರಥಮ ವರ್ತಮಾನ ವರದಿಯನ್ನು (ಎಫ್‌ಆರ್‌ಐ) ಸರಿಯಾದ ಸಮಯಕ್ಕೆ, ಸರಿಯಾದ ಕ್ರಮದಲ್ಲಿ, ಸೂಕ್ತ ಕಲಂಗಳನ್ನು ಅಳವಡಿಸಿ ದಾಖಲು ಮಾಡಬೇಕು ಎಂದರು. ಜಿಲ್ಲೆಯಲ್ಲಿ ರೌಡಿಸಂ, ಕಾನೂನು ಬಾಹಿರ ಕೃತ್ಯ ನಡೆಸುವವರ ಮೇಲೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ಮಾದಕ ವಸ್ತುಗಳ ಸೇವನೆ, ಸಾಗಣೆ, ವಿತರಣೆ, ಜೂಜು, ವೇಶ್ಯಾವಾಟಿಕೆ ಮುಂತಾದ ಚಟುವಟಿಕೆಗಳು ನಡೆಯಲು ಅವಕಾಶ ನೀಡುವುದಿಲ್ಲ. ಇದರ ಜೊತೆಗೆ ಮಾದಕ ವಸ್ತುಗಳ ಸೇವನೆ ಬಹಿಷ್ಕರಿಸುವ ಬಗ್ಗೆ ಶಾಲಾ–ಕಾಲೇಜುಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ತಾವು ಹಿಂದೆ ಕಾರ್ಯನಿರ್ವಹಿಸಿದ ಸ್ಥಳಗಳ ಬಗ್ಗೆ ಸಂಕ್ಷಿಪ್ತ ಮಾಹಿತಿ ನೀಡಿದರು. ಸುದ್ದಿಗೋಷ್ಠಿಯಲ್ಲಿ ಪೊಲೀಸ್ ಅಧಿಕಾರಿಗಳಾದ ತಿಮ್ಮಯ್ಯ, ಗಂಗಾಧರಸ್ವಾಮಿ ಹಾಜರಿದ್ದರು.

ಟಿ–20 ವಿಶ್ವಕಪ್ ಜಯ; ಉಡುಪಿ ದೇವಸ್ಥಾನದಲ್ಲಿ ಹರಕೆ ತೀರಿಸಿದ ಸೂರ್ಯಕುಮಾರ್ ಯಾದವ್



ಟೀಂ ಇಂಡಿಯಾ ಆಟಗಾರ ಸೂರ್ಯಕುಮಾರ್ ಯಾದವ್ ಮತ್ತು ಪತ್ನಿ ದಿವಿಶಾ ಶೆಟ್ಟಿ ಮಂಗಳವಾರ ಉಡುಪಿ ಜಿಲ್ಲೆಯ ಕಾಪು ಮಾರಿಗುಡಿ ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು.

ಉಡುಪಿ, ಜು.9– ಟೀಂ ಇಂಡಿಯಾದ ಹಾರ್ಡ್ ಹಿಟ್ಟರ್ ಸೂರ್ಯಕುಮಾರ್ ಯಾದವ್ ಮತ್ತು ಪತ್ನಿ ದಿವಿಶಾ ಶೆಟ್ಟಿ ಮಂಗಳವಾರ ಉಡುಪಿ ಜಿಲ್ಲೆಯ ಕಾಪು ಮಾರಿಗುಡಿ ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು.

ಟಿ–20 ವಿಶ್ವಕಪ್‌ಗೂ ಮುನ್ನ ಸೂರ್ಯಕುಮಾರ್ ಯಾದವ್ ಭಾರತ ತಂಡ ಟ್ರೋಫಿ ಗೆಲ್ಲಲು ವಿಶೇಷ ಹರಕೆ ಹೊತ್ತಿದ್ದರು. ಈ ಹರಕೆ ತೀರಿಸಲು ಇದೀಗ ಕಾಪುವಿನ ಮಾರಿಗುಡಿ ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಈ ವೇಳೆ ಸೂರ್ಯಕುಮಾರ್ ದಂಪತಿಯನ್ನು ದೇವಳದ ಆಡಳಿತ ಮಂಡಳಿ ಸನ್ಮಾನಿಸಿದ್ದು, ಟೀಮ್ ಇಂಡಿಯಾ ಆಟಗಾರನಿಗೆ ಸೂಕ್ತ ಭದ್ರತೆ ಒದಗಿಸಲು ಮಾರಿಗುಡಿ ಸುತ್ತ ಬಿಗಿ ಪೊಲೀಸ್ ವ್ಯವಸ್ಥೆ ಮಾಡಲಾಗಿತ್ತು.

ದೇಗುಲದ ಅಧಿಕಾರಿಗಳ ಪ್ರಕಾರ, ಮೂಲತಃ ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ಭಾಗದವರಾದ ದೇವಿಶಾ ಶೆಟ್ಟಿ, ಭಾರತ ಟಿ–20 ವಿಶ್ವಕಪ್ ಗೆದ್ದರೆ ಪತಿಯೊಂದಿಗೆ ಕಾಪು ಮಾರಿಗುಡಿ ದೇವಸ್ಥಾನಕ್ಕೆ ಭೇಟಿ ನೀಡುವುದಾಗಿ ಹರಕೆ ಹೊತ್ತಿದ್ದರಂತೆ. ಹೀಗಾಗಿ ಇಂದು ದೇಗುಲಕ್ಕೆ ಭೇಟಿ ನೀಡಿ ಕಾಪು ಮಾರಿಯಮ್ಮ ದೇವಿಗೆ ಮಲ್ಲಿಗೆ ಮಾಲೆ ಅರ್ಪಿಸಿ ಅವರ ಕುಟುಂಬಕ್ಕೆ ಆಶೀರ್ವಾದ ಕೋರಿದರು.

ವಿವಾಹ ವಾರ್ಷಿಕೋತ್ಸವ ಆಚರಣೆ: ಅಂತೆಯೇ ಸೋಮವಾರ ಮಂಗಳೂರಿಗೆ ಬಂದಿಳಿದ ಯಾದವ್ ಮತ್ತು ಶೆಟ್ಟಿ ವಿಮಾನ ನಿಲ್ದಾಣದಲ್ಲಿ ಕೇಕ್ ಕತ್ತರಿಸುವ ಮೂಲಕ ಎಂಟನೇ ವಿವಾಹ ವಾರ್ಷಿಕೋತ್ಸವ ಆಚರಿಸಿಕೊಂಡರು.

ತುಳು ಮಾತನಾಡಿದ ಸೂರ್ಯ: ಶೆಟ್ಟಿ ಅವರು ದೇವಸ್ಥಾನದಲ್ಲಿ ತುಳುವಿನಲ್ಲಿ ಮಾತನಾಡುತ್ತಿರುವುದು ಕಂಡುಬಂದಿತು. ಯಾದವ್ ಕೂಡ ತುಳುವಿನಲ್ಲಿ ಮಾತನಾಡಲು ಯತ್ನಿಸಿದ್ದು ದೇವಸ್ಥಾನದ ಅಧಿಕಾರಿಗಳಲ್ಲಿ ಅಚ್ಚರಿ ಮೂಡಿಸಿದೆ.

ಈ ಭಾಗದ ಅತ್ಯಂತ ಪುರಾತನವಾದ ದೇವಾಲಯದ ಇತಿಹಾಸ ಹಾಗೂ ಹಾವೇರಿ ಜಿಲ್ಲೆಯಲ್ಲಿ ತಾವು ನಿರ್ಮಿಸುತ್ತಿರುವ ನೂತನ ಕಾಪು ಮಾರಿಯಮ್ಮ ದೇವಾಲಯದ ಬಗ್ಗೆಯೂ ದೇವಾಲಯದ ಅಧಿಕಾರಿಗಳು ಸೂರ್ಯಕುಮಾರ್‌ಗೆ ಮಾಹಿತಿ ತಿಳಿಸಿದರು. ಸುಮಾರು 40 ಕೋಟಿ ರೂಪಾಯಿ ವೆಚ್ಚದಲ್ಲಿ ನೂತನ ದೇವಸ್ಥಾನ ನಿರ್ಮಾಣವಾಗುತ್ತಿದೆ. 'ಗರ್ಭಗುಡಿ', 'ಉಚ್ಚಂಗಿಗುಡಿ', 'ಸತ್ತುಪೌಳಿ' ಕಾಮಗಾರಿ ಶೇ 90ರಷ್ಟು ಪೂರ್ಣಗೊಂಡಿದೆ ಎಂದು ದೇವಸ್ಥಾನದ ಅಧಿಕಾರಿಗಳು ತಿಳಿಸಿದ್ದಾರೆ.

ಉಡುಪಿಗೆ ಭೇಟಿ ನೀಡಿರುವ ಸೂರ್ಯ ಕುಮಾರ್ ಯಾದವ್ ಅವರ ಫೋಟೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಈ ಬಾರಿಯ ಟಿ–20 ವಿಶ್ವಕಪ್‌ನಲ್ಲಿ 8 ಪಂದ್ಯಗಳಲ್ಲಿ ಕಣಕ್ಕಿಳಿದಿದ್ದ ಸೂರ್ಯಕುಮಾರ್ ಯಾದವ್ 10 ಭರ್ಜರಿ ಸಿಕ್ಸ್ ಹಾಗೂ 15 ಫೋರ್‌ಗಳೊಂದಿಗೆ ಒಟ್ಟು 199 ರನ್ ಬಾರಿಸಿದ್ದರು. ಅದರಲ್ಲೂ ಟಿ–20 ವಿಶ್ವಕಪ್‌ನ ಫೈನಲ್ ಪಂದ್ಯದಲ್ಲಿ ಸೂರ್ಯಕುಮಾರ್ ಹಿಡಿದ ಅದ್ಭುತ ಕ್ಯಾಚ್‌ನಿಂದಾಗಿ ಭಾರತ ತಂಡವು ದಕ್ಷಿಣ ಆಫ್ರಿಕಾ ವಿರುದ್ಧ ಗೆಲುವು ದಾಖಲಿಸಿತ್ತು. ಈ ಸಂಭ್ರಮದ ನಡುವೆ ಸೂರ್ಯ ಕುಮಾರ್ ಉಡುಪಿಗೆ ಬಂದು ತಮ್ಮ ಹರಕೆ ತೀರಿಸಿರುವುದು ವಿಶೇಷವಾಗಿದೆ.

ಮೇಲುಕೋಟೆ ಚೆಲುವನಿಗೆ 75 ಲಕ್ಷ ರೂ. ಮೌಲ್ಯದ ಚಿನ್ನಾಭರಣ ನೀಡಿದ ಮೈಸೂರಿನ ಭಕ್ತೆ

ನೌಕರನ ಗೈರು ಹಾಜರಿಯಿಂದ ಬೊಕ್ಕಸ ಸೇರಬೇಕಾದ ಆಭರಣ ದೇವಸ್ಥಾನದ ಕಚೇರಿಯಲ್ಲಿ ಇಡಬೇಕಾಯಿತು



ಕಬ್ಬಿಣದ ಪೆಟ್ಟಿಗೆಯಲ್ಲಿರುವ ಬೆಳ್ಳಿ ಮತ್ತು ಚಿನ್ನದ ಆಭರಣಗಳು.

ಮೇಲುಕೋಟೆ, ಜು.9– ಶ್ರೀ ಚೆಲುವನಾರಾಯಣಸ್ವಾಮಿ ದೇವಾಲಯಕ್ಕೆ ಮೈಸೂರಿನ ಕುವೆಂಪುನಗರದ ನಿವಾಸಿ ಡಾ.ಲಕ್ಷ್ಮಮ್ಮನವರು ಸುಮಾರು 75 ಲಕ್ಷ ರೂ. ಮೌಲ್ಯದ ಚಿನ್ನಾಭರಣ ನೀಡಿದ್ದಾರೆ.

ಚೆಲುವನಾರಾಯಣಸ್ವಾಮಿಯ ಭಕ್ತೆಯಾದ ಲಕ್ಷ್ಮಮ್ಮ ಮನೆಯಲ್ಲಿ ಬಳಸಿದ ಚಿನ್ನ ಮತ್ತು ಬೆಳ್ಳಿಯ ಎರಡು ಟ್ರಂಕ್‌ನಲ್ಲಿ ತುಂಬಿದ ಆಭರಣವನ್ನು ದೇವಾಲಯದ ಇಓ ಮಹೇಶ್‌ಗೆ ಹಸ್ತಾಂತರ ಮಾಡಿದ್ದಾರೆ. ಸ್ಥಳೀಯ ಅಕ್ಕಸಾಲಿಗರನ್ನು ಕರೆಸಿದ ಕಾರ್ಯನಿರ್ವಾಹಕ ಅಧಿಕಾರಿ ಚಿನ್ನ ಮತ್ತು ಬೆಳ್ಳಿಯ ಮೌಲ್ಯಮಾಪನ ಮಾಡಿಸಿದ್ದಾರೆ.

ದೀಪದಕಂಬ, ಚೊಂಬು, ಆರತಿತಟ್ಟೆ ಸೇರಿದಂತೆ ಅಂದಾಜು 25 ಕೆ.ಜಿ ಬೆಳ್ಳಿ, ಬಂಗಾರದ ಬಳೆ, ಸರ ಸೇರಿದಂತೆ 250 ಗ್ರಾಂ ಬಂಗಾರದ ಆಭರಣಗಳನ್ನು ತೂಕದ ಮೂಲಕ ಲೆಕ್ಕಾಚಾರ ಮಾಡಿ ಟ್ರಂಕ್‌ನಲ್ಲಿ ಇರಿಸಿ ದೇವಾಲಯದ ಕಚೇರಿಯಲ್ಲಿರಿಸಿ ಭದ್ರಮಾಡಿದ್ದಾರೆ. ಚೆಲುವನ ಭಕ್ತೆ ವಯೋವೃದ್ಧರಾಗಿರುವ ಲಕ್ಷ್ಮಮ್ಮನವರು ಆಭರಣಗಳು ಅನ್ಯರಪಾಲಾಗುವ ಬದಲು ದೇವಾಲಯಕ್ಕೆ ಸೇರಲಿ ಎಂಬ ಆಶಯದಿಂದ ಸಮರ್ಪಿಸಿದ್ದೇನೆ ಎಂದಿದ್ದಾರೆ.

ಭಕ್ತರು ದೇವಾಲಯಕ್ಕೆ ನೀಡಿದ ಲಕ್ಷಾಂತರ ರೂ. ಮೌಲ್ಯದ ಆಭರಣಗಳನ್ನು ಬೊಕ್ಕಸದ ವಹಿಯಲ್ಲಿ ದಾಖಲಿಸಿ ಬೊಕ್ಕಸದಲ್ಲಿಡಬೇಕಿದ್ದರೂ ಕೀ ಮತ್ತು ಬೊಕ್ಕಸದ ವಹಿ ಇಟ್ಟುಕೊಂಡಿದ್ದ ದೇವಾಲಯ ಪ್ರಥಮ ದರ್ಜೆ ಸಹಾಯಕ ಪ್ರಕಾಶ್ ಕರ್ತವ್ಯಕ್ಕೆ ಹಾಜರಾಗದ ಕಾರಣ ಆಭರಣಗಳನ್ನು ಎರಡು ದಿನ ಕಚೇರಿಯಲ್ಲೇ ಇಡುವಂತಾಯಿತು.

ಡಾ. ಲಕ್ಷ್ಮಮ್ಮ ಸೋಮವಾರ ಮಧ್ಯಾಹ್ನ ಆಭರಣ ನೀಡಿದ ನಂತರ ಮೌಲ್ಯಮಾಪನ ಮಾಡಿದ ನಂತರ ಸಮಗ್ರವಾಗಿ ಆಭರಣಗಳ ವಿವರವನ್ನು ಬೊಕ್ಕಸದ ವಹಿಯಲ್ಲಿ ದಾಖಲಿಸಿ, ಸ್ಥಾನೀಕರು ಅರ್ಚಕ, ಪರಿಚಾರಕರ ಸಮಕ್ಷಮ ಪರಿಶೀಲಿಸಿ ದೇವಾಲಯದ ಬೊಕ್ಕಸದಲ್ಲಿಟ್ಟು ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಬೇಕಾಗಿತ್ತು. ಆದರೆ ಸೋಮವಾರ ಮಧ್ಯಾಹ್ನ 3 ಗಂಟೆಗೆ ಕುಡಿದ ಅಮಲಿನಲ್ಲಿದ್ದ ಪ್ರಥಮ ದರ್ಜೆ ಸಹಾಯಕ ಮನೆಗೆ ತೆರಳಿದ ಕಾರಣ ಈ ಕಾರ್ಯ ಆಗಲಿಲ್ಲ.

ಮಂಗಳವಾರವೂ ಸಹ ಪ್ರಕಾಶ್ ಕರ್ತವ್ಯಕ್ಕೆ ಹಾಜರಾಗದ ಕಾರಣ ಲಕ್ಷಾಂತರ ರೂ.ಮೌಲ್ಯದ ಆಭರಣಗಳು ಕಚೇರಿಯಲ್ಲೇ ಉಳಿಯುವಂತಾಗಿ ಭದ್ರತಾ ನಿಯಮ ಉಲ್ಲಂಘನೆಯಾಗಿದೆ. ಪ್ರಥಮ ದರ್ಜೆ ಸಹಾಯಕ ಕರ್ತವ್ಯಕ್ಕೆ ಗೈರು ಹಾಜರಾಗುವುದರ ಜೊತೆಗೆ ಕುಡಿತದ ಚಟ ಹೊಂದಿದ್ದಾರೆ. ಕುಡಿದೇ ದೇವಾಲಯದ ಕರ್ತವ್ಯಕ್ಕೂ ಹಾಜರಾಗುತ್ತಿದ್ದರೂ ಕೇಳುವವರೇ ಇಲ್ಲದಂತಾಗಿದೆ ಎಂದಿರುವ ದೇವಾಲಯದ ಮೂಲಗಳು ಇಂತಹ ನೌಕರನನ್ನು ತಕ್ಷಣ ಜಿಲ್ಲಾಧಿಕಾರಿಗಳು ಬೇರೆಡೆ ವರ್ಗಾಯಿಸಿ ದೇವಾಲಯದ ಪಾವಿತ್ರ್ಯತೆ ಕಾಪಾಡಬೇಕೆಂದು ಹೆಸರೇಳಲು ಇಚ್ಛಿಸದ ಕೈಂಕರ್ಯಪರರು ಮನವಿ ಮಾಡಿದ್ದಾರೆ.

ಅಭಿನಂದನೆ...



ಕರ್ನಾಟಕ ರಾಜ್ಯ ಮಹಿಳಾ ಆಯೋಗದ ರಾಜ್ಯಾಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ ಅವರನ್ನು ಜನಪದ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರಾದ ಡಾ.ಎಂ.ಮಹೇಶ ಚಿಕ್ಕಲ್ಲೂರು ಮತ್ತು ಪರಿಷತ್ತಿನ ಸದಸ್ಯರಾದ ಅಶ್ವಿನಿ ಬೆಳವಾಡಿ, ನಾಗರಾಜು, ರಾಜು ಇತರರು ಅಭಿನಂದಿಸಿದರು.

ರಿಯಾಯಿತಿಯಡಿ ಆಸ್ತಿ ತೆರಿಗೆ ಪಾವತಿಯ ಅವಧಿ ವಿಸ್ತರಣೆ

ಮೈಸೂರು, ಜು.9– ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಪಾವತಿಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸಲು ಹಾಗೂ ಸ್ವಯಂ ತೆರಿಗೆ ಪಾವತಿಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ) ಆರ್ಥಿಕ ವರ್ಷದ ಪ್ರಾರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿ ಮಾಡಿದಲ್ಲಿ ಶೇ.5ರಷ್ಟು ರಿಯಾಯಿತಿ ನೀಡಲು ಕಲ್ಪಿಸಿರುವ ಅವಕಾಶದ ಅವಧಿಯನ್ನು ಜುಲೈ 31ರವರೆಗೆ ವಿಸ್ತರಿಸಲಾಗಿದೆ.

ರಾಷ್ಟ್ರೀಯ ಲೋಕ್ ಅದಾಲತ್ ರಾಜೀ ಮೂಲಕ ಪ್ರಕರಣಗಳ ಇತ್ಯರ್ಥಕ್ಕೆ ಅವಕಾಶ

ಮೈಸೂರು, ಜು.9– ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ವತಿಯಿಂದ ಜು.13ರಂದು ರಾಷ್ಟ್ರೀಯ ಮೆಗಾ ಲೋಕ್ ಅದಾಲತ್ ಆಯೋಜಿಸಲಾಗಿದೆ. ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ತಕ್ಷಣ ಪರಿಹಾರ ಪಡೆದುಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದ್ದು, ಲೋಕ್ ಅದಾಲತ್‌ನಲ್ಲಿ ಈ ಕೆಳಗಿನ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ.

ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು,ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು (Consumer Disputes), ಖಾಯಂ ಜನತಾ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು, ಚೆಕ್ಕು ಅಮಾನ್ಯದ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಭೂ ಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪಿಂಚಣಿ ಪ್ರಕರಣಗಳು, ಸಾರ್ವಜನಿಕ ಉಪಯುಕ್ತತೆ ಸೇವೆಗಳ ಸಂಬಂಧಿಸಿದ ಪ್ರಕರಣಗಳು, ರಾಜೀಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳು, ವೈವಾಹಿಕ, ಕುಟುಂಬ ನ್ಯಾಯಾಲಯದ ಪ್ರಕರಣ (ವಿಚ್ಛೇದನವನ್ನು ಹೊರತುಪಡಿಸಿ) ಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ನ್ಯಾಯಾಲಯಗಳಲ್ಲಿ ಉಭಯ ಪಕ್ಷಕಾರರು ರಾಜೀ ಮಾಡಿಕೊಳ್ಳಲು ಸೂಕ್ತ ಮಾರ್ಗದರ್ಶನ ಮಾಡಲಾಗುವುದು. ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು. ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಪೂರ್ಣವಾಗಿ ಮರುಪಾವತಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜಿ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೈಸೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ (ಮೈಸೂರು ನಗರಕ್ಕೆ ಸಂಬಂಧಿಸಿದಂತೆ ಮಾತ್ರ) ದೂ.ಸಂ:1800–425–0131 ಹಾಗೂ ತಾಲೂಕುಗಳಿಗೆ ಸಂಬಂಧಿಸಿದಂತೆ ತಾಲೂಕು ಕಾನೂನು ಸೇವಾ ಸಮಿತಿಗಳನ್ನು ನೇರವಾಗಿ ಸಂಪರ್ಕಿಸಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ವೈದ್ಯಕೀಯ ಪರಿಷತ್‌ಗೆ ಆಯ್ಕೆ



ಯೋಗಾನಂದ ರೆಡ್ಡಿ



ರವಿ ಕೃಷ್ಣಪ್ಪ

ಮೈಸೂರು, ಜು. 9–ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಕರ್ನಾಟಕ ವೈದ್ಯಕೀಯ ಪರಿಷತ್‌ನ (ಕೆಎಂಸಿ) ಅಧ್ಯಕ್ಷರಾಗಿ ಡಾ.ವೈ.ಸಿ.ಯೋಗಾನಂದ ರೆಡ್ಡಿ, ಉಪಾಧ್ಯಕ್ಷರಾಗಿ ಜೆಎಸ್‌ಎಸ್ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ ಮತ್ತು ರಿಸರ್ಚ್ ಸರ್ಜಿಕಲ್ ಡಾ.ಕೆ.ರವಿ ಕೃಷ್ಣಪ್ಪ ಆಯ್ಕೆಯಾಗಿದ್ದಾರೆ. ಡಾ.ಶಿವಾನಂದ್ ಭೀಮಳಿ, ಡಾ.ಸಂತೋಷ್ ಡಿ ಪಾಟೀಲ್, ಡಾ.ಚೈತ್ರ ವಿ.ಆನಂದ್, ಡಾ.ಭರತ್ ಕುಮಾರ್ ಅವರನ್ನು ರಾಜ್ಯ ಸರ್ಕಾರ ಸದಸ್ಯರನ್ನಾಗಿ ನೇಮಕ ಮಾಡಿದೆ.

ದೇಶ - ವಿದೇಶ

ರಷ್ಯಾದಲ್ಲಿ ಭಾರತದ ಮತ್ತೆರಡು ರಾಯಭಾರ ಕಚೇರಿ ಆರಂಭ



ಮಾಸ್ಕೋ: ರಷ್ಯಾದೊಂದಿಗೆ ಪ್ರಯಾಣ ಮತ್ತು ವ್ಯಾಪಾರವನ್ನು ಮತ್ತಷ್ಟು ಉತ್ತೇಜಿಸುವ ನಿಟ್ಟಿನಲ್ಲಿ ರಷ್ಯಾದ ಕಜನ್ ಮತ್ತು ಯೆಕಟೆರಿನ್ ಬರ್ಗ್ ನಗರಗಳಲ್ಲಿ ಎರಡು ಹೊಸ ಕಾನ್ಸುಲೇಟ್‌ಗಳನ್ನು(ರಾಯಭಾರ ಕಚೇರಿ) ತೆರೆಯಲು ಭಾರತ ನಿರ್ಧರಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ. ಭಾರತವು ಪ್ರಸ್ತುತ ರಷ್ಯಾದ ಸೇಂಟ್ ಪೀಟರ್ಸ್ಬರ್ಗ್ ಮತ್ತು ವ್ಲಾಡಿವೋಸ್ಟಾಕ್‌ನಲ್ಲಿ ಎರಡು ಕಾನ್ಸುಲೇಟ್‌ಗಳನ್ನು ಹೊಂದಿದೆ. ರಷ್ಯಾ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ಅವರು ಇಂದು ಭಾರತೀಯ ವಲಸಿಗರನ್ನು ಉದ್ದೇಶಿಸಿ ಮಾತನಾಡುವಾಗ ಕಜಾನ್ ಮತ್ತು ಯೆಕಟೆರಿನ್ ಬರ್ಗ್‌ನಲ್ಲಿ ಹೊಸ ಕಾನ್ಸುಲೇಟ್‌ಗಳನ್ನು ತೆರೆಯುವ ಘೋಷಣೆ ಮಾಡಿದರು. ನಾನು ನಿಮ್ಮೆಲ್ಲರೊಂದಿಗೆ ಕೆಲವು ಒಳ್ಳೆಯ ಸುದ್ದಿಗಳನ್ನು ಹಂಚಿಕೊಳ್ಳಲು ಬಯಸುತ್ತೇನೆ. ನಾವು ಕಜನ್ ಮತ್ತು ಯೆಕಟೆರಿನ್ ಬರ್ಗ್‌ನಲ್ಲಿ ಹೊಸ ಕಾನ್ಸುಲೇಟ್‌ಗಳನ್ನು ತೆರೆಯಲು ನಿರ್ಧರಿಸಿದ್ದೇವೆ. ಇದು ಪ್ರಯಾಣ ಮತ್ತು ವ್ಯಾಪಾರವನ್ನು ಹೆಚ್ಚಿಸುತ್ತದೆ ಎಂದು ಹೇಳಿದರು.

ಯೆಕಟೆರಿನ್ ಬರ್ಗ್ ರಷ್ಯಾದ 4ನೇ ದೊಡ್ಡ ನಗರವಾಗಿದ್ದು, ಇದು ಪ್ರಮುಖ ಆರ್ಥಿಕ ಕೇಂದ್ರವಾಗಿ ಹೊರಹೊಮ್ಮಿದೆ. 2018ರಲ್ಲಿ ರಷ್ಯಾದಲ್ಲಿ ಕ್ರೀಡಾಕೂಟ ನಡೆದಾಗ ಈ ನಗರವು 4 ಫಿಫಾ ವಿಶ್ವಕಪ್ ಪಂದ್ಯಗಳನ್ನು ಆಯೋಜಿಸಿತ್ತು. ವೋಲ್ಗಾ ಮತ್ತು ಕಜಾಂಕಾ ನದಿಗಳ ಸಂಗಮದಲ್ಲಿ ನೆಲೆಗೊಂಡಿರುವ ಕಜನ್ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಕೇಂದ್ರವಾಗಿದೆ. ರಷ್ಯಾದಲ್ಲಿ ಉದಯೋನ್ಮುಖ ಆರ್ಥಿಕ ಕೇಂದ್ರವಾಗಿದೆ.

ಗಂಭೀರ್ ಟೀಂ ಇಂಡಿಯಾದ ಕೋಚ್



ಮುಂಬೈ: ಬಹುದಿನಗಳಿಂದ ಹರಿದಾಡುತ್ತಿದ್ದ ಸುದ್ದಿ ಕೊನೆಗೂ ಖಚಿತವಾಗಿದ್ದು ಟೀಂ ಇಂಡಿಯಾದ ಕೋಚ್ ಆಗಿ ಗೌತಮ್ ಗಂಭೀರ್ ಆಯ್ಕೆಯಾಗಿದ್ದಾರೆ.

ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಅಧಿಕೃತವಾಗಿ ಈ ವಿಚಾರವನ್ನು ತಿಳಿಸಿದ್ದಾರೆ. ಪುರುಷರ ರಾಷ್ಟ್ರೀಯ ತಂಡದ ಮುಖ್ಯ ಕೋಚ್ ಆಗಿ ಭಾರತದ ಮಾಜಿ ಆರಂಭಿಕ ಆಟಗಾರ ಗೌತಮ್ ಗಂಭೀರ್ ಅವರನ್ನು ನೇಮಿಸಲಾಗಿದೆ ಎಂದು ಜಯ್ ಶಾ ಪ್ರಕಟಿಸಿದ್ದಾರೆ.

ಬಿಎಂಡಬ್ಲ್ಯೂ ಹಿಟ್ ಅಂಡ್ ರನ್ ಪ್ರಕರಣ: ಆರೋಪಿ ಮಿಹಿರ್ ಶಾ ಬಂಧನ



ಮುಂಬೈ: ಜುಲೈ 7ರಂದು ನಗರದ ವರ್ಲಿ ಪ್ರದೇಶದಲ್ಲಿ ಸಂಭವಿಸಿದ ಹಿಟ್ ಅಂಡ್ ರನ್ ಅಪಘಾತದ ಪ್ರಮುಖ ಆರೋಪಿ ಮಿಹಿರ್ ಶಾನನ್ನು ಮುಂಬೈ ಪೊಲೀಸರು ಮಂಗಳವಾರ ಬಂಧಿಸಿದ್ದು, 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಆಡಳಿತಾರೂಢ ಶಿವಸೇನೆ ನಾಯಕ ರಾಜೇಶ್ ಶಾ ಅವರ ಪುತ್ರ 24 ವರ್ಷದ ಮಿಹಿರ್ ಅಪಘಾತದ ದಿನದಿಂದ ತಲೆಮರೆಸಿಕೊಂಡಿದ್ದನು. ಇನ್ನು ಆತನ ಶೋಧಕ್ಕಾಗಿ ಮುಂಬೈ ಪೊಲೀಸರು 11 ತಂಡಗಳನ್ನು ರಚಿಸಿದ್ದರು. ಮಿಹಿರ್ ವಿರುದ್ಧ ಲುಕ್‌ಔಟ್ ನೋಟಿಸ್ ಸಹ ಜಾರಿಯಾಗಿತ್ತು. ಹಿಟ್ ಅಂಡ್ ರನ್ ಅಪಘಾತ ಸಂಭವಿಸಿದಾಗ ಮಿಹಿರ್ ಮದ್ಯಪಾನ ಮಾಡ್ಡಿದ್ದ ಎಂದು ಹೇಳಲಾಗುತ್ತಿದೆ. ಇನ್ನು ಬಿಎಂಡಬ್ಲ್ಯೂ ಕಾರು ಡಿಕ್ಕಿಯಿಂದ 45 ವರ್ಷದ ಕಾವೇರಿ ನಖ್ವಾ ಸಾವನ್ನಪ್ಪಿದ್ದು ಅವರ ಪತಿ ಪ್ರದೀಪ್ ನಖ್ವಾ ಗಾಯಗೊಂಡರು. ದಂಪತಿ ಭಾನುವಾರ ಬೆಳಗ್ಗೆ ಕ್ರಾಫರ್ಡ್ ಮಾರುಕಟ್ಟೆಯಿಂದ ಮೀನು ಖರೀದಿಸಿ ಹಿಂದಿರುಗುತ್ತಿದ್ದಾಗ ಮುಂಜಾನೆ 5.30ರ ಸುಮಾರಿಗೆ ವೇಗವಾಗಿ ಬಂದ ಕಾರು ಅವರ ಬೈಕ್‌ಗೆ ಹಿಂದಿನಿಂದ ಡಿಕ್ಕಿ ಹೊಡೆದಿತ್ತು. ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಇಬ್ಬರನ್ನು ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದು, ಮಹಿಳೆ ಸಾವನ್ನಪ್ಪಿದ್ದಾಗಿ ವೈದ್ಯರು ಘೋಷಿಸಿದ್ದರು.

ಪೊಲೀಸ್ ಅಧಿಕಾರಿಗಳು ಸೇರಿ ಬರೋಬ್ಬರಿ 50 ಜನರ ಮದುವೆಯಾದ ಲೇಡಿ..!



ಚೆನ್ನೈ: ತಮಿಳುನಾಡಿನ ಮಹಿಳೆಯೊಬ್ಬರು ದುಡ್ಡಿಗೋಸ್ಕರ ಬಟ್ಟೆ ಬದಲಿಸಿದಂತೆ ಗಂಡಂದಿರನ್ನು ಬದಲಿಸಿದ್ದಾರೆ. ಸಂಧ್ಯಾ ಎನ್ನುವ 30 ವರ್ಷದ ಮಹಿಳೆ, ಅವಿವಾಹಿತರನ್ನು ಮದುವೆಯಾಗೋದು, ಆ ಬಳಿಕ ಹಣ ದೋಚಿ ವಂಚಿಸುತ್ತಿದ್ದು, ಇದೀಗ ತಮಿಳುನಾಡು ಪೊಲೀಸರ ಅತಿಥಿಯಾಗಿದ್ದಾಳೆ.

ತಮಿಳುನಾಡು ಪೊಲೀಸರ ವರದಿಯ ಪ್ರಕಾರ 35 ವರ್ಷದ ತಿರುವುರ್ ಎನ್ನುವ ವ್ಯಕ್ತಿಯೊಬ್ಬರು, ಮದುವೆಗಾಗಿ ವಧುವಿನ ಹುಡುಕಾಟದಲ್ಲಿದ್ದರು. ಇದಾದ ಬಳಿಕ 'ದಿ ತಮಿಳ್ ವೇ' ಎನ್ನುವ ವೆಬ್‌ಸೈಟ್‌ನಲ್ಲಿ ಸಂಧ್ಯಾ ಎನ್ನುವ ಮಹಿಳೆಯ ಪ್ರೊಫೈಲ್ ಕಣ್ಣಿಗೆ ಬಿದ್ದಿದೆ. ಇಬ್ಬರು ಮೆಚ್ಚಿಕೊಂಡ ಬಳಿಕ ತಿರುವುರ್, ತಮ್ಮ ಮನೆಯವರನ್ನು ಒಪ್ಪಿಸಿ ಮದುವೆಯಾದರು. ಬಳಿಕ ತಿರುವುರ್ ತಮ್ಮ ಪತ್ನಿ ಸಂಧ್ಯಾ ಅವರ ವರ್ತನೆಯಲ್ಲಾದ ಬದಲಾವಣೆಯನ್ನು ಗಮನಿಸಿದರು. ಇದರ ಬೆನ್ನಲ್ಲೇ ತಿರುವುರ್ ಕುಟುಂಬಸ್ಥರು ಆಕೆಯ ಆಧಾರ್ ಕಾರ್ಡ್ ಪರಿಶೀಲನೆ ನಡೆಸಿದ್ದಾರೆ. ಅಲ್ಲಿ ಆಕೆಯ ಗಂಡನ ಹೆಸರು ಬೇರೆಯದ್ದೇ ಆಗಿತ್ತು. ಇದಾದ ಬಳಿಕ ಪೊಲೀಸರಿಗೆ ದೂರು ಕೊಡಲಾಯಿತು. ಆಗ ಕೂಲಂಕುಶವಾಗಿ ಆ ಕಿಲಾಡಿ ಲೇಡಿಯನ್ನು ವಿಚಾರಣೆ ನಡೆಸಿದಾಗ ಪೊಲೀಸ್ ಅಧಿಕಾರಿಗಳೂ ಸೇರಿದಂತೆ 50 ಮಂದಿಯನ್ನು ಈಕೆ ವಂಚಿಸಿರುವುದು ಬೆಳಕಿಗೆ ಬಂದಿದೆ.

ಅರವಿಂದ್ ಕೇಜ್ರಿವಾಲ್‌ಗೆ ಪ್ರೊಡಕ್ಷನ್ ವಾರಂಟ್



ನವದೆಹಲಿ: ಮನಿ ಲಾಂಡರಿಂಗ್ ಪ್ರಕರಣದಲ್ಲಿ ದೆಹಲಿ ನ್ಯಾಯಾಲಯ ಮಂಗಳವಾರ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಪ್ರೊಡಕ್ಷನ್ ವಾರಂಟ್ ಹೊರಡಿಸಿದೆ.

ಅದೇ ಸಮಯದಲ್ಲಿ, ಇಡಿ ಸಲ್ಲಿಸಿದ ಎಂಟನೇ ಪೂರಕ ಚಾರ್ಜ್ ಶೀಟ್ ಅನ್ನು ನ್ಯಾಯಾಲಯವು ಪರಿಗಣಿಸಿತು ಮತ್ತು ವಿನೋದ್ ಚೌಹಾಣ್‌ಗೆ ಪ್ರೊಡಕ್ಷನ್ ವಾರಂಟ್‌ಗಳನ್ನು ಹೊರಡಿಸಿತು. ಎಂಟನೇ ಪೂರಕ ಚಾರ್ಜ್‌ಶೀಟ್‌ನಲ್ಲಿ ಹೆಸರಿಸಲಾದ ಇನ್ನೊಬ್ಬ ಆರೋಪಿ ಆಶಿಶ್ ಮಾಥುರ್‌ಗೆ ಸಮನ್ಸ್ ಜಾರಿಗೊಳಿಸಿತು. ವಿಶೇಷ ನ್ಯಾಯಾಧೀಶೆ ಕಾವೇರಿ ಬವೇಜಾ ಅವರು ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳಲು ಸಾಕಷ್ಟು ಪುರಾವೆಗಳಿವೆ ಎಂದು ಗಮನಿಸಿ, ಜು.12ರಂದು ಎಲ್ಲಾ ಆರೋಪಿಗಳನ್ನು ನ್ಯಾಯಾಲಯಕ್ಕೆ ಭೌತಿಕವಾಗಿ ಹಾಜರುಪಡಿಸಲಾಗುವುದು ಎಂದು ಪಟ್ಟಿ ಮಾಡಿದರು. ಪ್ರಕರಣದಲ್ಲಿ ಕೇಜ್ರಿವಾಲ್ ಮತ್ತು ಆಮ್ ಆದ್ಮಿ ಪಕ್ಷವನ್ನು ಆರೋಪಿಗಳೆಂದು ಹೆಸರಿಸಿ ಫೆಡರಲ್ ತನಿಖಾ ಸಂಸ್ಥೆ ಮೇ 17ರಂದು 200 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿತ್ತು.

ಖ್ಯಾತ ಗಾಯಕಿ ಉಷಾ ಉತ್ತುಪ್ ಪತಿ ಹೃದಯಾಘಾತದಿಂದ ನಿಧನ


ಜಾನಿ ಚಾಕೋ

ನವದೆಹಲಿ: ಇಂಡಿಯನ್ ಪಾಪ್ ಐಕಾನ್, ಬಹುಭಾಷಾ ಗಾಯಕಿ ಹಾಗೂ ಕನ್ನಡಿಗರ ಪ್ರೀತಿಯ ಕೋಗಿಲೆ ಉಷಾ ಉತ್ತುಪ್ ಅವರ ಎರಡನೇ ಪತಿ ಜಾನಿ ಚಾಕೋ ಉತ್ತುಪ್ ಅವರು ಜು.8ರಂದು ಹೃದಯಾಘಾತದಿಂದ ಕೊನೆಯುಸಿರೆಳೆದಿದ್ದಾರೆ.

78 ವರ್ಷದ ಜಾನಿ ಚಾಕೋ ಕೋಲ್ಕತಾದ ನಿವಾಸದಲ್ಲಿ ಕುಸಿದು ಬಿದ್ದಿದ್ದರು ಎನ್ನಲಾಗಿದೆ. ತಕ್ಷಣವೇ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೇ ನಿಧನರಾಗಿದ್ದಾರೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಜಾನಿ ಚಾಕೋ ಅವರು ಉಷಾ ಉತ್ತುಪ್ ಅವರ ಎರಡನೇ ಪತಿ. ಟೀ ಪ್ಲಾಂಟೇಶನ್ ನೋಡಿಕೊಳ್ಳುತ್ತಿದ್ದರು. 1970ರಲ್ಲಿ ಐಕಾನ್ ಟ್ರಿಂಕ್ಸ್‌ನಲ್ಲಿ ಇವರಿಬ್ಬರು ಮೊದಲು ಭೇಟಿಯಾಗಿದ್ದು. ಈ ಜೋಡಿಗೆ ಒಬ್ಬ ಮಗ ಮತ್ತು ಮಗಳು ಇದ್ದಾರೆ. ಜುಲೈ 9ರಂದು ಅಂತ್ಯಕ್ರಿಯೆ ನಡೆಯಿತು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಈ ವರ್ಷ ಆರಂಭದಲ್ಲಿ ಉಷಾ ಉತ್ತುಪ್ ಸಖತ್ ಖುಷಿಯಾಗಿದ್ದರು, ಸಂಗೀತ ಕ್ಷೇತ್ರದಲ್ಲಿ ನೀಡಿರುವ ಕೊಡುಗೆಗಾಗಿ ಮೂರನೇ ಅತ್ಯುನ್ನತ ನಾಗರಿಕ ಪ್ರಶಸ್ತಿ ಪದ್ಮಭೂಷಣ ನೀಡಿ ಗೌರವಿಸಲಾಗಿತ್ತು. ಕನ್ನಡ, ತಮಿಳು, ಹಿಂದಿ, ತೆಲುಗು, ಮಲಯಾಳಂ, ಒಡಿಯಾ ಮತ್ತು ಬೆಂಗಾಲಿ ಭಾಷೆಯಲ್ಲಿ ಅವರು ಹಾಡಿದ್ದಾರೆ.

ತಪ್ಪನ್ನು ತಿದ್ದಿಕೊಳ್ಳುವವರಿಗೆ ಕಾನೂನಿನಲ್ಲಿ ಅವಕಾಶವಿದೆ

ಕಾರಾಗೃಹ ವಾಸಿಗಳ ಅವಧಿಪೂರ್ವ ಬಿಡುಗಡೆ ಸಮಾರಂಭದಲ್ಲಿ ಗೃಹ ಸಚಿವ ಡಾ.ಪರಮೇಶ್ವರ್ ಕಿವಿಮಾತು



ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ರಾಷ್ಟ್ರಪತಿಗಳ ಹಾಗೂ ಮುಖ್ಯಮಂತ್ರಿಗಳ ಪದಕ ಪ್ರದಾನ ಮತ್ತು ಸನ್ನಡತೆಯ ಆಧಾರದ ಮೇಲೆ ಕಾರಾಗೃಹ ನಿವಾಸಿಗಳ ಶಿಕ್ಷೆ ಅವಧಿಪೂರ್ವ ಬಿಡುಗಡೆ ಸಮಾರಂಭ ನಡೆಯಿತು. ಗೃಹ ಸಚಿವ ಡಾ.ಜಿ.ಪರಮೇಶ್ವರ್, ಹಿರಿಯ ಪೊಲೀಸ್ ಅಧಿಕಾರಿಗಳು ಇದ್ದರು.

ಬೆಂಗಳೂರು, ಜು. 9(ಕೆಎಂಶಿ)–ಕಾನೂನಿನ ಮುಂದೆ ಉಳ್ಳವರು, ಬಡವರು, ಕೂಲಿಕಾರರು ಎಲ್ಲರೂ ಸಮಾನರು. ಕಾನೂನು ಪರಿಪಾಲನೆ ಮಾಡದಿದ್ದರೆ ಯಾರೇ ಆಗಲಿ ಶಿಕ್ಷೆ ಕಟ್ಟಿಟ್ಟಬುತ್ತಿ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ಎಚ್ಚರಿಸಿದ್ದಾರೆ.

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ರಾಷ್ಟ್ರಪತಿಗಳ ಹಾಗೂ ಮುಖ್ಯಮಂತ್ರಿಗಳ ಪದಕ ಪ್ರದಾನ ಮತ್ತು ಸನ್ನಡತೆಯ ಆಧಾರದ ಮೇಲೆ ಕಾರಾಗೃಹ ನಿವಾಸಿಗಳ ಶಿಕ್ಷೆ ಅವಧಿಪೂರ್ವ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರಕೃತಿಯ ನಿಯಮ ಅರ್ಥ ಮಾಡಿಕೊಂಡು ನಡೆದರೆ ಸಮಾಜ ಗುರುತಿಸುತ್ತದೆ ಎಂದರು.

ಕೆಲವು ಸಂದರ್ಭಗಳಲ್ಲಿ ತೆಗೆದುಕೊಳ್ಳುವ ತೀರ್ಮಾನದಿಂದ ಗೊತ್ತಿದ್ದೋ, ಗೊತ್ತಿಲ್ಲದೆಯೋ ತಪ್ಪುಗಳನ್ನು ಮಾಡಿರುತ್ತೇವೆ, ಅವನ್ನು ತಿದ್ದಿಕೊಳ್ಳಬೇಕು, ಪಶ್ಚಾತ್ತಾಪದ ಮೂಲಕ ಹೊಸ ಹಾದಿಯಲ್ಲಿ ಸಾಗಬೇಕು.

ತಪ್ಪನ್ನು ತಿದ್ದಿಕೊಳ್ಳುವವರಿಗೆ ಕಾನೂನಿನಲ್ಲಿ ಮತ್ತೊಂದು ಅವಕಾಶ ಕಲ್ಪಿಸಲಾಗಿದೆ, ಸನ್ನಡತೆ ಆಧಾರದ ಮೇಲೆ ಬಿಡುಗಡೆ ಮಾಡಲಾಗುತ್ತದೆ, ಸನ್ನಡತೆಯಿಂದ ಪರಿವರ್ತನೆ ತಂದುಕೊಂಡರೆ ಸಮಾಜದಲ್ಲಿ ಬದುಕಲು ಮತ್ತೊಂದು ಅವಕಾಶ ಸಿಗುತ್ತದೆ ಎಂದರು. ಜೀವನ ತುಂಬ ವೇಗವಾಗಿ ಸಾಗುತ್ತಿದೆ. ಯಾವುದೇ ಕಾರಣಕ್ಕೂ ಮತ್ತೊಂದು ತಪ್ಪು ಮಾಡಬೇಡಿ, ಕುಟುಂಬದವರ ಜೊತೆ ಉಳಿದ ಜೀವನ ಸಾಗಿಸಿ ಎಂದು ಕಿವಿಮಾತು ಹೇಳಿದರು.

ರಾಜ್ಯದ 54 ಕಾರಾಗೃಹಗಳಲ್ಲಿ 15 ಸಾವಿರಕ್ಕೂ ಹೆಚ್ಚು ಜನರಿದ್ದಾರೆ. ಎಲ್ಲರನ್ನು ಸುರಕ್ಷಿತವಾಗಿಡಬೇಕು. ಅಲ್ಲದೆ, ವಿವಿಧ ಕೌಶಲ ತರಬೇತಿ, ಶಿಕ್ಷಣ ಮೂಲಕ ಸುಧಾರಿಸಿ ಪರಿವರ್ತನೆ ತರುವ ಜವಾಬ್ದಾರಿ ಇಲಾಖೆಯದ್ದಾಗಿದೆ. ಕಾರಾಗೃಹ ನಿವಾಸಿಗಳ ಸುಧಾರಣೆ ಕುರಿತು ಡಿಜಿಪಿ ಮಾಲಿನಿ ಕೃಷ್ಣಮೂರ್ತಿ ಅವರು ಅನೇಕ ಪ್ರಸ್ತಾವನೆಗಳನ್ನು ಸರ್ಕಾರದ ಮುಂದಿಟ್ಟಿದ್ದು, ಎಲ್ಲ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

ಕಾರಾಗೃಹ ನಿವಾಸಿ ದಾನೇಶ್ ಮಾತನಾಡಿ, ಆಕಸ್ಮಿಕ ಘಟನೆಯಿಂದ ಜೈಲು ಸೇರಬೇಕಾಯಿತು, ಇಲ್ಲಿದ್ದುಕೊಂಡು ಬಿ.ಎ. ಪದವಿ ಪೂರ್ಣಗೊಳಿಸಿದ್ದು, ಸನ್ನಡತೆ ಆಧಾರದ ಮೇಲೆ ಬಿಡುಗಡೆ ಆಗುತ್ತಿರುವುದು ಪುನರ್‌ಜನ್ಮವಾಗಿದೆ, ಮುಂದೆ ಉತ್ತಮ ನಾಗರಿಕನಾಗಿ ಜೀವನ ಸಾಗಿಸುತ್ತೇನೆ ಎಂದರು.

ಇನ್ನೊಬ್ಬ ನಿವಾಸಿ ಸತೀಶ್ ಆಚಾರ್ಯ ಮಾತನಾಡಿ, ಆಹಾರ ಮತ್ತು ಸ್ವಾತಂತ್ರ್ಯದ ಮಹತ್ವ ಏನೆಂಬುದು ಜೈಲುವಾಸದಲ್ಲಿ ಗೊತ್ತಾಗಿದೆ, ಮುಂದಿನ ಜೀವನದ ಹೊಸ ಅಧ್ಯಾಯ ಆರಂಭವಾಗಿದೆ ಎಂದರು.

ಚಾಮುಂಡಿಬೆಟ್ಟದಲ್ಲಿ 25 ಸಾವಿರ ಭಕ್ತರಿಗೆ ಅನ್ನ ಸಂತರ್ಪಣೆ



ಚಾಮುಂಡೇಶ್ವರಿ ಸೇವಾ ಸಮಿತಿ ವತಿಯಿಂದ ಮೊದಲ ಆಷಾಢ ಶುಕ್ರವಾರದಂದು 25 ಸಾವಿರ ಭಕ್ತರಿಗೆ ವಿತರಿಸಲು ಮೈಸೂರು ಪಾಕ್ ತಯಾರಿಸುತ್ತಿರುವುದು.

ಮೈಸೂರು, ಜು.9(ಬಿಎಲ್‌ಯು)– ಪ್ರತಿ ವರ್ಷದಂತೆ ಈ ಬಾರಿ ಕೂಡ ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಚಾಮುಂಡೇಶ್ವರಿ ಸೇವಾ ಸಮಿತಿ 100 ಅಡಿ ರಸ್ತೆ ವತಿಯಿಂದ ಜುಲೈ 12ರ ಮೊದಲ ಆಷಾಢ ಶುಕ್ರವಾರದಂದು 25 ಸಾವಿರ ಭಕ್ತರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ. ಈ ಬಾರಿ ಊಟಕ್ಕೆ ಮೈಸೂರು ಪಾಕ್ ನೀಡಲಾಗುತ್ತಿದ್ದು, ನಗರದ ನಿತ್ಯಾನಂದ ಕಲ್ಯಾಣ ಮಂಟಪದಲ್ಲಿ ಮೈಸೂರು ಪಾಕ್ ತಯಾರಿಸುವ ಕಾರ್ಯ ಆರಂಭವಾಗಿದೆ. 40 ಬಾಣಸಿಗರು ಮೈಸೂರು ಪಾಕ್ ತಯಾರಿಯಲ್ಲಿ ತೊಡಗಿದ್ದಾರೆ.

ಜುಲೈ 12ರ ಮೊದಲ ಆಷಾಢ ಶುಕ್ರವಾರದಂದು ಬೆಳಿಗ್ಗೆ 6ರಿಂದ 10 ಗಂಟೆ ತನಕ ಉಪಾಹಾರ ಇರಲಿದ್ದು, ಪೊಂಗಲ್, ಇಡ್ಲಿ, ಚಟ್ನಿ ನೀಡಲಾಗುವುದು. 11 ಗಂಟೆಗೆ ಊಟ ಬಡಿಸಲು ಆರಂಭಿಸಲಿದ್ದು, ಬಿಸಿಬೇಳೆ ಬಾತ್, ಅನ್ನ, ಸಾಂಬಾರ್, ಪಲ್ಯ ಕೋಸಂಬರಿ, ಚಟ್ನಿ, ಲಾಡು, ಮೈಸೂರು ಪಾಕ್ ನೀಡಲಾಗುವುದು ಎಂದು ಸಮಿತಿ ಮುಖ್ಯಸ್ಥರಾದ ನಾಗೇಶ್ ಮತ್ತು ಎನ್.ಅರುಣ್ ಕುಮಾರ್ ಜೈನ್ ತಿಳಿಸಿದ್ದಾರೆ.

ಮನೆ ಊಟ, ಹಾಸಿಗೆ, ಪುಸ್ತಕ ಪಡೆಯಲು ಅನುಮತಿ ಕೊಡಿ

ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ ನಟ ದರ್ಶನ್



ಬೆಂಗಳೂರು, ಜು.9–ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಜೈಲು ಪಾಲಾಗಿರುವ ನಟ ದರ್ಶನ್ ಮನೆಯಿಂದ ಊಟ, ಹಾಸಿಗೆ, ಪುಸ್ತಕಗಳನ್ನು ಪಡೆಯಲು ಅನುಮತಿ ಕೋರಿ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದಾರೆ.

ನಟ ದರ್ಶನ್ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದು, ತಮಗೆ ಊಟ, ಹಾಸಿಗೆ ಮತ್ತು ಪುಸ್ತಕಗಳನ್ನು ಮನೆಯಿಂದ ಪಡೆಯಲು ಅನುಮತಿ ಕೋರಿ ಜೈಲು ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಕೋರಿ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದಾರೆ.

ಜೈಲಿನಲ್ಲಿ ನೀಡುತ್ತಿರುವ ಊಟ ಜೀರ್ಣವಾಗುತ್ತಿಲ್ಲ. ಇದರಿಂದ ಅತಿಸಾರ– ಭೇದಿ ಆಗುತ್ತಿದೆ. ಜೈಲಿನ ಆಹಾರ ಒಗ್ಗದೇ ಫುಡ್ ಪಾಯಿಸನಿಂಗ್ ಆಗುತ್ತಿದೆ. ಹೀಗೆಂದು ಜೈಲಿನ ವೈದ್ಯರೇ ಮಾಹಿತಿ ನೀಡಿದ್ದಾರೆ ಎಂದು ಅರ್ಜಿಯಲ್ಲಿ ದರ್ಶನ್ ಪರ ವಕೀಲರು ಉಲ್ಲೇಖಿಸಿದ್ದಾರೆ.

ಅತಿಸಾರ, ಭೇದಿಯಿಂದಾಗಿ ದರ್ಶನ್ ದೇಹದ ತೂಕ ತುಂಬಾ ಕಡಿಮೆಯಾಗಿದೆ. ಹಲವು ಕೆಜಿಗಳಷ್ಟು ತೂಕವನ್ನು ದರ್ಶನ್ ಕಳೆದುಕೊಂಡಿದ್ದಾರೆ. ಮನೆ ಊಟಕ್ಕೆ ಅನುಮತಿ ನೀಡುವಂತೆ ಮಾಡಿದ್ದ ಕೋರಿಕೆಯನ್ನು ಮನ್ನಿಸಿಲ್ಲ, ಕೋರ್ಟ್ ಆದೇಶವಿಲ್ಲವೆಂದು ಜೈಲು ಅಧಿಕಾರಿಗಳು ಅನುಮತಿ ನೀಡಿಲ್ಲ. ಜೈಲು ಅಧಿಕಾರಿಗಳ ನಿರಾಕರಣೆ ಕಾನೂನುಬಾಹಿರ ಮತ್ತು ಅಮಾನವೀಯವಾಗಿದೆ.

ಇದೇ ರೀತಿ ಮುಂದುವರಿದರೆ ದರ್ಶನ್ ಆರೋಗ್ಯಕ್ಕೆ ವ್ಯತಿರಿಕ್ತ ಪರಿಣಾಮ ಬೀರಬಹುದು. ಮನೆ ಊಟಕ್ಕೆ ಅನುಮತಿ ನೀಡಿದರೆ ಯಾರಿಗೂ ತೊಂದರೆಯಾಗುವುದಿಲ್ಲ. ಇದರಿಂದ ಸರಕಾರದ ಬೊಕ್ಕಸಕ್ಕೂ ಹೊರೆ ಕಡಿಮೆಯಾಗುತ್ತದೆ. ಹೀಗಾಗಿ ಕುಟುಂಬದವರಿಂದ ಮನೆ ಊಟ ಪಡೆಯಲು ಅನುಮತಿ ನೀಡಬೇಕು ಎಂದು ಹೈಕೋರ್ಟ್‌ಗೆ ಮನವಿ ಮಾಡಿದ್ದಾರೆ. ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ 17 ಮಂದಿ ಆರೋಪಿಗಳು ನ್ಯಾಯಾಂಗ ಬಂಧನದಲ್ಲಿದ್ದಾರೆ.

ಮಾಂಟೆಸರಿ ಶಿಕ್ಷಕರ ತರಬೇತಿ ಕುರಿತು ಕಾರ್ಯಾಗಾರ

ಮೈಸೂರು,ಜು.9–ರಾಷ್ಟ್ರೀಯ ಕಂಪ್ಯೂಟರ್ ಸಾಕ್ಷರತಾ ಸಮಿತಿ ಮೈಸೂರು ಶಾಖೆಯು ಮಾಂಟೆಸರಿ ಶಿಕ್ಷಕರ ತರಬೇತಿ, ನರ್ಸರಿ ಶಿಕ್ಷಕರ ತರಬೇತಿ ಮತ್ತು ಡಿಪ್ಲೊಮಾ ನರ್ಸರಿ ಶಿಕ್ಷಕರ ತರಬೇತಿ ಕುರಿತ ಉಚಿತ ಕಾರ್ಯಾಗಾರ ಆಯೋಜಿಸಿದೆ.

ಜು.17ರ ಬುಧವಾರ ಬೆಳಗ್ಗೆ 10.30ಕ್ಕೆ ರಾಮಕೃಷ್ಣನಗರದ ಜಯಲಕ್ಷ್ಮೀದೇವಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಕಾರ್ಯಾಗಾರವು ನಡೆಯಲಿದ್ದು, ಮಕ್ಕಳ ಮಾನಸಿಕ ಬೆಳವಣಿಗೆ, ಪೌಷ್ಟಿಕಾಂಶ, ಪೂರ್ವಶಾಲಾ ತರಬೇತಿ, ಕಂಪ್ಯೂಟರ್ ತರಬೇತಿ ಕುರಿತಂತೆ ನುರಿತ ತರಬೇತುದಾರರು ಉಪನ್ಯಾಸ ನೀಡಲಿದ್ದಾರೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೊಮಾ, ಪದವಿ ವಿದ್ಯಾರ್ಹತೆ ಹೊಂದಿರುವ 18ರಿಂದ 55ರ ವಯೋಮಾನದ ಎಲ್ಲಾ ಆಸಕ್ತರು ಕಾರ್ಯಾಗಾರದ ಫಲಾನುಭವಿಗಳಾಗಿರುತ್ತಾರೆ. ಹೆಚ್ಚಿನ ಮಾಹಿತಿ ಮತ್ತು ನೋಂದಣಿಗಾಗಿ 8310306882, 9964790442 ಸಂಪರ್ಕಿಸಬಹುದು.

ಮೊಹಮ್ಮದ್ ಅರ್ಮಾನ್ ಸಮೀರ್ ರಾಷ್ಟ್ರಮಟ್ಟದ ಈಜು ಸ್ಪರ್ಧೆಗೆ ಆಯ್ಕೆ



ಮೈಸೂರು,ಜು.9–ಮೈಸೂರಿನ ಕೌಟಿಲ್ಯ ವಿದ್ಯಾಲಯ ಶಾಲೆಯಲ್ಲಿ 6ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಮೊಹಮ್ಮದ್ ಅರ್ಮಾನ್ ಸಮೀರ್ ಬೆಂಗಳೂರಿನಲ್ಲಿ ನಡೆದ ರಾಜ್ಯ ಸಬ್ ಜೂನಿಯರ್ ಮತ್ತು ಜೂನಿಯರ್ ಚಾಂಪಿಯನ್‌ಶಿಪ್‌ನಲ್ಲಿ 50 ಮೀಟರ್ ಬ್ರೆಸ್ಟ್‌ಸ್ಟ್ರೋಕ್‌ನಲ್ಲಿ ಚಿನ್ನ ಹಾಗೂ 100 ಮೀಟರ್ ಬ್ರೆಸ್ಟ್ ಸ್ಟ್ರೋಕ್‌ನಲ್ಲಿ ಬೆಳ್ಳಿ ಪದಕದೊಂದಿಗೆ ಓಡಿಶಾದ ಭುವನೇಶ್ವರದಲ್ಲಿ ನಡೆಯುವ ರಾಷ್ಟ್ರ ಮಟ್ಟದ ಈಜು ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಚಾಮುಂಡಿಬೆಟ್ಟದ ಮೆಟ್ಟಿಲುಗಳ ಸ್ವಚ್ಛತಾ ಕಾರ್ಯಕ್ರಮ



ಮೈಸೂರು, ಜು. 9–ಮೈಸೂರಿನ ಸರ್ ಎಂ.ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಮತ್ತು ಆಷಾಢ ಮಾಸದ ಪ್ರಯುಕ್ತ ಚಾಮುಂಡಿಬೆಟ್ಟದ 1101 ಮೆಟ್ಟಿಲುಗಳ ಸ್ವಚ್ಛತಾ ಕಾರ್ಯಕ್ರಮವನ್ನು ಜು.10ರಂದು ಬೆಳಗ್ಗೆ 6.30ಕ್ಕೆ ಚಾಮುಂಡಿಬೆಟ್ಟದ ಪಾದದಿಂದ ಹಮ್ಮಿಕೊಳ್ಳಲಾಗಿದೆ. ಶಾಸಕ ಟಿ.ಎಸ್.ಶ್ರೀವತ್ಸ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಮಿಲ್ಲೆಟ್ ಮ್ಯಾನ್ ಆಫ್ ಇಂಡಿಯಾ ಡಾ.ಖಾದರ್‌ವಲ್ಲಿ ದುಡೇಕುಲ, ಅಂಕಣಕಾರ, ಸಾಹಿತಿ ಬನ್ನೂರು ಕೆ.ರಾಜು ಸ್ವಚ್ಛತಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

ಚರ್ಮರೋಗ ಉಚಿತ ತಪಾಸಣೆ ಶಿಬಿರ

ಮೈಸೂರು, ಜು.9– ಮೈಸೂರಿನ ರಾಮಕೃಷ್ಣನಗರದಲ್ಲಿರುವ ಸುಯೋಗ್ ಆಸ್ಪತ್ರೆಯಲ್ಲಿ ಜು.13ರವರೆಗೆ ಚರ್ಮರೋಗ ಉಚಿತ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಈ ಶಿಬಿರದಲ್ಲಿ ಉಚಿತ ಸಮಾಲೋಚನೆ ಇದ್ದು, ಕೂದಲು ಉದುರುವಿಕೆ, ಚರ್ಮದ ತೊಂದರೆಗಳು, ಮುಖದಲ್ಲಿ ಮೊಡವೆಗಳು ಮುಂತಾದ ಸಮಸ್ಯೆಗಳಿರುವವರು ಕೂಡಲೇ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ 0821–2533600, 9986399862 ಸಂಪರ್ಕಿಸಬಹುದು.

ಭಾರಿ ರಿಯಾಯ್ತಿ ಮಾರಾಟ



ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪದಲ್ಲಿ ಬ್ರಾಂಡೆಡ್ ರೆಡಿಮೇಡ್ ಗಾರ್ಮೆಂಟ್ಸ್–ಫುಟ್‌ವೇರ್‌ಗಳ ಮೇಲೆ ಭಾರಿ ರಿಯಾಯಿತಿ ಮಾರಾಟ

ಮೈಸೂರು, ಜು. 9– ಬ್ರಾಂಡೆಡ್ ರೆಡಿಮೇಡ್ ಗಾರ್ಮೆಂಟ್ಸ್ ಮತ್ತು ಫುಟ್‌ವೇರ್‌ಗಳ ಮೇಲೆ ಭಾರಿ ರಿಯಾಯಿತಿ ಮಾರಾಟ ಮೈಸೂರಿನ ಕುವೆಂಪುನಗರದ ಉದಯರವಿ ರಸ್ತೆಯಲ್ಲಿರುವ ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪದಲ್ಲಿ ನಡೆಯುತ್ತಿದೆ.

ಒಂದು ಲಕ್ಷದಷ್ಟು ವಿವಿಧ ಬಗೆಯ ಬ್ರಾಂಡೆಡ್ ಸಿದ್ಧ ಉಡುಪುಗಳು, ಪಾದರಕ್ಷೆಗಳು, ಸೀರೆಗಳು ಮತ್ತು ಅಲಂಕಾರಿಕ ವಸ್ತುಗಳ ಬೃಹತ್ ಮಾರಾಟ ನಡೆಯುತ್ತಿದೆ.

ಬ್ರಾಂಡೆಡ್ ಫುಟ್‌ವೇರ್ ಪುರುಷರ ಮತ್ತು ಮಹಿಳೆಯರ ಸ್ಪೋರ್ಟ್ಸ್ ಶೂಸ್, ಪುರುಷರ ಬ್ರಾಂಡೆಡ್ ಶರ್ಟ್ಸ್, ಪ್ಯಾಂಟ್ಸ್, ಟೀ–ಶರ್ಟ್ಸ್, ಜಾಕೆಟ್ಸ್, ಟ್ರಾಕ್ ಪ್ಯಾಂಟ್, ಲೋವರ್ ಶರ್ಟ್ಸ್‌ಗಳು, ಇಲ್ಲಿ ಲಭ್ಯ ವಿದ್ದು, ಮಹಿಳೆಯರ ಬ್ರಾಂಡೆಡ್ ಕುರ್ತಿಗಳು, ಲೇಡೀಸ್ ಟಾಪ್ಸ್, ಜಾಕೆಟ್ಸ್, ಸ್ವೆಟರ್ಸ್, ಟ್ರಾಕ್ ಪ್ಯಾಂಟ್ಸ್, ಟೀ ಶರ್ಟ್ಸ್, ಟೈಟ್ಸ್, ಪ್ಲಾಜೋ, ಲೆಗ್ಗಿನ್ಸ್ ಸಹಿತ ಅನೇಕ ಬ್ರಾಂಡೆಡ್ ಉತ್ಪನ್ನಗಳು ಆಫರ್ ದರದಲ್ಲಿ ಲಭ್ಯವಿದೆ. ಬ್ರಾಂಡೆಡ್ ಪೂಮಾ, ನೈಕ್, ವುಡ್‌ಲ್ಯಾಂಡ್, ಅಡಿದಾಸ್, ಸ್ಕೆಚಸ, ಅಂತ, ಯುಎಸ್ ಪೋಲೋ, ಎಸಿಕ್ಸ್, ಕೆಟಿಯ, ನ್ಯೂ ಬ್ಯಾಲೆನ್ಸ್, ಕ್ಯಾಂಪಸ್, ವಿವಿಧ ಕಂಪನಿಗಳ ಬ್ರಾಂಡೆಡ್ ಶೂಗಳು, ಸ್ಯಾಂಡಲ್ಸ್ ಭಾರಿ ರಿಯಾಯಿತಿ ದರದಲ್ಲಿ ಮಾರಾಟವಾಗುತ್ತಿದೆ. ಈ ಅವಕಾಶ ಕೆಲವೇ ದಿನಗಳು ಮಾತ್ರ. ಬೆಳಗ್ಗೆ 10.30ರಿಂದ ರಾತ್ರಿ 9.30ರವರೆಗೆ ಪ್ರದರ್ಶನ ಹಾಗೂ ಮಾರಾಟ ಸೌಲಭ್ಯ ವಿದೆ. ಡೆಬಿಟ್ ಹಾಗೂ ಕ್ರೆಡಿಟ್ ಕಾರ್ಡ್‌ಗಳನ್ನು ಸ್ವೀಕರಿಸಲಾಗುವುದು.

ಆಷಾಢ ಮಾಸದ ಭಾರಿ ರಿಯಾಯ್ತಿ ಮಾರಾಟ



ಮೈಸೂರು, ಜು.9– ಮೈಸೂರಿನ ಷೂ ವರ್ಲ್ಡ್ ಸಂಸ್ಥೆಯು ಆಷಾಢ ಮಾಸದ ಪ್ರಯುಕ್ತ ವಿಶೇಷ ಶೇ.50ರವರೆಗೆ ರಿಯಾಯಿತಿ ಮಾರಾಟವನ್ನು ತನ್ನ ರಾಮಸ್ವಾಮಿ ವೃತ್ತದ ಪ್ರೆಸ್ಟೀಜ್ ಶಾಪಿಂಗ್ ಕಾಂಪ್ಲೆಕ್ಸ್‌ನಲ್ಲಿರುವ ಮಳಿಗೆಯಲ್ಲಿ ಆಯೋಜಿಸಿದೆ. ಇಲ್ಲಿ ಮಹಿಳೆಯರು ಹಾಗೂ ಪುರುಷರ ಗುಣಮಟ್ಟದ ಪಾದ ರಕ್ಷೆಗಳು ರಿಯಾಯಿತಿ ಬೆಲೆಯಲ್ಲಿ ಲಭ್ಯವಿದೆ. ಇತರ ಇನ್‌ಹೌಸ್ ಬ್ರಾಂಡ್ ಪಾದರಕ್ಷೆ ಗಳ ಖರೀದಿಯ ಮೇಲೆ 10% ರಿಂದ 50% ವರೆಗೆ ರಿಯಾಯಿತಿ ನೀಡಲಾಗುತ್ತಿದೆ. ಈ ಆಕರ್ಷಕ ರಿಯಾಯಿತಿ ಮಾರಾಟ ಜು.22ರವರೆಗೆ ಚಾಲ್ತಿಯಲ್ಲಿರುತ್ತದೆ. ಷೂ ವರ್ಲ್ಡ್ ಯಾವುದೇ ಶಾಖೆ ಹೊಂದಿಲ್ಲ.

ಹೆಚ್.ಆರ್.ಪ್ರಭಾವತಿ ಶಾಲಾ ಕರ್ತವ್ಯದಿಂದ ವಜಾ

ಮೈಸೂರು, ಜು.9– ನಂಜನಗೂಡು ತಾಲೂಕಿನ ಬಂಕಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಹ ಶಿಕ್ಷಕಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಹೆಚ್.ಆರ್ ಪ್ರಭಾವತಿ ಅವರು 16–09–2010 ರಿಂದ ನಿರಂತರವಾಗಿ ಶಾಲಾ ಕರ್ತವ್ಯಕ್ಕೆ ಗೈರು ಹಾಜರಾಗಿದ್ದು, ಇದು ಕರ್ನಾಟಕ ನಾಗರಿಕ ಸೇವಾ ನಿಯಮಗಳಿಗೆ ವಿರುದ್ಧವಾದುದು. ಹಾಗಾಗಿ ಕಚೇರಿ ಪತ್ರ ಸಂಖ್ಯೆ: ಎ4/ ದೂರು/43/2010–11, 29–06–2024 ರಂತೆ ಅವರನ್ನು ಸೇವೆಯಿಂದ ವಜಾಗೊಳಿಸಲಾಗಿದೆ ಎಂದು ನಂಜನಗೂಡು ತಾಲೂಕಿನ ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು,ಜು.9–ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಜು.11ರಂದು ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ದೂ.0821–4259259 ಸಂಪರ್ಕಿಸಬಹುದು.

ಗುಬ್ಬಚ್ಚಿ ಶಾಲೆಯಲ್ಲಿ ಮನೆಗೊಂದು ಗಿಡ: ಆಯುರ್ವೇದ ಸಸಿ ವಿತರಣೆ ಅಭಿಯಾನ



ಸಾಲುಮರದ ತಿಮ್ಮಕ್ಕ ಅವರ 113ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಗುಬ್ಬಚ್ಚಿ ಶಾಲೆಯಲ್ಲಿ ಮನೆಗೊಂದು ಗಿಡ ಆಯುರ್ವೇದ ಸಸಿ ವಿತರಣೆ ಅಭಿಯಾನಕ್ಕೆ ಲಕ್ಷ್ಮೀಪುರಂ ಠಾಣೆ ಇನ್ಸ್‌ಪೆಕ್ಟರ್ ರವಿಶಂಕರ್ ಚಾಲನೆ ನೀಡಿದರು.

ಮೈಸೂರು, ಜು.9– ಹಸಿರುಲೋಕ ವತಿಯಿಂದ ಪದ್ಮಶ್ರೀ ಪುರಸ್ಕೃತೆ ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಅವರ 113ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಕೃಷ್ಣಮೂರ್ತಿಪುರಂ ಬಡಾವಣೆಯ ಗುಬ್ಬಚ್ಚಿ ಶಾಲೆಯಲ್ಲಿ ಮನೆಗೊಂದು ಗಿಡ ಆಯುರ್ವೇದ ಸಸಿ ವಿತರಣೆ ಅಭಿಯಾನ ನಡೆಯಿತು.

ಲಕ್ಷ್ಮಿಪುರಂ ಪೊಲೀಸ್ ಠಾಣೆ ಆರಕ್ಷಕ ವೃತ್ತ ನಿರೀಕ್ಷಕ ರವಿಶಂಕರ್, ಶಾಲಾ ಮಕ್ಕಳು, ಸಾರ್ವಜನಿಕರಿಗೆ ಆಯುರ್ವೇದ ಗಿಡಗಳನ್ನು ವಿತರಿಸಿ, ಚಾಲನೆ ನೀಡಿ, ಮಾತನಾಡಿದ ಅವರು, ದೇಶ ಸಮೃದ್ಧಿಯಾಗಬೇಕಾದರೆ ಸಣ್ಣ ವಯಸ್ಸಿನಲ್ಲೇ ಮಕ್ಕಳು ಉತ್ತಮ ಶಿಕ್ಷಣ ಪಡೆದು ಮೌಲ್ಯಯುತವಾದ ಜೀವನ ನಡೆಸಬೇಕು. ಮನೆಗೊಂದು ಗಿಡ ನೆಟ್ಟು ಪೋಷಿಸಬೇಕು ಎಂದರು.

ಕರ್ನಾಟಕ ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಯವರು ಜನ್ಮ ಕೊಟ್ಟ ತಾಯಿಯ ಹೆಸರಲ್ಲಿ ಒಂದು ಗಿಡ ನೆಡುವಂತೆ ಮನವಿ ಮಾಡಿದ್ದಾರೆ. ಅದರಂತೆಯೇ ಪದ್ಮಶ್ರೀ ಪುರಸ್ಕೃತೆ ಸಾಲುಮರದ ತಿಮ್ಮಕ್ಕ ಅವರ 113ನೇ ವರ್ಷದ ಹುಟ್ಟುಹಬ್ಬ ಮನೆಗೊಂದು ಗಿಡ ಸಸಿ ವಿತರಣೆ ಮೂಲಕ ಆಯೋಜಿಸಿರುವುದು ಶ್ಲಾಘನೀಯ. ಮಹಾರಾಜರ ಕಾಲದಲ್ಲಿ ನೆಟ್ಟ ಸಸಿಗಳು ಈಗ ಪಾರಂಪರಿಕ ನಗರಿಗೆ ಮೆರಗು ನೀಡಿವೆ. ಇಂದಿಗೂ ಗುಬ್ಬಚ್ಚಿ ಶಾಲೆಯಲ್ಲಿ ಕಾಣಸಿಗುವ 115 ವರ್ಷದ ಹಿಂದಿನ ಬಾಗೇಮರ ಲಕ್ಷಾಂತರ ವಿದ್ಯಾರ್ಥಿಗಳಿಗೆ ನಿಸ್ವಾರ್ಥವಾಗಿ ನೆರಳು ನೀಡಿದೆ ಎಂದರು.

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಮಾತನಾಡಿ, ಮನುಷ್ಯನಿಗೆ ಉತ್ತಮ ಆರೋಗ್ಯ ಸಿಗಬೇಕಾದರೆ ಸೊಪ್ಪು ತರಕಾರಿ ಪೌಷ್ಟಿಕಾಂಶವುಳ್ಳ ಆಹಾರ ಸೇವಿಸಬೇಕು. ಹಾಗಾಗಿ ಮನೆಗಳ ತಾರಸಿ ಮೇಲೆ ಮತ್ತು ಮನೆಗಳ ಇಕ್ಕೆಲಗಳಲ್ಲಿ ಒಂದು ಸುಂದರ ಮನೆ ಉದ್ಯಾನ ನಿರ್ಮಿಸುವ ಗುರಿಯಿರಬೇಕು. ಇದರಿಂದ ಮಕ್ಕಳಲ್ಲಿ ಪರಿಸರ ಕಾಳಜಿ ಹೆಚ್ಚುತ್ತದೆ ಎಂದರು.

ಮಕ್ಕಳಿಗೆ ಹೊಯ್ಸಳ ಕರ್ನಾಟಕ ಸಂಘದ ಅಧ್ಯಕ್ಷ ಕೆ.ಆರ್ ಸತ್ಯನಾರಾಯಣ, ಅಖಿಲ ಭಾನಿ ಸಮಾಜ ಮಹಿಳಾ ಅಧ್ಯಕ್ಷೆ ಸವಿತಾ ಘಾಟ್ಕೆ, ವಕೀಲರಾದ ಜಯಶ್ರೀ ಶಿವರಾಮ್, ಕಟ್ಟೆ ಬಳಗದ ಅಧ್ಯಕ್ಷ ಸತ್ಯನಾರಾಯಣ, ಅಗಸ್ತ್ಯ ಸೊಸೈಟಿ ನಿರ್ದೇಶಕ ವಿಕ್ರಂ ಅಯ್ಯಂಗಾರ್, ಅಜಯ್ ಶಾಸ್ತ್ರಿ, ಚೇತನ್ ಕಾಂತರಾಜು, ಸುಚೀಂದ್ರ ಸಚಿನ್ ನಾಯಕ, ರಮಾ, ಮುಖೋಪಾಧ್ಯಾಯ ಮೋಹನ್, ಶಿಕ್ಷಕಿ ಚಂಪಕ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಬುಧವಾರ 10 ಜುಲೈ 2024

ಒಂದೇ ವರ್ಷದಲ್ಲಿ ಶಾಸಕ ಪೊನ್ನಣ್ಣ ಅಪಾರ ಸಾಧನೆ



ವಿರಾಜಪೇಟೆ ಸಮೀಪದ ಬಿಟ್ಟಂಗಾಲದ ಕೂರ್ಗ್ ಎತ್ನಿಕ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮವನ್ನು ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಉದ್ಘಾಟಿಸಿದರು.

ವಿರಾಜಪೇಟೆ, ಜು.9–ಶಾಸಕ ಎ.ಎಸ್. ಪೊನ್ನಣ್ಣ ತಮಗೆ ಸಿಕ್ಕ ಅವಕಾಶವನ್ನು ಬಳಸಿಕೊಂಡು ಒಂದೇ ವರ್ಷದಲ್ಲಿ ಅಪಾರ ಸಾಧನೆ ಮಾಡಿ, ಜನಮೆಚ್ಚುಗೆ ಪಡೆದಿದ್ದಾರೆ ಎಂದು ಅರಮೇರಿ ಕಳಂಚೇರಿ ಮಠದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಹೇಳಿದರು.

ಸಮೀಪದ ಬಿಟ್ಟಂಗಾಲದ ಕೂರ್ಗ್ ಎತ್ನಿಕ್ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಶಾಸಕ ಎ.ಎಸ್.ಪೊನ್ನಣ್ಣ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಒಬ್ಬ ಜನಪ್ರತಿನಿಧಿಯಾಗಿ ತನ್ನ ಕರ್ತವ್ಯವನ್ನು ಅರಿತು ಅಭಿವೃದ್ಧಿ ಕಡೆಗೆ ಗಮನ ಹರಿಸುವ ಮೂಲಕ ಜನರು ಹಾಗೂ ಕೊಡಗಿನ ಜಲ್ವಂತ ಸಮಸ್ಯೆಗಳ ಪರಿಹಾರಕ್ಕೆ ಎ.ಎಸ್.ಪೊನ್ನಣ್ಣ ಅವರ ಸಂಯಮತೆಯನ್ನು ನಾವು ಮೆಚ್ಚಬೇಕು. ಪೊನ್ನಣ್ಣ ತನ್ನ ತಂದೆಯಿಂದ ರಾಜಕೀಯ ನಡೆ ಕಲಿತು ಸೂಕ್ತ ರೀತಿ ಜನಪರ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿ, ಕೊಡಗಿನ ನೆಲ ಜಲ ಉಳಿಸಲು ಕೆಲ ಜನರ ಮುಖವಾಡ ಕಳಚಬೇಕಾಗುತ್ತದೆ. ಅಭಿವೃದ್ಧಿ ಹೆಸರಿನಲ್ಲಿ ಸ್ವಾರ್ಥಕ್ಕಾಗಿ ಕೊಡಗಿನ ಪರಿಸರವನ್ನು ನಾಶ ಮಾಡಿದ್ದಾರೆ. ಇದನ್ನು ಸರಿದೂಗಿಸಿ ಕೊಡಗನ್ನು ಉಳಿಸಲು ಸಂಘ ಸಂಸ್ಥೆಗಳು, ಜನತೆ ಜೊತೆ ಕೈಗೂಡಿ ಆರಂಭಿಸಿರುವ ಸ್ವಯಂ ಪ್ರೇರಿತ ಸ್ವಚ್ಛತಾ ಅಭಿಯಾನ ಆಂದೋಲನವಾಗಿ ಬೆಳೆದು ಗ್ರಾಮ ಮಟ್ಟದಿಂದ ದೇಶಕ್ಕೆ ಸಂದೇಶ ತಲುಪುವಂತಾಗಬೇಕು. ಪ್ರತಿಯೊಬ್ಬರು ಮೊದಲು ತಮ್ಮ ಮನೆಯಿಂದ ಸ್ವಚ್ಛತೆ ಆರಂಭಿಸಬೇಕು. ಕಸವನ್ನು ಸೂಕ್ತವಾಗಿ ವಿಲೇವಾರಿ ಮಾಡುವುದನ್ನು ರೂಢಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಸಂತ ಅನ್ನಮ್ಮ ದೇವಾಲಯ ಧರ್ಮ ಗುರು ಜೇಮ್ಸ್‌ಡೊಮಿನಿಕ್ ಮತ್ತು ಕೊಡಗು ಜಿಲ್ಲಾ ಖಾಝಿ ಎಂ.ಎಂ.ಅಬ್ದುಲ ಫೈಜಿ ಎಡಪಾಲ, ಎಸ್‌ವೈಎಸ್ ರಾಜ್ಯಾಧ್ಯಕ್ಷ ಹಫೀಲ್ ಸಹದಿ, ಕೊಡವ ಸಮಾಜಗಳ ಒಕ್ಕೂಟದ ಅಧ್ಯಕ್ಷ ಕಳ್ಳಿಚಂಡ ವಿಷ್ಣು ಕಾರ್ಯಪ್ಪ, ಅರೆಭಾಷೆ ಗೌಡ ಸಮಾಜಗಳ ಒಕ್ಕೂಟದ ಅಧ್ಯಕ್ಷ ಸೂರ್ತಲೆ ಸೋಮಣ್ಣ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ ಮಾತನಾಡಿದರು.

ವಿಧಾನ ಪರಿಷತ್ ಮಾಜಿ ಸದಸ್ಯರಾದ ಅರುಣ್ ಮಾಚಯ್ಯ, ವೀಣಾ ಅಚ್ಚಯ್ಯ, ಮಾಜಿ ಶಾಸಕ ಕೆ.ಎಂ.ಇಬ್ರಾಹಿಂ, ಹಿರಿಯ ವಕೀಲ ಮೇರಿಯಂಡ ಕೆ.ಪೂವಯ್ಯ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಚಂದ್ರಕಲಾ, ಕೆ.ಬಿ.ಶಾಂತಪ್ಪ, ಡಿಎಫ್‌ಎಫ್ ಅಧ್ಯಕ್ಷ ದಿವಾಕರ, ಕೊಡವ ಅಕಾಡೆಮಿ ಒಕ್ಕೂಟದ ಮಾಜಿ ಸದಸ್ಯ ಕುಡಿಯರ ಮುತ್ತಪ್ಪ, ಭಾಷಿಕ ಸಮಾಜಗಳ ಒಕ್ಕೂಟದ ಕೊಡಗು ಅಧ್ಯಕ್ಷ ಡಾ.ಎಂ. ಸುಭಾಷ್, ಕಾಂಗ್ರೆಸ್ ಮಾಜಿ ಜಿಲ್ಲಾಧ್ಯಕ್ಷ ಟಿ.ಪಿ.ರಮೇಶ್, ಹಿರಿಯ ವಕೀಲ ಚಂದ್ರಮೌಳಿ, ನಗರಸಭೆ ಮಾಜಿ ಅಧ್ಯಕ್ಷ ನಂದಕುಮಾರ್, ಕೆಪಿಸಿಸಿ ವಕ್ತಾರ ಸಂಕೇತ್ ಪೂವಯ್ಯ, ಮುಖಂಡ ಎಂ.ಲಕ್ಷ್ಮಣ, ಎರವರ ಸಮಾಜದ ಅಧ್ಯಕ್ಷ ಪಿ.ಕೆ.ಸಿದ್ದಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಪಟ್ಟಡ ರಂಜಿ ಪೂಣಚ್ಚ, ಮೀದೇರಿರ ನವೀನ್, ಇಸ್ಮಾಯಿಲ್ ಉಪಸ್ಥಿತರಿದ್ದರು.

ಅಧಿಕಾರಿಗಳು 24 ಗಂಟೆ ಅಲರ್ಟ್ ಆಗಿರಬೇಕು



ಮಡಿಕೇರಿ, ಜು.9– ಕರಾವಳಿ ಭಾಗದಲ್ಲಿ ವ್ಯಾಪಕ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೊಡಗಿನಲ್ಲಿ ಯಾವುದೇ ಪರಿಸ್ಥಿತಿ ಎದುರಿಸಲು ದಿನದ 24 ಗಂಟೆ ಅಲರ್ಟ್ ಆಗಿರಬೇಕು ಎಂದು ಶಾಸಕ ಡಾ. ಮಂತರ್‌ಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಕೊಡಗಿನಲ್ಲಿ ಮಳೆ ಪರಿಸ್ಥಿತಿ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಲಾಗಿದೆ. ಆದ್ದರಿಂದ ಅಧಿಕಾರಿಗಳು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಮತ್ತು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ವಿವಿಧ ಇಲಾಖೆ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಹೇಳಿದ್ದಾರೆ.

ಎನ್‌ಡಿಆರ್‌ಎಫ್, ಕರ್ನಾಟಕ ಸ್ಟೇಟ್ ಡಿಸಾಸ್ಟರ್ ಮ್ಯಾನೇಜ್ಮೆಂಟ್ ಅಥಾರಿಟಿ ಹಾಗೂ ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರಿನ ಉನ್ನತ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿರುವುದಾಗಿ ತಿಳಿಸಿದ್ದಾರೆ.

ನಿರ್ಬಂಧವಿದ್ದರೂ ಭಾರೀ ವಾಹನಗಳ ಸಂಚಾರದಿಂದ

ಗ್ರಾಮೀಣ ರಸ್ತೆಗಳು ಸಂಪೂರ್ಣ ಹಾಳು



ಮಡಿಕೇರಿ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬೆಳೆಗಾರ ಮಂಜ್ಜೀರ ಉಮೇಶ್ ಅಪ್ಪಣ್ಣ ಮಾತನಾಡಿದರು.

ಮಡಿಕೇರಿ, ಜು.9–ಜಿಲ್ಲಾ ವ್ಯಾಪ್ತಿಯಲ್ಲಿ ಭಾರೀ ವಾಹನಗಳ ಸಂಚಾರಕ್ಕೆ ಜಿಲ್ಲಾಡಳಿತ ನಿರ್ಬಂಧಿಸಿದ್ದರೂ ಗ್ರಾಮೀಣ ರಸ್ತೆಗಳಲ್ಲಿ ಭಾರೀ ವಾಹನಗಳಲ್ಲಿ ಕಟ್ಟಡ ಸಾಮಾಗ್ರಿಗಳ ಸಾಗಣೆ ನಡೆಯುತ್ತಿದ್ದು, ಇದರಿಂದ ರಸ್ತೆಗಳು ಸಂಪೂರ್ಣ ಹದಗೆಟ್ಟು ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಮಡಿಕೇರಿ ತಾಲೂಕಿನ ಬಿಳಿಗೇರಿ ಗ್ರಾಮದ ಬೆಳೆಗಾರರು ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬೆಳೆಗಾರ ಮಂಜ್ಜೀರ ಉಮೇಶ್ ಅಪ್ಪಣ್ಣ, ಮುಂಗಾರು ಮಳೆ ಹಿನ್ನೆಲೆಯಲ್ಲಿ ಭಾರೀ ವಾಹನಗಳ ಸಂಚಾರಕ್ಕೆ ನಿರ್ಬಂಧಿಸಲಾಗಿದೆ. ಆದರೆ, ಕುಂಬಳದಾಳು ಗ್ರಾಮ ವ್ಯಾಪ್ತಿ ನಡೆಯುತ್ತಿರುವ ರೆಸಾರ್ಟ್‌ವೊಂದರ ಕಾಮಗಾರಿ ನಿರ್ಮಾಣಕ್ಕೆ ಟಿಪ್ಪರ್‌ಗಳ ಮೂಲಕ ಕಲ್ಲು, ಮಣ್ಣು, ಮರಳನ್ನು ಬಿಳಿಗೇರಿ ರಸ್ತೆ ಮೂಲಕ ಸಾಗಿಸಲಾಗುತ್ತಿದೆ ಎಂದು ದೂರಿದರು.

ಮತ್ತೊಂದೆಡೆ ಸಿಲ್ವರ್ ಓಕ್ಸ್ ಮತ್ತು ಇತರೆ ಮರಗಳನ್ನು ಭಾರೀ ವಾಹನಗಳಲ್ಲಿ ಟಾರ್ಪಲ್ ಮುಚ್ಚಿಕೊಂಡು ಸಾಗಿಸಲಾಗುತ್ತಿದೆ. ತೋಟಗಳಲ್ಲಿ ಕಡಿದ ಮರಗಳನ್ನು ಎಳೆಯಲು ಜೆಸಿಬಿ, ಕ್ರೈನ್‌ಗಳನ್ನು ಈ ಭಾಗದ ಗ್ರಾಮೀಣ ರಸ್ತೆಯಲ್ಲಿ ಎಗ್ಗಿಲ್ಲದೆ ಬಳಸಲಾಗುತ್ತಿದೆ ಎಂದು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಶಾಸಕರ ಮಾತು ಲೆಕ್ಕಕ್ಕಿಲ್ಲ: ಶಾಸಕ ಎ.ಎಸ್.ಪೊನ್ನಣ್ಣ ಜಿಲ್ಲಾಡಳಿತದ ಮೂಲಕ ಮುಂಗಾರು ಮಳೆ ಹಿನ್ನೆಲೆಯಲ್ಲಿ ಭಾರೀ ವಾಹನಗಳ ಸಂಚಾರವನ್ನು ನಿಷೇಧಿಸಿದ್ದಾರೆ. ಆದರೆ, ಶಾಸಕರ ಆದೇಶಕ್ಕೆ ಇಲ್ಲಿ ಕವಡೆ ಕಾಸಿನ ಕಿಮ್ಮತ್ತನ್ನು ನೀಡದೆ ಭಾರೀ ವಾಹನಗಳ ಮೂಲಕ ಮರಗಳು, ಕಲ್ಲು, ಮಣ್ಣನ್ನು ಸಾಗಿಸುತ್ತಿರುವುದಾಗಿ ಆತಂಕ ವ್ಯಕ್ತಪಡಿಸಿದರು.

ರಸ್ತೆಯಲ್ಲಿ 10 ಚಕ್ರದ ಲಾರಿಗಳನ್ನು ನಿಲ್ಲಿಸಿಕೊಂಡು ಮರಗಳನ್ನು ತುಂಬುವುದು, ಸಾಗಿಸುವ ಕೆಲಸ ನಡೆಯುತ್ತಿದೆ. ಇದನ್ನು ಪ್ರಶ್ನಿಸಲು ಸಾಧ್ಯವಾಗದ ಆತಂಕದ ವಾತಾವರಣವಿದೆ. ಕಿರಿದಾದ ಗ್ರಾಮೀಣ ರಸ್ತೆಯಲ್ಲಿ ಗ್ರಾಮಸ್ಥರು ಭಾರೀ ವಾಹನಗಳ ಸಂಚಾರದಿಂದ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಭಾರೀ ವಾಹನಗಳ ಸಂಚಾರದಿಂದ ರಸ್ತೆಯಲ್ಲಿ ಗುಂಡಿಗಳು ನಿರ್ಮಾಣವಾಗಿ, ದ್ವಿಚಕ್ರ ವಾಹನ ಚಾಲನೆಗೆ ಅಸಾಧ್ಯವಾಗಿದೆ. ಶೀಘ್ರ ಈ ಗ್ರಾಮೀಣ ರಸ್ತೆಯನ್ನು ದುರಸ್ತಿಪಡಿಸಬೇಕೆಂದು ಒತ್ತಾಯಿಸಿದರು. ಮುಂಗಾರು ಮುಗಿಯುವವರೆಗೆ ಮರಗಳ ಕಡಿತಲೆ ಹಾಗೂ ಅವುಗಳ ಸಾಗಣೆಯ ಭಾರೀ ವಾಹನ ಸಂಚಾರ ನಿರ್ಬಂಧ ಕಟ್ಟುನಿಟ್ಟಾಗಿ ಪಾಲನೆಯಾಗಬೇಕೆಂದು ಜಿಲ್ಲಾಡಳಿತವನ್ನು ಆಗ್ರಹಿಸಿದರು.

ಗಿಡ ನೆಡುವ ಮುಚ್ಚಳಿಕೆ ಇದೆಯೇ?: ಬೆಳೆಗಾರರು ತಮ್ಮ ತೋಟದ ಮರಗಳನ್ನು ಸ್ವಂತ ಬಳಕೆಗೆ ಕಡಿಯಬೇಕೆಂದಾದಲ್ಲಿ ಅದಕ್ಕೆ ಪರವಾನಗಿ ಪಡೆಯುವ ಸಂದರ್ಭ, ಅರಣ್ಯ ಇಲಾಖೆಗೆ ಗಿಡಗಳನ್ನು ನೆಡುವ ಮುಚ್ಚಳಿಕೆ ಬರೆದು ಕೊಡಬೇಕಾಗುತ್ತದೆ. ಆದರೆ, ಪ್ರಸ್ತುತ ಟಿಂಬರ್ ಲಾಬಿಗಳು ಮನಬಂದಂತೆ ಮರಗಳನ್ನು ಕಡಿದು ಸಾಗಿಸುತ್ತಿದ್ದಾರೆ. ಇವರಿಗೆ ಅಂತಹ ಮುಚ್ಚಳಿಕೆ ಇಲ್ಲವೆ? ಎಂದು ಪ್ರಶ್ನಿಸಿದರು. ಇಂತಹ ಬೆಳವಣಿಗೆಗಳು ಜಿಲ್ಲೆಯಲ್ಲಿ ಮತ್ತೊಮ್ಮೆ ಪ್ರಕೃತಿ ವಿಕೋಪಗಳಿಗೆ ಕಾರಣವಾಗುತ್ತದೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಳಿಗೇರಿ ಗ್ರಾಮದ ಬೆಳೆಗಾರರಾದ ತುಂತಜ್ಜೆ ತಿಮ್ಮಯ್ಯ, ಪರ್ಲಕೋಟಿ ಮಾಚಯ್ಯ, ಕೋಟೇರ ಶರಿ ಮುದ್ದಪ್ಪ ಉಪಸ್ಥಿತರಿದ್ದರು.

ವೀರಶೈವ ಲಿಂಗಾಯತ ಜಿಲ್ಲಾಧ್ಯಕ್ಷರಾಗಿ ಶಿವಪ್ಪ



ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕೊಡಗು ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಹೆಚ್.ವಿ.ಶಿವಪ್ಪ ಅವರನ್ನು ಅಭಿನಂದಿಸಲಾಯಿತು.

ಕುಶಾಲನಗರ, ಜು.9–ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕೊಡಗು ಜಿಲ್ಲಾಧ್ಯಕ್ಷರಾಗಿ ನಿವೃತ್ತ ಪ್ರಾಂಶುಪಾಲ ಹೆಚ್.ವಿ.ಶಿವಪ್ಪ ಎರಡನೇ ಬಾರಿಗೆ ಮರು ಆಯ್ಕೆ ಆಗಿದ್ದಾರೆ.

ಪಟ್ಟಣದ ವಾಸವಿ ಮಹಲ್ ಸಭಾಂಗಣದಲ್ಲಿ ಸೋಮವಾರ ಕೊಡ್ಲಿಪೇಟೆ ಕಿರಿಕೊಡ್ಲಿ ಮಠದ ಶ್ರೀ ಸದಾಶಿವಸ್ವಾಮೀಜಿ ಸಮ್ಮುಖದಲ್ಲಿ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಹಾಗೂ ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮ ನಡೆಯಿತು.

2024–29ನೇ ಅವಧಿಗೆ ಪೇಟೆ ತಾಲೂಕು ಅಧ್ಯಕ್ಷರಾಗಿ ಆದರ್ಶ ಕೂಗೇಕೋಡಿ ಮತ್ತು ವಿರಾಜಪೇಟೆ ತಾಲೂಕು ಅಧ್ಯಕ್ಷರಾಗಿ ರಾಜೇಶ್ ನಾಲ್ಕೇರಿ, ಕುಶಾಲನಗರ ತಾಲೂಕು ಅಡಹಕ್ ಸಮಿತಿ ಅಧ್ಯಕ್ಷರಾಗಿ ಹೆಚ್.ಎಂ.ಮಧುಸೂದನ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಮಹಾಸಭಾದ ಜಿಲ್ಲಾ ಹಾಗೂ ತಾಲೂಕು ಘಟಕಕ್ಕೆ ಜು.21ರಂದು ಚುನಾವಣೆ ನಿಗದಿಪಡಿಸಲಾಗಿತ್ತು. ಕಾರ್ಯಕಾರಿ ಸಮಿತಿ ನಿರ್ದೇಶಕರ ಸ್ಥಾನಕ್ಕೆ ನಾಮಪತ್ರ ಸಲ್ಲಿಸಲು ಜು.8ರಂದು ಅಂತಿಮ ದಿನವಾಗಿತ್ತು. ಆದರೆ, ಯಾವುದೇ ಪೈಪೋಟಿ ಇಲ್ಲದ ಹಿನ್ನೆಲೆಯಲ್ಲಿ ಕೊಡಗು ಜಿಲ್ಲಾ ಘಟಕದ ಕಾರ್ಯಕಾರಿ ಸಮಿತಿ ಸೇರಿದಂತೆ ಸೋಮವಾರಪೇಟೆ ಹಾಗೂ ವಿರಾಜಪೇಟೆ ತಾಲೂಕು ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.


ಕೊಡಗು ಜಿಲ್ಲಾ ಗೌರವಾಧ್ಯಕ್ಷ ಸದಾಶಿವ ಪ್ರಮಾಣ ಪತ್ರ ವಿತರಿಸಿದರು. ಉಪಚುನಾವಣಾಧಿಕಾರಿಯಾಗಿ ಜಿತೇಂದ್ರ ವಿರೂಪಾಕ್ಷ ಆಡಿನಾಡೂರು, ವಿರಾಜಪೇಟೆ ಎಸ್.ಎಸ್. ಸುರೇಶ್ ಕಾರ್ಯನಿರ್ವಹಿಸಿದರು. ಸಭೆಯಲ್ಲಿ ಸಮಾಜದ ಪ್ರಮುಖರಾದ ಸಾಂಭ ಶಿವಮೂರ್ತಿ, ಉದಯಕುಮಾರ್, ಮಹಾದೇವಪ್ಪ, ಪ್ರವೀಣ್ ಕುಮಾರ್, ಯತೀಶ್, ಚಂದ್ರಶೇಖರ್, ಎಚ್.ಬಿ.ಚಂದ್ರಪ್ಪ ತೊರೆನೂರು, ಎ.ಆರ್.ಮಮತಾ ಸೋಮವಾರಪೇಟೆ ಮತ್ತಿತರರು ಹಾಜರಿದ್ದರು.

ಇಂದು ಲೋಕಾಯುಕ್ತರಿಂದ ದೂರು ಸ್ವೀಕಾರ

ಮಡಿಕೇರಿ, ಜು.9– ಲೋಕಾಯುಕ್ತ ಅಧಿಕಾರಿಗಳು ಜು.10ರಂದು ವಿರಾಜಪೇಟೆ ತಹಸೀಲ್ದಾರ್ ಕಚೇರಿ ಮತ್ತು 12ರಂದು ಮಡಿಕೇರಿ ತಹಸೀಲ್ದಾರ್ ಕಚೇರಿಯಲ್ಲಿ ಸಾರ್ವಜನಿಕರಿಂದ ದೂರು ಸ್ವೀಕರಿಸಲಿದ್ದಾರೆ.

ಆಯಾ ದಿನ ಬೆಳಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆವರೆಗೆ ದೂರು ಸ್ವೀಕರಿಸಲಿದ್ದು, ಸರ್ಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳಲ್ಲಿ ವಿಳಂಬ ಹಾಗೂ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನೀಡಬಹುದು. ವಿವರಗಳಿಗೆ ಮಡಿಕೇರಿ ಲೋಕಾಯುಕ್ತ ಪೊಲೀಸ್ ಕಚೇರಿ, ಗೌಳಿಬೀದಿ ಮಡಿಕೇರಿ ಅಥವಾ ದೂ.ಸಂ: 08272–295297 ಅನ್ನು ಸಂಪರ್ಕಿಸಬಹುದು ಎಂದು ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.

ಮುಡಾ ಅಧ್ಯಕ್ಷರಾಗಿ ರಾಜೇಶ್ ನೇಮಕ



ಮಡಿಕೇರಿ, ಜು.9–ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ನೂತನ ಅಧ್ಯಕ್ಷರಾಗಿ ನಗರಸಭಾ ಸದಸ್ಯ ಬಿ.ವೈ.ರಾಜೇಶ್ ಅವರನ್ನು ಸರ್ಕಾರ ನೇಮಕಗೊಳಿಸಿ, ಆದೇಶ ಹೊರಡಿಸಿದೆ. ನಾಲ್ವರು ನಾಮನಿರ್ದೇಶಿತ ಸದಸ್ಯರಾಗಿ ಎಂ.ಎನ್. ಸುದಯ್, ಕೆ.ಎ.ಮೊಣ್ಣಪ್ಪ, ಮಿನಾಜ್ ಫಾತಿಮಾ ಹಾಗೂ ಆರ್.ಪಿ.ಚಂದ್ರಶೇಖರ್ ಅವರನ್ನು ನಿಯುಕ್ತಿಗೊಳಿಸಲಾಗಿದೆ.

ಎಸ್.ಸಿ.ಧರ್ಮ ನಿಧನ



ಕುಶಾಲನಗರ: ತಾಲೂಕಿನ ಶಿರಂಗಾಲ ಗ್ರಾಮದ ಕೋಟೆಯ ದೊಳ್ಳೆಗೌಡರ ಚಿಕ್ಕಣ್ಣ ಅವರ ಮಗ ಎಸ್.ಸಿ. ಧರ್ಮ (55) ಅನಾರೋಗ್ಯದಿಂದ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಮಂಗಳವಾರ ಶಿರಂಗಾಲ ಕೋಟೆ ಬಳಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ನಮಗೆ ದಯಾಮರಣ ಕಲ್ಪಿಸಿ

ಆಕ್ಸಿಜನ್ ದುರಂತದ ಮೃತಪಟ್ಟ ಕುಟುಂಬದ ಸಂತ್ರಸ್ತೆಯರ ಕಣ್ಣೀರು



ಸುದ್ದಿಗೋಷ್ಠಿಯಲ್ಲಿ ಸಂತ್ರಸ್ತೆಯರಾದ ನಾಗರತ್ನ, ಸವಿತಾ, ಸೌಮ್ಯ, ನಂದಿನಿ, ಪುಷ್ಪಾ, ಕಣ್ಣೀರು ಹಾಕಿದರು.

ಚಾಮರಾಜನಗರ, ಜು.9–ಆಕ್ಸಿಜನ್ ಕೊರತೆಯಿಂದ ಜಿಲ್ಲಾ ಕೋವಿಡ್ ಆಸ್ಪತ್ರೆಯಲ್ಲಿ ಮೃತಪಟ್ಟ 36 ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡಬೇಕೆಂದು ಹಲವು ಬಾರಿ ಮನವಿ ಮಾಡಿದರೂ ಇದನ್ನು ಸರ್ಕಾರ ನಿರ್ಲಕ್ಷಿಸಿದ್ದು, ತಮಗೆ ಜೀವನ ಮಾಡುವುದು ದುಸ್ತರವಾಗಿರುವುದರಿಂದ ದಯಾಮರಣ ಕಲ್ಪಿಸಿಕೊಡಬೇಕು ಎಂದು ಸಂತ್ರಸ್ತೆಯರು ಮನವಿ ಮಾಡಿದರು.

ನಗರದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮೃತ ಕುಟುಂಬದ ನಾಗರತ್ನ, ಸವಿತಾ, ಸೌಮ್ಯ, ನಂದಿನಿ, ಪುಷ್ಪಾ, ಕಣ್ಣೀರು ಹಾಕುತ್ತಲೇ ತಮ್ಮ ನೋವನ್ನು ಬಿಚ್ಚಿಟ್ಟರು. 2021ರ ಮೇ 2ರಂದು ಅಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅಧಿಕಾರಿಗಳ ನಿರ್ಲಕ್ಷ್ಯದಿಂದ ಆಕ್ಸಿಜನ್ ದೊರಕದೆ 36ಕ್ಕೂ ಹೆಚ್ಚು ಕೋವಿಡ್ ಸೋಂಕಿತರು ಮೃತಪಟ್ಟಿದ್ದಾರೆ. ಮೃತರ ಕುಟುಂಬಗಳಿಗೆ ಅಂದಿನ ಸರ್ಕಾರ ಕನಿಷ್ಠ ಸಾಂತ್ವನ ಹೇಳಲಿಲ್ಲ. ಪರಿಹಾರ ಕೊಡಲಿಲ್ಲ. ಈಗಿನ ಕಾಂಗ್ರೆಸ್ ಸರ್ಕಾರವೂ ಅಂದು ನೀಡಿದ್ದ ಭರವಸೆಯಂತೆ ಉದ್ಯೋಗ ನೀಡಲಿಲ್ಲ. ಇದರಿಂದ ನೊಂದು ನಾವೆಲ್ಲ ದಯಾಮರಣಕ್ಕೆ ರಾಷ್ಟ್ರಪತಿಗೆ ಪತ್ರ ಬರೆದಿರುವುದಾಗಿ ತಿಳಿಸಿದರು.

ಅಂದು ರಾತ್ರಿ ಆಕ್ಸಿಜನ್ ಕೊರತೆಯಿಂದ ಸುಮಾರು 36ಕ್ಕೂ ಹೆಚ್ಚು ಕೋವಿಡ್ ಸೋಂಕಿತರು ಮೃತಪಟ್ಟಿದ್ದಾರೆ. ಈ ಘಟನೆಯಲ್ಲಿ ನಮ್ಮ ಕುಟುಂಬದ ಆಧಾರ ಸ್ಥಂಭವಾಗಿದ್ದ ಯಜಮಾನರನ್ನು ಕಳೆದುಕೊಂಡಿದ್ದೇವೆ. ಆದರೆ, ಘಟನೆ ನಡೆದ ಸಂದರ್ಭದಲ್ಲಿ ಅಂದಿನ ಸರ್ಕಾರ ಯಾವುದೇ ಪರಿಹಾರದ ಮಾತಿರಲಿ, ನೊಂದ ಕುಟುಂಬಗಳಿಗೆ ಸಾಂತ್ವನವನ್ನು ಸಹ ಹೇಳಲಿಲ್ಲ. ಆದರೆ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಮಾಜಿ ಸಂಸದ ದಿ.ಧ್ರುವನಾರಾಯಣ ನೇತೃತ್ವದಲ್ಲಿ ನೊಂದ ಕುಟುಂಬಗಳನ್ನು ಭೇಟಿ ಮಾಡಿದ ಕಾಂಗ್ರೆಸ್, 36 ಕುಟುಂಬಗಳಿಗೆ ಕೆಪಿಸಿಸಿಯಿಂದ ಒಂದು ಲಕ್ಷ ರೂ. ಪರಿಹಾರ ವಿತರಿಸಿ ಸಾಂತ್ವನ ಹೇಳಿತು. ನಂತರ ಭಾರತ್ ಜೋಡೋ ಯಾತ್ರೆ ಸಂದರ್ಭದಲ್ಲಿ ಕಾಂಗ್ರೆಸ್‌ನ ನಾಯಕ ರಾಹುಲ್ ಗಾಂಧಿ, ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಸರ್ಕಾರಿ ನೌಕರಿ ನೀಡುವುದಾಗಿ ಭರವಸೆ ನೀಡಿದ್ದರು. ಆದರೆ, ಕಾಂಗ್ರೆಸ್ ಸರ್ಕಾರ ರಚನೆಯಾಗಿ ಒಂದು ವರ್ಷ ಕಳೆದರೂ ಯಾವುದೇ ಸರ್ಕಾರಿ ಉದ್ಯೋಗ ನೀಡಿಲ್ಲ ಎಂದು ಅಳಲು ತೋಡಿಕೊಂಡರು.

ಚಾಮರಾಜನಗರ ಜಿಲ್ಲಾಡಳಿತ ಕಳೆದ ಫೆಬ್ರವರಿಯಲ್ಲಿ 36 ಸಂತ್ರಸ್ತ ಕುಟುಂಬಗಳ ಪೈಕಿ, ಕೇವಲ 9 ಸಂತ್ರಸ್ತ ಕುಟುಂಬಗಳ ಸದಸ್ಯರಿಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದಲ್ಲಿ ಚಾಮರಾಜನಗರ, ಗುಂಡ್ಲುಪೇಟೆ, ಹನೂರು, ಯಳಂದೂರು, ಕೊಳ್ಳೇಗಾಲ ತಾಲೂಕು ಕಚೇರಿಗಳಲ್ಲಿ ಡಿ ಗ್ರೂಪ್ ನೌಕರಿಯನ್ನು ನೀಡಿ ಪ್ರಾಥಮಿಕವಾಗಿ ಒಂದು ತಿಂಗಳ ಸಂಬಳ ವಿತರಿಸಿ, ನಂತರ 4 ತಿಂಗಳಿಗೊಮ್ಮೆ ಸಂಬಳ ನೀಡಲಾಗುತ್ತಿದೆ. ಈ ಜುಲೈ ತಿಂಗಳಿನಿಂದ ಸಿಮ್ಸ್‌ನಲ್ಲಿ ಎಲ್ಲಾ ಸಂತ್ರಸ್ತ ಕುಟುಂಬಗಳಿಗೂ ಉದ್ಯೋಗ ನೀಡಲಾಗುವುದು ಎಂದು ಹೇಳಿ ಕೈತೊಳೆದುಕೊಂಡಿದ್ದಾರೆ. ಆದರೆ, ಸಿಮ್ಸ್‌ನಲ್ಲಿ ನಿಮ್ಮ ವಿದ್ಯಾರ್ಹತೆಗೆ ತಕ್ಕಂತೆ ಯಾವುದೇ ಉದ್ಯೋಗ ಲಭ್ಯವಿಲ್ಲ ಎಂದು ಸಿಮ್ಸ್‌ನ ಡೀನ್ ತಿಳಿಸಿದ್ದಾರೆ ಎಂದು ಹೇಳಿದರು.

ಆಕ್ಸಿಜನ್ ದುರ್ಘಟನೆಯಲ್ಲಿ ಕುಟುಂಬದ ಮುಖ್ಯಸ್ಥನನ್ನು ಕಳೆದುಕೊಂಡ ಕುಟುಂಬಗಳು ಇಂದಿಗೂ ತಂದೆ–ತಾಯಿ, ಅತ್ತೆ–ಮಾವ ಆಶ್ರಯದಲ್ಲಿ ಬದುಕುತ್ತಿದ್ದೇವೆ. ಜೀವನ ನಿರ್ವಹಣೆ ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ತುಂಬಾ ತೊಂದರೆಯಾಗಿದೆ. ಆದ್ದರಿಂದ ರಾಷ್ಟ್ರಪತಿ ಸಂತ್ರಸ್ತರ ಕುಟುಂಬದ ಸದಸ್ಯರಿಗೆ ಸೂಕ್ತ ಉದ್ಯೋಗ ಕಲ್ಪಿಸಿಕೊಡುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಬೇಕು. ಇಲ್ಲವಾದಲ್ಲಿ ಜೀವನ ನಿರ್ವಹಣೆಗೆ ತುಂಬಾ ಕಷ್ಟಪಡುತ್ತಿರುವ ನಮಗೆ ದಯಾಮರಣ ಕಲ್ಪಿಸಿ ಮುಕ್ತಿ ನೀಡಬೇಕೆಂದು ಕಂಬನಿ ಮಿಡಿದರು.

ಸಿಎಂ ಭೇಟಿಗೆ ಅವಕಾಶ ನೀಡಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು (ಬುಧವಾರ) ಚಾ.ನಗರಕ್ಕೆ ಭೇಟಿ ನೀಡಲಿದ್ದು, ಸಿಎಂ ಭೇಟಿಗೆ ಅವಕಾಶ ಕಲ್ಪಿಸಿಕೊಡಬೇಕು. ನಮಗೆ ಕಾಯಂ ಸರ್ಕಾರಿ ನೌಕರಿ ನೀಡಲು ಭರವಸೆ ನೀಡಿ ಕ್ರಮ ಕೈಗೊಳ್ಳ ಬೇಕು. ಅವರ ಭರವಸೆಯನ್ನು ಕಾಯುತ್ತಿದ್ದೇವೆ ಎಂದು ಆಕ್ಸಿಜನ್ ಸಂತ್ರಸ್ತ ಕುಟುಂಬದವರು ತಿಳಿಸಿದರು.

ಕಾಂಗ್ರೆಸ್ಸಿಗರ ಅಪಪ್ರಚಾರದಿಂದ ನನಗೆ ಸೋಲು

ಮತದಾರರ ಕೃತಜ್ಞತೆ ಸಭೆಯಲ್ಲಿ ಎಸ್.ಬಾಲರಾಜು ಆರೋಪ



ಚಾಮರಾಜನಗರ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಮತದಾರರ ಕೃತಜ್ಞತಾ ಸಭೆಯಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಮಾತನಾಡಿದರು.

ಚಾಮರಾಜನಗರ, ಜು.9– ಲೋಕಸಭಾ ಚುನಾವಣಾ ಆರಂಭಕ್ಕೂ ಮುನ್ನ ಬಿಜೆಪಿ ವಿರುದ್ಧ ಕಾಂಗ್ರೆಸ್ಸಿಗರು ನಿರಂತರವಾಗಿ ಅಪಪ್ರಚಾರ ಮಾಡಿದ್ದರಿಂದ ನನಗೆ ಸೋಲಾಯಿತು ಎಂದು ಬಿಜೆಪಿ ಪರಾಜಿತ ಅಭ್ಯರ್ಥಿ ಎಸ್. ಬಾಲರಾಜು ಆರೋಪಿಸಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಮಂಗಳವಾರ ನಡೆದ ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಮತದಾರರ ಕೃತಜ್ಞತಾ ಸಭೆಯಲ್ಲಿ ಮಾತನಾಡಿದ ಅವರು, ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಗೆ ಗೆಲ್ಲುವ ಎಲ್ಲಾ ವಾತಾವರಣವಿತ್ತು. ಆದರೆ, ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಿಸುತ್ತಾರೆ ಎಂದು ಕಾಂಗ್ರೆಸ್‌ನವರು ಹಸಿ ಸುಳ್ಳನ್ನು ಪದೇ ಪದೆ ಹೇಳಿದರು. ಜೊತೆಗೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ವೈಯಕ್ತಿಕವಾಗಿ ತೇಜೋವಧೆ ಮಾಡಿದ್ದರಿಂದ ನನ್ನ ಸೋಲಿಗೆ ಕಾರಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸಚಿವ ಹೆಚ್.ಸಿ.ಮಹದೇವಪ್ಪ ತನ್ನ ಮಗನನ್ನು ಗೆಲ್ಲಿಸಿಕೊಳ್ಳಲು ಮತ್ತೊಬ್ಬ ದಲಿತ ನಾಯಕನಿಗೆ ಅನ್ಯಾಯ ಮಾಡಿದ್ದಾರೆ. ಇದು ಅಂಬೇಡ್ಕರ್ ಆಶಯಕ್ಕೆ ವಿರುದ್ಧವಾಗಿದ್ದು, ಕುಟುಂಬ ಹಾಗೂ ಪುತ್ರ ವ್ಯಾಮೋಹದಿಂದ ಅಂಬೇಡ್ಕರ್ ತತ್ವ ಸಿದ್ಧಾಂತವನ್ನು ಅವರು ಮರೆತಿದ್ದಾರೆ ಎಂದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಮಾತನಾಡಿ, ಬುಧವಾರ ಜಿಲ್ಲಾ ಕೇಂದ್ರ ಚಾ.ನಗರದಲ್ಲಿ ಕಾಂಗ್ರೆಸ್‌ನವರು ಮಾಡುತ್ತಿರುವುದು ಅಭಿನಂದನಾ ಸಮಾರಂಭವಲ್ಲ. ಎಲ್ಲಾ ಹಗರಣಗಳಲ್ಲಿ ಸಿಲುಕಿ ನರಳಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಶಕ್ತಿ ಪ್ರದರ್ಶನವಾಗಿದೆ. ಹಗರಣ ಮತ್ತು ಭ್ರಷ್ಟಾಚಾರದಲ್ಲಿ ತೊಡಗಿರುವ ಸಿದ್ದರಾಮಯ್ಯ ಮತ್ತು ಅವರ ಸಂಪುಟದ ಸಚಿವರು ಒಂದು ತಿಂಗಳ ಬಳಿಕ ಮತದಾರರಿಗೆ ಕೃತಜ್ಞತೆ ಸಲ್ಲಿಸಲು ಬರುತ್ತಿದ್ದಾರೆ. ನೂತನ ಸಂಸದರು ಇನ್ನು ಸಹ ಕ್ಷೇತ್ರಕ್ಕೆ ಬಂದಿಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ವ್ಯಂಗ್ಯವಾಡಿದರು.

ಗ್ಯಾರಂಟಿ ಯೋಜನೆ ಹಾಗೂ ಬಿಜೆಪಿ ಸಂವಿಧಾನ ವಿರೋಧಿ ಎಂಬ ಹೇಳಿಕೆಗಳು ನಮ್ಮ ಪಕ್ಷದ ಸೋಲಿಗೆ ಪ್ರಮುಖ ಕಾರಣವಾಗಿದೆ. ಚುನಾವಣೆ ಹತ್ತಿರದಲ್ಲಿ ರಾಜ್ಯ ಸರ್ಕಾರ ಮಹಿಳೆಯರ ಖಾತೆಗೆ 2 ಸಾವಿರ ರೂ. ಹಾಕಿದ್ದರಿಂದ ಮಹಿಳಾ ಮತಗಳು ಕಾಂಗ್ರೆಸ್ ಕಡೆ ಹೋದವು. ಕಾಂಗ್ರೆಸ್ಸಿಗರು ಪ್ರತಿ ಸಭೆ–ಸಮಾರಂಭಗಳಲ್ಲಿ ಬಿಜೆಪಿ ಗೆದ್ದರೆ ಸಂವಿಧಾನ ಬದಲಿಸುತ್ತಾರೆ. ದಲಿತರು ಸಮುದ್ರಕ್ಕೆ ಬೀಳಬೇಕಾಗುತ್ತದೆ ಎಂಬ ಹಸಿ ಸುಳ್ಳು ಅನ್ನು ಬಿತ್ತುವ ಮೂಲಕ ದಲಿತರ ಮತಗಳು ಬಿಜೆಪಿಗೆ ಬರದಂತೆ ಮಾಡಿದರು. ಇವೆಲ್ಲವು ಸಹ ನಮ್ಮ ಸೋಲಿಗೆ ಕಾರಣವಾಯಿತು ಎಂದರು.

ಸಭೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ್ ಕುಮಾರ್, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಚಾಮುಲ್ ಅಧ್ಯಕ್ಷ ವೈ.ಸಿ.ನಾಗೇಂದ್ರ ಬಿಜೆಪಿ ಎಸ್ಟಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಜಯಸುಂದರ್, ರಾಷ್ಟ್ರೀಯ ಓಬಿಸಿ ಮೋರ್ಚಾ ಕಾರ್ಯಕಾರಣಿ ಸದಸ್ಯ ನೂರೊಂದು ಶೆಟ್ಟಿ, ನಗರ ಮಂಡಲಾಧ್ಯಕ್ಷ ಶಿವರಾಜು, ಮಾಧ್ಯಮ ಪ್ರಮುಖ್ ವೀರೇಂದ್ರ ಹಾಜರಿದ್ದರು.

ತೊಂಬೆ ತೆರವು ಖಂಡಿಸಿ ನಿವಾಸಿಗಳ ಪ್ರತಿಭಟನೆ



ಚಾಮರಾಜನಗರದ 26ನೇ ವಾರ್ಡ್ ನಿವಾಸಿಗಳು ಖಾಲಿ ಬಿಂದಿಗೆ ಹಿಡಿದು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಜು.9– ನಗರದ 26ನೇ ವಾರ್ಡ್‌ನಲ್ಲಿ ನೀರಿನ ತೊಂಬೆಯನ್ನು ನಗರಸಭೆ ಏಕಾಏಕಿ ತೆರವುಗೊಳಿಸಿದೆ ಎಂದು ಆರೋಪಿಸಿ ನಿವಾಸಿಗಳು ಖಾಲಿ ಬಿಂದಿಗೆ ಹಿಡಿದು ಮಂಗಳವಾರ ಪ್ರತಿಭಟನೆ ನಡೆಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಯುವ ಮುಖಂಡ ಭಾನುಪ್ರಕಾಶ್ ಮಾತನಾಡಿ, ವಾರ್ಡ್‌ನಲ್ಲಿ 15 ದಿನಗಳಿಗೊಮ್ಮೆ ಕುಡಿಯುವ ನೀರು ಬಿಡಲಾಗುತ್ತಿದೆ. ಇದರಿಂದ ನೀರಿನ ಸಮಸ್ಯೆ ತಲೆದೋರಿದ್ದು, ನಿವಾಸಿಗಳು ತೊಂಬೆಯ ನೀರು ಉಪಯೋಗಿಸುತ್ತಿದ್ದರು. ಆದರೆ, ನಗರಸಭೆ ಇಂದು ಏಕಾಏಕಿ ಕುಡಿಯುವ ನೀರಿನ ತೊಂಬೆ ತೆರವುಗೊಳಿಸಿದ್ದಾರೆ. ಕೂಡಲೇ ತೊಂಬೆಯನ್ನು ಅಲ್ಲೇ ಇಟ್ಟು ನಿವಾಸಿಗಳಿಗೆ ಅನುಕೂಲ ಕಲ್ಪಿಸಬೇಕು. ಇಲ್ಲದಿದ್ದರೆ ನಗರಸಭೆ ಕಚೇರಿ ಎದುರು ನಿವಾಸಿಗಳೊಂದಿಗೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು. ಪ್ರತಿಭಟನೆಯಲ್ಲಿ ನಿವಾಸಿಗಳಾದ ಜಯಲಕ್ಷ್ಮೀ, ರಾಜಮ್ಮ, ಮರಗತಂ, ಗೋವಿಂದರಾಜ, ರವಿ, ಪರಶಿವಮೂರ್ತಿ, ಮಾಣಿಕ್ಯಂ ಇತರರು ಭಾಗವಹಿಸಿದ್ದರು.

ವರದಕ್ಷಿಣೆ ಕಿರುಕುಳದಿಂದ ವಿಷ ಸೇವಿಸಿದ್ದ ಮಹಿಳೆ ಸಾವು

ಕೊಳ್ಳೇಗಾಲ, ಜು.9– ವರದಕ್ಷಿಣೆ ಕಿರುಕುಳದಿಂದ ವಿಷ ಸೇವಿಸಿದ್ದ ಮಹಿಳೆ ಮೃತಪಟ್ಟಿರುವ ಘಟನೆ ಹಳೇ ಹಂಪಾಪುರ ಗ್ರಾಮದಲ್ಲಿ ಮಂಗಳವಾರ ನಡೆದಿದೆ. ಗ್ರಾಮದ ಇಂದ್ರಕುಮಾರ್ ಪತ್ನಿ ಸುಜಾತ ಅಲಿಯಾಸ್ ಸುನೀತಾ (31) ಮೃತಪಟ್ಟ ಮಹಿಳೆ.

ಈಕೆಯನ್ನು 6 ವರ್ಷಗಳ ಹಿಂದೆ ಹಳೇ ಹಂಪಾಪುರ ಗ್ರಾಮದ ನಿಂಗರಾಜು ಮತ್ತು ಸುಂದ್ರಮ್ಮ ದಂಪತಿ ಪುತ್ರ ಇಂದ್ರಕುಮಾರ್‌ಗೆ ವಿವಾಹ ಮಾಡಿಕೊಡಲಾಗಿತ್ತು. ವಿವಾಹ ವೇಳೆ 12 ಗ್ರಾಂ ಚಿನ್ನದ ಚೈನ್, 5 ಗ್ರಾಂ ಉಂಗುರ ನೀಡಲಾಗಿತ್ತು ಆದರೆ, ಮದುವೆಯಾದಾಗಿನಿಂದಲೂ ನನ್ನ ಮಗಳಿಗೆ ಅಳಿಯ ಇಂದ್ರಕುಮಾರ್ ಕಿರುಕುಳ ನೀಡುತ್ತಿದ್ದ. ಹಲವು ಬಾರಿ ಮಗಳ ಮೇಲೆ ಹಲ್ಲೆ ನಡೆಸಿ ನಮ್ಮ ಮನೆಗೆ ಕಳುಹಿಸಿದ್ದ. ಇದರಿಂದ ಕಿರುಕುಳ ತಾಳಲಾರದೆ ಜು.4ರಂದು ವಿಷ ಸೇವಿಸಿದ್ದಳು. ಅಸ್ವಸ್ಥಳಾಗಿದ್ದ ಮಗಳನ್ನು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಮಂಗಳವಾರ ಮೃತಪಟ್ಟಿದ್ದಾಳೆ ಎಂದು ಮೃತಳ ತಾಯಿ ತಾಯಮ್ಮ ಪಟ್ಟಣ ಠಾಣೆ ಪೊಲೀಸರಿಗೆ ದೂರು ನೀಡಿದ್ದಾರೆ.

ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಇಲ್ಲ



ಗುಂಡ್ಲುಪೇಟೆ ಸಿಎಂಎಸ್ ಕಲಾಮಂದಿರದಲ್ಲಿ ನಡೆದ ಮತದಾರರ ಕೃತಜ್ಞತಾ ಸಭೆಯಲ್ಲಿ ಸಿ.ಎಸ್.ನಿರಂಜನಕುಮಾರ್ ಮಾತನಾಡಿದರು.

ಗುಂಡ್ಲುಪೇಟೆ, ಜು.9–ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ನಡೆಯುತ್ತಿಲ್ಲ ಎಂದು ಮಾಜಿ ಶಾಸಕ ನಿರಂಜನ ಕುಮಾರ್ ಆರೋಪಿಸಿದರು.

ಪಟ್ಟಣದ ಸಿಎಂಎಸ್ ಕಲಾಮಂದಿರದಲ್ಲಿ ಮಂಗಳವಾರ ಆಯೋಜಿಸಿದ್ದ ಮತದಾರರ ಕೃತಜ್ಞತಾ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರ ಕೇವಲ ಗ್ಯಾರಂಟಿ ಯೋಜನೆಗಳಿಗೆ ಹಣ ವ್ಯಯ ಮಾಡುತ್ತಿದೆ ಹೊರತು ಅಭಿವೃದ್ಧಿಗೆ ಬಿಡಿಗಾಸು ನೀಡುತ್ತಿಲ್ಲ. ಸ್ಥಳೀಯ ಶಾಸಕರು ಯಾವುದೇ ಅನುದಾನ ತಂದು ಅಭಿವೃದ್ಧಿ ಕಾಮಗಾರಿ ಕೈಗೊಳ್ಳುತ್ತಿಲ್ಲ ಎಂದು ಹೇಳಿದರು.

ಪಟ್ಟಣದ ಕನಕದಾಸ ವೃತ್ತದಲ್ಲಿ ಹೆಚ್ಚಿನ ವಾಹನಗಳ ಸಂಚಾರವಿದ್ದರೂ ರಸ್ತೆಯಲ್ಲಿ ಮುರಿದಿರುವ ಸ್ಲಾಬ್‌ಗಳ ದುರಸ್ತಿಗೂ ಸಹ ಕ್ರಮ ಕೈಗೊಳ್ಳಲು ಅವರಿಂದ ಸಾಧ್ಯವಾಗಿಲ್ಲ ಎಂದು ತಿಳಿಸಿದರು.

ಮಾಜಿ ಶಾಸಕ ಬಾಲರಾಜು ಮಾತನಾಡಿದರು. ಮಾಜಿ ಸಚಿವ ಎನ್.ಮಹೇಶ್, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಹಿರಿಕಾಟಿ ಸೋಮಶೇಖರ್, ಮಂಡಲಾಧ್ಯಕ್ಷ ಸಿ.ಮಹದೇವಪ್ರಸಾದ್, ಪುರಸಭೆ ಮಾಜಿ ಅಧ್ಯಕ್ಷ ಪಿ.ಗಿರೀಶ್, ಮುಖಂಡರಾದ ಎನ್.ಮಲ್ಲೇಶ್, ಎಲ್. ಸುರೇಶ್, ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸಭೆಯಲ್ಲಿ ಭಾಗವಹಿಸಿದ್ದರು.

ವಾಹನ ಡಿಕ್ಕಿ: ಬೈಕ್ ಸವಾರ ಸಾವು

ಕೊಳ್ಳೇಗಾಲ, ಜು.9–ವಾಹನವೊಂದು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ತಾಲೂಕಿನ ಕಾಮಗೆರೆ ಗ್ರಾಮದ ಬಳಿ ಸೋಮವಾರ ನಡೆದಿದೆ.

ಕಾಮಗೆರೆ ಗ್ರಾಮದ ಶಂಕರಪ್ಪ ಅವರ ಪುತ್ರ ಬಸವಣ್ಣ (36) ಮೃತಪಟ್ಟ ಬೈಕ್ ಸವಾರ. ಈತ ಹನೂರಿನಿಂದ ಗ್ರಾಮಕ್ಕೆ ಬೈಕ್‌ನಲ್ಲಿ ಬರುತ್ತಿದ್ದಾಗ ಎದರಿನಿಂದ ಬಂದ ವಾಹನ ಚಾಲಕನ ಅಜಾಗರೂಕತೆಯಿಂದ ಡಿಕ್ಕಿ ಹೊಡೆದಿದೆ. ಪರಿಣಾಮ ಈತ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಈ ಸಂಬಂಧ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗೌಡರಟ್ಟಿ ಈಶ್ವರಮ್ಮ ನಿಧನ



ಗುಂಡ್ಲುಪೇಟೆ, ಜು.9–ತಾಲೂಕಿನ ಕೊಡಸೋಗೆ ಗ್ರಾಮದ ಗೌಡರಟ್ಟಿ ಈಶ್ವರಮ್ಮ (88) ಮಂಗಳವಾರ ನಿಧನರಾದರು.

ಮೃತರಿಗೆ ಇಬ್ಬರು ಪುತ್ರರು, ಪುತ್ರಿ ಇದ್ದಾರೆ. ಬುಧವಾರ ಸ್ವಗ್ರಾಮ ಕೊಡಸೋಗೆಯಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಇಂದಿನಿಂದ 25ರವರೆಗೆ ಕಬಿನಿ ವ್ಯಾಪ್ತಿಯ ಕೆರೆ ಕಟ್ಟೆಗಳಿಗೆ ನೀರು

ಮೈಸೂರು, ಜು.9–ಜಲವರ್ಷದಲ್ಲಿ ಕಬಿನಿ ಜಲಾನಯನ ಪ್ರದೇಶದಲ್ಲಿ ಮುಂಗಾರು ಮಳೆಯು ಪ್ರಾರಂಭವಾಗಿದ್ದು, ಕಬಿನಿ ಜಲಾಶಯಕ್ಕೆ ಒಳ ಹರಿವು ಬರುತ್ತಿದ್ದು, ಒಳಹರಿವಿನ ನೀರಿನ ಪ್ರಮಾಣ ಹಾಗೂ ಒಟ್ಟಾರೆ ಜಲಾಶಯದಲ್ಲಿ ಸಂಗ್ರಹವಾಗಿರುವ ನೀರಿನ ಲಭ್ಯತೆ ಮೇರೆಗೆ ಕಬಿನಿ ಎಡದಂಡೆ ಮತ್ತು ಬಲ ದಂಡೆ ನಾಲೆಗಳ ಮುಖಾಂತರ ಜನ ಜಾನುವಾರುಗಳಿಗೆ ಕುಡಿಯಲು ಅನುಕೂಲವಾಗುವಂತೆ ಕೆರೆ ಕಟ್ಟೆಗಳಿಗೆ ಜು.10ರಿಂದ 25ರವರೆಗೆ ನೀರು ಹರಿಸಲು ಉದ್ದೇಶಿಸಲಾಗಿದೆ. ಕಬಿನಿ ಜಲಾಶಯದ ವ್ಯಾಪ್ತಿಗೆ ಬರುವ ಅಚ್ಚುಕಟ್ಟುದಾರರು ನೀರಾವರಿ ಅಧಿಕಾರಿಗಳೊಡನೆ ಸಹಕರಿಸಿ ಕೆರೆ ಕಟ್ಟೆಗಳಿಗೆ ಕುಡಿಯುವ ಮತ್ತು ಜನಜಾನುವಾರುಗಳ ಉಪಯೋಗಕ್ಕಾಗಿ ಮಾತ್ರ ನೀರನ್ನು ಬಳಸಬೇಕು. ಮುಂದಿನ ದಿನಗಳಲ್ಲಿ ಜಲಾಶಯಕ್ಕೆ ಬರುವ ಒಳ ಹರಿವಿನ ಪ್ರಮಾಣವನ್ನು ಆಧರಿಸಿ ಅಚ್ಚುಕಟ್ಟು ಪ್ರದೇಶಕ್ಕೆ 2024–25ನೇ ಸಾಲಿನ ಖಾರೀಪ್ ಬೆಳೆಗಳಿಗೆ ನಾಲೆಗಳ ಮುಖೇನ ನೀರು ಬಿಡುವ ಬಗ್ಗೆ ಕಬಿನಿ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆ ಕರೆದು ಸಮಿತಿಯಲ್ಲಿ ತೀರ್ಮಾನಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಮೂರನೇ ಪುಟದಿಂದ

ಶಾಲೆ ಬಿಟ್ಟ ಮಕ್ಕಳ ಮತ್ತೆ ಕರೆತನ್ನಿ

ನಿಗದಿತ ಸಮಯದೊಳಗೆ ಸರ್ಕಾರದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ ಎಂದು ಸೂಚಿಸಿದರು. ಸಾಮಾಜಿಕ, ಆರ್ಥಿಕ ಕಾರಣದಿಂದ ಶಾಲೆಯಿಂದ ದೂರ ಉಳಿದ ಮಕ್ಕಳ ಬಗ್ಗೆ ಕಾಳಜಿ ವಹಿಸಿ ಶಿಕ್ಷಣ ಒದಗಿಸಿ, ರಾಜಪ್ಪ ಎಂಬ ಮೇಸ್ಟ್ರು, ಶಾಲೆಯಿಂದ ಹೊರಗುಳಿದಿದ್ದ ನನ್ನನ್ನು ಶಾಲೆಗೆ ಮತ್ತೆ ಕರೆತರದಿದ್ದರೆ, ಇಂದು ಮುಖ್ಯಮಂತ್ರಿಯಾಗಿ ನಿಮ್ಮನ್ನು ಉದ್ದೇಶಿಸಿ ಮಾತನಾಡುವ ಪರಿಸ್ಥಿತಿ ಬರುತ್ತಿರಲಿಲ್ಲ. ಬಡವರ ಬಗ್ಗೆ ಕಾಳಜಿ ವಹಿಸಿ ಮಕ್ಕಳಿಗೆ ಶಿಕ್ಷಣ ಕೊಡಿಸಿ, ಅವರು ಮುಂದೆ ದೇಶದ ಆರ್ಥಿಕ ಪ್ರಗತಿಗೆ ಬೆನ್ನೆಲುಬಾಗುತ್ತಾರೆ.

ಗ್ರಾಮೀಣ ಭಾಗದಲ್ಲಿ ಎರಡು ಸಾವಿರ ಶಾಲೆಗಳನ್ನು ಸಿಎಸ್‌ಆರ್ ನೆರವಿನಿಂದ ನಿರ್ಮಾಣ ಮಾಡಲಾಗುವುದು. ಈ ಶಾಲೆಗಳು ಆಧುನಿಕ ಯುಗಕ್ಕೆ ತಕ್ಕಂತೆ ಇರಲಿವೆ. ಇಲ್ಲಿ ಎಲ್ಲಾ ಮೂಲಸೌಕರ್ಯಗಳು ಇರುತ್ತವೆ. ಪ್ರತಿವರ್ಷ 6 ರಿಂದ 16 ವರ್ಷದೊಳಗಿನ ಮಕ್ಕಳ ಸಮೀಕ್ಷೆ ನಡೆಸಿ ಕಲಿಕೆಯಿಂದ ದೂರ ಉಳಿದ ಮಕ್ಕಳನ್ನು ಮತ್ತೆ ಕರೆ ತನ್ನಿ. ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಬಾಲ್ಯವಿವಾಹ ಮೇಲ್ವಿಚಾರಣಾ ಸಮಿತಿಗಳನ್ನು, ಗ್ರಾಮ ಪಂಚಾಯತ್ ಮಟ್ಟದಲ್ಲಿ ಕಾವಲು ಸಮಿತಿಗಳ ಬಲವರ್ಧನೆಗೆ ಖಡಕ್ ಸೂಚನೆ ನೀಡಿದರು. 4,180 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 9,411 ಸಹಾಯಕಿಯರ ಖಾಲಿ ಇರುವ ಹುದ್ದೆಗಳನ್ನು ಡಿಸೆಂಬರ್ ಒಳಗೆ ಭರ್ತಿ ಮಾಡಿ.

ನಗರ ಪ್ರದೇಶದಲ್ಲಿ ಸಹಾಯಕಿಯರ ಗೌರವಧನ ಹೆಚ್ಚಳಕ್ಕೆ ಪ್ರಸ್ತಾವನೆ ಸಲ್ಲಿಸಿ ಎಂದು ಸೂಚಿಸಿದರು.

ಸಿಂಧುತ್ವ ಪ್ರಮಾಣಪತ್ರ ವಿಚಾರದಲ್ಲಿ ಅಸಡ್ಡೆ ಮಾಡಬೇಡಿ ಎಂದು ಕಿವಿಮಾತು ಹೇಳಿದ ಮುಖ್ಯಮಂತ್ರಿ ಅವರು, ಅರ್ಹರಿದ್ದರೆ ತಕ್ಷಣ ಅವರಿಗೆ ಪ್ರಮಾಣ ಪತ್ರ ನೀಡಿ, ಇದಕ್ಕಾಗಿ ಬಂದವರನ್ನು ಸತಾಯಿಸಬೇಡಿ ಎಂದರು. ಉಪವಿಭಾಗಾಧಿಕಾರಿಗಳ ನೇತೃತ್ವದಲ್ಲಿ ದೌರ್ಜನ್ಯ ತಡೆ ಸಮಿತಿ ಸಭೆಗಳನ್ನು ನಿಯಮಿತವಾಗಿ ನಡೆಸದಿರುವುದಕ್ಕೆ ಮುಖ್ಯಮಂತ್ರಿ ಗರಂ ಆದರು. ಗಂಗಾಕಲ್ಯಾಣ ಯೋಜನೆಯಡಿ ವಿದ್ಯುದೀಕರಣಕ್ಕೆ ನೋಂದಾಯಿಸಿದ ಹಾಗೂ ಬಾಕಿ ಇರುವ ಅರ್ಜಿಗಳನ್ನು ತಕ್ಷಣ ವಿಲೇವಾರಿ ಮಾಡಿ ಎಂದು ಆದೇಶಿಸಿದರು.

ಗ್ಯಾರಂಟಿಗಳ ಭಾರದಿಂದ ತತ್ತರಿಸಿದ ಸರ್ಕಾರ

ಜಮೀನು ಎಷ್ಟಿದೆ ಎಂಬುದನ್ನು ತಿಳಿಯಲು ಕಂದಾಯ ಇಲಾಖೆ, ತೆರಿಗೆ ಪಾವತಿದಾರರಾ ಎಂಬುದನ್ನು ಪತ್ತೆ ಹಚ್ಚಲು ಐಟಿ ಇಲಾಖೆಯ ನೆರವು ಪಡೆಯಲು ಆಹಾರ ಇಲಾಖೆ ಸಜ್ಜಾಗುತ್ತಿದೆ.

ಯಾರದ್ದೆಲ್ಲಾ ರದ್ದಾಗುತ್ತೆ: ಕುಟುಂಬದ ವಾರ್ಷಿಕ ಆದಾಯ 1.20 ಲಕ್ಷ ರೂ. ಮೀರಿದಲ್ಲಿ, ಆದಾಯ ತೆರಿಗೆ ಪಾವತಿ ಮಾಡಿದ್ದರೆ, ನಿಗದಿಗಿಂತ ಹೆಚ್ಚು ಜಮೀನು ಹೊಂದಿದ್ದರೆ, ನಗರಗಳಲ್ಲಿ 1000 ಚದರಡಿಯ ಪಕ್ಕಾ ಮನೆ ಇದ್ದಲ್ಲಿ, ಪ್ರತಿ ತಿಂಗಳು 150 ಯೂನಿಟ್‌ಗಿಂತ ಹೆಚ್ಚು ವಿದ್ಯುತ್ ಬಳಕೆ ಮಾಡಿದಲ್ಲಿ, ವೈಟ್ ಬೋರ್ಡ್ 4 ಚಕ್ರದ ವಾಹನ ಇದ್ದು ಬಿಪಿಎಲ್ ಕಾರ್ಡ್ ಮಾಡಿಸಿದವರ ಕಾರ್ಡ್ ರದ್ದಾಗಲಿದೆ.

ಅಪಘಾತದಲ್ಲಿ ಜನ ಸತ್ತರೆ ನಾ ಸಹಿಸಲ್ಲ

ಯೋಜನೆಗಳನ್ನು ರೂಪಿಸಿ ಅನುಷ್ಠಾನಕ್ಕೆ ತರಬೇಕು. ಕಂದಾಯ, ಪೊಲೀಸ್, ಸಾರಿಗೆ, ನಗರಪಾಲಿಕೆ ಸಮನ್ವಯದಿಂದ ಕಾರ್ಯ ನಿರ್ವಹಿಸಿದರೆ ಅಪಘಾತಗಳನ್ನು ನಿಯಂತ್ರಿಸಲು ಸಾಧ್ಯ. ರಸ್ತೆ ಸುರಕ್ಷತಾ ಸಪ್ತಾಹಗಳು ಕಾಟಾಚಾರಕ್ಕೆ ನಡೆಯಬಾರದು, ಮುಂಜಾಗರೂಕತಾ ಕ್ರಮ ಕೈಗೊಂಡರೆ ಹಲವು ಅಪಘಾತಗಳನ್ನು ತಡೆಯಬಹುದಾಗಿದೆ, ಹಾಟ್‌ಸ್ಪಾಟ್‌ಗಳನ್ನು ಗುರುತಿಸಿ, ಹೆದ್ದಾರಿಗಳಲ್ಲಿ ಆಂಬುಲೆನ್ಸ್, ಟ್ರಾಮಾ ಸೆಂಟರ್ ನೆಟ್‌ವರ್ಕ್ ವ್ಯವಸ್ಥೆ ಮಾಡಬೇಕು ಎಂದರು.

ಬೆಲೆ ಬಾಳುವ ನಿವೇಶನಗಳ ಪಡೆದಿದ್ದೇಕೆ!

ನಿವೇಶನ ನೀಡಿದ್ದಾರೆಯೇ ಹೊರತು, ಬೆಲೆ ಬಾಳುವ ವಿಜಯನಗರದಂತಹ ಬೇರೆ ಬಡಾವಣೆಯಲ್ಲಿ ಅಲ್ಲ ಎಂದು ವಿಶ್ವನಾಥ್ ಹೇಳಿದರು.

ನಮಗೊಂದು ಅವರಿಗೊಂದು ನ್ಯಾಯವಾ!: ಮನೆ ಕಟ್ಟಲು ಯೋಗ್ಯವಿಲ್ಲವೆಂಬ ಕಾರಣಕ್ಕೆ ಅದೇ ಬಡಾವಣೆಯಲ್ಲಿ ನಮಗೆ ನಿವೇಶನ ನೀಡುತ್ತಾರೆ. ಹಾಗಾದರೆ ನನ್ನ ಹೆಂಡತಿಗೊಂದು ನ್ಯಾಯ, ಸಿದ್ದರಾಮಯ್ಯ ಹೆಂಡತಿಗೊಂದು ನ್ಯಾಯವೇ ಎಂದು ಪ್ರಶ್ನಿಸಿದ ವಿಶ್ವನಾಥ್, ದೇವನೂರು ಬಡಾವಣೆಯಲ್ಲಿ 800 ನಿವೇಶನ ಇನ್ನು ಖಾಲಿ ಇವೆ. ಪಾರ್ವತಿ ಅವರಿಗೆ ಅಲ್ಲೇ ನೀಡಬಹುದಿತ್ತು. ಆದರೆ ವಿಜಯನಗರದಲ್ಲಿ ಬೆಲೆ ಬಾಳುವ ನಿವೇಶನ ಏಕೆ ನೀಡಲಾಯಿತು. ಇದೇ ದೊಡ್ಡ ಕರ್ಮಕಾಂಡವಲ್ಲವೇ? ಎಂದು ಪ್ರಶ್ನಿಸಿದರು.

25 ಕೋಟಿಗೆ ಸಾಕ್ಷಿ ಇದೆಯೇ?: ಆಪರೇಷನ್ ಕಮಲದ ಸಮಯದಲ್ಲಿ 25 ಕೋಟಿ ರೂಪಾಯಿ ಪಡೆದಿದ್ದೇನೆ ಎಂದು ಆರೋಪ ಮಾಡುತ್ತಾರೆ. ಮರಿಗೌಡರೇ, ನಿಮ್ಮ ಬಳಿ ಯಾವುದಾದರೂ ಸಾಕ್ಷಿ ಇದ್ದರೆ ಅದನ್ನು ಬಹಿರಂಗ ಮಾಡಿ ಎಂದು ಸವಾಲು ಹಾಕಿದ ವಿಶ್ವನಾಥ್, ಇಷ್ಟು ವರ್ಷ ನಾನು ಪ್ರಾಮಾಣಿಕವಾಗಿ ರಾಜಕಾರಣ ಮಾಡಿದ್ದೇನೆ. ಇದನ್ನು ನಾನು ಎದೆತಟ್ಟಿ ಹೇಳುತ್ತೇನೆ. ನೀವು ಹೇಳುತ್ತೀರಾ ಎಂದು ಪ್ರಶ್ನಿಸಿದರು.

ಸಚಿವ ಸುರೇಶ್ ಬಳಿ ಹೋಗಿದ್ದು ನಿಜ: ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಮೂಲತಃ ಒಬ್ಬ ಡೆವಲಪರ್. ಆದ ಕಾರಣ ನಮ್ಮ ಸ್ನೇಹಿತರಿಗೆ ಅವರ ಬಡಾವಣೆಯಲ್ಲಿ ನಿವೇಶನ ನೀಡುವಂತೆ ಅವರ ಬಳಿ ಹೋಗಿದ್ದೇನೆಯೇ ಹೊರತು, ಸರ್ಕಾರಿ ನಿವೇಶನ ನೀಡುವಂತೆ ಬೇಡಿಕೆ ಇಟ್ಟಿರಲಿಲ್ಲ ಎಂದು ಸ್ಪಷ್ಟಪಡಿಸಿದರು.

3 ಲಕ್ಷಕ್ಕೆ 31 ನಿವೇಶನ: ನಿವೇಶನ ಹಂಚಿಕೆ, ಕಾಮಗಾರಿ ಸೇರಿದಂತೆ ಮುಡಾದಲ್ಲಿ 10 ಸಾವಿರ ಕೋಟಿಗೂ ಹೆಚ್ಚು ಅವ್ಯವಹಾರ ನಡೆದಿದೆ. ಮಂಜುನಾಥ್ ಎಂಬಾತನಿಗೆ ಕೇವಲ 3 ಲಕ್ಷಕ್ಕೆ 31 ನಿವೇಶನ ನೀಡಿದ್ದಾರೆ. ಇಂತಹ ಭಾರೀ ಅವ್ಯವಹಾರ ನಡೆದಿದ್ದರೂ ಅಲ್ಲಿ ಏನು ನಡೆದೇ ಇಲ್ಲ ಎಂದು ಸಮರ್ಥಿಸಿಕೊಳ್ಳುತ್ತಾರೆ ಎಂದು ಕಾಂಗ್ರೆಸ್ ನಾಯಕರನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ಪಾರ್ಕ್‌ಗೆ ಜಾಗ ಬಿಡದೆ ಮಂಜೇಗೌಡ ನಿವೇಶನ ಮಾಡಿದ್ದಾರೆ

ಮುಡಾ ಸದಸ್ಯರೂ ಆಗಿರುವ ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಪಾರ್ಕ್ ಜಾಗವನ್ನು ನಿವೇಶನಗಳಾಗಿ ಪರಿವರ್ತಿಸಿ ಮಾರಾಟ ಮಾಡಿದ್ದಾರೆ ಎಂದು ವಿಶ್ವನಾಥ್ ಆರೋಪಿಸಿದರು.

ಭವ್ಯ ಭಾರತ ಗೃಹ ನಿರ್ಮಾಣ ಸಹಕಾರ ಸಂಘದ ಹೆಸರಿನಲ್ಲಿ ಮಂಜೇಗೌಡ ನಿರ್ಮಾಣ ಮಾಡಿರುವ ಬಡಾವಣೆಯಲ್ಲಿ ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಲಾಗಿದೆ ಎಂದು ದೂರಿದರು.

ನಿಯಮದ ಪ್ರಕಾರ ಒಂದು ಬಡಾವಣೆ ನಿರ್ಮಾಣ ಮಾಡುವಾಗ ಪಾರ್ಕ್, ಸಿಎ ನಿವೇಶನಕ್ಕೆ ಜಾಗ ಬಿಡಬೇಕು. ಆದರೆ ಪಾರ್ಕ್ ಜಾಗವನ್ನು 7 ನಿವೇಶನಗಳಾಗಿ ಪರಿವರ್ತಿಸಿ ಮಂಜೇಗೌಡ ಮಾರಾಟ ಮಾಡಿದ್ದಾರೆ. ಸಿಎ ನಿವೇಶನಕ್ಕೂ ಜಾಗ ಬಿಟ್ಟಿಲ್ಲ ಎಂದು ಆಪಾದಿಸಿದರು. ಈಗಲೂ ಕಾಲ ಮುಂಚಿಲ್ಲ, ಸರ್ಕಾರ ಕೂಡಲೇ ಮುಡಾಗೆ ಸೇರಬೇಕಾದ ಜಾಗವನ್ನು ವಶಪಡಿಸಿಕೊಳ್ಳಬೇಕು ಎಂದು ವಿಶ್ವನಾಥ್ ಆಗ್ರಹಿಸಿದರು.

ಕಾನೂನುಬದ್ಧ ನಿರ್ಣಯವಾಗಿತ್ತು

ಶೇಕಡ ನೂರಕ್ಕೆ ನೂರರಷ್ಟು ಕಾನೂನು ನಿಯಮ ಪಾಲಿಸಿ ನಿರ್ಧಾರ ಮಾಡಲಾಗಿದೆ. ಆದರೆ ಇದನ್ನು ಅನುಷ್ಠಾನ ಮಾಡುವ ಸಂದರ್ಭದಲ್ಲಿ ಅಧಿಕಾರಿಗಳು ತಪ್ಪೆಸಗಿದ್ದರೆ ಅದಕ್ಕೆ ಅವರು ಹೊಣೆಗಾರರಾಗುತ್ತಾರೆಯೇ ಹೊರತು ನಾವಲ್ಲ ಎಂದು ಪುನರ್ ಸ್ಪಷ್ಟಪಡಿಸಿದರು.

ಅಲ್ಲದೆ ಶೇಕಡ 50:50 ಅನುಪಾತದಲ್ಲಿ ನಿವೇಶನ ಹಂಚಿಕೆ ಸಂಬಂಧ ಮುಡಾ ಸಭೆಯಲ್ಲಿ ನಿರ್ಣಯವಾಗಬೇಕೆಂದು ಮೂರು ಬಾರಿ ಅಂದಿನ ಪ್ರಾಧಿಕಾರದ ಆಯುಕ್ತರಿಗೆ ಪತ್ರ ಬರೆದಿದ್ದೇನೆ. ಇಷ್ಟೆಲ್ಲಾ ಕಾನೂನು ನಿಯಮ ಪಾಲಿಸಿದ್ದರೂ ನನ್ನ ಅವಧಿಯಲ್ಲಿ ಸಾವಿರಾರು ನಿವೇಶನಗಳನ್ನು ಅಕ್ರಮವಾಗಿ ಹಂಚಿಕೆ ಮಾಡಲಾಗಿದೆ ಎಂದು ಆರೋಪ ಮಾಡಿರುವುದು ಸರಿಯಲ್ಲ ಎಂದು ರಾಜೀವ್ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿ ಶ್ರೀಮತಿ ಪಾರ್ವತಿಗೆ ಬದಲಿ ನಿವೇಶನ ನೀಡಿರುವ ಬಗ್ಗೆ ನನಗೆ ಹೆಚ್ಚಿನ ಮಾಹಿತಿ ಇಲ್ಲ. ಆ ತೀರ್ಮಾನ ನನ್ನ ಕಾಲದಲ್ಲಿ ಆಗದ ಕಾರಣ ಆ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಹೇಳಿದರು.

ಒಟ್ಟಾರೆ ನಾನು ಮುಡಾ ಅಧ್ಯಕ್ಷನಾಗಿದ್ದ ಸಂದರ್ಭದಲ್ಲಿ ಮುಡಾಗೆ ನಷ್ಟವಾಗದಂತೆ ಹಲವು ತೀರ್ಮಾನ ಕೈಗೊಳ್ಳಲಾಗಿದೆ ಎಂದು ರಾಜೀವ್ ತಿಳಿಸಿದರು.

ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಮಾಜಿ ಮೇಯರ್ ಭೈರಪ್ಪ, ಮಾಜಿ ಕಾರ್ಪೋರೇಟರ್ ಮಲ್ಲೇಶ್, ಶಿವಣ್ಣ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಮುಡಾದಿಂದ 50:50 ಅನುಪಾತದಡಿ ನಿವೇಶನ ಮಂಜೂರು ಹಗರಣ

ಮುಖ್ಯಮಂತ್ರಿ, ಅವರ ಪತ್ನಿ ಸೇರಿ ಹಲವರ ವಿರುದ್ಧ ಪೊಲೀಸರಿಗೆ ದೂರು

- ದೂರು ಕೊಟ್ಟ ಸಾಮಾಜಿಕ ಕಾರ್ಯಕರ್ತನಿಗೆ ಹಿಂಬರಹ ನೀಡಿದ ಪೊಲೀಸರು
- ಮುಡಾದಲ್ಲಿ ಈ ಸಂಬಂಧ ನಡೆಯುತ್ತಿರುವ ವಿಚಾರಣಾ ತಂಡಕ್ಕೆ ದೂರು ರವಾನೆ



ಮೈಸೂರು, ಜು.9(ಎಸ್‌ಬಿಡಿ)– ಮುಖ್ಯಮಂತ್ರಿ ಸಿದ್ದರಾಮಯ್ಯನವರ ಧರ್ಮಪತ್ನಿ ಪಾರ್ವತಿ ಅವರಿಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಶೇ.50:50ರ ಅನುಪಾತದಡಿ ನಿಯಮಬಾಹಿರವಾಗಿ ನಿವೇಶನಗಳನ್ನು ನೀಡಿದೆ ಎಂಬ ಆರೋಪದ ನಡುವೆ ಮುಡಾ ವಶಪಡಿಸಿಕೊಂಡಿರುವ ಭೂಮಿಯೂ ಕೂಡ ಸುಳ್ಳು ಕ್ರಯ ಹಾಗೂ ದಾನಪತ್ರದ ಮೂಲಕ ಪಡೆದಿರುವುದಾಗಿ ಸಾಮಾಜಿಕ ಕಾರ್ಯಕರ್ತರೊಬ್ಬರು ಆಪಾದಿಸಿ, ದೂರು ನೀಡಿದ್ದಾರೆ.

ಮಾಲೀಕರಲ್ಲದ ವ್ಯಕ್ತಿಗಳಿಂದ ಸುಳ್ಳು ಕ್ರಯಪತ್ರ ನಂತರ ದಾನಪತ್ರ ಸೃಷ್ಟಿಸಿಕೊಂಡು ಅಕ್ರಮವಾಗಿ ನೋಂದಾಯಿಸಿಕೊಂಡು ಪ್ರಾಧಿಕಾರವನ್ನು ವಂಚಿಸಿ ಕೋಟ್ಯಾಂತರ ರೂ. ಬೆಲೆಬಾಳುವ ನಿವೇಶನಗಳನ್ನು ಪಡೆದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಇವರ ಪತ್ನಿ ಬಿ.ಎಂ.ಪಾರ್ವತಿ, ಬಾಮೈದ ಬಿ.ಎಂ.ಮಲ್ಲಿಕಾರ್ಜುನ, ಮೂಲ ಭೂಮಾಲೀಕ ಎನ್ನಲಾಗಿರುವ ಜೆ.ದೇವರಾಜು, ಸರೋಜಮ್ಮ, ಡಿ.ಶಶಿಧರ್, ಡಿ.ಶೋಭಾ, ಡಿ.ದಿನಕರ್ ರಾಜ್, ಡಿ.ಪ್ರತಿಭಾ, ಡಿ.ಪ್ರಭಾ, ಜಿಲ್ಲಾಧಿಕಾರಿ, ತಹಶೀಲ್ದಾರ್, ಮುಡಾ ಅಧಿಕಾರಿಗಳು ಹಾಗೂ ಉಪನೋಂದಣಾಧಿಕಾರಿಗಳ ವಿರುದ್ಧ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ವಿಜಯನಗರ ಪೊಲೀಸ್ ಠಾಣೆಗೆ ಜು.3ರಂದು ದೂರು ನೀಡಿರುವುದು ತಡವಾಗಿ ಬೆಳಕಿಗೆ ಬಂದಿದೆ.

ಹಿಂಬರಹ ನೀಡಿಕೆ: ಸ್ನೇಹಮಯಿ ಕೃಷ್ಣ ಅವರ ದೂರು ಸ್ವೀಕರಿಸಿರುವ ವಿಜಯನಗರ ಠಾಣೆ ಪೊಲೀಸರು, ಈಗಾಗಲೇ ಮುಡಾ ಬದಲಿ ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಸತ್ಯಾಸತ್ಯತೆ ತಿಳಿಯಲು ರಾಜ್ಯ ಸರಕಾರ ಐಎಎಸ್ ಅಧಿಕಾರಿಗಳ ನೇತೃತ್ವದ ತನಿಖಾ ತಂಡ ರಚಿಸಿದ್ದು, ನಿಮ್ಮ ದೂರನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ರವಾನೆ ಮಾಡಲಾಗಿರುವುದಾಗಿ ಹಿಂಬರಹ ನೀಡಿದ್ದಾರೆ ಎನ್ನಲಾಗಿದೆ.



ದೂರಿನಲ್ಲೇನಿದೆ?: ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಧಿಕಾರದ ಪ್ರಭಾವ ಬಳಸಿ ತಮ್ಮ ಬಾಮೈದ ಮಲ್ಲಿಕಾರ್ಜುನಸ್ವಾಮಿ ಹೆಸರಿನಲ್ಲಿ ಮಾಲೀಕರಲ್ಲದ ವ್ಯಕ್ತಿಗಳಿಂದ ಮುಡಾ ನಿವೇಶನಗಳನ್ನು ಜಮೀನು ಎನ್ನುವಂತೆ ಸುಳ್ಳು ಕ್ರಯಪತ್ರ ಸೃಷ್ಟಿಸಿ, ಅದನ್ನು ಉಪನೋಂದಣಾಧಿಕಾರಿ ಕಚೇರಿಯಲ್ಲಿ ನೋಂದಣಿ ನಂತರ ಖಾತೆ ವರ್ಗಾವಣೆ ಮಾಡಿಸಿ, ಬಳಿಕ ಪಾರ್ವತಿ ಹೆಸರಿನಲ್ಲಿ ಸುಳ್ಳು ದಾನಪತ್ರ ಸೃಷ್ಟಿಸಿ ಅವರ ಹೆಸರಿಗೆ ನೋಂದಣಿ ಮಾಡಿಸಿದ್ದಾರೆ. ಅದರ ಆಧಾರದಲ್ಲಿ ಮುಡಾದಿಂದ ಪ್ರೋತ್ಸಾಹದಾಯಕ ಯೋಜನೆ ನಿಯಮಗಳ ಅನ್ವಯ ನಿವೇಶನಗಳನ್ನು ಮಂಜೂರು ಮಾಡಿರುವ ವಿಧಾನದಲ್ಲಿ ಕೋಟ್ಯಾಂತರ ರೂ. ಬೆಲೆ ಬಾಳುವ 14 ನಿವೇಶನಗಳನ್ನು ಪಡೆದು ಪ್ರಾಧಿಕಾರಕ್ಕೆ ನಷ್ಟ ಉಂಟುಮಾಡಲಾಗಿದೆ. ಇದರಲ್ಲಿ ಉಪ ನೋಂದಣಾಧಿಕಾರಿ ಕಚೇರಿ ಅಧಿಕಾರಿಗಳು, ಜಿಲ್ಲಾಧಿಕಾರಿಗಳ ಕಚೇರಿ ಅಧಿಕಾರಿಗಳು, ತಹಶೀಲ್ದಾರ್ ಕಚೇರಿ ಅಧಿಕಾರಿಗಳು, ಮುಡಾ ಅಧಿಕಾರಿಗಳು ಶಾಮೀಲಾಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಪ್ರಕರಣದಲ್ಲಿ ಭೂ ಸ್ವಾಧೀನದಿಂದ ಕೈಬಿಟ್ಟಿರುವ ರಾಜ್ಯಪತ್ರದ ಬಗ್ಗೆಯೇ ಅನುಮಾನವಿದೆ. ಮೂಲ ಭೂ ಮಾಲೀಕರ ಮಗ ಎನ್ನುವ ದೇವರಾಜು ಅಸ್ತಿತ್ವದ ಬಗ್ಗೆ ಪ್ರಶ್ನೆ ಇದೆ. 1998ರಲ್ಲಿ ಭೂ ಸ್ವಾಧೀನದಿಂದ ಕೈ ಬಿಟ್ಟಿದ್ದು ನಿಜವಾದರೆ 2010ರವರೆಗಿನ ಆರ್‌ಟಿಸಿಗಳಲ್ಲಿ ಭೂ ಸ್ವಾಧೀನ ಎಂಬ ಉಲ್ಲೇಖ ಏಕಿದೆ? ದೇವರಾಜು ಮತ್ತು ನಂತರ ಮಲ್ಲಿಕಾರ್ಜುನಸ್ವಾಮಿ ಅವರ ಮಾಲೀಕತ್ವ ಮತ್ತು ಸ್ವಾಧೀನದಲ್ಲಿ ಈ ಜಮೀನು ಇದ್ದಿದ್ದರೆ ಪ್ರಾಧಿಕಾರದ ಅಭಿವೃದ್ಧಿ ಕೆಲಸವನ್ನು ಏಕೆ ತಡೆದಿಲ್ಲ? ಮಲ್ಲಿಕಾರ್ಜುನ ಹಾಗೂ ಪಾರ್ವತಿ ಅವರ ಹೆಸರಿಗೆ ಖಾತೆ ವರ್ಗಾವಣೆ ಮಾಡುವ ವೇಳೆ ಸ್ಥಳ ಪರಿಶೀಲನೆ ಮಾಡಲಿಲ್ಲವೇ? ಮಾಡಿದ್ದರೆ ಮುಡಾ ಅಭಿವೃದ್ಧಿ ಮಾಡಿರುವುದು ಕಂಡುಬಂದಿದ್ದರೂ ಕೃಷಿ ಭೂಮಿ ಎಂದು ಹೇಗೆ ಖಾತೆ ಮಾಡಿದರು? ನಿಜವಾದ ಭೂ ಮಾಲೀಕರ ವಂಶವೃಕ್ಷ, ಜಮೀನಿನ ಮೂಲ ಮಾಲೀಕ ಜವರ ಅವರ ಮರಣ ಪ್ರಮಾಣಪತ್ರ ಸೇರಿ ಹಲವು ದಾಖಲೆಗಳ ಉಲ್ಲೇಖವಿಲ್ಲವೇಕೆ? ಕೆಸರೆ ಗ್ರಾಮದ 464ನೇ ಸರ್ವೆ ನಂಬರ್‌ನ 3.16 ಎಕರೆ ಭೂಮಿಯ ಸ್ವಾಧೀನವನ್ನು ಕೈಬಿಡಲು ಕಾರಣವೇನು? 2005ರಲ್ಲೇ ಮಲ್ಲಿಕಾರ್ಜುನ ಸ್ವಾಮಿಗೆ ಅನ್ಯಕ್ರಾಂತ ಆಗಿದ್ದರೆ ಆರ್‌ಟಿಸಿಗಳಲ್ಲಿ ಈ ಉಲ್ಲೇಖವಿಲ್ಲವೇಕೆ? ಎಂದು ದೂರಿನಲ್ಲಿ ಪ್ರಶ್ನಿಸಿರುವ ಸ್ನೇಹಮಯಿ ಕೃಷ್ಣ, ಇಷ್ಟೆಲ್ಲ ಅನುಮಾನಗಳಿರುವ ಕಾರಣ ಪ್ರಕರಣದ ಸಮಗ್ರ ತನಿಖೆ ನಡೆಸಬೇಕು ಎಂದು ಕೋರಿದ್ದಾರೆ.

ಸಂಸದ ಯದುವೀರ್‌ಗೆ ರೈತರಿಂದ ಸಾಲ ಮನ್ನಾ ಸೇರಿದಂತೆ ವಿವಿಧ ಬೇಡಿಕೆವುಳ್ಳ ಹಕ್ಕೊತ್ತಾಯ ಪತ್ರ



ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ವತಿಯಿಂದ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್‌ಗೆ ಮನವಿ ಸಲ್ಲಿಸಲಾಯಿತು.

ಮೈಸೂರು, ಜು.9(ಎಸ್‌ಬಿಡಿ)– ರೈತರ ಸಾಲಮನ್ನಾ ಸೇರಿದಂತೆ ವಿವಿಧ ಬೇಡಿಕೆಯನ್ನೊಳಗೊಂಡ ಹಕ್ಕೊತ್ತಾಯ ಪತ್ರವನ್ನು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ವತಿಯಿಂದ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್‌ಗೆ ಕುವೆಂಪುನಗರದ ಕಚೇರಿಯಲ್ಲಿ ಸಲ್ಲಿಸಲಾಯಿತು.

ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ನೇತೃತ್ವದಲ್ಲಿ ಉಪಾಧ್ಯಕ್ಷ ಕೆರೆಹುಂಡಿ ರಾಜಣ್ಣ, ಮೈಸೂರು ನಗರ ಅಧ್ಯಕ್ಷ ದೇವೇಂದ್ರ ಕುಮಾರ್, ಜಿಲ್ಲಾಧ್ಯಕ್ಷ ಹಾಡ್ಯ ರವಿ, ಖಜಾಂಚಿ ಹೊಸಪುರ ಮಾದಪ್ಪ, ನಂಜನಗೂಡು ತಾಲೂಕು ಅಧ್ಯಕ್ಷ ಅಂಬಳೆ ಮಹದೇವಸ್ವಾಮಿ, ತಾಲೂಕು ಸಂಚಾಲಕ ಸುಕೇತ್ ರಾಜ್, ಬನ್ನೂರು ಕೃಷ್ಣಪ್ಪ, ಶಿವರಾಜ್ ಮತ್ತಿತರರು ಸಂಸದರಿಗೆ ಮನವಿ ಸಲ್ಲಿಸಿ, ರೈತರ ಹಕ್ಕೊತ್ತಾಯದ ಬಗ್ಗೆ ಸಂಸತ್ ಹಾಗೂ ಸಂಬಂಧಪಟ್ಟ ಸಚಿವರ ಮೂಲಕ ಪ್ರಧಾನಮಂತ್ರಿಗಳ ಗಮನ ಸೆಳೆದು, ಸಹಕರಿಸಬೇಕು ಎಂದು ಒತ್ತಾಯಿಸಿದರು.


ಬೇಡಿಕೆಗಳೇನು?: ಪ್ರತಿ ಟನ್ ಕಬ್ಬಿಗೆ 4 ಸಾವಿರ ರೂ.ನಿಗದಿ, ಎಫ್‌ಆರ್‌ಪಿ ಹಾಗೂ ಎಂಎಸ್‌ಪಿ ಹಾಗೂ ಅದರ ಮಾನದಂಡ ಪರಿಷ್ಕರಣೆಯಾಗಬೇಕು. ಎಂಎಸ್‌ಪಿ ಕಾನೂನು ಖಾತ್ರಿ ಎಲ್ಲಾ ಬೆಳೆಗಳಿಗೂ ವಿಸ್ತರಣೆಯಾಗಬೇಕು. ಅಕ್ರಮ–ಸಕ್ರಮ ಯೋಜನೆಯ ಮರು ಜಾರಿ ಜೊತೆಗೆ ಸೋಲಾರ್ ಪಂಪ್‌ಸೆಟ್ ಅಳವಡಿಸಿಕೊಳ್ಳುವ ರೈತರಿಗೆ ಶೇ.90ರಷ್ಟು ಸಹಾಯಧನವನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು. ಎಂ.ಎಸ್.ಸ್ವಾಮಿನಾಥನ್ ವರದಿಯನ್ನು ಯಥಾವತ್ ಜಾರಿ ಮಾಡಬೇಕು. ಕೇಂದ್ರ ಸರ್ಕಾರ ರೈತರ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು.

ತೆಲಂಗಾಣ ಸರ್ಕಾರ ರೈತರ ಕೃಷಿ ಸಾಲವನ್ನು 2 ಲಕ್ಷದವರೆಗೆ ಮನ್ನಾ ಮಾಡಿದೆ. ಪ್ರತಿ ಎಕರೆಗೆ 15 ಸಾವಿರ ರೂ. ಪ್ರೋತ್ಸಾಹಧನ ನೀಡುತ್ತಿದೆ. ಬಂಡವಾಳಶಾಹಿಗಳು ಮತ್ತು ಶ್ರೀಮಂತರ 14 ಲಕ್ಷ ಕೋಟಿ ಸಾಲವನ್ನು ಮನ್ನಾ ಮಾಡಿದಂತೆ ಕೇಂದ್ರ ಸರ್ಕಾರ, ರೈತರ ಸಾಲವನ್ನೂ ಮನ್ನಾ ಮಾಡಲು ಕ್ರಮ ಕೈಗೊಳ್ಳಬೇಕು. ಮೇಕೆದಾಟು ಯೋಜನೆ ಜಾರಿಯಾಗಬೇಕು.

ಎಲ್ಲಾ ಬೆಳೆಗಳಿಗೂ ಖರೀದಿ ಕೇಂದ್ರಗಳನ್ನು ವರ್ಷಪೂರ್ತಿ ತೆರೆಯಬೇಕು. ಯಾವುದೇ ನಿರ್ಬಂಧ, ಷರತ್ತುಗಳಿಲ್ಲದೆ ಖರೀದಿ ಮಾಡಿ, ನಾಗರಿಕ ಸರಬರಾಜು ಮೂಲಕ ವಿತರಿಸಲು ಕ್ರಮ ಕೈಗೊಳ್ಳಬೇಕು. ಒರಿಸ್ಸಾ ಮತ್ತು ಛತ್ತೀಸ್‌ಗಢದಲ್ಲಿ ಪ್ರತಿ ಕ್ವಿಂಟಲ್ ಭತ್ತಕ್ಕೆ 3,100 ರೂ. ನಿಗದಿಗೆ ಆದೇಶಿಸಲಾಗಿದೆ. ಆದರೆ ಕೇಂದ್ರ ಸರ್ಕಾರ ಪ್ರತಿ ಕ್ವಿಂಟಲ್‌ಗೆ 2,300 ರೂ. ನಿಗದಿ ಮಾಡಿದ್ದು, ರೈತರಿಗೆ ನಷ್ಟವಾಗದಂತೆ ಬೆಲೆ ಪರಿಷ್ಕರಣೆ ಮಾಡಬೇಕು. ಬೆಳೆ ವಿಮೆಯನ್ನು ರೈತನ ಹೊಲದಲ್ಲಿನ ವೈಯಕ್ತಿಕ ವಿಮೆ ಮಾದರಿಯಲ್ಲಿ ಪರಿಗಣಿಸಿ ನಷ್ಟ ಪರಿಹಾರ ಕಲ್ಪಿಸಬೇಕು. ರೈತರ ಕೃಷಿ ಉತ್ಪನ್ನಗಳು, ಕೃಷಿ ಯಂತ್ರೋಪಕರಣಗಳು ಮತ್ತು ನೀರಾವರಿ ಸಲಕರಣೆಗಳ ಖರೀದಿ ಮೇಲಿನ ಜಿಎಸ್‌ಟಿ ರದ್ದು ಮಾಡಬೇಕು. ಕೊಬ್ಬರಿ ಬೆಂಬಲ ಬೆಲೆಗೆ ಹೆಚ್ಚಿಸಬೇಕು. ವಿದೇಶಿ ರೇಷ್ಮೆ ಆಮದು ನಿಲ್ಲಿಸಬೇಕು.

ವನ್ಯಜೀವಿಗಳು ಹಾಗೂ ಮಾನವ ಸಂಘರ್ಷ ತಡೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ನೊಂದವರಿಗೆ ವೈಜ್ಞಾನಿಕ ಪರಿಹಾರ ಕಲ್ಪಿಸಬೇಕು. ರೈತರ ಕೃಷಿ ಸಾಲಕ್ಕೆ ಸಿಬಿಲ್ ಸ್ಕೋರ್ ಪರಿಗಣಿಸಬಾರದು. ಹಳೆಯ ಮಾನದಂಡಗಳನ್ನು ಬದಲಿಸಿ ಕೃಷಿ ಭೂಮಿ ಮಾರುಕಟ್ಟೆ ಮೌಲ್ಯದ ಅನುಸಾರ ಪ್ರತಿ ಎಕರೆಗೆ ಶೇ.50 ರಷ್ಟು ಸಾಲ ನೀಡಬೇಕು. ಸಾಲ ಮಂಜೂರಾತಿ ವಿಳಂಬವಾಗದಂತೆ ಕ್ರಮ ವಹಿಸಬೇಕು. ಕೇಂದ್ರ ಸರ್ಕಾರ ಪ್ರವಾಹ ಮತ್ತು ಬರ ಪರಿಹಾರ ನೀಡುವಾಗ ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಮಾನದಂಡವನ್ನು ಕಾಲಾನುಸಾರ ವೈಜ್ಞಾನಿಕವಾಗಿ ಪರಿಷ್ಕರಿಸಿ, ಪರಿಹಾರ ನೀಡಬೇಕು.

ಅರ್ಥಪೂರ್ಣವಾಗಿ ಹಡಪದ ಅಪ್ಪಣ್ಣ ಜಯಂತಿ ಆಚರಣೆ



ಮೈಸೂರು, ಜು.9– ಜುಲೈ 23 ರಂದು ಬೆಳಗ್ಗೆ 11 ಗಂಟೆಗೆ ಕರ್ನಾಟಕದ ಕಲಾಮಂದಿರದ ಸುಚಿತ್ರಾ ಗ್ಯಾಲರಿಯಲ್ಲಿ "ಹಡಪದ ಅಪ್ಪಣ್ಣ ಜಯಂತಿ" ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳಾದ ಡಾ.ಪಿ ಶಿವರಾಜು ಅವರು ಮಾಹಿತಿ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ 'ಹಡಪದ ಅಪ್ಪಣ್ಣ ಜಯಂತಿಯ' ದಿನಾಚರಣೆಯ ಸಂಬಂಧ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಲಾಗುವುದು. ದಿನಾಚರಣೆ ನಡೆಯುವ ಸ್ಥಳದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಂ.ಡಿ. ಸುದರ್ಶನ್ ಅವರು ಮಾತನಾಡಿ, ಕಾರ್ಯಕ್ರಮದಲ್ಲಿ ಕಲಾತಂಡಗಳಿಂದ ಗೀತ ಗಾಯನವನ್ನು ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆಯ ಮುದ್ರಣ ಮಾಡಿ ಸರ್ಕಾರದ ಶಿಷ್ಟಾಚಾರದಂತೆ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು.

ರೈಲಿಗೆ ಸಿಲುಕಿ ಅಪರಿಚಿತ ವ್ಯಕ್ತಿ ಸಾವು

ಮೈಸೂರು, ಜು.9– ಸುಮಾರು 30 ವರ್ಷದ ಅಪರಿಚಿತ ಗಂಡಸು ಪಾಂಡವಪುರ ರೈಲು ನಿಲ್ದಾಣದಲ್ಲಿ ರೈಲುಗಾಡಿಗೆ ಸಿಕ್ಕಿ ಮೃತಪಟ್ಟಿದ್ದು, ಮೃತದೇಹವು ಮೈಸೂರಿನ ಕೆ.ಆರ್ ಆಸ್ಪತ್ರೆಯ ಶವಾಗಾರದಲ್ಲಿದೆ. ಮೈಸೂರು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಹರೆ: ವ್ಯಕ್ತಿಗೆ ಸುಮಾರು 30 ವರ್ಷ ವಯಸ್ಸಾಗಿದ್ದು, 5.7 ಅಡಿ ಎತ್ತರ, ಎಣ್ಣೆ ಕೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ, ತಲೆಯಲ್ಲಿ ಸುಮಾರು 3 ಇಂಚು ಉದ್ದದ ಕಪ್ಪು ಕೂದಲು ಒಂದು ಇಂಚು ಉದ್ದದ ಕುರುಚಲು ಗಡ್ಡ ಮೀಸೆ ಬಿಟ್ಟಿರುತ್ತಾನೆ.

ಮೃತನ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ಮೈಸೂರು ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 0821–2516579 ಅಥವಾ 9480802122 ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಡ ಮಕ್ಕಳ ಶಿಕ್ಷಣಕ್ಕೆ ಲಾ ಗೈಡ್ ಬಳಗದಿಂದ ಸಹಾಯಹಸ್ತ



ಯುವ ವಕೀಲರ ಉಚಿತ ತರಗತಿಗೆ ಅಗತ್ಯವಾದ ಪರಿಕರಗಳನ್ನು ಲಾ ಗೈಡ್ ಬಳಗದ ವತಿಯಿಂದ ಹಿರಿಯ ವಕೀಲ ಹೆಚ್.ಎನ್.ವೆಂಕಟೇಶ್ ನೀಡಿದರು. ಈ ವೇಳೆ ಹಿರಿಯ ಪತ್ರಕರ್ತರಾದ ಮರಮ್ಕಲ್ ಮತ್ತಿತರರಿದ್ದರು.

ಮೈಸೂರು, ಜು.9(ಎಸ್‌ಬಿಡಿ)– ಬಡ ಕುಟುಂಬದ ಮಕ್ಕಳ ಶಿಕ್ಷಣಕ್ಕೆ ನೆರವಾಗಿರುವ ಯುವ ವಕೀಲರ ತಂಡಕ್ಕೆ ಲಾ ಗೈಡ್ ಕಾನೂನು ಮಾಸಪತ್ರಿಕೆ ಗೌರವ ಸಂಪಾದಕರೂ ಆದ ಹಿರಿಯ ವಕೀಲ ಹೆಚ್.ಎನ್. ವೆಂಕಟೇಶ್ ಶಕ್ತಿ ತುಂಬಿದ್ದಾರೆ.

ಮೈಸೂರಿನ ಉತ್ಸಾಹಿ ಯುವ ವಕೀಲರುಗಳಾದ ಹರೀಶ್, ರಾಜಲಕ್ಷ್ಮೀ, ಬೀರೇಶ್, ನಾಗೇಂದ್ರ ದೇಮಾಜ್, ಪ್ರಶಾಂತ್, ಗಿರೀಶ್ ಮಾಂಬಳ್ಳಿ, ಜಯಶಂಕರ್ ತಂಡ ಕ್ಯಾತಮಾರನಹಳ್ಳಿಯಲ್ಲಿ ಉಚಿತ ತರಗತಿ ಆರಂಭಿಸಿದ್ದಾರೆ. ಬಡ ಹಾಗೂ ಮಧ್ಯಮ ವರ್ಗ ಕುಟುಂಬಗಳಲ್ಲಿನ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಇಂಗ್ಲಿಷ್, ಗಣಿತ ವಿಜ್ಞಾನ ವಿಷಯಗಳನ್ನು ಬೋಧಿಸುವ ಮೂಲಕ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುತ್ತಿದ್ದಾರೆ.

ಯುವ ವಕೀಲರ ಈ ಸತ್ಕಾರ್ಯದ ಬಗ್ಗೆ ತಿಳಿದ ಹಿರಿಯ ವಕೀಲ ಹೆಚ್.ಎನ್. ವೆಂಕಟೇಶ್, ತರಗತಿಗೆ ಅಗತ್ಯವಾದ ಬೋರ್ಡ್, ಮೈಕ್, ಸ್ಪೀಕರ್, ಪೆನ್ ಮಾರ್ಕರ್ ಇನ್ನಿತರ ಅಗತ್ಯ ವಸ್ತುಗಳನ್ನು ಲಾಗೈಡ್ ಬಳಗದ ವತಿಯಿಂದ ಕಲ್ಪಿಸಿ, ಅವರ ಬೆನ್ನು ತಟ್ಟಿದ್ದಾರೆ.


ಪ್ರಸ್ತುತ ಟ್ಯೂಷನ್ ದುಬಾರಿಯಾಗಿದ್ದು, ಎಲ್ಲಾ ಮಕ್ಕಳಿಗೂ ಈ ಸೌಲಭ್ಯ ಸಿಗುವುದಿಲ್ಲ. ಕೆಲ ಮಕ್ಕಳಿಗೆ ಇಂಗ್ಲಿಷ್, ಗಣಿತ ಮತ್ತು ವಿಜ್ಞಾನ ಕಷ್ಟವೆನಿಸುತ್ತದೆ. ಅಂತಹ ಮಕ್ಕಳಿಗೆ ಅರ್ಥವಾಗುವ ರೀತಿಯಲ್ಲಿ ಸರಳವಾಗಿ ಹೇಳಿಕೊಟ್ಟರೆ ಖಂಡಿತವಾಗಿ ಚೆನ್ನಾಗಿ ಕಲಿಯುತ್ತಾರೆ. ಯುವ ವಕೀಲರಂತೆ ವಿದ್ಯಾವಂತರು ತಮ್ಮ ಸುತ್ತಮುತ್ತಲಿನ ಬಡ ಮಕ್ಕಳ ಕಲಿಕೆಗೆ ನೆರವಾಗುವ ಅಗತ್ಯವಿದೆ ಎಂದು ಅವರು ಆಶಿಸಿದರು. ಈ ವೇಳೆ ಹಿರಿಯ ಪತ್ರಕರ್ತರಾದ ಎಂ.ಬಿ. ಮರಮ್ಕಲ್ ಮತ್ತಿತರರು ಉಪಸ್ಥಿತರಿದ್ದರು.

ನಾರಾಯಣ ಹೆಲ್ತ್ ಸಂಸ್ಥೆಯ ಆರೋಗ್ಯ ವಿಮಾ ಸೌಲಭ್ಯ 'ಅದಿತಿ' ಬಿಡುಗಡೆ

ಮೈಸೂರು, ಜು.9– ನಾರಾಯಣ ಹೆಲ್ತ್ ಸಂಸ್ಥೆಯ ಹೊಸ ಉದ್ಯಮ ನಾರಾಯಣ ಇನ್ಶೂರೆನ್ಸ್ ಲಿ.(ಎನ್‌ಎಚ್‌ಐಎಲ್) ತನ್ನ ಮೊದಲ ಆರೋಗ್ಯ ವಿಮಾ ವ್ಯವಸ್ಥೆ 'ಅದಿತಿ' ಬಿಡುಗಡೆ ಮಾಡಿದೆ.

ಈ ಆವಿಷ್ಕಾರಕ ಯೋಜನೆ, ಭಾರತದಲ್ಲಿ ಸಮೂಹಕ್ಕೆ ಆರೋಗ್ಯ ಸೇವಾ ಲಭ್ಯತೆಯ ಅಂತರ ತುಂಬುವ ಧ್ಯೇಯ ಹೊಂದಿದ್ದು, ಕೈಗೆಟಕುವ ಬೆಲೆಯಲ್ಲಿ ಸಮಗ್ರ ಆರೋಗ್ಯ ರಕ್ಷಣೆ ನೀಡಲಿದೆ ಎಂದು ಸಂಸ್ಥೆ ವಿಶ್ವಾಸ ವ್ಯಕ್ತಪಡಿಸಿದೆ.

ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮೈಸೂರಿನ ಐದು ಕುಟುಂಬಗಳಿಗೆ 'ಅದಿತಿ' ಆರೋಗ್ಯ ವಿಮೆ ನೀಡಿದ ನಾರಾಯಣ ಹೆಲ್ತ್ ಮತ್ತು ನಾರಾಯಣ ಹೆಲ್ತ್ ಇನ್ಶೂರೆನ್ಸ್ ಅಧ್ಯಕ್ಷ ಡಾ.ದೇವಿ ಶೆಟ್ಟಿ ಮಾತನಾಡಿ, ಇಂದು ನಾವು ಈ ವಿಮಾ ಉತ್ಪನ್ನವನ್ನು ಬಿಡುಗಡೆ ಮಾಡುವ ಮೂಲಕ ದೇಶದ ಪ್ರತಿಯೊಬ್ಬರಿಗೂ ಗುಣಮಟ್ಟದ ಆರೋಗ್ಯ ಸೇವೆಯನ್ನು ಲಭ್ಯವಾಗುವ ನಿಟ್ಟಿನಲ್ಲಿ ಮಹತ್ತರ ಹೆಜ್ಜೆ ಇಟ್ಟಿದ್ದೇವೆ. 'ಅದಿತಿ'ಯನ್ನು ವೈದ್ಯಕೀಯ ವೆಚ್ಚದ ಹೊರೆಯಿಂದ ಕುಟುಂಬಗಳನ್ನು ರಕ್ಷಿಸುವ ಉದ್ದೇಶದೊಂದಿಗೆ ವಿನ್ಯಾಸಗೊಳಿಸಲಾಗಿದ್ದು, ಇದು ಸವಾಲಿನ ಸಂದರ್ಭಗಳಲ್ಲಿ ಸಮಾಧಾನ ನೀಡುತ್ತದೆ. ಈ ರೀತಿಯ ಮತ್ತಷ್ಟು ಸೇವೆ ಕಲ್ಪಿಸುವ ಚಿಂತನೆ ಇದೆ ಎಂದು ತಿಳಿಸಿದರು



ನಾರಾಯಣ ಇನ್ಶೂರೆನ್ಸ್‌ನ ಮೊದಲ 'ಅದಿತಿ' ಆರೋಗ್ಯ ವಿಮಾ ಸೌಲಭ್ಯಕ್ಕೆ ಅಧ್ಯಕ್ಷ ಡಾ.ದೇವಿ ಶೆಟ್ಟಿ ಚಾಲನೆ ನೀಡಿ, ಮೈಸೂರಿನ ಐದು ಕುಟುಂಬಗಳಿಗೆ ಅದರ ಅನುಕೂಲ ಕಲ್ಪಿಸಿದರು.

ನಾರಾಯಣ ಹೃದಯಾಲಯ ಲಿಮಿಟೆಡ್ ಉಪಾಧ್ಯಕ್ಷ ವಿರೇನ್ ಪ್ರಸಾದ್ ಶೆಟ್ಟಿ ಮಾತನಾಡಿ, ಸಾಂಪ್ರದಾಯಿಕ ಆರೋಗ್ಯ ವಿಮೆಯು ಬಹಳಷ್ಟು ಜನರಿಗೆ ಬಹುದೊಡ್ಡ ಪ್ರಕ್ರಿಯೆಯಾಗಿದೆ. ಹಾಗಾಗಿ ನಾವು ಸರಳ, ಪಾರದರ್ಶಕ ಹಾಗೂ ಉತ್ತಮ ಆರೋಗ್ಯ ವಿಮೆ ಕಲ್ಪಿಸಿದ್ದೇವೆ ಎಂಬ ವಿಶ್ವಾಸವಿದೆ. ಕ್ರಿಯಾತ್ಮಕ ಆರೋಗ್ಯದ ಸಾಧನವಾಗಿ ಈ ವಿಮೆ ರೂಪಿಸಲಾಗಿದೆ. ನಮ್ಮ ವಿಶಿಷ್ಟ ಕೊಡುಗೆಯನ್ನು ವಿಶ್ವಮಟ್ಟದ ಆರೈಕೆ ತಂಡದ ಸುತ್ತಲೂ ನಿರ್ಮಿಸಿದ್ದೇವೆ ಎಂದರು.

ಕಾರ್ಯಕ್ರಮದಲ್ಲಿ ನಾರಾಯಣ ಹೆಲ್ತ್ ಮತ್ತು ವಿಮಾ ನಿರ್ವಹಣೆಯ ತಂಡದೊಂದಿಗೆ ಎನ್‌ಎಚ್‌ಐಎಲ್ ಸ್ವತಂತ್ರ ನಿರ್ದೇಶಕಿ ಅನಾಮಿಕಾ ರಾಯ್ ರಾಷ್ಟ್ರವಾರ್ ಉಪಸ್ಥಿತರಿದ್ದರು.

ಐದು ಜಿಲ್ಲೆಗಳಲ್ಲಿ ಲಭ್ಯ: ನಾರಾಯಣ ಹೆಲ್ತ್ ಇನ್ಶೂರೆನ್ಸ್ ಭಾರತೀಯ ವಿಮಾ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ(ಐಆರ್‌ಡಿಎಐ)ದಿಂದ ಆರೋಗ್ಯ ವಿಮಾ ಕಂಪನಿಯಾಗಿ ಅನುಮೋದನೆ ಪಡೆದಿದೆ. ಎಲ್ಲಾ ಭಾರತೀಯರಿಗೂ ಗುಣಮಟ್ಟದ ಆರೈಕೆ ದೊರಕಿಸುವ ಸಮಗ್ರ ವಿಮಾ ರಕ್ಷಣೆಯನ್ನು ಕೈಗೆಟಕುವ ದರದಲ್ಲಿ ಪೂರೈಸುತ್ತಿದೆ. ಈ 'ಅದಿತಿ' ವಿಮೆಯನ್ನು ಮೈಸೂರು, ಮಂಡ್ಯ, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗುತ್ತಿದ್ದು, ಪ್ರತಿಕ್ರಿಯೆ ಅವಲೋಕಿಸಿದ ಬಳಿಕ ಯೋಜನೆಯ ವಿಸ್ತರಣೆ ಹಾಗೂ ಗರಿಷ್ಠ ಸೇವೆಗೆ ಅಳವಡಿಸಿಕೊಳ್ಳಲಾಗುತ್ತದೆ. 'ಅದಿತಿ' ಸರಾಗ ಮತ್ತು ದಕ್ಷ ಅನುಭವ ನೀಡುತ್ತದೆ. ಈ ವಿಮೆಯ ರಕ್ಷಣೆಯು ನಾರಾಯಣ ಹೆಲ್ತ್ ವಿಶ್ವಾಸಾರ್ಹ ಜಾಲದಲ್ಲಿರುತ್ತದೆ. ತುರ್ತು ಮತ್ತು ನಿರ್ದಿಷ್ಟ ಸನ್ನಿವೇಶಗಳಲ್ಲಿ 'ಅದಿತಿ' ಜಾಲದ ಹೊರಗೂ ಸೀಮಿತ ರಕ್ಷಣೆ ಒದಗಿಸಲಾಗುತ್ತದೆ. ಅಗತ್ಯ ವೈದ್ಯಕೀಯ ಅಗತ್ಯಗಳು ಹಾಗೂ ಚಿಕಿತ್ಸೆಯನ್ನು ಸಾಮಾನ್ಯ ವಾರ್ಡ್‌ಗಳ ಮೂಲಕ ಕಲ್ಪಿಸಲಿದೆ.

ಮೈಸೂರು, ಕೊಡಗು ಸರ್ವತೋಮುಖ ಅಭಿವೃದ್ಧಿ ನನ್ನ ಗುರಿ

ಇದು ನನ್ನ ಗೆಲುವಲ್ಲ ಕಾರ್ಯಕರ್ತರು, ತಾಯಿ ಚಾಮುಂಡೇಶ್ವರಿ ಗೆಲುವು: ಸಂಸದ ಯದುವೀರ್


ಪಿರಿಯಾಪಟ್ಟಣ, ಜು.9– ಮೈಸೂರು ಮತ್ತು ಕೊಡಗು ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಯೇ ನನ್ನ ಗುರಿ ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ಪಟ್ಟಣದ ಶ್ರೀಮಂಜುನಾಥ ಸಮುದಾಯ ಭವನದಲ್ಲಿ ನಡೆದ ಮತದಾರರ ಕೃತಜ್ಞತಾ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯ ಮತದಾರರು ಬಿಜೆಪಿ ಬೆಂಬಲಿಸಿ ನನ್ನ ಗೆಲುವಿಗೆ ಶ್ರಮಿಸಿದ್ದಾರೆ. ಇದು ನನ್ನ ಗೆಲುವಲ್ಲ. ಕಾರ್ಯಕರ್ತರ, ತಾಯಿ ಚಾಮುಂಡೇಶ್ವರಿ ಗೆಲುವು. ಹಲವು ಸವಾಲುಗಳ ನಡುವೆ ಜಯ ಸಾಧಿಸಿದ್ದೇವೆ. ಲೋಕತಂತ್ರ ಪ್ರಜಾಪ್ರಭುತ್ವಕ್ಕೆ ಬೆಂಬಲ ನೀಡಿದ ಪ್ರತಿಯೊಬ್ಬ ಮತದಾರರಿಗೂ ಧನ್ಯವಾದ ಅರ್ಪಿಸುತ್ತೇನೆ. ಮೈಸೂರು ಪಾರಂಪಾರಿಕ ನಗರವಾಗಿದ್ದು, ಅಭಿವೃದ್ಧಿ ಕಡೆ ಹೆಚ್ಚು ಒಲವು ತೋರುತೇನೆ. ಜಿಲ್ಲಾದ್ಯಂತ ಪ್ರವಾಸ ಮಾಡಿ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹಾರ ಮಾಡುತ್ತೇನೆ. ಮೈಸೂರು–ಕುಶಾಲನಗರ ರೈಲು ಯೋಜನೆ ಬಗ್ಗೆ ಚರ್ಚೆ ಮಾಡಲಾಗಿದ್ದು, ಶೀಘ್ರ ಪ್ರಾರಂಭಿಸಲಾಗುವುದು. ಅಲ್ಲದೇ ತಾಲೂಕಿನ ತಂಬಾಕು ರೈತರ ಹಿತ ಕಾಯಲು ಅಗತ್ಯ ಕ್ರಮ ಕೈಗೊಳ್ಳುತ್ತೇನೆ ಎಂದರು.

ಆರಂಭದಲ್ಲಿ ನನ್ನ ವಿರುದ್ಧ ವಿರೋಧಿಗಳು ಅಪಪ್ರಚಾರ ಮಾಡಲು ಮುಂದಾಗಿದ್ದರು. ಅರಮನೆಯಿಂದ ಹೊರಗೆ ಬರುವುದಿಲ್ಲ. ಬಡವರ ಕಷ್ಟ ಅರಿವಾಗು ವುದಿಲ್ಲ. ಹೀಗೆ ಸಾಲು ಸಾಲು ಅಪಪ್ರಚಾರದ ನಡುವೆ ಕಾರ್ಯಕರ್ತರ ಸಂಘಟಿತ ಪ್ರಯತ್ನದ ಫಲವಾಗಿ ಚುನಾವಣೆಯಲ್ಲಿ ಗೆಲುವು ಸಾಧಿಸಲು ಸಾಧ್ಯವಾಗಿದೆ. ಮುಂದಿನ ಪ್ರತಿ ಚುನಾವಣೆಯಲ್ಲೂ ನಮ್ಮ ಮೈತ್ರಿ ಅಭ್ಯರ್ಥಿ ಗೆಲುವಿಗೆ ಕಾರ್ಯಕರ್ತರು ಸನ್ನದ್ಧರಾಗಿಬೇಕು. ಮಾಜಿ ಶಾಸಕ ಮಹದೇವ್ ಅವರನ್ನು ಮತ್ತೊಮ್ಮೆ ಶಾಸಕರನ್ನಾಗಿ ಮಾಡುವ ಕೆಲಸ ಎಲ್ಲರೂ ಸೇರಿ ಮಾಡೋಣ ಎಂದು ಹೇಳುವ ಮೂಲಕ ಮುಂಬರುವ ಜಿಪಂ ಮತ್ತು ತಾಪಂ ಚುನಾವಣೆಗಳಲ್ಲೂ ಮೈತ್ರಿ ಮುಂದುವರಿಯುವ ಭರವಸೆ ನೀಡಿದರು.

ಮಾಜಿ ಶಾಸಕ ಕೆ.ಮಹದೇವ ಮಾತನಾಡಿ, ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಪಕ್ಷ ಸಂಘಟನೆಗೆ ಮುಂದಾಗಬೇಕು. ತಾಲೂಕಿನಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಲ್ಪ ಮುನ್ನಡೆ ಬಂದಿದೆ. ಇದರಿಂದ ಕಾರ್ಯಕರ್ತರು ಎದೆಗುಂದಬೇಕ್ಕಿಲ್ಲ. ನೂತನ ಸಂಸದರು ಸೌಮ್ಯ ಸ್ವಭಾವದ ವ್ಯಕ್ತಿಯಾಗಿದ್ದಾರೆ. ಇವರ ನೇತೃತ್ವದಲ್ಲಿ ಪಕ್ಷ ಸಂಘಟನೆಗೆ ಮುಂದಾಗಬೇಕು. ತಾಲೂಕಿನಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ. ಸಚಿವ ಕೆ.ವೆಂಕಟೇಶ್ ದ್ವೇಷ ರಾಜಕಾರಣ ಮಾಡುತ್ತಿದ್ದಾರೆ. ನನ್ನ ಮಗ ಪ್ರಸನ್ನ ಅವರಿಗೆ ಕಿರುಕುಳ ನೀಡಿ ಮೈಮುಲ್ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಮಾಡಿದ್ದಾರೆ. ಅಲ್ಲದೇ ಅವರಿಗೆ ಹಲವು ನೋಟಿಸ್ ನೀಡಿದ್ದಾರೆ. ಅಲ್ಲದೇ ಮೈಮುಲ್ ನಿರ್ದೇಶಕ ಸ್ಥಾನದಿಂದ ವಜಾಮಾಡಲು ಹುನ್ನಾರ ಮಾಡುತ್ತಿದ್ದಾರೆ. ನಾನು ಸೋತರೂ ಹೋರಾಟದಲ್ಲಿ ಹಿಂದೆ ಬೀಳುವುದಿಲ್ಲ. ತಾಲೂಕಿನಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧಿಕಾರದ ಅವಧಿ ಮುಗಿದಿದ್ದರೂ, ಸೋಲಿನ ಹತಾಶೆಯಿಂದ ಅಧಿಕಾರಿಗಳನ್ನು ಎದುರಿಸಿ ಚುನಾವಣೆ ಮಾಡಲು ಬಿಡುತ್ತಿಲ್ಲ ಎಂದು ಆರೋಪಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಹೆಚ್.ಸಿ. ಬಸವರಾಜು, ಮೈಮುಲ್ ಅಧ್ಯಕ್ಷ ಪಿ.ಎಂ.ಪ್ರಸನ್ನ, ಮೈಸೂರು ಗ್ರಾಮಾಂತರ ಬಿಜೆಪಿ ಅಧ್ಯಕ್ಷ ಮಹದೇವಸ್ವಾಮಿ, ಜೆಡಿಎಸ್ ತಾಲೂಕು ಅಧ್ಯಕ್ಷ ಅಣ್ಣಯ್ಯಶೆಟ್ಟಿ, ಬಿಜೆಪಿ ತಾಲೂಕು ಅಧ್ಯಕ್ಷ ರಾಜೇಂದ್ರ, ಜಿಲ್ಲಾ ಉಪಾಧ್ಯಕ್ಷ ಕೌಲನಹಳ್ಳಿ ಸೋಮಶೇಖರ್, ಮಾಜಿ ನಗರ ಪಾಲಿಕೆ ಸದಸ್ಯ ಪ್ರಶಾಂತ್‌ಗೌಡ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಕಿರಣ್ ಜೈರಾಮೇಗೌಡ, ಮುಖಂಡರಾದ ವಿಕ್ರಂರಾಜ್, ಆರ್.ಟಿ.ಸತೀಶ್, ನಳಿನಿ, ಲೋಕಪಾಲಯ್ಯ, ಜಿ.ಎಸ್.ನಾಗರಾಜು, ರಾಮು, ರವಿ, ಚನ್ನಬಸವರಾಜು ಸೇರಿದಂತೆ ಜೆಡಿಎಸ್ ಹಾಗೂ ಬಿಜೆಪಿ ಕಾರ್ಯಕರ್ತರು ಹಾಜರಿದ್ದರು.



ಪಿರಿಯಾಪಟ್ಟಣದಲ್ಲಿ ನಡೆದ ಕೃತಜ್ಞತಾ ಸಭೆಯಲ್ಲಿ ಸಂಸದ ಯದುವೀರ್ ಅವರನ್ನು ಸನ್ಮಾನಿಸಲಾಯಿತು.

ರಾಕೇಶ್ ಸಿದ್ದರಾಮಯ್ಯ ಸ್ಮರಣಾರ್ಥ ಹಣ್ಣಿನ ಸಸಿ ವಿತರಣೆ



ಎಂಎಲ್‌ಸಿ ಡಾ.ಯತೀಂದ್ರ ರೈತರಿಗೆ ಹಣ್ಣಿನ ಸಸಿಗಳನ್ನು ವಿತರಿಸಿದರು.

ನಂಜನಗೂಡು, ಜು.9– ತಾಲೂಕಿನ ಬಿಳಿಗೆರೆ ಗ್ರಾಮದಲ್ಲಿ ಮಂಗಳವಾರ ರಾಕೇಶ್ ಸಿದ್ದರಾಮಯ್ಯ ಅವರ ಸ್ಮರಣಾರ್ಥ ಸಮತ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಅವರು ರೈತರಿಗೆ ಹಣ್ಣಿನ ಸಸಿಗಳನ್ನು ವಿತರಿಸಿದರು.

ನಂತರ ಮಾತನಾಡಿದ ಅವರು, ನನ್ನ ಸಹೋದರ ರಾಕೇಶ್ ನೆನಪು ಸದಾ ಜನರ ಮನಸಲ್ಲಿ ಹಚ್ಚ ಹಸಿರಾಗಿ ಉಳಿಯಬೇಕು. ಅವರು ನಡೆಸುತ್ತಿದ್ದ ಸೇವಾ ಕಾರ್ಯಗಳನ್ನು ಮುಂದುವರೆಸುವ ಸಲುವಾಗಿ ಸಮತ ಟ್ರಸ್ಟ್ ರಚಿಸಲಾಗಿದ್ದು, ಪ್ರಸ್ತುತ ಕ್ಷೇತ್ರದ ರೈತರಿಗೆ ನಿಂಬೆ, ಮಾವು, ಹಲಸು, ಸಪೋಟ, ದಾಳಿಂಬೆ ಸೇರಿದಂತೆ 5 ಸಾವಿರಕ್ಕೂ ಹೆಚ್ಚು ಹಣ್ಣಿನ ಸಸಿಗಳನ್ನು ವಿತರಿಸಲಾಗಿದೆ. ರೈತರು ಮಳೆಗಾಲದಲ್ಲಿ ಸಸಿಗಳಿಗೆ ಉತ್ತಮ ಗೊಬ್ಬರ ನೀಡಿ ಪೋಷಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ತಗಡೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ, ಮಹದೇವ್, ಗ್ರಾಪಂ ಅಧ್ಯಕ್ಷ ಕುಮಾರ, ನಂಜುಂಡೇಗೌಡ, ಸೋಮಣ್ಣ, ಮುನಿಯಪ್ಪ, ಸಿ.ಆರ್.ಮಹದೇವ್, ಗುಂಡಪ್ಪ, ರವಿ, ಜಯಶೀಲ, ಕುಮಾರ್, ಪುರುಷೋತ್ತಮ್, ಜಗದೀಶ್, ಬಿಳಿಗುಳಿ ಕುಮಾರ್ ಉಪಸ್ಥಿತರಿದ್ದರು.

ತಿ.ನರಸೀಪುರ ಸರ್ಕಾರಿ ಆಸ್ಪತ್ರೆ ವೈದ್ಯರ ಸೇವೆಗೆ 2ನೇ ಸ್ಥಾನ

ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ.ನಾಗೇಶ್ ಮಾಹಿತಿ



ಸುದ್ದಿಗೋಷ್ಠಿಯಲ್ಲಿ ಆಸ್ಪತ್ರೆ ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ.ನಾಗೇಶ್ ಮಾತನಾಡಿದರು.

ತಿ.ನರಸೀಪುರ, ಜು.9– ತಿ.ನರಸೀಪುರ ಸರ್ಕಾರಿ ಆಸ್ಪತ್ರೆ ಹಾಗೂ ವೈದ್ಯರ ಸೇವೆ ರಾಜ್ಯದಲ್ಲಿ 2ನೇ ಸ್ಥಾನ ಪಡೆದಿದ್ದು, ಇದನ್ನು ಕರ್ನಾಟಕ ಸರ್ಕಾರ ಗುರುತಿಸಿ ರಾಷ್ಟ್ರೀಯ ವೈದ್ಯರ ದಿನಾಚರಣೆ ಸಂದರ್ಭ ವಿಧಾನಸೌಧದಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಆರೋಗ್ಯ ಸಚಿವರು ಗೌರವಿಸಿದ್ದಾರೆ ಎಂದು ಆಸ್ಪತ್ರೆ ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ.ನಾಗೇಶ್ ಮಾಹಿತಿ ನೀಡಿದರು.

ಪಟ್ಟಣದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ತಿ.ನರಸೀಪುರ ಸರ್ಕಾರಿ ಆಸ್ಪತ್ರೆ ಸೇವೆ ರಾಜ್ಯದಲ್ಲಿ 2ನೇ ಸ್ಥಾನ ಪಡೆದು ಗೌರವಿಸಲ್ಪಟ್ಟಿರುವುದು ನಮ್ಮೆಲ್ಲರಿಗೂ ಗೌರವ ತಂದಿದೆ. ಕೇಂದ್ರ ಸರ್ಕಾರದ ಮಹತ್ವಪೂರ್ಣ ಯೋಜನೆ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಾಗಿದ್ದು ಇದರಲ್ಲಿ ಎಲ್ಲಾ ಆರೋಗ್ಯ ಸೇವೆಗಳು ಉಚಿತವಾಗಿ ರೋಗಿಗಳಿಗೆ ಸಿಗಲಿದೆ ಎಂದರು.

ಈ ಹಿಂದೆ ಎಬಿಆರ್‌ಕೆ ಕಾರ್ಡ್ ಸಿಗುತ್ತಿತ್ತು ಆ ಕಾರ್ಡ್ ಅನ್ನು ಖಾಸಗಿ ಆಸ್ಪತ್ರೆಗಳಲ್ಲಿ ತೋರಿಸಿ ಉಚಿತ ಸೇವೆ ಪಡೆಯಬಹುದಿತ್ತು ಸರ್ಕಾರ ಹಣ ನೀಡುತ್ತಿತ್ತು ಈಗ ಆ ಕಾರ್ಡ್ ಸೇವೆ ನಿಲ್ಲಿಸಿದ್ದು, ನಿಮ್ಮ ಬಳಿ ಇರುವ ಬಿಪಿಎಲ್ ಅಥವಾ ಆಧಾರ್ ಕಾರ್ಡ್ ತೋರಿಸಿ ಸರ್ಕಾರಿ ಹಾಗೂ ಆಯ್ದ ಖಾಸಗಿ ಆಸ್ಪತ್ರೆಗಳಲ್ಲೂ ಉಚಿತ ಚಿಕಿತ್ಸೆ ಪಡೆಯಬಹುದಾಗಿದೆ. ಮೈಸೂರಿನ ಜೆಎಸ್‌ಎಸ್, ಮಣಿಪಾಲ್, ಸಿಗ್ಮಾ, ಕಾಮಾಕ್ಷಿ ಸೇರಿದಂತೆ ಇತರೆ ಖಾಸಗಿ ಆಸ್ಪತ್ರೆಗಳಲ್ಲಿ ಸೇವೆ ಪಡೆಯಬಹುದು ಎಂದರು.

ನೇತ್ರ ಶಸ್ತ್ರ ತಜ್ಞೆ ಡಾ.ಭಾರತಿ ಅವರಿಗೆ ಉತ್ತಮ ವೈದ್ಯ ಪ್ರಶಸಿ ಲಭಿಸಿದ್ದು, ಎಲ್ಲಾ ವೈದ್ಯರ ಉತ್ತಮ ಸೇವೆಯಿಂದ ತಿ.ನರಸೀಪುರ ಸರ್ಕಾರಿ ಆಸ್ಪತ್ರೆಗೆ ಪ್ರಶಸ್ತಿ ಲಭಿಸಿದ್ದು ಇದರಿಂದ ನಮ್ಮೆಲ್ಲರ ಜವಾಬ್ದಾರಿ ಮತ್ತಷ್ಟು ಹೆಚ್ಚಿದೆ. ಹೀಗೆ ಉತ್ತಮ ಸೇವೆ ಮಾಡುವ ಮೂಲಕ ನಮ್ಮ ಸೇವೆ ವಿಸ್ತರಿಸೋಣ ಎಂದರು.

ಡಾ.ಭಾರತಿ ಮಾತನಾಡಿ, ನಮ್ಮ ಆಯ್ಕೆ ಜನಸೇವೆಯಾಗಿದ್ದು, ಅದನ್ನು ಅತ್ಯಂತ ನಿಷ್ಠೆ, ಪ್ರಾಮಾಣಿಕತೆಯಿಂದ ಮಾಡಿದರೆ ನಮ್ಮ ಮನಸ್ಸು ತೃಪ್ತಿಯಾಗುತ್ತದೆ. ಸರ್ಕಾರ ನಮ್ಮ ಸೇವೆಗೆ ಸಂಬಳ ನೀಡುತ್ತದೆ. ನಾವು ರೋಗಿಗಳ ಸೇವೆ ಮಾಡಿ ನಮ್ಮ ಕೆಲಸಕ್ಕೆ ನ್ಯಾಯ ಸಲ್ಲಿಸಬೇಕೆಂದರು.

ರೋಗಿಗಳು ತಾಲೂಕು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವಾಗ ಹೆಚ್ಚಿನ ಚಿಕಿತ್ಸೆ ಬೇಕೆಂದ ಸಂದರ್ಭ ಜಿಲ್ಲಾ ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಗೆ ದಾಖಲಾಗಲು ನಮ್ಮಿಂದ ಶಿಫಾರಸ್ಸು ಪತ್ರ ಇದ್ದರೆ ಸಾಕು. ಅಲ್ಲಿ ನಿಮ್ಮನ್ನು ದಾಖಲಿಕೊಂಡು ಚಿಕಿತ್ಸೆ ನೀಡುತ್ತಾರೆ ಎಂದರು. ಈ ವೇಳೆ ವೈದ್ಯರಾದ ಡಾ.ದಯಾನಂದ್ ಬಾಬು, ಡಾ.ಅಭಿಲಾಷ್, ಡಾ.ನಂದಿನಿ, ಡಾ.ರಮ್ಯ, ಡಾ.ಮಾನಸ, ಡಾ.ಯೋಗೇಶ್, ಡಾ.ಕಮಲಮ್ಮ ಹಾಜರಿದ್ದರು.

ಹಳೆಯೂರಲ್ಲಿ ಅಂಬೇಡ್ಕರ್ ಪುತ್ಥಳಿ ಅನಾವರಣ

ವಿಜ್ಞಾನ, ತಂತ್ರಜ್ಞಾನ ಮುಂದುವರೆದಿದ್ದರೂ ಸಮಾನತೆ ಸಾಧಿಸಿಲ್ಲ: ಶಾಸಕ ಅನಿಲ್

ಸರಗೂರು, ಜು.9– ಸಂವಿಧಾನ ಜಾರಿಯಾಗಿ ದಶಕಗಳು ಕಳೆದಿವೆ. ವಿಜ್ಞಾನ, ತಂತ್ರಜ್ಞಾನ ನಾಗಾಲೋಟದಲ್ಲಿ ಬೆಳವಣಿಗೆಯಾಗುತ್ತಿದ್ದರೂ ಇನ್ನೂ ಸಮಾನತೆ ಸಾಧಿಸಲಾಗಿಲ್ಲ ಎಂದು ಶಾಸಕ ಅನಿಲ್ ವಿಷಾದಿಸಿದರು.

ತಾಲೂಕಿನ ಹಳೆಯೂರು ಗ್ರಾಮದಲ್ಲಿ ಮಂಗಳವಾರ ಅಂಬೇಡ್ಕರ್ ಪುತ್ಥಳಿ ಅನಾವರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭಾರತಕ್ಕಾಗಿ ವಿಶ್ವವೇ ಮೆಚ್ಚುವ ಸಂವಿಧಾನವನ್ನು ಅಂಬೇಡ್ಕರ್ ಬರೆದುಕೊಟ್ಟಿದ್ದಾರೆ. ಆದರೆ, ಸಂವಿಧಾನದ ಆಶಯಗಳಿಗೆ ತಕ್ಕಂತೆ ಬದುಕುತ್ತಿದ್ದೇವೆಯೇ ಎಂಬ ಬಗ್ಗೆ ಅವಲೋಕನ ಮಾಡಿಕೊಳ್ಳಬೇಕಿದೆ. ಸ್ವಾತಂತ್ರ್ಯ ಪೂರ್ವದಲ್ಲಿ ಏನೇನು ಸಮಸ್ಯೆಗಳಿವೆ. ಸ್ವಾತಂತ್ರ್ಯ ಬಂದ ನಂತರ ದೇಶ ಯಾವ ರೀತಿ ಇರಬೇಕು ಎಂಬ ವಿಚಾರದ ಕಲ್ಪನೆ ಇಟ್ಟುಕೊಂಡ ಮಹಾನ್ ವ್ಯಕ್ತಿ ಅಂಬೇಡ್ಕರ್ ಎಂದರು.

ಶಾಸಕ ದರ್ಶನ್ ಮಾತನಾಡಿ, ಅಂಬೇಡ್ಕರ್ ಅವರು ಶತಮಾನಗಳಿಂದ ತುಳಿತಕ್ಕೆ ಒಳಗಾದ ದಲಿತ ಸಮುದಾಯವನ್ನು ಹಂತ ಹಂತವಾಗಿ ಮೇಲೆತ್ತುವ ಕಾರ್ಯ ಮಾಡಿದರೆ ಹೊರತು ಬೇರೆಯವರನ್ನು ತುಳಿಯುವ ಕೆಲಸ ಮಾಡಲಿಲ್ಲ. ಅವರ ಆಶಯಗಳಂತೆ ನಡೆದರೆ ಭಾರತ ವಿಶ್ವ ಗುರುವಾಗಿ ಬೆಳೆಯುವುದನ್ನು ಯಾರಿಂದಲೂ ತಡೆಯಲು ಸಾಧ್ಯವಿಲ್ಲ ಎಂದರು.

ಮೈಸೂರು ಮಹಾನಗರ ಪಾಲಿಕೆ ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಸಂವಿಧಾನವು ಎಲ್ಲರಿಗೂ ರಕ್ಷಣೆ ನೀಡಿದೆ. ಬುದ್ಧ, ಬಸವ, ಅಂಬೇಡ್ಕರ್ ಚಿಂತನೆಗಳು ಸಮಾಜದ ಮೇಲೆ ಬಹು ದೊಡ್ಡ ಪರಿಣಾಮ ಬೀರಿವೆ ಎಂದರು.

ಜಿಪಂ ಮಾಜಿ ಸದಸ್ಯ ಪಿ.ರವಿ, ಉರಿಲಿಂಗ ಪೆದ್ದಿ ಮಠದ ಜ್ಞಾನಪ್ರಕಾಶ ಸ್ವಾಮೀಜಿ, ದಸಂಸ ಜಿಲ್ಲಾ ಸಂಚಾಲಕ ಬೆಟ್ಟಯ್ಯ, ಅಂತರಸಂತೆ ಬುದ್ಧ ವಿಹಾರದ ಗೌತಮಿ ಬಂತೇಜಿ ಮಾತನಾಡಿದರು.

ಈ ವೇಳೆ ಯೋಧ ಮಹದೇವಸ್ವಾಮಿ, ಡಾ.ಅಂಬೇಡ್ಕರ್ ನ್ಯಾಷನಲ್ ಫೆಲೋಶಿಫ್ ಅವಾರ್ಡ್ ಪುರಸ್ಕೃತ ಮರಿಸ್ವಾಮಿ, ಶಿಕ್ಷಕಿ ಕಾವ್ಯಶ್ರೀ, ಪೊಲೀಸ್ ಸಿಬ್ಬಂದಿ ಮಧು, ಕಾಂಚನಾ, ಮೈಸೂರು ವಿವಿಯ ಅಶೋಕ್, ದೇವಮಣಿ, ಅರಣ್ಯ ಇಲಾಖೆ ಕೆಂಪಯ್ಯ, ಶಿಕ್ಷಕ ಕೆ.ರಮೇಶ್, ಗ್ರಾಮ ಸೇವಕರಾದ ಸವಿತಾ, ಮಂಜು ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭ ಗ್ರಾಪಂ ಅಧ್ಯಕ್ಷೆ ರುಕ್ಮಿಣಿ, ಉಪಾಧ್ಯಕ್ಷ ನಟರಾಜು, ಸದಸ್ಯೆ ಶಿವಮ್ಮ, ಮಾಜಿ ಸದಸ್ಯ ಚಿನ್ನಯ್ಯ, ಮೂರ್ತಿ, ಕೋಟೆ ಪುರಸಭೆ ಸದಸ್ಯ ಹೆಚ್.ಸಿ.ನರಸಿಂಹಮೂರ್ತಿ, ಸರಗೂರು ಆದಿಕರ್ನಾಟಕ ಮಹಾಸಭಾ ಅಧ್ಯಕ್ಷ ಶಿವಣ್ಣ, ನಟ ಸಂದೇಶ್, ಬುದ್ಧ ಧಮ್ಮ ಸಮಿತಿ ಅಧ್ಯಕ್ಷ ಎಂ.ಡಿ.ಮಂಚಯ್ಯ, ಶಿವರಾಜು, ಗಡಿ ಯಜಮಾನ ರಂಗಯ್ಯ, ಮೈಮುಲ್ ನಿರ್ದೇಶಕ ಈರೇಗೌಡ, ಆದಿಕರ್ನಾಟಕ ಮಹಾಸಭಾ ಮಾಜಿ ಅಧ್ಯಕ್ಷ ಮುದ್ದುಮಲ್ಲಯ್ಯ, ಜಿಪಂ ಮಾಜಿ ಸದಸ್ಯರಾದ ವೆಂಕಟಸ್ವಾಮಿ, ಭಾಗ್ಯಲಕ್ಷ್ಮಿ, ಹೆಚ್.ಸಿ.ಮಂಜುನಾಥ್, ಚಿಕ್ಕವೀರ ನಾಯಕ, ಚಾ.ನಂಜುಂಡಮೂರ್ತಿ, ಜೆಡಿಎಸ್ ತಾಲೂಕು ಅಧ್ಯಕ್ಷ ಗೋಪಾಲಸ್ವಾಮಿ, ಸೋಮೇಶ್, ರವೀಂದ್ರ, ಶಿವಶಂಕರ್, ಹಲ್ಲಹಳ್ಳಿ ಬ್ಲಾಕ್ ಅಧ್ಯಕ್ಷ ಶ್ರೀಕಂಠ ನಾಯಕ, ಪರಶಿವಮೂರ್ತಿ, ಬಸವರಾಜು, ಎಪಿಎಂಸಿ ಅಧ್ಯಕ್ಷ ಸಿದ್ದರಾಜು, ಲಾಯರ್ ಜವರಯ್ಯ, ನಿಂಗರಾಜು, ಮಲ್ಲೇಶ್, ಬೆಟ್ಟಸ್ವಾಮಿ, ಸಣ್ಣಸ್ವಾಮಿ, ಶಿವಣ್ಣ ಇನ್ನಿತರರಿದ್ದರು.



ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರನ್ನು ಸನ್ಮಾನಿಸಲಾಯಿತು.

ಅಖಿಲ ಭಾರತ ವೀರಶೈವ ಮಹಾಸಭಾಗೆ ಕೆಂಪಣ್ಣ ಅಧ್ಯಕ್ಷ



ನಂಜನಗೂಡು ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷರಾಗಿ ಕೆಂಪಣ್ಣ ಆಯ್ಕೆಯಾದರು.

ನಂಜನಗೂಡು, ಜು.9– ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷರಾಗಿ ಎಸ್.ಎಂ. ಕೆಂಪಣ್ಣ ಅವಿರೋಧವಾಗಿ ಆಯ್ಕೆಯಾದರು.

ನೂತನ ಅಧ್ಯಕ್ಷ ಕೆಂಪಣ್ಣ ಮಲ್ಲನಮೂಲೆ ಮಠಕ್ಕೆ ತೆರಳಿ ಚೆನ್ನಬಸವ ಸ್ವಾಮೀಜಿ ಆಶೀರ್ವಾದ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಸಮಾಜದ ಬಂಧುಗಳು ನನ್ನ ಮೇಲೆ ವಿಶ್ವಾಸವಿಟ್ಟು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ. ತಾಲೂಕಿನಲ್ಲಿ ಸಮಾಜ ವನ್ನು ಸಂಘಟಿಸಿ, ಸಮಾಜದ ಬಂಧುಗಳ ಜೊತೆಗೂಡಿ ಮಹಾಸಭಾ ಕಾರ್ಯಕ್ರಮ ಗಳನ್ನು ಮನೆ ಮನೆಗೆ ತಲುಪಿಸುತ್ತೇನೆ. ಸಮಾಜದ ಕಟ್ಟಕಡೆ ವ್ಯಕ್ತಿಯನ್ನು ಸಂಸ್ಥೆಯ ಕಾರ್ಯಕ್ರಮಗಳಲ್ಲಿ ತೊಡಗಿಸಿ ಕೊಂಡು ಸಮಾಜ ನನ್ನ ಮೇಲೆ ಇಟ್ಟಿರುವ ವಿಶ್ವಾಸ ಉಳಿಸಿಕೊಳ್ಳುತ್ತೇನೆ ಎಂದರು.

ಈ ವೇಳೆ ಮುಖಂಡರಾದ ಮಾಧು, ಗುರುಸ್ವಾಮಿ, ಅಶೋಕ, ಶಿವಕುಮಾರ್, ಎನ್.ಸಿ.ಬಸವಣ್ಣ, ಮಹೇಶ್, ಮಹದೇವಪ್ಪ, ಸಂಗರಾಜು, ಮಲ್ಲೇಶ್, ಬಸವಣ್ಣ, ರಾಜಶೇಖರ್ ಉಪಸ್ಥಿತರಿದ್ದರು.

ತಿರುಮಲಪುರದಲ್ಲಿ ಕೆಂಪೇಗೌಡ ಜಯಂತಿ



ಕೆಂಪೇಗೌಡ ಜಯಂತಿಯನ್ನು ಗಣ್ಯರು ಉದ್ಘಾಟಿಸಿದರು.

ಬೈಲಕುಪ್ಪೆ, ಜು.9– ಯಾರೂ ಜಾತಿಯಿಂದ ತಮ್ಮನ್ನು ಗುರುತಿಸಿಕೊಳ್ಳಬಾರದು. ಮಾನವೀಯತೆ ಬೆಳೆಸಿಕೊಂಡು, ಮನುಷ್ಯರಾಗಿ ಬದುಕುವುದನ್ನು ಕಲಿಯಬೇಕು. ಕುವೆಂಪು ಅವರ ಆದರ್ಶ ಅಳವಡಿಸಿಕೊಂಡು, ಹುಟ್ಟು ಸಾವಿನ ನಡುವೆ ಸಮಾಜಕ್ಕೆ ಒಳ್ಳೆಯ ಕೆಲಸ ಮಾಡಿದರೆ, ಸತ್ತ ನಂತರವೂ ಸಮಾಜ ನೆನೆಸಿಕೊಳ್ಳುತ್ತದೆ ಎಂದು ತಾಲೂಕು ಒಕ್ಕಲಿಗರ ಸಂಘದ ಗೌರವಾಧ್ಯಕ್ಷ ಪ್ರಶಾಂತ್‌ಗೌಡ ತಿಳಿಸಿದರು.

ಪಿರಿಯಾಪಟ್ಟಣ ತಾಲೂಕಿನ ತಿರುಮಲಪುರದಲ್ಲಿ ಒಕ್ಕಲಿಗ ಗೌಡರ ಸಂಘದಿಂದ ಹಮ್ಮಿಕೊಂಡಿದ್ದ ಕೆಂಪೇಗೌಡ ಜಯಂತಿ ಹಾಗೂ ಸಂಘದ 2ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮುಖ್ಯ ಅತಿಥಿ ಬಿ.ವಿ ಜವರೇಗೌಡ ಮಾತನಾಡಿ, 23 ವರ್ಷಗಳ ಕಾಲ ಆಡಳಿತ ನಡೆಸಿ, ಇಂದಿನ ಬಹುದೊಡ್ಡ ಸುಸಜ್ಜಿತ ನಗರವೊಂದಕ್ಕೆ ಶಾಶ್ವತ ಭದ್ರಬನಾದಿ ಹಾಕಿದ ನಾಡಪ್ರಭು ಕೆಂಪೇಗೌಡರು ಸದಾ ಸ್ಮರಣೀಯ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಪಿರಿಯಾಪಟ್ಟಣ ರೋಟರಿ ಮಾಜಿ ಅಧ್ಯಕ್ಷ ರಾಜೇಗೌಡ, ಪಿಡಿಓ ಬೋರೇಗೌಡ, ತಿರುಮಲಾಪುರ ಒಕ್ಕಲಿಗ ಗೌಡರ ಸಂಘದ ಅಧ್ಯಕ್ಷ ಚೇತನ್, ಕಾರ್ಯದರ್ಶಿ ತಿಲಕ್, ಖಜಾಂಜಿ ಸುರೇಶ್, ಸಮಾಜದ ಎಲ್ಲಾ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ತಿರುಮಲಾಪುರ ಗ್ರಾಮಸ್ಥರು ಇದ್ದರು.

ತೆಂಕಲಕೊಪ್ಪಲು ಶಾಲೆಯಲ್ಲಿ ವೃಕ್ಷ–ರಕ್ಷಾ ಕಾರ್ಯಕ್ರಮ




ತೆಂಕಲಕೊಪ್ಪಲು ಪ್ರೌಢಶಾಲೆಯಲ್ಲಿ ವೃಕ್ಷಾ–ರಕ್ಷಾ ಕಾರ್ಯಕ್ರಮ ನಡೆಯಿತು.

ಹುಣಸೂರು, ಜು.9– ನಮ್ಮ ಸುತ್ತಮುತ್ತಲ ಪರಿಸರ ಹಸಿರುಮಯಗೊಳಿಸಲು ಜನಧ್ವನಿ ಫೌಂಡೇಶನ್ ವೃಕ್ಷಾ–ರಕ್ಷಾ ಎಂಬ ಶೀರ್ಷಿಕೆಯಡಿ ತಾಲೂಕಿನ ತೆಂಕಲಕೊಪ್ಪಲು ಪ್ರೌಢಶಾಲೆಯಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಪದ್ಮಶ್ರೀ ಪುರಸ್ಕೃತ ಸೋಮಣ್ಣ ಮಾತನಾಡಿ, ಶಾಲಾ ಮಕ್ಕಳಿಗೆ ಸಸಿಗಳನ್ನು ದತ್ತು ನೀಡಿ, ಉತ್ತಮ ರೀತಿ ನಿರ್ವಹಣೆ ಮಾಡುವ ವಿದ್ಯಾರ್ಥಿಗಳಿಗೆ ಬಹುಮಾನ ಘೋಷಿಸಿ ಪರಿಸರ ಸಂರಕ್ಷಣೆಗೆ ಮುಂದಾಗಿರುವ ಜನಧ್ವನಿ ಫೌಂಡೇಶನ್ ನಡೆಯನ್ನು ಶ್ಲಾಘಿಸಿದರು.

ಶಾಲಾ ಶಿಕ್ಷಕ ಸುನೀಲ್ ಮಾತನಾಡಿದರು. ಫೌಂಡೇಶನ್ ಅಧ್ಯಕ್ಷ ವಕೀಲ ಪ್ರವೀಣ್, ಗೌರವಾಧ್ಯಕ್ಷ ಸುನೀಲ್, ಖಜಾಂಚಿ ಅಭಿ, ಸ್ವಾಮಿಗೌಡ ಮೈನ್ಸ್ ಮಾಲೀಕ ಚಂದ್ರಶೇಖರ್, ಯುವ ನಿರ್ದೇಶಕ ತ್ಯಾಗರಾಜ್, ನಿರ್ದೇಶಕರಾದ ರಾಜು, ಸುನೀಲ್, ಯಶ್ವಂತ್, ಕಿರಣ್ ಶಾಲೆಯ ಶಿಕ್ಷಕರು, ಮಕ್ಕಳು ಸೇರಿದಂತೆ ಇನ್ನಿತರರಿದ್ದರು.

ಚಾಮಹಳ್ಳಿ ಡೈರಿ ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ



ಚಾಮಹಳ್ಳಿ ಡೈರಿ ಅಧ್ಯಕ್ಷರಾಗಿ ಚಲುವೇಗೌಡ, ಉಪಾಧ್ಯಕ್ಷರಾಗಿ ಚಿಕ್ಕನಾಯಕ ಆಯ್ಕೆಯಾಗಿದ್ದಾರೆ.

ಹಂಪಾಪುರ, ಜು.9– ಹೆಚ್.ಡಿ.ಕೋಟೆ ತಾಲೂಕಿನ ಹಂಪಾಪುರ ಹೋಬಳಿಯ ಚಾಮಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಚಲುವೇಗೌಡ, ಉಪಾಧ್ಯಕ್ಷರಾಗಿ ಚಿಕ್ಕನಾಯಕ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಚಲುವೇಗೌಡ, ಉಪಾಧ್ಯಕ್ಷ ಸ್ಥಾನಕ್ಕೆ ಚಿಕ್ಕನಾಯಕ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಅಶ್ವಿನ್ ಘೋಷಿಸಿದರು.

ಈ ವೇಳೆ ನಿರ್ದೇಶಕರಾದ ಸಿ.ಕೆ.ಚಂದ್ರು, ಸ್ವಾಮಿ, ದೊಡ್ಡಕರಿಗೌಡ, ಎಂ.ಬಾಲು, ಕರಿಯಯ್ಯ, ಸಾಕಮ್ಮ, ಮುಖಂಡರಾದ ವಿಜಿಗೌಡ, ಕರಿಯಪ್ಪ, ಜಯಕುಮಾರ್, ಕೆಂಪೇಗೌಡ್ರು, ಮಹದೇವಸ್ವಾಮಿ, ಸಿ.ಚಲುವರಾಜು, ಗ್ರಾಪಂ ಮಾಜಿ ಸದಸ್ಯರಾದ ಶ್ರೀನಿವಾಸ್, ಪುಟ್ಟರಾಜು ಹಾಗೂ ಗ್ರಾಮಸ್ಥರು ಹಾಜರಿದ್ದರು.

ಗ್ಯಾರಂಟಿ, ಅಭಿವೃದ್ಧಿ ಕಾರ್ಯಗಳ ಅನುಷ್ಠಾನಗೊಳಿಸಿ

ಇಲ್ಲದಿದ್ದರೇ ಕಠಿಣ ಕ್ರಮಕ್ಕೆ ಶಿಫಾರಸ್ಸು: ಅಧಿಕಾರಿಗಳಿಗೆ ಶಾಸಕ ಡಿ.ರವಿಶಂಕರ್ ಎಚ್ಚರಿಕೆ

ಕೆ.ಆರ್.ನಗರ, ಜು.9– ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಸೇರಿದಂತೆ ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನಗೊಳಿಸುವುದು ಅಧಿಕಾರಿಗಳ ಆದ್ಯ ಕರ್ತವ್ಯ. ಬೇಜವಾಬ್ದಾರಿ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಶಾಸಕ ಡಿ.ರವಿಶಂಕರ್ ಎಚ್ಚರಿಕೆ ನೀಡಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ (ಕೆಡಿಪಿ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೈತರು ಮತ್ತು ಸಾರ್ವಜನಿಕರ ಕೆಲಸ ಮಾಡಿಕೊಡುವಾಗ ನೌಕರರು ಸೌಜನ್ಯದಿಂದ ವರ್ತಿಸಬೇಕು. ಕಚೇರಿಗಳಿಗೆ ಅಲೆದಾಡಿಸದೆ ಸಕಾಲಕ್ಕೆ ಕೆಲಸ ಮಾಡಿಕೊಡಬೇಕು. ಇದಕ್ಕೆ ವಿರುದ್ಧವಾಗಿ ನಡೆದುಕೊಳ್ಳುವ ಅಧಿಕಾರಿಗಳು ನಾವು ವರ್ಗಾವಣೆ ಮಾಡಿಸುವ ಮೊದಲೆ ಬೇರೆಡೆ ಹೋಗಬೇಕು ಎಂದರು.

ಕಾವೇರಿ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿದ್ದು, ನಾಲೆಗಳಿಗೆ ಜು.12ರಿಂದ ನೀರು ಹರಿಸಲು ನಿರ್ಧರಿಸಲಾಗಿದೆ. ನೀರಾವರಿ ಇಲಾಖೆ ಅಧಿಕಾರಿಗಳು ಸರ್ಕಾರದ ನಿಯಮದಂತೆ ಮೊದಲು ಕೆರೆಕಟ್ಟೆಗಳನ್ನು ತುಂಬಿಸಬೇಕು. ಆನಂತರ ನಾಲೆಗಳ ಹೂಳು ತೆಗೆಸಿ ಆಗಬೇಕಾಗಿರುವ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ ಮಳೆ ಮುಂದುವರೆದಲ್ಲಿ ರೈತರು ಕೃಷಿ ಚಟುವಟಿಕೆ ಮಾಡಲು ಜಮೀನುಗಳಿಗೆ ನೀರು ಹರಿಸಬೇಕು ಎಂದು ಸಲಹೆ ನೀಡಿದರು.

ಕೃಷಿ ಮತ್ತು ನೀರಾವರಿ ಇಲಾಖೆ ಅಧಿಕಾರಿಗಳು ರೈತರಿಗೆ ಉಪಯುಕ್ತವಾಗುವ ರೀತಿ ಕೆಲಸ ಮಾಡುವ ಜತೆಗೆ ಅವರಿಗೆ ಬೇಕಾಗುವ ಬಿತ್ತನೆ ಬೀಜ, ರಸಗೊಬ್ಬರಗಳನ್ನು ಸಕಾಲದಲ್ಲಿ ವಿತರಿಸಬೇಕು. ಯಾವುದಕ್ಕೂ ಅಭಾವವಾಗದಂತೆ ನೋಡಿಕೊಳ್ಳಬೇಕು. ರೈತ ಸಂಪರ್ಕ ಕೇಂದ್ರದಲ್ಲಿ ಬೇಜಾವಾಬ್ದಾರಿಯಿಂದ ವರ್ತಿಸುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಸಹಾಯಕ ಕೃಷಿ ನಿರ್ದೇಶಕರಿಗೆ ತಿಳಿಸಿದರು.

ದಿನದಿಂದ ದಿನಕ್ಕೆ ಪೊಲೀಸ್ ಇಲಾಖೆ ವೈಫಲ್ಯ ಹೆಚ್ಚಾಗಿದ್ದು, ಈ ಬಗ್ಗೆ ಪೊಲೀಸರು ನಿಗಾವಹಿಸಬೇಕು. ಕೆ.ಆರ್.ನಗರ ಮತ್ತು ಸಾಲಿಗ್ರಾಮದಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾಗಿವೆ. ಜೊತೆಗೆ ಶಾಲಾ, ಕಾಲೇಜು ಆವರಣದಲ್ಲಿ ಪುಂಡರ ಹಾವಳಿ ಬಗ್ಗೆ ನನಗೆ ಸಾಕಷ್ಟು ದೂರುಗಳು ಬಂದಿದ್ದು, ಇದನ್ನು ಸ್ಥಳೀಯ ಪೊಲೀಸರು ತಡೆಗಟ್ಟಲು ಮುಂದಾಗದಿದ್ದರೆ ಹಿರಿಯ ಅಧಿಕಾರಿಗಳು ಮತ್ತು ಗೃಹ ಮಂತ್ರಿಗಳಿಗೆ ದೂರು ನೀಡುವುದಾಗಿ ಎಚ್ಚರಿಕೆ ನೀಡಿದರು.

ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ಹಾಗೂ ವಸತಿ ಶಾಲೆಗಳ ಮುಖ್ಯಸ್ಥರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳ ಆವರಣಗಳಲ್ಲಿ ಶುಚಿತ್ವ ಕಾಪಾಡಬೇಕು. ಇದರ ಜತೆಗೆ ಸರ್ಕಾರದ ನಿಯಮದಂತೆ ಗುಣಮಟ್ಟದ ಆಹಾರ ಹಾಗೂ ಎಲ್ಲಾ ಸವಲತ್ತು ವಿತರಿಸಬೇಕು. ದೂರು ಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುತ್ತದೆ ಎಂದರು.

ಶಿಕ್ಷಣ ಇಲಾಖೆಯ ಪರಿಶ್ರಮದಿಂದಾಗಿ ಈ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯವಾಗಿದೆ. ಇದನ್ನು ಮತ್ತಷ್ಟು ಉತ್ತಮಗೊಳಿಸಲು ಪ್ರಯತ್ನಿಸಬೇಕು. ಶಾಲಾ, ಕಾಲೇಜುಗಳ ಕಟ್ಟಡ ದುರಸ್ತಿ ಮತ್ತು ಅವಶ್ಯವಿರುವ ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಕೊಡಿಸಲು ಬದ್ಧನಾಗಿದ್ದು ಬೇಕಾಗಿರುವ ಅನುದಾನದ ಬಗ್ಗೆ ಅಂದಾಜು ಪಟ್ಟಿ ನೀಡಬೇಕು ಎಂದರು.

ಈ ವೇಳೆ ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಇಸಿಜಿ ಮತ್ತು ಮಧುಮೇಹ ಪರೀಕ್ಷೆ ಯಂತ್ರೋಪಕರಣಗಳನ್ನು ವಿತರಿಸಲಾಯಿತು. ತಹಸೀಲ್ದಾರ್‌ಗಳಾದ ಸಿ.ಎಸ್.ಪೂರ್ಣಿಮಾ, ನರಗುಂದ್, ತಾಪಂ ಇಓ ಜಿ.ಕೆ.ಹರೀಶ್, ಜಿಪಂ ನರೇಗಾ ಸಹಾಯಕ ಯೋಜನಾಧಿಕಾರಿ ಸುಬ್ರಹ್ಮಣ್ಯ ಶರ್ಮಾ, ತಾಲೂಕು ಆರೋಗ್ಯಾಧಿಕಾರಿ ಡಾ.ಡಿ.ನಟರಾಜು, ವೈದ್ಯಾಧಿಕಾರಿಗಳಾದ ಡಾ.ನವೀನ್‌ಕುಮಾರ್, ಡಾ.ಅಶೋಕ್, ಬಿಇಓ ಆರ್.ಕೃಷ್ಣಪ್ಪ, ಸಿಡಿಪಿಓ ಅಣ್ಣಯ್ಯ, ಕುಡಿಯುವ ನೀರು ನೈರ್ಮಲ್ಯ ಇಲಾಖೆ ರಾಜಾರಾಂ, ಅರಣ್ಯ ಇಲಾಖೆ ಎಂ.ಆರ್.ರಶ್ಮಿ, ಟಿ.ವಿ.ಹರಿಪ್ರಸಾದ್, ಸಮಾಜ ಕಲ್ಯಾಣ ಇಲಾಖೆ ಎಸ್.ಎಂ.ಅಶೋಕ್, ಬಿಸಿಎಂ ಇಲಾಖೆ ಚಂದ್ರಕಲಾ, ಮುಖ್ಯಾಧಿಕಾರಿ ಡಾ.ಜಯಣ್ಣ ಮತ್ತಿತರರಿದ್ದರು.



ಕೆಡಿಪಿ ಸಭೆಯಲ್ಲಿ ಶಾಸಕ ಡಿ.ರವಿಶಂಕರ್ ಮಾತನಾಡಿದರು.

"ಡೆಂಗ್ಯೂ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಅದನ್ನು ತಡೆಗಟ್ಟಲು ಆರೋಗ್ಯ ಇಲಾಖೆ ಸಿಬ್ಬಂದಿ ಸನ್ನದ್ಧರಾಗಬೇಕು. ಈವರೆಗೆ ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕಿನಲ್ಲಿ 41 ಪ್ರಕರಣಗಳು ದಾಖಲಾಗಿದ್ದು 30 ಮಂದಿ ಗುಣಮುಖರಾಗಿದ್ದಾರೆ. ಯಾವುದೇ ಸಾವು ಸಂಭವಿಸಿಲ್ಲ ಇದನ್ನು ಆರೋಗ್ಯ ಇಲಾಖೆ ಸಿಬ್ಬಂದಿ ಲಘುವಾಗಿ ಪರಿಗಣಿಸಬಾರದು. ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸಬೇಕು. ಕ್ಷೇತ್ರದ 34 ಪಿಡಿಓಗಳು ತಮ್ಮ ವ್ಯಾಪ್ತಿಯ ಗ್ರಾಮಗಳಿಗೆ ಭೇಟಿ ನೀಡಿ ಅಂಗನವಾಡಿ, ಶಾಲಾ ಕಾಲೇಜು ಕಟ್ಟಡದ ಸುತ್ತಮುತ್ತ ಸ್ವಚ್ಛಗೊಳಿಸಿ ಸೊಳ್ಳೆ ನಿಯಂತ್ರಣಕ್ಕೆ ಬೇಕಾಗುವ ಫಾಗಿಂಗ್ ಸೇರಿದಂತೆ ಇನ್ನಿತರ ಔಷಧಿ ಸಿಂಪಡಿಸಬೇಕು. ಈ ವಿಚಾರದಲ್ಲಿ ತಾಪಂ ಇಓ ಪ್ರತಿ ಗ್ರಾಪಂಗೂ ಭೇಟಿ ನೀಡಿ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಆಗಬೇಕಾಗಿರುವ ಕೆಲಸ ಮಾಡಿಸಬೇಕು. - ಡಿ.ರವಿಶಂಕರ್, ಶಾಸಕ.

ಎಡಿಜಿಪಿ ಅಲೋಕ್‌ಕುಮಾರ್‌ರಿಂದ ಮೈಸೂರಲ್ಲಿ ಐಟಿಎಂಎಸ್ ಕ್ಯಾಮರಾ ಕಾರ್ಯನಿರ್ವಹಣೆ ಪರಿಶೀಲನೆ

ಮೈಸೂರು, ಜು. 9(ಆರ್‌ಕೆ)– ಮೈಸೂರು ನಗರದಾದ್ಯಂತ ಸಂಚಾರ ನಿಯಮ ಉಲ್ಲಂಘನೆ ತಡೆಗಟ್ಟಲು ಅಳವಡಿಸಿರುವ ಇಂಟಿಗ್ರೇಟೆಡ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಂ (ಐಟಿಎಂಎಸ್) ಕ್ಯಾಮರಾಗಳ ಕಾರ್ಯವೈಖರಿಯನ್ನು ತರಬೇತಿ, ಸಂಚಾರ ಮತ್ತು ರಸ್ತೆ ಸುರಕ್ಷತಾ ಎಡಿಜಿಪಿ ಅಲೋಕ್‌ಕುಮಾರ್ ಇಂದು ಪರಿಶೀಲಿಸಿದರು.

ಕಾರ್ಯಕ್ರಮವೊಂದರಲ್ಲಿ ಪಾಲ್ಗೊಳ್ಳಲೆಂದು ಸೋಮವಾರ ಮೈಸೂರಿಗೆ ಆಗಮಿಸಿದ್ದ ಅವರು, ಇಂದು ಬೆಳಗ್ಗೆ 11.30 ಗಂಟೆಗೆ ಎಸ್ಪಿ ಎನ್. ವಿಷ್ಣುವರ್ಧನ, ಅಡಿಷನಲ್ ಎಸ್ಪಿ ಡಾ. ನಂದಿನಿ ಹಾಗೂ ಅಧಿಕಾರಿಗಳೊಂದಿಗೆ ಮೈಸೂರು ತಾಲೂಕು, ಇಲವಾಲ ಜಂಕ್ಷನ್‌ಗೆ ತೆರಳಿ ಐಟಿಎಂಎಸ್ ಕ್ಯಾಮರಾಗಳು ಕೆಲಸ ಮಾಡುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದರು.



ಐಟಿಎಂಎಸ್ ಕ್ಯಾಮರಾಗಳ ಕಾರ್ಯವೈಖರಿಯನ್ನು ಎಡಿಜಿಪಿ ಅಲೋಕ್‌ಕುಮಾರ್ ಪರಿಶೀಲಿಸಿದರು.

ದೂರದಿಂದಲೇ ವಾಹನಗಳ ನಂಬರ್ ಪ್ಲೇಟ್, ಚಾಲಕ ಮತ್ತು ಪಕ್ಕದಲ್ಲಿ ಕುಳಿತಿರುವ ಸಹ ಚಾಲಕ (ಕೋ ಡ್ರೈವರ್) ಸೀಟ್ ಬೆಲ್ಟ್ ಹಾಕಿದ್ದಾರೆಯೇ, ಮೊಬೈಲ್ ಬಳಕೆ ಮಾಡುತ್ತಿದ್ದಾರೆಯೇ ಎಂಬುದನ್ನು ಸೆರೆಹಿಡಿಯುವ ಕ್ಯಾಮರಾಗಳು, ವಾಹನ ಯಾವ ವೇಗದಲ್ಲಿ ಸಂಚರಿಸುತ್ತಿದೆ ಎಂಬುದನ್ನೂ ಗುರ್ತಿಸಿ ಪೊಲೀಸ್ ಕಂಟ್ರೋಲ್ ರೂಂನಲ್ಲಿರುವ ಟ್ರಾಫಿಕ್ ಆಟೋಮೇಷನ್ ಸೆಂಟರ್‌ಗೆ ರವಾನಿಸುತ್ತಿವೆಯೇ ಎಂಬುದನ್ನು ಅಲೋಕ್‌ಕುಮಾರ್ ಪರಿಶೀಲಿಸಿದರು.

ನಂತರ ವಿವಿ ಪುರಂ ಸಂಚಾರ ಠಾಣೆಗೆ ಭೇಟಿ ನೀಡಿದ ಅವರು, ಡಿಸಿಪಿ ಎಸ್. ಜಾಹ್ನವಿ, ಸಂಚಾರ ಎಸಿಪಿ ಪರಶುರಾಮಪ್ಪ ಹಾಗೂ ಇನ್ಸ್‌ಪೆಕ್ಟರ್ ಲವ ಅವರೊಂದಿಗೆ ಸಂಚಾರ ನಿಯಮ ಉಲ್ಲಂಘನೆಯಾಗದಂತೆ ಕ್ರಮ ವಹಿಸುತ್ತಿರುವ ಕುರಿತು ಚರ್ಚಿಸಿದರು.

ಅಪಘಾತ ವಲಯಗಳು, ಬ್ಲಾಕ್‌ಸ್ಪಾಟ್‌ಗಳು, ವಾಹನ ದಟ್ಟಣೆ ಸ್ಥಳಗಳನ್ನು ಗುರ್ತಿಸಿ ಸ್ಪಷ್ಟವಾಗಿ ದೂರದಿಂದಲೇ ಕಾಣುವಂತೆ ದಪ್ಪ ಅಕ್ಷರಗಳಲ್ಲಿ ಸೂಚನಾ ಫಲಕ ಅಳವಡಿಸುವುದು, ನೋ ಪಾರ್ಕಿಂಗ್, ಸಿಗ್ನಲ್ ಜಂಪಿಂಗ್, ನೋ ಎಂಟ್ರಿ, ವಾಹನ ಚಾಲನೆ ವೇಳೆ ಮೊಬೈಲ್ ಬಳಕೆ, ಹೆಲ್ಮೆಟ್, ಸೀಟ್ ಬೆಲ್ಟ್ ಧರಿಸದಿರುವುದು, ಅತೀ ವೇಗ ಸೇರಿದಂತೆ ಸಂಚಾರ ನಿಯಮ ಉಲ್ಲಂಘನೆಯಾದರೆ, ಕ್ಯಾಮರಾಗಳಲ್ಲಿ ಸೆರೆಯಾದ ದೃಶ್ಯಗಳ ಆಧಾರದಲ್ಲಿ ಪ್ರಕರಣ ಸ್ವಯಂ ದಾಖಲಾಗುತ್ತದೆ ಎಂಬುದನ್ನು ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಬೇಕೆಂದೂ ಇದೇ ಸಂದರ್ಭ ತಿಳಿಸಿದರು.

ಸಂಜೆ 4 ಗಂಟೆಗೆ ಮಣಿಪಾಲ್ ಆಸ್ಪತ್ರೆ ಜಂಕ್ಷನ್ (ಕೆಂಪೇಗೌಡ ಸರ್ಕಲ್)ನಲ್ಲಿ ಬೆಂಗಳೂರು ಕಡೆಯಿಂದ ಬರುವ ವಾಹನಗಳು ಸಂಚಾರ ನಿಯಮ ಪಾಲನೆಯನ್ನು ಐಟಿಎಂಎಸ್ ಕ್ಯಾಮರಾಗಳಲ್ಲಿ ವೀಕ್ಷಿಸಿದ ಅವರು, ಉಲ್ಲಂಘನೆಗೆ ದಂಡ ವಸೂಲಿ ಬಗ್ಗೆಯೂ ಪೊಲೀಸರಿಂದ ಮಾಹಿತಿ ಪಡೆದು, ಬಳಿಕ ಸಂಜೆ 6 ಗಂಟೆಗೆ ಅಲೋಕ್‌ಕುಮಾರ್ ಬೆಂಗಳೂರಿಗೆ ಹಿಂದಿರುಗಿದರು.

ಮೈಸೂರಲ್ಲಿ ಪೊಲೀಸರ ಸಾಂಪ್ರದಾಯಿಕ ಕಾಲ್ನಡಿಗೆ ಗಸ್ತು

ಮೈಸೂರು, ಜು. 9(ಆರ್‌ಕೆ)– ಕಾನೂನು ಮತ್ತು ಸುವ್ಯವಸ್ಥೆ ನಿಯಂತ್ರಣ ಹಾಗೂ ಅಪರಾಧ ಪ್ರಕರಣಗಳನ್ನು ತಡೆಗಟ್ಟುವ ಉದ್ದೇಶದಿಂದ ಮೈಸೂರು ನಗರ ಪೊಲೀಸರ ಕಾಲ್ನಡಿಗೆ ಗಸ್ತು (ಫುಟ್ ಪೆಟ್ರೋಲಿಂಗ್) ಕಾರ್ಯಾಚರಣೆಗೆ ಚಾಲನೆ ನೀಡಲಾಗಿದೆ.

ಭಾನುವಾರ ರಾತ್ರಿ 9ರಿಂದ 11 ಗಂಟೆವರೆಗೆ ಮೈಸೂರು ನಗರದಾದ್ಯಂತ ಎಎಸ್‌ಐ, ಸಬ್‌ಇನ್ಸ್‌ಪೆಕ್ಟರ್, ಎಸಿಪಿಗಳು, ಕಾನೂನು ಮತ್ತು ಸುವ್ಯವಸ್ಥೆ ಡಿಸಿಪಿ ಎಂ. ಮುತ್ತುರಾಜ್ ನೇತೃತ್ವದಲ್ಲಿ ಈ ಕಾರ್ಯಾಚರಣೆಯಲ್ಲಿ ಎಲ್ಲೆಡೆ ಪೊಲೀಸರ ಉಪಸ್ಥಿತಿಯನ್ನು ಪ್ರಸ್ತುತಪಡಿಸುತ್ತಿದ್ದಾರೆ.

ರಸ್ತೆಗಳಲ್ಲಿ ವಾಹನಗಳ ಮೂಲಕವಷ್ಟೇ ಪೊಲೀಸರು ಕಾರ್ಯಾಚರಿಸುತ್ತಾರೆ. ನಿರ್ಜನ ಪ್ರದೇಶ, ಬಡಾವಣೆ ಒಳಗೆ, ಉದ್ಯಾನವನಗಳತ್ತ ಯಾರೂ ಸುಳಿಯುವುದಿಲ್ಲ ಎಂಬ ಭಾವನೆಯಿಂದ ದುಷ್ಕರ್ಮಿಗಳು ತಮ್ಮ ಕೈಚಳಕ ತೋರುತ್ತಿದ್ದರು. ಅದರಿಂದ ಚಿನ್ನದ ಸರ ಅಪಹರಣ, ಮನೆಗಳ್ಳತನ, ದರೋಡೆ, ಅತ್ಯಾಚಾರ, ಹಲ್ಲೆಗಳಂತಹ ಪ್ರಕರಣಗಳು ಹೆಚ್ಚಾಗುತ್ತಿದ್ದವು.

ಅನಗತ್ಯವಾಗಿ ತಡರಾತ್ರಿ ಸಂಚರಿಸುವುದು, ಮಾರಕಾಸ್ತ್ರ ಕೊಂಡೊಯ್ಯುವುದು, ಸಂಚು ನಡೆಸುವುದು, ಮದ್ಯಪಾನ ಮಾಡಿ ರಾದ್ಧಾಂತ, ಇಸ್ಪೀಟ್ ದಂಧೆಯಂತಹ ಕೃತ್ಯದಲ್ಲಿ ಭಾಗಿಯಾದವರನ್ನು ಬಗ್ಗುಬಡಿಯಲು ಕಾಲ್ನಡಿಗೆ ಗಸ್ತು ಸಹಕಾರಿಯಾಗಲಿದೆ ಎಂಬ ಕಾರಣಕ್ಕಾಗಿ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಈ ಹೊಸ ಪ್ರಯೋಗವನ್ನು ಆರಂಭಿಸಿದ್ದಾರೆ.



ಮೈಸೂರು ನಗರದಲ್ಲಿ ಪೊಲೀಸರ ಕಾಲ್ನಡಿಗೆ ಗಸ್ತು ಕಾರ್ಯಾಚರಣೆ

ಪಾರ್ಕ್ ಒಳಗೆ, ನಿರ್ಜನ ಪ್ರದೇಶದಲ್ಲಿ ಕಾನ್‌ಸ್ಟೇಬಲ್, ಹೆಡ್ ಕಾನ್‌ಸ್ಟೇಬಲ್, ಎಎಸ್‌ಐ, ಸಬ್ ಇನ್ಸ್‌ಪೆಕ್ಟರ್‌ಗಳು ಗಸ್ತು ನಡೆಸಿದರೆ ಪೊಲೀಸರ ಉಪಸ್ಥಿತಿಯಿಂದ ಅಪರಾಧ ಕೃತ್ಯಗಳು ಕಡಿಮೆಯಾಗಬಹುದೆಂಬ ಉದ್ದೇಶದಿಂದ ಕಾಲ್ನಡಿಗೆ ಪೆಟ್ರೋಲಿಂಗ್ ಕಾರ್ಯಾಚರಣೆ ಆರಂಭಿಸಿದ್ದಾರೆ.

ಆ ವೇಳೆ ಎದುರಾಗುವ ನಾಗರಿಕರು, ಹಿರಿಯರು, ಯುವಕರೊಂದಿಗೆ ಮಾತಾಡಿ ಅವರ ಸಮಸ್ಯೆ, ದೂರುಗಳೇನಾದರೂ ಇದ್ದರೆ ಮಾಹಿತಿ ಪಡೆದುಕೊಂಡು ಇತ್ಯರ್ಥಗೊಳಿಸುವುದು ಕಾಲ್ನಡಿಗೆ ಗಸ್ತಿನ ಮುಖ್ಯ ಉದ್ದೇಶ. ಭಾನುವಾರ ರಾತ್ರಿ ನಡೆದ ಗಸ್ತಿನಲ್ಲಿ ಮೈಸೂರು ನಗರದ ವಿವಿಧೆಡೆ ಜೂಜು, ಗುಂಪು ಚರ್ಚೆ, ಕಾರುಗಳಲ್ಲಿ ಮದ್ಯಪಾನದಂತಹ ಕೃತ್ಯಗಳು ಪತ್ತೆಯಾದವು.

ಗ್ಯಾಂಗ್ ರೇಪ್ ನಡೆದಿದ್ದ ಲಲಿತಾದ್ರಿಪುರ ನಿರ್ಜನ ಪ್ರದೇಶದಲ್ಲಿ ಕಾಲ್ನಡಿಗೆ ಗಸ್ತು ಕಾರ್ಯಾಚರಣೆ ಪರಿಶೀಲಿಸುತ್ತಿದ್ದ ಡಿಸಿಪಿ ಎಂ. ಮುತ್ತುರಾಜ್, ಅಂದರ್–ಬಾಹರ್‌ನಲ್ಲಿ ತಲ್ಲೀನರಾಗಿದ್ದ ಯುವಕರ ಗುಂಪು ಇವರ ಕಂಡು ಪರಾರಿಯಾಗಿದೆ. ಮತ್ತೊಂದೆಡೆ ಮೇಟಗಳ್ಳಿ ಠಾಣಾ ವ್ಯಾಪ್ತಿಯ ಕೈಗಾರಿಕಾ ಪ್ರದೇಶದಲ್ಲಿ ಗಸ್ತು ನಡೆಸಿದ ಪೊಲೀಸರು, ತಡರಾತ್ರಿ ಗುಂಪು ಕಟ್ಟಿಕೊಂಡು ಓಡಾಡುತ್ತಿದ್ದವರಿಗೆ ಎಚ್ಚರಿಕೆ ನೀಡಿದ್ದಾರೆ.

ಅದೇ ರೀತಿ ಮೈಸೂರು ನಗರದಾದ್ಯಂತ ವೇಶ್ಯಾವಾಟಿಕ ದಂಧೆ, ಮಾರಕಾಸ್ತ್ರಗಳೊಂದಿಗೆ ವಾಹನದಲ್ಲಿ ಓಡಾಡುವುದು, ಬಾರ್–ರೆಸ್ಟೋರೆಂಟ್‌ಗಳು, ಡಾಬಾಗಳನ್ನು ತಡರಾತ್ರಿವರೆಗೆ ತೆರೆದಿರುವುದೂ ಸೇರಿದಂತೆ ಹಲವು ರೀತಿ ಅಪರಾಧ ಕೃತ್ಯಗಳಿಗೆ ಕಡಿವಾಣ ಹಾಕಲು, ಪೊಲೀಸರು ಕಾಲ್ನಡಿಗೆ ಗಸ್ತು ಕಾರ್ಯಾಚರಣೆಯನ್ನು ಆರಂಭಿಸಿದ್ದಾರೆ.

ರಾಮನಗರ: ಪ್ರತಿಭಟನೆ ವೇಳೆ ನಿಖಿಲ್ ಕುಮಾರಸ್ವಾಮಿ ಎಳೆದಾಡಿದ ಪೊಲೀಸರು

ಪೊಲೀಸರ ಮೇಲೆ ನಿಖಿಲ್ ಗರಂ

ರಾಮನಗರ: ಜೆಡಿಎಸ್‌ಗೆ ಅಧಿಕಾರ ತಪ್ಪಿಸಲು ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ ಮುಂದೂಡಿಕೆ ಮಾಡಿದ್ದಾರೆ ಎಂದು ಆರೋಪಿಸಿ ಜೆಡಿಎಸ್ ಹಾಗೂ ಬಿಜೆಪಿ ವತಿಯಿಂದ ರಾಮನಗರದಲ್ಲಿ ಪ್ರತಿಭಟನೆ ನಡೆಯಿತು. ಈ ವೇಳೆ ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿಯನ್ನು ಪೊಲೀಸರು ಎಳೆದಾಡಿದ್ದು, ಪೊಲೀಸರ ವಿರುದ್ಧ ನಿಖಿಲ್ ಗರಂ ಆಗಿದ್ದಾರೆ.

ರಾಮನಗರ ತಾಲೂಕಿನ ಹಳ್ಳಿಮಾಳ ವ್ಯವಸಾಯೋತ್ಪನ್ನ ಮಾರುಕಟ್ಟೆ ಚುನಾವಣೆಯನ್ನು ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ಅವರು ಅಧಿಕಾರ ದುರ್ಬಳಕೆ ಮಾಡಿಕೊಂಡು ಮುಂದೂಡಿಕೆ ಮಾಡಿದ್ದಾರೆ. ಎರಡು ಬಾರಿ ಚುನಾವಣೆ ನಿಗದಿಯಾಗಿದ್ದರೂ ಅಧಿಕಾರಿಗಳು ಚುನಾವಣೆ ನಡೆಸಿಲ್ಲ ಎಂದು ಬಿಜೆಪಿ ಹಾಗೂ ಜೆಡಿಎಸ್ ಆರೋಪಿಸಿದೆ. ಈ ವಿಚಾರವಾಗಿ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಮೈತ್ರಿ ಪಕ್ಷದ ಕಾರ್ಯಕರ್ತರು ಸಹಕಾರ ಸಂಘಗಳ ನಿಬಂಧಕರ ಕಚೇರಿ ಮುಂದೆ ಪ್ರತಿಭಟನೆ ನಡೆಸಿದ್ದಾರೆ.



ಈ ವೇಳೆ ಕಂದಾಯ ಭವನಕ್ಕೆ ಪ್ರತಿಭಟನಾಕಾರರು ಮುತ್ತಿಗೆ ಹಾಕಿದ್ದಾರೆ. ಬಳಿಕ ಸಹಕಾರ ಸಂಘಗಳ ನಿಬಂಧಕರ ಕಚೇರಿಗೆ ಬೀಗ ಜಡಿಯಲು ಯತ್ನಿಸಿದ್ದಾರೆ. ಅಲ್ಲದೇ ಕಂದಾಯ ಭವನದ ಗ್ಲಾಸ್ ಪುಡಿಪುಡಿ ಮಾಡಿದ್ದಾರೆ. ಈ ವೇಳೆ ಪ್ರತಿಭಟನಾಕಾರರನ್ನ ಪೊಲೀಸರು ತಡೆದಿದ್ದು, ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ವಾಗ್ವಾದ ನಡೆದಿದೆ.

ಜು.14ರಂದು ಮೈಗ್ರಾಪ ಪರಿಷತ್ ಮಾಸಿಕ ಸಭೆ

ಮೈಸೂರು, ಜು.9(ಎಸ್‌ಪಿಎನ್)– ನಗರದ ಯಾದವಗಿರಿಯಲ್ಲಿರುವ ಮೈಸೂರು ಗ್ರಾಹಕ ಪರಿಷತ್ ಕಚೇರಿಯಲ್ಲಿ ಜು.14ರಂದು ಸಂಜೆ 4 ಗಂಟೆಗೆ ಮಾಸಿಕ ಸಾಮಾನ್ಯ ಸಭೆ ನಡೆಯಲಿದೆ. ಸಭೆಯಲ್ಲಿ ಮೈಸೂರು ನಗರಪಾಲಿಕೆ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ, ಮಣ್ಣು ಮಿಶ್ರಿತ ನೀರು ಸರಬರಾಜು, ನಗರದ ಹೃದಯಭಾಗದಲ್ಲಿ ಮತ್ತು ಜನದಟ್ಟಣೆ ಹೆಚ್ಚಿರುವ ರಸ್ತೆಗಳಲ್ಲಿ ಫುಟ್‌ಪಾತ್ ಅತಿಕ್ರಮಣ ಮತ್ತು ನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ಕಮಿಟಿ ರಚನೆ ಕುರಿತು ಚರ್ಚೆ ನಡೆಯಲಿದೆ ಎಂದು ಮೈಸೂರು ಗ್ರಾಹಕ ಪರಿಷತ್ ಪ್ರಕಟಣೆಯಲ್ಲಿ ತಿಳಿಸಿದೆ.

ಶಿವಮೊಗ್ಗದಲ್ಲಿ ಡೆಂಗ್ಯೂಗೆ ಮಹಿಳೆ ಬಲಿ

ಶಿವಮೊಗ್ಗ: ಶಂಕಿತ ಡೆಂಗ್ಯೂಗೆ ಮಹಿಳೆಯೊಬ್ಬರು ಬಲಿಯಾದ ಘಟನೆ ಶಿವಮೊಗ್ಗ ಜಿಲ್ಲೆ ಹೊಸನಗರ ತಾಲೂಕಿನ ರಿಪ್ಪನ್‌ಪೇಟೆಯಲ್ಲಿ ನಡೆದಿದೆ.



ರಶ್ಮಿ ಆರ್.ನಾಯಕ್ (42) ಮೃತ ಮಹಿಳೆಯಾಗಿದ್ದು, ಕಳೆದ 15 ದಿನಗಳಿಂದ ರಶ್ಮಿ ತೀವ್ರ ಜ್ವರದಿಂದ ಬಳಲುತ್ತಿದ್ದು, ಶಿವಮೊಗ್ಗದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಇಂದು ಚಿಕಿತ್ಸೆ ಫಲಕಾರಿಯಾಗದೇ ರಶ್ಮಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

ಮನುಷ್ಯ ಸರಳವಾಗಿ ಬದುಕುವುದ ರೂಢಿಸಿಕೊಂಡರೊಳಿತು

● ಆದಿಚುಂಚನಗಿರಿ ಶ್ರೀಗಳ ಸಲಹೆ ● ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್‌ನಿಂದ ಶ್ರೀಗಳ ನೇತೃತ್ವದಲ್ಲಿ ಸತ್ಸಂಗ ● ಭೂಮಿಯ ಬಗೆದು ಪರಿಸರ ನಾಶ ಮಾಡಿ ತೆಗೆದ ಚಿನ್ನವನ್ನು ಧರಿಸಬೇಕೇ?

ಮೈಸೂರು, ಜು.9(ಎಸ್‌ಪಿಎನ್)– 'ತಪಸ್ಸು' ಎಂದರೆ ಜೀವನವನ್ನು ಸರಳ ಮಾಡಿಕೊಳ್ಳುವುದು ಎಂದರ್ಥ. ನಮ್ಮ ಬದುಕನ್ನು ಕ್ಲಿಷ್ಟ ಮಾಡಿಕೊಂಡು ಬದುಕುವುದಕ್ಕಿಂತ ಸರಳವಾಗಿ ಬದುಕುವುದನ್ನು ರೂಢಿಸಿಕೊಳ್ಳಬೇಕು ಎಂದು ಆದಿಚುಂಚನಗಿರಿ ಮಠದ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಸಲಹೆ ನೀಡಿದರು.

ಮೈಸೂರು ಜಯನಗರ(ಹೊಸ ಜಿಲ್ಲಾ ನ್ಯಾಯಾಲಯ ಎದುರು)ದ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಹಾಗೂ ನೇಗಿಲ ಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘದ ಸಹಯೋಗದೊಂದಿಗೆ ಡಾ. ನಿರ್ಮಲಾನಂದನಾಥ ಸ್ವಾಮೀಜಿ ನೇತೃತ್ವದಲ್ಲಿ ಸತ್ಸಂಗ, ಪಾದಪೂಜೆ, ಭಕ್ತಿಗೀತೆಗಾಯನ ಹಾಗೂ ಹಿರಿಯ ನಾಗರಿಕರಿಗೆ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ, ನಂತರ ಪ್ರವಚನ ನೀಡಿದರು.



ಸತ್ಸಂಗ, ಪಾದಪೂಜೆ, ಭಕ್ತಿಗೀತೆ ಗಾಯನ ಹಾಗೂ ಹಿರಿಯ ನಾಗರಿಕರಿಗೆ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮವನ್ನು ಆದಿಚುಂಚನಗಿರಿ ಮಠದ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಉದ್ಘಾಟಿಸಿದರು. ಈ ವೇಳೆ ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ, ಹಿರಿಯ ಐಪಿಎಸ್ ಅಧಿಕಾರಿ ಡಾ.ಎ.ಎನ್.ಪ್ರಕಾಶ್‌ಗೌಡ, ಕನ್ನಡ ಪರ ಹೋರಾಟಗಾರ ಮೋಹನ್ ಕುಮಾರ್ ಗೌಡ, ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್‌ನ ರವಿಕುಮಾರ್ ಸೇರಿದಂತೆ ಇತರೆ ಮುಖಂಡರು ಉಪಸ್ಥಿತರಿದ್ದರು.

ನಾವು, ನಾಲ್ಕು ಗ್ರಾಂ ಚಿನ್ನವನ್ನು ಖರೀದಿಸಿ ಮೈಮೇಲೆ ಹಾಕಿಕೊಂಡರೆ ಅದು ನಮ್ಮ ಬಾಹ್ಯ ಸೌಂದರ್ಯ ಹೆಚ್ಚಿಸುತ್ತದೆ. ಆದರೆ, ಆ ನಾಲ್ಕು ಗ್ರಾಂ ಚಿನ್ನವನ್ನು ಶೋಧಿಸಲು ಸಾವಿರ ಟನ್ ಅದಿರನ್ನು ಭೂಮಿಯಿಂದ ತೆಗೆಯಬೇಕು. ಭೂಮಿಯನ್ನು ಬಗೆದು, ಪರಿಸರವನ್ನು ನಾಶಮಾಡಿ ತೆಗೆದಂತಹ ಚಿನ್ನವನ್ನು ಮೈಮೇಲೆ ಹಾಕಿಕೊಳ್ಳಬೇಕೇ ಎಂದು ಪ್ರಶ್ನಿಸಿದ ಶ್ರೀಗಳು, ಜನರು ತಮ್ಮ ಬದುಕನ್ನು ಸಾಧ್ಯವಾದಷ್ಟು ಎಲ್ಲಾ ಭವ–ಬಂಧನಗಳಿಂದ ಮುಕ್ತಗೊಳಿಸಿಕೊಳ್ಳಲು ಪ್ರಯತ್ನಿಸಬೇಕು ಎಂದು ಹೇಳಿದರು.

ನಾವು ಸರಳ ಜೀವನ ನಡೆಸಬೇಕಾದರೆ, ಮನುಷ್ಯನ ಅಂತರಂಗದ ಎಲ್ಲಾ ನೋವುಗಳನ್ನು ಮರೆಯಬೇಕು ಮತ್ತು ಭಗವಂತನ ಸೇವೆಯಲ್ಲಿ ತಲ್ಲೀನರಾಗಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು. ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಹಮ್ಮಿಕೊಂಡಿರುವ ಇಂತಹ 'ಸತ್ಸಂಗ' ಧಾರ್ಮಿಕ ಕಾರ್ಯಕ್ರಮಗಳಿಂದ ಮನುಷ್ಯನ ಜೀವನದ ಮೌಲ್ಯಗಳ ಹೆಚ್ಚಿಸಲು ಸಹಕಾರಿ ಎಂದರು.

ನಮ್ಮ ದಿನನಿತ್ಯದ ಚಟುವಟಿಕೆಗಳು ಲವಲವಿಕೆಯಿಂದ ಕೂಡಿರಬೇಕಾದರೆ, ಸತ್ಸಂಗ, ದೇವರ ಭಜನೆಗಳ ಆಲಿಸುವಿಕೆ ಅತೀ ಮುಖ್ಯ. ನಾನು ಈ ಕಾರ್ಯಕ್ರಮಕ್ಕೆ ಬರುವುದಕ್ಕೂ ಮುನ್ನ ಆಯೋಜಕರು ಜಯನಗರದ ಶ್ರೀರಾಮ ಮಂದಿರದಿಂದ ಇಲ್ಲಿಯವರೆಗೆ ಮೆರವಣಿಗೆ ಮೂಲಕ ಬರಮಾಡಿಕೊಂಡರು. ಶ್ರೀರಾಮಮಂದಿರ ನಮ್ಮ ಧಾರ್ಮಿಕ ಆಚರಣೆಗಳ ಸಂಕೇತ. ದೇಶದ ಪ್ರತಿಯೊಂದು ಹಳ್ಳಿಯಲ್ಲೂ ಶ್ರೀರಾಮ ಮಂದಿರಗಳಿವೆ. ಆ ಮಂದಿರದ ಮೂಲಕ ಸಮಾಜವನ್ನು ಒಂದಿಷ್ಟು ಸ್ವಾಸ್ಥ್ಯದಿಂದಿಡಲು ಸಾಧ್ಯವಾಗಿದೆ ಎಂದರು.

ಹೊಟ್ಟೆ ಹಸಿವಾದರೆ, ಊಟ ಮಾಡಬೇಕು. ಗಿಡಕ್ಕೆ ರೋಗ ಬಂದರೆ, ಅದನ್ನು ನಿವಾರಿಸಲು ಪ್ರಯತ್ನಿಸಬೇಕು. ಆದರೆ, ಆ ಗಿಡದ ಬೇರಿಗೆ ರೋಗ ಬಂದರೆ ಏನು ಮಾಡಬೇಕು ಎಂಬ ಯಕ್ಷ ಪ್ರಶ್ನೆ ಮನುಷ್ಯನನ್ನು ಬಾಧಿಸುತ್ತದೆ. ಮನಸ್ಸಿಗೆ ಕಾಯಿಲೆ ಬಂದರೆ ಸರಿಪಡಿಸಬಹುದು. ಬುದ್ಧಿಗೆ ಕಾಯಿಲೆ ಬಂದರೆ ಸರಿಪಡಿಸಲು ಸಾಧ್ಯವೇ? ಪ್ರಾಣಿಗಳು ಮಾಡಿದ್ದನ್ನು ಮನುಷ್ಯ ಮಾಡುತ್ತ ಹೊರಟರೆ, ಮನುಷ್ಯನಿಗೂ ಪ್ರಾಣಿಗೂ ಇರುವ ವ್ಯತ್ಯಾಸ ಕಾಣಲು ಸಾಧ್ಯವೇ ಎಂದು ಪ್ರಶ್ನಿಸಿದರು.

ವಿಜ್ಞಾನದ ಆವಿಷ್ಕಾರ ಫಲದಿಂದ ಇಂದು ನಾವೆಲ್ಲಾ ಸುಖಕರ ಜೀವನ ನಡೆಸುತ್ತಿದ್ದೇವೆ. ಈ ಆವಿಷ್ಕಾರವನ್ನು ಮನುಷ್ಯ ಎಲ್ಲಿಯವರೆಗೆ ಬಳಸಬೇಕು. ಹೇಗೆ ಬಳಬೇಕು ಎಂಬುದು ತಿಳಿಯುತ್ತಿಲ್ಲ. ಮಿತಿಮೀರಿ ಬಳಸುತ್ತ, ಹೋದರೆ, ಪ್ರಕೃತಿ ವಿನಾಶದತ್ತ ಸಾಗುತ್ತದೆ. ಆಗ ಮನುಷ್ಯ ಸ್ವಾರ್ಥಿಯಾಗುತ್ತಾನೆ. ಇದರಿಂದ ಪರಿಸರ ನಾಶವಾಗುತ್ತದೆ. ಹಾಗಾಗಿ ನಾವು ಪ್ರಕೃತಿಯೊಂದಿಗೆ ವೈಜ್ಞಾನಿಕ ಜೀವನ ನಡೆಸಲು ಮುಂದಾಗಬೇಕು. ಇತ್ತೀಚಿನ ದಿನಗಳಲ್ಲಿ ಮನುಷ್ಯನ ಆಲೋಚನೆಗಳು ವಿನಾಶದತ್ತ ಸಾಗುತ್ತಿದ್ದು, ಇದನ್ನು ತಡೆಗಟ್ಟಲು ಇಂತಹ ಸತ್ಸಂಗ ಕಾರ್ಯಕ್ರಮ ಅವಶ್ಯ ಎಂದು ಒತ್ತಿ ಹೇಳಿದರು.

ಜಗತ್ತಿನಲ್ಲೇ ನಮ್ಮ ದೇಶದ ಸಾಹಿತ್ಯಕ್ಕೆ ಮೊದಲ ಪ್ರಾಶಸ್ತ್ಯ ತಂದುಕೊಟ್ಟವರು ರವೀಂದ್ರನಾಥ ಠಾಗೂರ್. ಅವರ ಜೀವನ ಮೌಲ್ಯಗಳು ನಮ್ಮೆಲ್ಲರಿಗೂ ಇಂದಿಗೂ ಆದರ್ಶ. ಜಗತ್ತಿನ ದೊಡ್ಡ ದೊಡ್ಡ ಮ್ಯೂಸಿಯಂಗಳಲ್ಲಿ ಠಾಗೂರ್ ನೆನಪಿಸುವ ಕೃತಿಗಳು, ಚಿತ್ರಕಲೆಗಳನ್ನು ಪ್ರದರ್ಶನಕ್ಕಿಡುತ್ತಾರೆ. ಅಂತಹ ಮಹಾನ್ ಚೇತನ, ಪರಿಪೂರ್ಣ ಜೀವನ ನಡೆಸಿದರೂ ಅವರು ಕೊನೆಗಾಲದಲ್ಲಿ ಭಗವಂತನ ನೆನಪಿಸುವ ಹಾಡುಗಳನ್ನು ಹಾಡದೇ ಜೀವನ ಕಳೆದೆನಲ್ಲ ಎಂಬ ನೋವು ಇತ್ತು ಎಂಬುದನ್ನು ತಿಳಿಸಿದರು.

ಈ ದೃಷ್ಟಿಯಿಂದ ನಾವು ಮನುಷ್ಯ ಜೀವನವನ್ನು ಪರಿಪೂರ್ಣ ಅಂದುಕೊಳ್ಳುವುದು ತಪ್ಪು. ಠ್ಯಾಗೂರ್ ಅವರ ಮನಸ್ಥಿತಿಯಿಂದ ನೋಡಿದರೆ, ಮನುಷ್ಯ ಯಾವಾಗಲೂ ಕ್ರಿಯಾಯೋಗದ ಮೂಲಕ ದಿನನಿತ್ಯ ಚಟುವಟಿಕೆಗಳನ್ನು ಆರಂಭಿಸಬೇಕು ಎಂದು ಹೇಳಿ, 'ಪುನರಪಿ ಜನನಂ, ಪುನರಪಿ ಮರಣಂ' ಸಂಸ್ಕೃತ ಶ್ಲೋಕ ಉದಾಹರಣೆ ನೀಡಿದರು.

ಇದಕ್ಕೂ ಮುನ್ನ ಸತ್ಸಂಗದಲ್ಲಿ 'ಪಾಹಿಪಾಹಿ ಪರಮೇಶ್ವರಿ', 'ಜ್ಞಾನ ಪೂರ್ಣ ಜಗಂಜ್ಯೋತಿ', 'ಜಗದಂಬೆ ದೇವಿ ಭವಾನಿ', 'ನಿರ್ಮಲ ಪರಂ ಜ್ಯೋತಿ ಬೆಳಗುತ್ತಿದೆ' ಭಕ್ತಿಗೀತೆ ಹಾಡಿದರು. ಈ ವೇಳೆ ವಿವಿಧ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಚಿನ್ನೇಗೌಡ, ಬರಕ್ಕಿ ನಾಗೇಂದ್ರ, ಶ್ರೀನಿವಾಸ್, ಮಲ್ಲಣ್ಣ, ರವಿ, ಮಹದೇವಣ್ಣ, ಚನ್ನಪ್ಪ, ಜವರಪ್ಪ, ನಿಂಗಪ್ಪ, ಈರಪ್ಪ, ಶ್ರೀನಿವಾಸ್, ಬಸವರಾಜು, ಪಿ.ಹೊನ್ನರಾಜು, ನಿವೃತ್ತ ಇಂಜಿನಿಯರ್‌ಗಳಾದ ದೇವರಾಜೇ ಗೌಡ, ಶ್ರೀನಿವಾಸಗೌಡ, ನಂಜುಂಡೇ ಗೌಡ, ವಿ.ಜಯಂತ್, ಬಾಲಚಂದ್ರ, ಹೆಚ್. ಎಂ.ಗಾಯಿತ್ರಿರಾಜು, ಇಂಜಿನಿಯರ್ ಎಸ್.ಆರ್.ಶ್ರೀಧರ್ ಸೇರಿದಂತೆ ಇತರರನ್ನು ಸನ್ಮಾನಿಸಲಾಯಿತು. ಈ ವೇಳೆ ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ, ಹಿರಿಯ ಐಪಿಎಸ್ ಅಧಿಕಾರಿ ಡಾ.ಎ.ಎನ್. ಪ್ರಕಾಶ್‌ಗೌಡ, ಕನ್ನಡ ಪರ ಹೋರಾಟಗಾರ ಮೋಹನ್ ಕುಮಾರ್ ಗೌಡ, ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್‌ನ ರವಿಕುಮಾರ್ ಸೇರಿದಂತೆ ಇತರೆ ಮುಖಂಡರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ರತ್ನಂ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಲ್ಕಿ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಜಿಗರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಲ್ಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಕಿಲ್ (ಹಿಂ)	4 ಪ್ರದರ್ಶನಗಳು
ಸಂಗಂ	
ಕಾದಾಡಿ (ಕ)	4 ಪ್ರದರ್ಶನಗಳು
ಲಿಡೋ	
ಜಿಗರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಗರುಡನ್ (ತ)	4 ಪ್ರದರ್ಶನಗಳು
ಪ್ರಭಾ	
ಕಾಗದ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಡೆಸ್ಪಿಕಬಲ್ ಮಿ 4 (3ಡಿ) (ಇಂ): ಬೆ.11ಕ್ಕೆ, ಸಂ.4.30ಕ್ಕೆ, ಕಲ್ಕಿ 2898 ಎಡಿ (ಕ): ಮ.1ಕ್ಕೆ, ಸಂ.6.45ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 2	ಲವ್ ಲಿ (ಕ): ಬೆ.10.35ಕ್ಕೆ, ಡೆಸ್ಪಿಕಬಲ್ ಮಿ 4 (3ಡಿ) (ಇಂ): ಮ.1.45ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಸಂ.4.05ಕ್ಕೆ, ಕಿಲ್ (ಹಿಂ): ರಾ.7.35ಕ್ಕೆ, ರಾ.9.55ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (3ಡಿ) (ತೆ): ಬೆ.11.45ಕ್ಕೆ, ಕಲ್ಕಿ 2898 ಎಡಿ (ಕ): ಮ.3.15ಕ್ಕೆ, ಕಲ್ಕಿ 2898 ಎಡಿ (3ಡಿ) (ಹಿಂ): ಸಂ.6.45ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಕಿಲ್ (ಹಿಂ): ಬೆ.11, ಕಲ್ಕಿ 2898 ಎಡಿ (3ಡಿ) (ತೆ): ಮ.1.15ಕ್ಕೆ, ಸಂ.6.40ಕ್ಕೆ, ರಾ.10.10ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ಸಂ.4.40ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಕಲ್ಕಿ 2898 ಎಡಿ (3ಡಿ) (ಹಿಂ): ಬೆ.11.15ಕ್ಕೆ, ಸಂ.6.45ಕ್ಕೆ, ಕಲ್ಕಿ 2898 ಎಡಿ (3ಡಿ) (ತೆ): ಮ.3ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.10.15ಕ್ಕೆ, ಮ.2ಕ್ಕೆ, ಸಂ.5.45ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (ತೆ): ಬೆ.10.45ಕ್ಕೆ, ಸಂ.6.15ಕ್ಕೆ, ಕಲ್ಕಿ 2898 ಎಡಿ (ಹಿಂ): ಮ.2.30ಕ್ಕೆ, ರಾ.10ಕ್ಕೆ.
ಸ್ಕ್ರೀನ್ 4	ಡೆಸ್ಪಿಕಬಲ್ ಮಿ 4 (3ಡಿ) (ಇಂ): ಬೆ.10.40ಕ್ಕೆ, ಮ.3.20ಕ್ಕೆ, ರಾ.8ಕ್ಕೆ, ರಾ.10.15ಕ್ಕೆ, ಕಿಲ್ (ಹಿಂ): ಮ.12.55ಕ್ಕೆ, ಸಂ.5.35ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಲವ್ ಲಿ (ಕ): ಮ.1ಕ್ಕೆ, ಕಾಗದ (ಕ): ಸಂ.4ಕ್ಕೆ, ಬಿಗ್ ಬೆನ್ (ಮ): ಸಂ.6.55ಕ್ಕೆ, ಕುಂಡಲ ಪುರಾಣಂ (ಮ): ರಾ.9.30ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ(3ಡಿ) (ತೆ): ಮ.2.30ಕ್ಕೆ, ರಾ.9.30ಕ್ಕೆ, ಕಲ್ಕಿ 2898 ಎಡಿ (ಕ): ಸಂ.6ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (ಕ): ಮ.1ಕ್ಕೆ, ಸಂ.4.25ಕ್ಕೆ, ರಾ.7.50ಕ್ಕೆ.
ಸ್ಕ್ರೀನ್ 4	ಕಲ್ಕಿ 2898 ಎಡಿ (3ಡಿ) (ತೆ): ಸಂ.4ಕ್ಕೆ, ರಾ.7.25ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.


ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಕೆಆರ್‌ಎಸ್ ನೀರಿನ ಮಟ್ಟ




ಗರಿಷ್ಠ ಮಟ್ಟ	124.80 ಅಡಿ
ಮಂಗಳವಾರ	103.60 ಅಡಿ
ಒಳಹರಿವು	5663 ಕ್ಯೂಸೆಕ್
ಹೊರಹರಿವು	582 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284 ಅಡಿ
ಸೋಮವಾರ	2281.89 ಅಡಿ
ಒಳಹರಿವು	4711 ಕ್ಯೂಸೆಕ್
ಹೊರಹರಿವು	2292 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಮಂಗಳವಾರ	2849.30 ಅಡಿ
ಒಳಹರಿವು	2121 ಕ್ಯೂಸೆಕ್
ಹೊರಹರಿವು	700 ಕ್ಯೂಸೆಕ್

ಹಸಿರು ನಮ್ಮ ಉಸಿರು

4ನೇ ವರ್ಷದ ಸವಿನೆನಪು



ನೀವು ನಮ್ಮನಗಲಿ ಇಂದಿಗೆ 4 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ಪತ್ನಿ: ಎಂ.ಎಸ್. ಬಲಚಾಕ್ಷಿ
ಮಗ: ಶ್ರೀಕಾಂತ್ ಪಿ. ಸೊಸೆ ಮತ್ತು ಮೊಮ್ಮಕ್ಕಳು

ದಿ॥ ಆರ್.ಪುಟ್ಟಸ್ವಾಮಿ
ನಿಧನ: 10-07-2020

CHANGE OF NAME

I, **Sahitya Poovaiah**, residing at # 314, Cherala Srimanagala Village, Chettalli Post, Kodagu-571247, Karnataka State, India solemnly affirm & state on oath that, I have changed my name from **Sahitya Poovaiah** to **Sahitya Poovaiah Voterira** on my own free will vide affidavit sworn in before Notary **C.R.Seetharam** on **11/06/2024.**

Sd/- Sahitya Poovaiah Voterira

MYSURU ROYAL EDUCATION TRUST (R)

MYSURU ROYAL INSTITUTE OF TECHNOLOGY

(Approved by AICTE, New Delhi & Govt. of Karnataka)
Affiliated to VTU, Belagavi. Lakshmipura Road, Palahally Post, Off Mysuru Bengaluru Highway, SR Patna, Tq., Mandya - 571 606
Ph: 9448709278 / 275 / 272. Website: mysururoyal.org

ADMISSIONS OPEN 2024-25

Introducing MBA at MRIT (Master of Business Administration) Affiliated to VTU


Specializations offered

- Finance
- Marketing
- Human Resources Management



Additional seats allotted by AICTE available in

- Artificial Intelligence & Machine Learning
- Computer Science & Engineering
- Electronics & Communication Engineering



A few management seats available in

- Information Science & Engineering
- Civil Engineering
- Mechanical Engineering

Required Professors/Associate Professors/Assistant Professors for

- Master of Business Administration
- Computer Science & Engineering
- Electronics & Communication Engineering
- Mechanical Engineering
- Chemistry
- Mathematics

Eligible candidates email your resume to: principal@mysururoyal.org
Salary as per AICTE norms.



Contact for Admission - Principal MRIT: 9380187613

ಭಾವಪೂರ್ಣ ಶ್ರದ್ಧಾಂಜಲಿ



ಶ್ರೀ ತಾಯೂರು ವಿಠಲಮೂರ್ತಿ
ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕರು
ಕೃಷ್ಣರಾಜೇಂದ್ರ ಕೋ-ಆಪರೇಟಿವ್ ಬ್ಯಾಂಕ್ ನಿ., ಮೈಸೂರು.

ಇವರು ದಿನಾಂಕ: 09.07.2024ರಂದು ನಿಧನರಾಗಿದ್ದು, ಅವರ ಸೇವೆ ನಮ್ಮ ಬ್ಯಾಂಕಿಗೆ ಅಪಾರವಾದದ್ದು, ಇವರ ಸಾವು ನಮ್ಮ ಪಾಲಿಗೆ ತುಂಬಲಾರದ ನಷ್ಟವಾಗಿದೆ. ಭಗವಂತನು ಮೃತರ ಆತ್ಮಕ್ಕೆ ಶಾಂತಿಕೊಟ್ಟು ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇವೆ.

ದುಃಖತಪ್ತರು:
ಕೃಷ್ಣರಾಜೇಂದ್ರ ಕೋ-ಆಪರೇಟಿವ್ ಬ್ಯಾಂಕ್ ನಿ., ಬ್ಯಾಂಕಿನ ಆಡಳಿತ ಮಂಡಲ ಮತ್ತು ಸಿಬ್ಬಂದಿ ವರ್ಗದವರು

ಡಿ. ದೇವರಾಜ ಅರಸ್ ಟ್ರಕ್ ಟರ್ಮಿನಲ್ಸ್ ಲಿಮಿಟೆಡ್

(ಕರ್ನಾಟಕ ಸರ್ಕಾರದ ಒಂದು ಉದ್ಯಮ)
3ನೇ ಮಹಡಿ, ಟಿ.ಟಿ.ಎಂ.ಸಿ 'ಬಿ' ಬ್ಲಾಕ್, ಬಿ.ಎಂ.ಟಿ.ಸಿ ಕಾಂಪ್ಲೆಕ್ಸ್, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು – 560027. ದೂರವಾಣಿ ಸಂಖ್ಯೆ: 080–22223753/58

ಸಂಖ್ಯೆ: ಡಿಡಿಯುಟಿಟಿಎಲ್/ತಾಂ.ವಿ/2024–25/443 ದಿನಾಂಕ: 09–07–2024

ಇ–ಹರಾಜು ಪ್ರಕಟಣೆ

ಡಿ. ದೇವರಾಜ ಅರಸ್ ಟ್ರಕ್ ಟರ್ಮಿನಲ್ ವ್ಯಾಪ್ತಿಯಲ್ಲಿ ಬರುವ

1) ಧಾರವಾಡ ಜಿಲ್ಲೆ, ಹುಬ್ಬಳ್ಳಿ ತಾಲ್ಲೂಕು, ಅಂಚಟಗೇರಿ ಗ್ರಾಮದಲ್ಲಿ ಗುರುತಿಸಲಾಗಿರುವ 98 ನಿವೇಶನಗಳು, ಪೆಟ್ರೋಲ್ ಬಂಕ್, ಕೆಫೆಟೇರಿಯಾ, ತೂಗು ಮಾಪನ ಸೇತುವೆ ಮತ್ತು ವಾಣಿಜ್ಯ ನಿವೇಶನಗಳು.
2) ವಿಜಯನಗರ ಜಿಲ್ಲೆ, ಹೊಸಪೇಟೆ ತಾಲ್ಲೂಕು, ಅಮರಾವತಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಹೊಸಪೇಟೆ ಟ್ರಕ್ ಟರ್ಮಿನಲ್ ಆವರಣದಲ್ಲಿ ಪೆಟ್ರೋಲ್ ಬಂಕ್ / ಸರ್ವಿಸ್ ಸ್ಟೇಷನ್ ಗಾಗಿ ಮೀಸಲಿರಿಸಲಾಗಿರುವ 6000 ಚದರ ಮೀಟರ್ ನಿವೇಶನ (ವಿಜಯಪುರ ದಿಂದ ಚಿತ್ರದುರ್ಗದ ಕಡೆಗೆ ಹೋಗುವ ಮಾರ್ಗದ ಎಡ ಭಾಗದಲ್ಲಿ).
3) ಮೈಸೂರಿನ ಟ್ರಕ್ ಟರ್ಮಿನಲ್ ಆವರಣದಲ್ಲಿರುವ ಸುಮಾರು 2099 ಚದರ ಅಡಿ ಕ್ಯಾಂಟೀನ್ ಕಟ್ಟಡವನ್ನು 11 ತಿಂಗಳ ಅವಧಿಗೆ ಬಾಡಿಗೆಗೆ ನೀಡುವ ಕುರಿತು.
4) ಬೇಲೂರು ಕೈಗಾರಿಕಾ ಪ್ರದೇಶ, ಧಾರವಾಡ ಟ್ರಕ್ ಟರ್ಮಿನಲ್ ಆವರಣದಲ್ಲಿರುವ ಸುಮಾರು 4363 ಚದರ ಅಡಿ ಕ್ಯಾಂಟೀನ್ ಕಟ್ಟಡವನ್ನು 11 ತಿಂಗಳ ಅವಧಿಗೆ ಬಾಡಿಗೆಗೆ ನೀಡುವ ಕುರಿತು.
5) ವಿಜಯನಗರ ಜಿಲ್ಲೆ ಹೊಸಪೇಟೆ ತಾಲ್ಲೂಕು, ಅಮರಾವತಿ ಗ್ರಾಮದಲ್ಲಿ ಡಿ. ದೇವರಾಜ ಅರಸ್ ಟ್ರಕ್ ಟರ್ಮಿನಲ್‌ಗೆ ಸೇರಿದ ಜಾಗದಲ್ಲಿ ಗುರುತಿಸಲಾಗಿರುವ ಪೆಟ್ರೋಲ್ ಬಂಕ್ / ಸರ್ವಿಸ್ ಸ್ಟೇಷನ್, ಕೆಫೆಟೇರಿಯಾ, ತೂಗು ಮಾಪನ ಸೇತುವೆ ಮತ್ತು ವಾಣಿಜ್ಯ ನಿವೇಶನಗಳು (ಚಿತ್ರದುರ್ಗ ದಿಂದ ವಿಜಯಪುರದ ಕಡೆಗೆ ಹೋಗುವ ಮಾರ್ಗದ ಎಡ ಭಾಗದಲ್ಲಿ).
6) ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಗ್ರಾಮದಲ್ಲಿ ದಾಸನಪುರದ ಟ್ರಕ್ ಟರ್ಮಿನಲ್ ಆವರಣದಲ್ಲಿ ಪೆಟ್ರೋಲ್ ಬಂಕ್ / ಸರ್ವಿಸ್ ಸ್ಟೇಷನ್ ಗಾಗಿ ಮೀಸಲಿರಿಸಲಾಗಿರುವ 800 ಚದರ ಮೀಟರ್ ನಿವೇಶನ.
7) ಬೇಲೂರು ಕೈಗಾರಿಕಾ ಪ್ರದೇಶ, ಧಾರವಾಡ ಇಲ್ಲಿ ನಿರ್ಮಿಸಲಾಗಿರುವ ಟ್ರಕ್ ಟರ್ಮಿನಲ್‌ನಲ್ಲಿ ಟ್ರಕ್‌ಗಳ ನಿಲುಗಡೆಗೆ ಮೀಸಲಿಡಲಾಗಿರುವ ಸಿಮೆಂಟ್ ಕಾಂಕ್ರೀಟ್ ಸ್ಥಿರ ನಿಲುಗಡೆ ಜಾಗವನ್ನು ಒಂದು ವರ್ಷದ ಅವಧಿಗೆ ಟ್ರಕ್ / ಸರಕು ಸಾಗಾಣಿಕೆ ವಾಹನಗಳಿಂದ ನಿಲುಗಡೆ ಶುಲ್ಕ ವಸೂಲಾತಿ ಹಾಗೂ ನಿರ್ವಹಣೆ ಕಾರ್ಯ ನಡೆಸಲು ಪರವಾನಿಗೆ ನೀಡಲು.

ವಿಲೇ ಮಾಡಲು ಉದ್ದೇಶಿಸಿರುವ ನಿವೇಶನಗಳನ್ನು ಆಸಕ್ತ ಅರ್ಹ ಅಭ್ಯರ್ಥಿಗಳು ಅವರಿಚ್ಛೆಯಂತೆ ವಾಣಿಜ್ಯ ನಿವೇಶನ ಸಂಖ್ಯೆಗಳನ್ನು ಆಯ್ಕೆ ಮಾಡಿಕೊಂಡು ಇ–ಜಾಲತಾಣದಲ್ಲಿ ಪಾರದರ್ಶಕವಾಗಿ ಬಿಡ್ ಮಾಡಿ ಸದರಿ ನಿವೇಶನಗಳನ್ನು ತಮ್ಮದಾಗಿಸಿಕೊಳ್ಳಲು ಇ–ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಿ ಆಹ್ವಾನಿಸಲಾಗಿರುತ್ತದೆ.

ದಿನಾಂಕ: 09–07–2024 ರಿಂದ ಆಸಕ್ತರು ಇ–ಪೋರ್ಟಲ್‌ನಲ್ಲಿ ಅರ್ಜಿ ಶುಲ್ಕ ಮತ್ತು ಇ.ಎಂ.ಡಿ ಮೊತ್ತವನ್ನು ಪಾವತಿಸುವ ಮೂಲಕ ನೋಂದಣಿ ಮಾಡಿಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್: **https://www.kppp.karnataka.gov.in** ಗೆ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಲು ಕೋರಿದೆ. ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕಗಳನ್ನು ಪ್ರತ್ಯೇಕವಾಗಿ ಪ್ರತಿ ಕಾರ್ಯಗಳಿಗೆ ನಿಗಧಿಪಡಿಸಲಾಗಿರುತ್ತದೆ.

ಸಹಿ/– ವ್ಯವಸ್ಥಾಪಕ ನಿರ್ದೇಶಕರು
ಡಿ. ದೇವರಾಜ ಅರಸ್ ಟ್ರಕ್ ಟರ್ಮಿನಲ್ಸ್ ಲಿಮಿಟೆಡ್, ಬೆಂಗಳೂರು

ವಾಸಾಸಂಇ/ವಾ.ಪ್ರ/839/ಅಡ್ವರ್ಟೈಸ್/2024–25

ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ವಿದ್ಯಾಸಂಸ್ಥೆ(ರಿ.),

ವಿದ್ಯಾರಣ್ಯಪುರಂ, ಮೈಸೂರು–570008, ಮೈಸೂರು ಜಿಲ್ಲೆ.

ನೇಮಕಾತಿ ಅಧಿಸೂಚನೆ

ಖಾ.ಪ್ರೌ.ಶಾ.ಶಿ.ನೇಮಕಾತಿ ಅಧಿಸೂಚನೆ ಸಂಖ್ಯೆ: 01/2024–25 ದಿನಾಂಕ: 08.07.2024

ನಮ್ಮ ಸಂಸ್ಥೆಯ ವತಿಯಿಂದ ನಡೆಯುತ್ತಿರುವ ಈ ಕೆಳಕಂಡ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಪ್ರೌಢಶಾಲಾ ಸಹ ಶಿಕ್ಷಕರ ವೃಂದದ ಹುದ್ದೆಗಳನ್ನು ಅವುಗಳ ಹೆಸರಿನ ಮುಂದೆ ನಮೂದಿಸಿರುವಂತೆ ಮೀಸಲಾತಿ ವರ್ಗೀಕರಿಸಿ ಭರ್ತಿ ಮಾಡಿಕೊಳ್ಳಲು ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕ್ರ.ಸಂ.	ಶಾಲೆಗಳ ಹೆಸರು	ಖಾಲಿ ಹುದ್ದೆಗಳ ವಿವರ	ಮೀಸಲಾತಿ ವರ್ಗೀಕರಣ
1.	ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ, ಕ್ಯಾತನಹಳ್ಳಿ ಹೆಚ್ ಡಿ ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ.	ಸಹ ಶಿಕ್ಷಕರು (ಹಿಂದಿ)	ಸಾಮಾನ್ಯ ಅಂಗವಿಕಲ (ದೃಷ್ಟಿಮಾಂದ್ಯ) ಬಿಂದು–08
		ಸಹ ಶಿಕ್ಷಕರು (ಆಂಗ್ಲ)	ಪ್ರವರ್ಗ–1 ಬಿಂದು–05
2.	ಟಿ. ಎಸ್. ಸುಬ್ಬಣ್ಣ ಸಾರ್ವಜನಿಕ ಬಾಲಕಿಯರ ಪ್ರೌಢಶಾಲೆ, ತಲಕಾಡು, ಟಿ.ನರಸೀಪುರ ತಾ॥, ಮೈಸೂರು ಜಿಲ್ಲೆ.	ಸಹ ಶಿಕ್ಷಕರು (ಆಂಗ್ಲ)	ಸಾಮಾನ್ಯ (ಗ್ರಾಮೀಣ) ಬಿಂದು –06
3.	ಟಿ. ಎಸ್. ಸುಬ್ಬಣ್ಣ ಸಾರ್ವಜನಿಕ ಬಾಲಕಿಯರ ಪ್ರೌಢಶಾಲೆ, ಚಾಮುಂಡಿಬೆಟ್ಟ, ಮೈಸೂರು	ಸಹ ಶಿಕ್ಷಕರು (ಆಂಗ್ಲ)	ಸಾಮಾನ್ಯ ಅಭ್ಯರ್ಥಿ ಬಿಂದು –02
		ಸಹ ಶಿಕ್ಷಕರು (ವಿಜ್ಞಾನ) ಸಿ.ಬಿ.ಜೆಡ್	ಪರಿಶಿಷ್ಟ ಪಂಗಡ ಬಿಂದು –03
4.	ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ, ವಿದ್ಯಾರಣ್ಯಪುರಂ, ಮೈಸೂರು	ಸಹ ಶಿಕ್ಷಕರು (ಕನ್ನಡ)	ಸಾಮಾನ್ಯ ಅಭ್ಯರ್ಥಿ (ಮಹಿಳೆ) ಬಿಂದು – 04
		ಸಹ ಶಿಕ್ಷಕರು (ಹಿಂದಿ)	ಸಾಮಾನ್ಯ ಅಭ್ಯರ್ಥಿ (ಮಹಿಳೆ) ಬಿಂದು –10
5.	ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ, ತಾಯಿಯೂರು, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.	ಸಹ ಶಿಕ್ಷಕರು (ಕನ್ನಡ)	ಪ್ರವರ್ಗ–2(ಎ) (ಮಹಿಳೆ) ಬಿಂದು –13
6.	ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ, ಕಳಲೆ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.	ಸಹ ಶಿಕ್ಷಕರು (ಆಂಗ್ಲ)	ಪರಿಶಿಷ್ಟ ಜಾತಿ (ಮಹಿಳೆ) ಬಿಂದು–09
7.	ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ, ವಡ್ಡಗೆರೆ, ಗುಂಡ್ಲುಪೇಟೆ ತಾಲ್ಲೂಕು, ಚಾ.ನಗರ ಜಿಲ್ಲೆ	ಸಹ ಶಿಕ್ಷಕರು (ಹಿಂದಿ)	ಪ್ರವರ್ಗ–2 (ಬಿ) ಬಿಂದು –11
		ಸಹ ಶಿಕ್ಷಕರು (ಆಂಗ್ಲ)	ಪರಿಶಿಷ್ಟ ಜಾತಿ ಬಿಂದು–01
8.	ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ಪ್ರೌಢಶಾಲೆ, ಅಗರ–ಮಾಂಬಳ್ಳಿ, ಯಳಂದೂರು ತಾಲ್ಲೂಕು, ಚಾ.ನಗರ ಜಿಲ್ಲೆ	ಸಹ ಶಿಕ್ಷಕರು (ಕನ್ನಡ)	ಸಾಮಾನ್ಯ ಅಭ್ಯರ್ಥಿ (ಗ್ರಾಮೀಣ) ಬಿಂದು –12
		ಸಹಶಿಕ್ಷಕರು (ಕಲಾ)	ಪ್ರವರ್ಗ –2 (ಎ) ಬಿಂದು – 07

ಅಭ್ಯರ್ಥಿಗಳಿಗೆ ಸೂಚನೆ:–

1. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಈ ಅಧಿಸೂಚನೆ ಹೊರಡಿಸಿದ ದಿನಾಂಕದಂದು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ291 ಎಲ್‌ಜಿಎ215 ದಿ: 29.09.2016 ರ ವೃಂದ ಮತ್ತು ನೇಮಕಾತಿ ನಿಯಮಗಳ ಆದೇಶಾನುಸಾರ ಅರ್ಹ ವಿದ್ಯಾರ್ಹತೆ ಹಾಗೂ ವಯೋಮಿತಿಯಲ್ಲಿರತಕ್ಕದ್ದು.
2. ಅಭ್ಯರ್ಥಿಗಳು ತಮ್ಮ ಹೆಸರು, ಭಾವಚಿತ್ರ, ವಿದ್ಯಾರ್ಹತೆ, ವಯಸ್ಸು ಮತ್ತು ಜನ್ಮ ದಿನಾಂಕ, ಖಾಯಂ ಮತ್ತು ಅಂಚೆ ವಿಳಾಸ, ಮೀಸಲಾತಿ ಮತ್ತು ಇತರೆ ದೃಢೀಕೃತ ಅಗತ್ಯ ದಾಖಲೆಗಳ ಪ್ರತಿಗಳೊಂದಿಗೆ ದಿನಾಂಕ: 30.07.2024 ರಂದು ಸಂಜೆ 5.00 ರೊಳಗೆ ಕಾರ್ಯದರ್ಶಿಗಳು, ಟಿ ಎಸ್ ಸುಬ್ಬಣ್ಣ ಸಾರ್ವಜನಿಕ ವಿದ್ಯಾಸಂಸ್ಥೆ(ರಿ.), ವಿದ್ಯಾರಣ್ಯಪುರಂ, ಮೈಸೂರು ಇವರಿಗೆ ತಲುಪುವಂತೆ ಸಲ್ಲಿಸತಕ್ಕದ್ದು. ಸದರಿ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸದರಿ ಅರ್ಜಿಯ ಒಂದು ಪ್ರತಿಯನ್ನು ಸಂಬಂಧಿಸಿದ ಪೂರಕ ದಾಖಲೆಗಳೊಂದಿಗೆ ಹುದ್ದೆ ಖಾಲಿ ಇರುವ ಜಿಲ್ಲೆಯ ಉಪನಿರ್ದೇಶಕರು, ಶಿಕ್ಷಣ ಇಲಾಖೆ, ಇವರಿಗೆ ಸಲ್ಲಿಸತಕ್ಕದ್ದು.
3. ಮೀಸಲಾತಿ ಸೌಲಭ್ಯಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ನಿಯಮಾನುಸಾರ ಸಕ್ಷಮ ಪ್ರಾಧಿಕಾರದಿಂದ ಹಾಗೂ ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು ಹಾಗೂ ಚಾಲ್ತಿಯಲ್ಲಿರತಕ್ಕದ್ದು.
4. ಅರ್ಜಿಯ ಜೊತೆಯಲ್ಲಿ "ಕಾರ್ಯದರ್ಶಿಗಳು ಟಿ ಎಸ್ ಸುಬ್ಬಣ್ಣ ಸಾರ್ವಜನಿಕ ವಿದ್ಯಾಸಂಸ್ಥೆ(ರಿ.), ವಿದ್ಯಾರಣ್ಯಪುರಂ, ಮೈಸೂರು" ಇವರ ಹೆಸರಿನಲ್ಲಿ (ಪ.ಜಾತಿ/ಪ.ಪಂಗಡ ಅಭ್ಯರ್ಥಿಗಳು ರೂ.500/– ಹಾಗೂ ಇತರೆ ವರ್ಗದ ಅಭ್ಯರ್ಥಿಗಳು ರೂ.1,000/–) ಡಿ.ಡಿ.ಯನ್ನು ಖರೀದಿಸಿ ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸತಕ್ಕದ್ದು.
5. ಅರ್ಜಿಯನ್ನೊಳಗೊಂಡ ಲಕೋಟೆಯ ಮೇಲೆ "ಟಿ ಎಸ್ ಸುಬ್ಬಣ್ಣ ಸಾರ್ವಜನಿಕ ವಿದ್ಯಾಸಂಸ್ಥೆ(ರಿ.), ವಿದ್ಯಾರಣ್ಯಪುರಂ, ಮೈಸೂರು–570008. ಇಲ್ಲಿನ ಸಹ ಶಿಕ್ಷಕರ ಹುದ್ದೆಗಳ ನೇಮಕಾತಿಗಾಗಿ ಅರ್ಜಿ" ಎಂದು ದಪ್ಪ ಅಕ್ಷರಗಳಲ್ಲಿ ನಮೂದಿಸತಕ್ಕದ್ದು.
6. ನಿಯಮಾನುಸಾರ ವಿಷಯವಾರು 1:10 ರ ಪ್ರಮಾಣದಲ್ಲಿ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ತಯಾರಿಸಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದ ದಿನಾಂಕವನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.


ಸಹಿ/– ಜಿ.ಸಿ.ರಾಜಣ್ಣ, ಟ್ರಸ್ಟಿ ಮತ್ತು ಕಾರ್ಯದರ್ಶಿ,
ಟಿ.ಎಸ್.ಸುಬ್ಬಣ್ಣ ಸಾರ್ವಜನಿಕ ವಿದ್ಯಾಸಂಸ್ಥೆ(ರಿ.),

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

ಭಾವಪೂರ್ಣ ಶ್ರದ್ಧಾಂಜಲಿ



ಬಿ .ಬಸವೇಗೌಡ

ಶ್ರೀ ಬೀರೇಶ್ವರ ಸ್ವಾಮಿ ಮತ್ತು ಕಾಳಮ್ಮ ಟ್ರಸ್ಟ್ ನ ಅಧ್ಯಕ್ಷರು ಹಾಗೂ ಬಿಕೆಟಿ ಪಬ್ಲಿಕ್ ಸ್ಕೂಲ್ ನ ಸಂಸ್ಥಾಪಕರು ಶ್ರೀಯುತ ನಾಗರಾಜ್ ಅವರ ತಂದೆ

ಇವರು ದಿನಾಂಕ 9–07–2024 ಮಂಗಳವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ.

ತತ್ಸಂಬಂಧ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ: 10.07.2024 ಬುಧವಾರ ಬೆಳಗ್ಗೆ 11 ಗಂಟೆಗೆ ಮೃತರ ಸ್ವಗ್ರಾಮವಾದ ಕಡಕೊಳ – ಕೆ.ಎಂ.ಹುಂಡಿ ಗ್ರಾಮದಲ್ಲಿ ನೆರವೇರಿಸಲಾಗುವುದು.

ದುಃಖತಪ್ತರು: ಕುಟುಂಬವರ್ಗದವರು